# ಲೂಕನು ಬರೆದ ಶುಭಸಂದೇಶ

## ಮುನ್ನುಡಿ

ಪ್ರಭು ಯೇಸು ಇಸ್ರಯೇಲ್ ಜನತೆಯ ವಾಗ್ದತ್ತ ರಕ್ಷಕ ಮಾತ್ರವಲ್ಲ, ಇಡೀ ಮಾನವಕುಲದ ಉದ್ಧಾರಕ. ಈ ಸತ್ಯವೇ ಲೂಕನ ಶುಭಸಂದೇಶಕ್ಕೆ ಪ್ರಧಾನ. "ದೀನದಲಿತರಿಗೆ ಶುಭಸಂದೇಶವನ್ನು ಸಾರಲು ಯೇಸು ಪವಿತ್ರಾತ್ಮರಿಂದ ಅಭಿಷಿಕ್ತರಾದವರು," ಎಂಬುದನ್ನು ಇದರಲ್ಲಿ ಒತ್ತಿ ಹೇಳಲಾಗಿದೆ. ಬಗೆಬಗೆಯ ಕುಂದುಕೊರತೆಗಳಿಂದ ಬಳಲುತ್ತಿರುವ ಜನತೆಯ ಬಗ್ಗೆ ಕರುಣೆ ಹಾಗೂ ಅನುಕಂಪದಿಂದ ತುಂಬಿತುಳುಕುತ್ತದೆ ಈ ಸಂದೇಶ.

ಶಾಂತಿಸಂತಸಕ್ಕೂ ಇದರಲ್ಲಿ ಸಾಕಷ್ಟು ಪ್ರಾಮುಖ್ಯತೆ ಕೊಡಲಾಗಿದೆ. ಕ್ರಿಸ್ತೇಸುವಿನ ಆಗಮನ ಮತ್ತು ಆರೋಹಣವನ್ನು ಬಣ್ಣಿಸುವ ಮೊದಲನೆಯ ಹಾಗೂ ಕೊನೆಯ ಅಧ್ಯಾಯಗಳಲ್ಲಿ ಈ ಗುಣ ಗಣಗಣಿಸುತ್ತದೆ.

ಯೇಸುಸ್ವಾಮಿ ಸ್ವರ್ಗಾರೋಹಣವಾದ ಮೇಲೆ ಕ್ರೈಸ್ತವಿಶ್ವಾಸ ಹಾಗೂ ಶ್ರದ್ಧೆ ಹೇಗೆ ಹಬ್ಬಿ ಹರಡಿತೆಂಬುದನ್ನು ಲೇಖಕ ಲೂಕನು "ಪ್ರೇಷಿತರ ಕಾರ್ಯಕಲಾಪಗಳು" ಎಂಬ ತನ್ನ ಮತ್ತೊಂದು ಕೃತಿಯಲ್ಲಿ ಸವಿಸ್ತಾರವಾಗಿ ನಿರೂಪಿಸಿದ್ದಾನೆ.

ಸ್ನಾನಿಕ ಯೊವಾನ್ನನ ಮತ್ತು ಯೇಸುವಿನ ಜನನ ಹಾಗೂ ಬಾಲ್ಯಗಳ ವೃತ್ತಾಂತವನ್ನು ಈ ಕೃತಿಯಲ್ಲಿ ಮಾತ್ರ ಕಾಣಬಹುದು. ಅಂತೆಯೇ ಯೇಸು ಗಲಿಲೇಯದಿಂದ ಜೆರುಸಲೇಮಿಗೆ ಕೈಗೊಂಡ ಪ್ರಯಾಣದಲ್ಲಿ ಸಂಭವಿಸಿದ ಘಟನೆಗಳ ಕ್ರಮಬದ್ಧ ವರದಿಗೆ ಈ ಕೃತಿ ಅಗತ್ಯ. ದೇವದೂತರ ಗಾನ, ಕುರುಬರ ಭೇಟಿ, ದೇವಾಲಯದಲ್ಲಿ ಬಾಲಕ ಯೇಸುವಿನ ಸಂವಾದ, ಸದಯ ಸಮಾರಿತ, ದುಂದುಗಾರ ಮಗ, ಈ ಮುಂತಾದ ಸಾಧನೆ ಬೋಧನೆಗಳು ಮಿಕ್ಕ ಮೂರು ಶುಭಸಂದೇಶಗಳಲ್ಲಿ ದೊರಕವು. ಪ್ರಾರ್ಥನೆ, ಪವಿತ್ರಾತ್ಮ, ಯೇಸುವಿನ ಸೇವಾವೃತ್ತಿಯಲ್ಲಿ ಮಹಿಳೆಯರ ಪಾತ್ರ ಮತ್ತು ಪಾಪಪರಿಹಾರ ಇವು ಈ ಶುಭಸಂದೇಶದ ವೈಶಿಷ್ಟ್ಯವೆನ್ನಬಹುದು.

### ಪರಿವಿಡಿ


| | | |
|---|---|---|
| ಪೀಠಿಕೆ | – | 1.1–1.4 |
| ಸ್ನಾನಿಕ ಯೊವಾನ್ನನ ಮತ್ತು ಯೇಸುವಿನ ಜನನ ಹಾಗೂ ಬಾಲ್ಯ | – | 1.5–2.52 |
| ಸ್ನಾನಿಕ ಯೊವಾನ್ನನ ಸೇವಾವೃತ್ತಿ | – | 3.1–3.20 |
| ಯೇಸು ಪಡೆದ ದೀಕ್ಷಾಸ್ನಾನ ಮತ್ತು ಸೈತಾನನ ಪ್ರಲೋಭನೆಗಳು | – | 3.21–4.13 |
| ಗಲಿಲೇಯದಲ್ಲಿ ಯೇಸುವಿನ ಬಹಿರಂಗ ಸೇವಾವೃತ್ತಿ | – | 4.14–9.50 |
| ಗಲಿಲೇಯದಿಂದ ಜೆರುಸಲೇಮಿಗೆ | – | 9.51–19.27 |
| ಯೇಸುವಿನ ಕೊನೆಯ ದಿನಗಳು – ಜೆರುಸಲೇಮ್ ಮತ್ತು ಪರಿಸರದಲ್ಲಿ | – | 19.28–23.56 |
| ಯೇಸುವಿನ ಪುನರುತ್ಥಾನ, ದಿವ್ಯದರ್ಶನ ಹಾಗೂ ಸ್ವರ್ಗಾರೋಹಣ | – | 24.1–24.53 |

## ಪೀಠಿಕೆ

**1** ಸನ್ಮಾನ್ಯ ಥೆಯೊಫಿಲನೇ, ನಮ್ಮ ಮಧ್ಯೆ ನೆರವೇರಿರುವ ಘಟನೆಗಳ ವರದಿಯನ್ನು ಬರೆದಿಡಲು ಹಲವರು
ಪ್ರಯತ್ನಿಸಿದ್ದಾರೆ. 2ಪ್ರಾರಂಭದಿಂದ ಕಣ್ಣಾರೆ ಕಂಡು ಶುಭಸಂದೇಶವನ್ನು ಸಾರಿದವರಿಂದಲೇ ನಾವು ಕೇಳಿದ
ಘಟನೆಗಳವು. 3ನಾನು ಆಮೂಲಾಗ್ರವಾಗಿ ವಿಚಾರಿಸಿದ ಅವೆಲ್ಲವನ್ನು ನಿನಗೋಸ್ಕರ ಕ್ರಮಬದ್ಧವಾಗಿ
ಬರೆಯುವುದು ಉಚಿತವೆಂದು ನನಗೂ ತೋರಿತು. 4ನಿನಗೆ ಉಪದೇಶಿಸಲಾಗಿರುವ ವಿಷಯಗಳು
ಸತ್ಯವಾದುವೆಂದು ಇದರಿಂದ ನಿನಗೆ ಮನದಟ್ಟಾಗುವುದು.

## ಸ್ನಾನಿಕ ಯೊವಾನ್ನನ ಜನನ

5 ಜುದೇಯ ಪ್ರಾಂತ್ಯದ ಅರಸನಾಗಿದ್ದ ಹೆರೋದನ ಕಾಲದಲ್ಲಿ ಅಬೀಯನ ವರ್ಗಕ್ಕೆ ಸೇರಿದ
ಜಕರೀಯನೆಂಬ ಒಬ್ಬ ಯಾಜಕನಿದ್ದನು. ಇವನ ಪತ್ನಿಯ ಹೆಸರು ಎಲಿಜಬೇತ್. ಇವಳೂ ಆರೋನನ
ಯಾಜಕವಂಶಕ್ಕೆ ಸೇರಿದವಳು. 6ದಂಪತಿಗಳಿಬ್ಬರೂ ದೇವರ ದೃಷ್ಟಿಯಲ್ಲಿ ಭಯಭಕ್ತಿಯುಳ್ಳವರಾಗಿದ್ದರು;
ಸರ್ವೇಶ್ವರನ ವಿಧಿ ನಿಯಮಗಳನ್ನು ನಿಷ್ಠೆಯಿಂದ ಪಾಲಿಸಿಕೊಂಡು ಬರುತ್ತಿದ್ದರು. 7ಎಲಿಜಬೇತಳು ಬಂಜೆ
ಆದುದರಿಂದ ಅವರಿಗೆ ಮಕ್ಕಳಿರಲಿಲ್ಲ. ಅಲ್ಲದೆ ಅವರಿಬ್ಬರೂ ಮುದುಕರಾಗಿದ್ದರು.
8 ಒಮ್ಮೆ ತನ್ನ ವರ್ಗದ ಸರದಿ ಬಂದಾಗ ಜಕರೀಯನು ದೇವರ ಸನ್ನಿಧಿಯಲ್ಲಿ ಯಾಜಕ
ವಿಧಿಯನ್ನು ನೆರವೇರಿಸುತ್ತಿದ್ದನು. 9ಮಹಾದೇವಾಲಯದ ಗರ್ಭಗುಡಿಯನ್ನು ಪ್ರವೇಶಿಸಿ ಧೂಪಾರತಿಯನ್ನು
ಅರ್ಪಿಸುವ ಸರದಿಗೆ, ಯಾಜಕರ ಸಂಪ್ರದಾಯದ ಪ್ರಕಾರ, ಚೀಟು ಹಾಕಿದಾಗ ಅದು ಜಕರೀಯನ ಪಾಲಿಗೆ
ಬಂದಿತು. ಅಂತೆಯೇ, ಅವನು ಧೂಪಾರತಿಯನ್ನು ಅರ್ಪಿಸುತ್ತಿದ್ದಾಗ 10ಭಕ್ತಸಮೂಹವು ಹೊರಗೆನಿಂತು
ಪ್ರಾರ್ಥನೆ ಮಾಡುತ್ತಿತ್ತು. 11ಆಗ ಧೂಪಪೀಠದ ಬಲಗಡೆ ಅವನಿಗೆ ದೇವದೂತನೊಬ್ಬನು ಪ್ರತ್ಯಕ್ಷನಾದನು.
12ಅವನನ್ನು ಕಾಣುತ್ತಲೇ ತತ್ತರಗೊಂಡ ಜಕರೀಯನು ಭಯಭ್ರಾಂತನಾದನು. 13ದೂತನು ಅವನಿಗೆ,
"ಜಕರೀಯಾ, ಭಯಪಡಬೇಡ! ನಿನ್ನ ಪ್ರಾರ್ಥನೆಯನ್ನು ದೇವರು ಆಲಿಸಿದ್ದಾರೆ. ನಿನ್ನ ಪತ್ನಿ ಎಲಿಜಬೇತಳಲ್ಲಿ
ನಿನಗೆ ಒಂದು ಗಂಡು ಮಗು ಹುಟ್ಟುವುದು. ನೀನು ಅವನಿಗೆ 'ಯೊವಾನ್ನ' ಎಂದು ನಾಮಕರಣ
ಮಾಡಬೇಕು. 14ಆ ಮಗುವಿನ ಜನನವು ನಿಮಗೆ ಹರ್ಷಾನಂದವನ್ನು ಉಂಟುಮಾಡುವುದು; ಬಹು ಜನಕ್ಕೆ
ಸಂತಸವನ್ನು ತರುವುದು. 15ಸರ್ವೇಶ್ವರನ ದೃಷ್ಟಿಯಲ್ಲಿ ಅವನು ಮಹಾತ್ಮನಾಗುವನು. ದ್ರಾಕ್ಷಾರಸವನ್ನಾಗಲಿ,
ಮದ್ಯವನ್ನಾಗಲಿ ಅವನು ಸೇವಿಸನು; ತಾಯಿಯ ಉದರದಿಂದಲೇ ಪವಿತ್ರಾತ್ಮಭರಿತನಾಗುವನು.
16ಇಸ್ರಯೇಲರಲ್ಲಿ ಅನೇಕರನ್ನು ಅವರ ದೇವರಾದ ಸರ್ವೇಶ್ವರನ ಕಡೆಗೆ ಮರಳಿ ತಿರುಗಿಸುವನು.
17ಎಲೀಯನಂತೆ ಶಕ್ತಿಪ್ರಭಾವಗಳಿಂದ ಕೂಡಿದವನಾಗಿ ಪ್ರಭುವಿನ ಮುಂದೂತನಾಗುವನು. ತಂದೆ ಮಕ್ಕಳನ್ನು
ಪುನಃ ಒಂದಾಗಿಸುವನು. ಸತ್ಪುರುಷರ ಸನ್ಮಾರ್ಗಕ್ಕೆ ಅವಿಧೇಯರು ಹಿಂದಿರುಗುವಂತೆ ಮಾಡುವನು. ಹೀಗಾಗಿ
ಪ್ರಭುವಿಗೆ ಯೋಗ್ಯ ಪ್ರಜೆಯನ್ನು ಸಿದ್ಧಗೊಳಿಸುವನು," ಎಂದನು. 18ಅದಕ್ಕೆ ಜಕರೀಯನು, "ಈ ಮಾತು
ನಿಜವಾಗುವುದೆಂದು ನಾನು ತಿಳಿಯುವುದಾದರೂ ಹೇಗೆ? ನಾನೋ ಮುದುಕ; ನನ್ನ ಪತ್ನಿಗೂ ಮುಪ್ಪು,"
ಎಂದನು. 19ಆಗ ದೇವದೂತನು, "ನಾನು ದೇವರ ಸನ್ನಿಧಿಯಲ್ಲಿ ಸೇವೆಮಾಡುವ ಗಬ್ರಿಯೇಲನು; ಈ
ಶುಭಸಮಾಚಾರವನ್ನು ನಿನಗೆ ತಿಳಿಸುವುದಕ್ಕಾಗಿ ದೇವರ ಅಪ್ಪಣೆಯ ಪ್ರಕಾರ ಬಂದವನು. 20ನಾನು ತಿಳಿಸಿದ
ಸಂದೇಶವು ಸಕಾಲದಲ್ಲಿ ನೆರವೇರುವುದು. ಆದರೆ ನೀನು ಅದನ್ನು ನಂಬದೆ ಹೋದ ಕಾರಣ ಅದೆಲ್ಲಾ
ಈಡೇರುವ ತನಕ ಮಾತನಾಡಲಾಗದೆ ಮೂಕನಾಗಿರುವೆ," ಎಂದನು.
21 ಇತ್ತ ಭಕ್ತಜನರು ಜಕರೀಯನಿಗಾಗಿ ಎದುರು ನೋಡುತ್ತಾ ದೇವಾಲಯದಲ್ಲಿ ಅವನು ಇಷ್ಟು
ತಡಮಾಡಲು ಕಾರಣವೇನಿರಬಹುದೆಂದು ಆಶ್ಚರ್ಯಪಡುತ್ತಿದ್ದರು. 22ಅಷ್ಟರಲ್ಲಿ ಜಕರೀಯನು ಹೊರಗೆ
ಬಂದು ಮಾತನಾಡಲೆತ್ನಿಸಿದರೂ ಅವನ ಬಾಯಿಂದ ಮಾತೇ ಹೊರಡಲಿಲ್ಲ. ಬರೀ ಕೈಸನ್ನೆ ಮಾಡುತ್ತಿದ್ದ
ಅವನಿಗೆ ದೇವಾಲಯದಲ್ಲಿ ಏನೋ ದಿವ್ಯದರ್ಶನ ಆಗಿರಬೇಕೆಂದು ಜನರು ಅರಿತುಕೊಂಡರು. ಅಂದಿನಿಂದ

ಅವನು ಮೂಕನಾಗಿಯೇ ಇದ್ದನು. [23]ತನ್ನ ಯಾಜಕ ಸೇವಾ ಸರದಿಯು ಮುಗಿದ ನಂತರ ಜಕರೀಯನು
ಮನೆಗೆ ಹಿಂದಿರುಗಿ ಹೋದನು. [24–25]ಕೆಲವು ದಿನಗಳಾದ ಬಳಿಕ ಅವನ ಪತ್ನಿ ಎಲಿಜಬೇತಳು
ಗರ್ಭಿಣಿಯಾಗಿ, ಐದು ತಿಂಗಳು ಮನೆಯಲ್ಲಿ ಮರೆಯಾಗಿದ್ದಳು. 'ಕಟ್ಟಕಡೆಗೆ ಸರ್ವೇಶ್ವರ ನನಗೆ ಕರುಣೆ ತೋರಿದ್ದಾರೆ; ಜನರ ನಡುವೆ ನನಗಿದ್ದ ಅವಮಾನವನ್ನು ತೊಲಗಿಸಿದ್ದಾರೆ,' ಎಂದುಕೊಳ್ಳುತ್ತಿದ್ದಳು.

### ಕ್ರಿಸ್ತ ಜನನದ ಮುನ್ಸೂಚನೆ

26 ಎಲಿಜಬೇತಳು ಗರ್ಭಿಣಿಯಾದ ಆರನೇ ತಿಂಗಳಲ್ಲಿ, ದೇವರು ಗಬ್ರಿಯೇಲ್ ದೂತನನ್ನು
ಗಲಿಲೇಯ ಪ್ರಾಂತ್ಯದ ನಜರೇತೆಂಬ ಊರಿನಲ್ಲಿದ್ದ ಒಬ್ಬ ಕನ್ನಿಕೆಯಲ್ಲಿಗೆ ಕಳುಹಿಸಿದರು. [27]ಆಕೆಗೆ
ದಾವೀದರಸನ ವಂಶಜನಾದ ಜೋಸೆಫನೊಂದಿಗೆ ನಿಶ್ಚಿತಾರ್ಥವಾಗಿತ್ತು. ಆಕೆಯ ಹೆಸರು ಮರಿಯ.
[28]ದೇವದೂತನು ಆಕೆಯ ಬಳಿಗೆ ಬಂದು "ದೈವಾನುಗ್ರಹಭರಿತಳೇ, ನಿನಗೆ ಶುಭವಾಗಲಿ; ಸರ್ವೇಶ್ವರ
ನಿನ್ನೊಡನೆ ಇದ್ದಾರೆ!" ಎಂದನು. [29]ಇದನ್ನು ಕೇಳಿದ ಮರಿಯಳು ತಬ್ಬಿಬ್ಬಾದಳು. 'ಇದೆಂಥ ಶುಭಾಶಯ'
ಎಂದು ಅವಳು ಯೋಚಿಸತೊಡಗಿದಳು. [30]ದೂತನು ಆಕೆಗೆ, "ಮರಿಯಾ, ನೀನು ಅಂಜಬೇಕಾಗಿಲ್ಲ; ದೇವರ
ಅನುಗ್ರಹ ನಿನಗೆ ಲಭಿಸಿದೆ; [31]ಇಗೋ, ನೀನು ಗರ್ಭವತಿಯಾಗಿ ಒಬ್ಬ ಮಗನನ್ನು ಹೆರುವೆ. ಆತನಿಗೆ 'ಯೇಸು'
ಎಂಬ ಹೆಸರಿಡಬೇಕು; [32]ಆತನು ಮಹಾಪುರುಷನಾಗುವನು; ಪರಾತ್ಪರ ದೇವರ ಪುತ್ರ ಎನಿಸಿಕೊಳ್ಳುವನು.
ಪಿತಾಮಹ ದಾವೀದರಸನ ಸಿಂಹಾಸನವನ್ನು ಸರ್ವೇಶ್ವರನಾದ ದೇವರು ಆತನಿಗೆ ಕೊಡುವರು.
[33]ಯಕೋಬನ ವಂಶವನ್ನು ಆತನು ಚಿರಕಾಲ ಆಳುವನು; ಆತನ ರಾಜ್ಯಭಾರಕ್ಕೆ ಅಂತ್ಯವೇ ಇರದು,"
ಎಂದನು.

34 ಅದಕ್ಕೆ ಮರಿಯಳು, "ಇದು ಆಗುವುದಾದರೂ ಹೇಗೆ? ನನಗೆ ಯಾವ ಪುರುಷನ ಸಂಸರ್ಗವೂ
ಇಲ್ಲವಲ್ಲಾ?" ಎಂದು ವಿಚಾರಿಸಿದಳು. [35]ದೂತನು ಪ್ರತ್ಯುತ್ತರವಾಗಿ, "ಪವಿತ್ರಾತ್ಮ ನಿನ್ನ ಮೇಲೆ ಬರುವರು;
ಪರಾತ್ಪರ ದೇವರ ಶಕ್ತಿ ನಿನ್ನನ್ನು ಆವರಿಸುವುದು; ಈ ಕಾರಣದಿಂದ, ನಿನ್ನಲ್ಲಿ ಹುಟ್ಟುವ ಆ ಪವಿತ್ರ ಶಿಶು
'ದೇವರ ಪುತ್ರ' ಎನಿಸಿಕೊಳ್ಳುವನು. [36]ನಿನ್ನ ಸಂಬಂಧಿಕಳಾದ ಎಲಿಜಬೇತಳ ವಿಷಯವನ್ನು ಕೇಳು: ಆಕೆ
ತನ್ನ ಮುಪ್ಪಿನಲ್ಲೂ ಒಬ್ಬ ಮಗನನ್ನು ಹೆರಲಿದ್ದಾಳೆ; ಬಂಜೆ ಎನಿಸಿಕೊಂಡಿದ್ದ ಆಕೆ ಈಗ ಆರು ತಿಂಗಳ
ಗರ್ಭಿಣಿ. [37]ದೇವರಿಗೆ ಅಸಾಧ್ಯವಾದುದು ಯಾವುದೂ ಇಲ್ಲ," ಎಂದನು. [38]ಆಗ ಮರಿಯಳು, "ಇಗೋ,
ನಾನು ದೇವರ ದಾಸಿ, ನೀವು ಹೇಳಿದಂತೆ ನನಗಾಗಲಿ," ಎಂದಳು. ದೇವದೂತನು ಆಕೆಯನ್ನು ಬೀಳ್ಕೊಟ್ಟು
ಅದೃಶ್ಯನಾದನು.

### ಮರಿಯ – ಎಲಿಜಬೇತಳ ಭೇಟಿ

39 ಇದಾದ ಕೆಲವು ದಿನಗಳಲ್ಲೇ ಮರಿಯಳು ಪ್ರಯಾಣಹೊರಟು ಜುದೇಯದ ಗುಡ್ಡಗಾಡಿನಲ್ಲಿರುವ
ಒಂದು ಊರಿಗೆ ತ್ವರೆಯಾಗಿ ಬಂದಳು. [40]ಅಲ್ಲಿ ಜಕರೀಯನ ಮನೆಗೆ ಹೋಗಿ ಎಲಿಜಬೇತಳನ್ನು
ವಂದಿಸಿದಳು. [41]ಮರಿಯಳ ವಂದನೆಯನ್ನು ಎಲಿಜಬೇತಳು ಕೇಳಿದ್ದೇ ತಡ, ಆಕೆಯ ಗರ್ಭದಲ್ಲಿದ್ದ ಶಿಶು
ನಲಿದಾಡಿತು; ಎಲಿಜಬೇತಳು ಪವಿತ್ರಾತ್ಮಭರಿತಳಾಗಿ [42]ಹರ್ಷೋದ್ಗಾರದಿಂದ ಹೀಗೆಂದಳು:

"ಸ್ತ್ರೀಯರಲ್ಲೆಲ್ಲಾ ಧನ್ಯಳು ನೀನು;
ನಿನ್ನ ಕರುಳ ಕುಡಿಯೂ ಧನ್ಯ!
43 ನನ್ನ ಪ್ರಭುವಿನ ತಾಯಿ ನೀನು;
ನನ್ನ ಬಳಿಗೆ ಬಂದುದು ಅದೆಂಥ ಭಾಗ್ಯ!
44 ನಿನ್ನ ವಂದನೆಯ ದನಿ ನನ್ನ ಕಿವಿ ತಾಕಿದೊಡನೆ
ನಲಿದಾಡಿತು ಆನಂದದಿಂದ, ನನ್ನ ಕರುಳ ಕುಡಿ!
45 ನಂಬಿ ಧನ್ಯಳಾದೆ ನೀನು,
ದೇವರಿಂದ ಬಂದ ವಾರ್ತೆ ನೆರವೇರಿಯೇ
ತೀರುವುದೆಂದು."

## ಮರಿಯಳ ಸ್ತುತಿಗೀತೆ

46 ಆಗ ಹೀಗೆಂದು ಮರಿಯಳು ಹೊಗಳಿದಳು:
47 "ಎನ್ನ ಮನ ಮಾಡುತ್ತಿದೆ ಸರ್ವೇಶ್ವರನ ಸ್ತುತಿ !
ಉಲ್ಲಾಸಿಸುತ್ತಿದೆ ಮುಕ್ತಿದಾತ ದೇವನಲಿ !!
48 ತನ್ನ ದಾಸಿಯ ದೀನತೆಯನು ನೆನಪಿಗೆ
ತಂದುಕೊಂಡನಾತ !
ಧನ್ಯಳೆಂದು ಹೊಗಳುವರೆನ್ನನು
ಇಂದಿನಿಂದ ಸರ್ವ ಜನಾಂಗ !!
49 ಏಕೆನೆ ಮಾಡಿಹನೆನಗೆ ಸರ್ವಶಕ್ತನು
ಮಹತ್ಕಾರ್ಯ !
ನಿಜಕ್ಕೂ ಆತನ ನಾಮಧೇಯ
ಪರಮಪೂಜ್ಯ !!
50 ಆತನಲ್ಲಿ ಭಯಭಕ್ತಿಯುಳ್ಳವರಿಗೆ !
ಆತನ ಪ್ರೀತಿ ತಲತಲಾಂತರದವರೆಗೆ !!
51 ಗರ್ವಹೃದಯಿಗಳನಾತ ಚದರಿಸಿರುವನು !
ಪ್ರದರ್ಶಿಸಿರುವನು ತನ್ನ ಬಾಹುಬಲವನು !!
52 ಇಳಿಸಿಹನು ಗದ್ದುಗೆಯಿಂದ
ಘನಾಧಿಪತಿಗಳನು !
ಏರಿಸಿರುವನು ಉನ್ನತಿಗೆ ದೀನದಲಿತರನು !!
53 ತೃಪ್ತಿಪಡಿಸಿರುವನಾತ ಹಸಿದವರನು
ಮೃಷ್ಟಾನ್ನದಿ !
ಹೊರದೂಡಿರುವನು ಸಿರಿವಂತರನು
ಬರೀಗೈಯಲಿ !!
54 ನೆರವಾದನು ತನ್ನ ದಾಸ ಇಸ್ರಯೇಲನಿಗೆ !
ಪೂರ್ವಜರಿಗಿತ್ತ ವಾಗ್ದಾನದ ಮೇರೆಗೆ !!
55 ಮರೆಯಲಿಲ್ಲ ಆತ ಕರುಣೆತೋರಲು
ಅಬ್ರಹಾಮನಿಗೆ !
ಅವನ ಸಂತತಿಗೆ,
ಯುಗಯುಗಾಂತರದವರೆಗೆ !!

56 ಮರಿಯಳು ಸುಮಾರು ಮೂರು ತಿಂಗಳು ಎಲಿಜಬೇತಳೊಡನೆ ತಂಗಿದ್ದು ತನ್ನ ಮನೆಗೆ ಹಿಂದಿರುಗಿದಳು.

## ಸ್ನಾನಿಕ ಯೊವಾನ್ನನ ಜನನ

57 ದಿನ ತುಂಬಿದಾಗ ಎಲಿಜಬೇತಳು ಗಂಡು ಮಗುವಿಗೆ ಜನ್ಮವಿತ್ತಳು. 58ಸರ್ವೇಶ್ವರ ಆಕೆಗೆ ವಿಶೇಷ ಕೃಪೆ ತೋರಿದ್ದಾರೆಂದು ಅರಿತುಕೊಂಡ ನೆರೆಹೊರೆಯವರೂ ಬಂಧುಬಳಗದವರೂ ಬಂದು ಆಕೆಯೊಡನೆ ಸೇರಿ ಸಂತೋಷಪಟ್ಟರು. 59ಎಂಟನೆಯ ದಿನ ಮಗುವಿನ ಸುನ್ನತಿಗಾಗಿ ಅವರು ಬಂದು ಅದಕ್ಕೆ, ತಂದೆಯ ಹೆಸರನ್ನು ಅನುಸರಿಸಿ, ಜಕರೀಯನೆಂದು ನಾಮಕರಣ ಮಾಡುವುದರಲ್ಲಿ ಇದ್ದರು. 60ಆದರೆ ಮಗುವಿನ ತಾಯಿ, "ಇಲ್ಲ, ಅದು ಕೂಡದು, ಅವನಿಗೆ 'ಯೊವಾನ್ನ' ಎಂಬ ಹೆಸರಿಡಬೇಕು," ಎಂದಳು. 61ಅದಕ್ಕೆ

ಅವರು, “ನಿನ್ನ ಬಂಧುಬಳಗದವರಲ್ಲಿ ಯಾರಿಗೂ ಈ ಹೆಸರು ಇಲ್ಲವಲ್ಲಾ,” ಎಂದು ಹೇಳಿ, 62“ಮಗುವಿಗೆ
ಏನು ಹೆಸರಿಡಬೇಕೆನ್ನುತ್ತೀರಿ?” ಎಂದು ಮಗುವಿನ ತಂದೆಗೆ ಸನ್ನೆಮಾಡಿ ಕೇಳಿದರು. 63ಆಗ ಜಕರೀಯನು
ಬರೆಯುವ ಒಂದು ಹಲಗೆಯನ್ನು ತರಿಸಿಕೊಂಡು, ‘ಇವನ ಹೆಸರು ಯೊವಾನ್ನ’ ಎಂದು ಬರೆದನು. ಎಲ್ಲರೂ
ಬೆರಗಾದರು. 64ತಕ್ಷಣವೇ ಅವನಿಗೆ ಬಾಯಿ ಬಂದಿತು; ನಾಲಿಗೆ ಸಡಿಲವಾಯಿತು; ಅವನು ಮಾತನಾಡಲು
ಆರಂಭಿಸಿ ದೇವರನ್ನು ಸ್ತುತಿಸಿದನು. 65ನೆರೆಹೊರೆಯವರೆಲ್ಲರೂ ತಲ್ಲಣಗೊಂಡರು. ಈ ಸಮಾಚಾರ
ಜುದೇಯದ ಗುಡ್ಡಗಾಡು ಪ್ರಾಂತ್ಯದಲ್ಲೆಲ್ಲಾ ಹರಡಿತು. 66ಕೇಳಿದವರೆಲ್ಲರೂ ಈ ವಿಷಯಗಳನ್ನು
ಮನಸ್ಸಿನಲ್ಲಿಟ್ಟುಕೊಂಡು, ‘ಈ ಮಗು ಮುಂದೆ ಎಂಥವನಾಗುವನೋ!’ ಎಂದುಕೊಂಡರು.
ನಿಶ್ಚಯವಾಗಿಯೂ ಸರ್ವೇಶ್ವರನ ಅಭಯ ಹಸ್ತವು ಆ ಮಗುವಿನ ಮೇಲಿತ್ತು.

### ಜಕರೀಯನ ಪ್ರವಾದನೆ

67 ಆಗ ಮಗುವಿನ ತಂದೆಯಾದ ಜಕರೀಯನು ಪವಿತ್ರಾತ್ಮಭರಿತನಾಗಿ ಹೀಗೆಂದು ಪ್ರವಾದಿಸಿದನು :

68 ಸ್ತುತಿಸ್ತೋತ್ರ ಇಸ್ರಯೇಲಿನ ದೇವರಾದ
ಸರ್ವೇಶ್ವರನಿಗೆ !
ತಾನಾಗಿ ಬಂದು ತನ್ನ ಪ್ರಜೆಯನು
ಬಿಡುಗಡೆ ಮಾಡಿದಾತನಿಗೆ !!
69 ಉದಯಗೊಳಿಸಿರುವನಾತ ತನ್ನ ದಾಸ
ದಾವೀದನ ವಂಶದೊಳು !
ನಮಗೊಬ್ಬ ಶಕ್ತಿಯುತ
ಮುಕ್ತಿದಾತನನು !!
70 ಪುರಾತನ ಕಾಲದಿಂದಲೆ, ಪೂಜ್ಯ
ಪ್ರವಾದಿಗಳ ಬಾಯಿಂದಲೆ !
ಅರುಹಿಸಿರುವನು ಇಂತೆಂದು ನಮಗೆ:!!
71 ‘ಹಗೆಗಳಿಂದ, ದ್ವೇಷಿಗಳೆಲ್ಲರ ಹಿಡಿತದಿಂದ
ನಿಮಗೆ ಅನುಗ್ರಹಿಸುವೆನು ಸಂರಕ್ಷಣೆ’ !!
72 ವ್ಯಕ್ತಪಡಿಸಿರುವನು ಪೂರ್ವಜರಿಗೆ
ಪ್ರಮಾಣಿಸಿದ ಪ್ರೀತಿಯನು !
ಸ್ಮರಿಸಿಕೊಂಡಿರುವನು ತನ್ನ
ಪವಿತ್ರ ಒಡಂಬಡಿಕೆಯನು !!
73 ಪಿತಾಮಹ ಅಬ್ರಹಾಮನಿಗಿತ್ತ
ಮಾತಿಗನುಸಾರ !
74 ನಮಗಿತ್ತಿರುವನು ಶತ್ರುಗಳಿಂದ
ರಕ್ಷಿಸುವನೆಂಬ ಅಭಯ !!
75 ಹೀಗೆ ಜೀವಮಾನವೆಲ್ಲ ನಾವು ಆತನ ಸೇವೆ
ಮಾಡುವಂತಾಯಿತು ನಿರ್ಭೀತರಾಗಿ !
ಆತನ ಸನ್ನಿಧಿಯಲಿ ಬಾಳುವಂತಾಯಿತು
ಪುನೀತರಾಗಿ, ಸದ್ಭಕ್ತರಾಗಿ !!
76 ಸುಕುಮಾರಾ, ನೀನೆಸಿಕೊಳ್ಳುವೆ
‘ಪರಾತ್ಪರನ ಪ್ರವಾದಿ’ !

77 ಸರ್ವೇಶ್ವರನ ಮಾರ್ಗವನು ಸಜ್ಜುಗೊಳಿಸುವೆ,
ಮುಂದಾಗಿ ತೆರಳಿ !!
ಪಾಪಕ್ಷಮೆಯನು ಸಾರುವೆ ಆತನ ಪ್ರಜೆಗೆ !
ಈ ಮೂಲಕ ಜೀವೋದ್ಧಾರದ
ಜ್ಞಾನವನ್ನೀಯುವೆ ಆ ಜನರಿಗೆ !!
78 ಕೃಪಾಸಾಗರ, ದಯಾಮಯ
ನಮ್ಮ ದೇವನು !
ಆತನ ಕರುಣೆಯಿಂದ ನಮಗಾಯಿತು
ಮೇಲಿಂದ ಅರುಣೋದಯವು !!
79 ಬೆಳಗಿಸಲು ಇರುಳಿನಲು, ಮರಣದ
ಮುಸುಕಿನಲು ಬಾಳುವವರನು !
ನಮ್ಮ ಕಾಲುಗಳನ್ನೂರಿಸಿ ನಡೆಸಲು
ಶಾಂತಿಪಥದೊಳು !!

80 ಬಾಲಕನು ಬೆಳೆದಂತೆ ಆತ್ಮಶಕ್ತಿಯುತನಾದನು. ಇಸ್ರಯೇಲ್ ಜನರಿಗೆ ಬಹಿರಂಗವಾಗಿ ಕಾಣಿಸಿಕೊಳ್ಳುವವರೆಗೂ ಅವನು ಬೆಂಗಾಡಿನಲ್ಲೇ ವಾಸಿಸುತ್ತಿದ್ದನು.

## ಕ್ರಿಸ್ತೇಸುವಿನ ಜನನ

(ಮತ್ತಾ. 1.18–25)

**2** ಆ ಕಾಲದಲ್ಲಿ ಚಕ್ರವರ್ತಿ ಔಗುಸ್ತನು ತನ್ನ ಸಾಮ್ರಾಜ್ಯದಲ್ಲೆಲ್ಲಾ ಜನಗಣತಿಯಾಗಬೇಕೆಂದು ಆಜ್ಞೆ
ಹೊರಡಿಸಿದನು. 2ಮೊಟ್ಟ ಮೊದಲನೆಯ ಆ ಜನಗಣತಿ, ಕುರೇನ್ಯನು ಸಿರಿಯ ನಾಡಿಗೆ ರಾಜ್ಯಪಾಲನಾಗಿದ್ದಾಗ
ನಡೆಯಿತು. 3ಆಗ ಎಲ್ಲರೂ ತಮ್ಮ ಹೆಸರನ್ನು ದಾಖಲೆ ಮಾಡಿಸಿಕೊಳ್ಳಲು ತಮ್ಮ ತಮ್ಮ ಊರುಗಳಿಗೆ
ಹೊರಟರು.

4 ಜೋಸೆಫನು ದಾವೀದನ ಮನೆತನದವನು ಹಾಗೂ ಗೋತ್ರದವನು. ಆದುದರಿಂದ ಅವನೂ
ಗಲಿಲೇಯ ಪ್ರಾಂತ್ಯದ ನಜರೇತ್ ಎಂಬ ಊರಿನಿಂದ ಹೊರಟು ಜುದೇಯನಾಡಿನ ಬೆತ್ಲೆಹೇಮೆಂಬ
ದಾವೀದನ ಊರಿಗೆ ಹೋದನು. 5ಆತನ ಸಂಗಡ ಆತನಿಗೆ ನಿಶ್ಚಿತಾರ್ಥಳಾಗಿದ್ದ ಹಾಗೂ ಪೂರ್ಣ
ಗರ್ಭವತಿಯಾಗಿದ್ದ ಮರಿಯಳು ಸಹ ಹೋದಳು. 6ಹೀಗೆ ಅವರು ಬೆತ್ಲೆಹೇಮಿನಲ್ಲಿ ಇದ್ದಾಗ, ಮರಿಯಳಿಗೆ
ಪ್ರಸವಕಾಲ ಸಮೀಪಿಸಿತು. 7ಆಕೆ ಚೊಚ್ಚಲು ಮಗನಿಗೆ ಜನ್ಮವಿತ್ತು, ಇದ್ದ ಬಟ್ಟೆಯಲ್ಲೇ ಸುತ್ತಿ, ಅದನ್ನು
ಗೋದಲಿಯಲ್ಲಿ ಮಲಗಿಸಿದಳು. ಕಾರಣ–ಛತ್ರದಲ್ಲಿ ಅವರಿಗೆ ಸ್ಥಳ ಸಿಗಲಿಲ್ಲ.

## ದೇವದೂತರು ಕುರುಬರಿಗೆ ತಂದ ಸಂದೇಶ

8 ಅದೇ ನಾಡಿನಲ್ಲಿ ಕೆಲವು ಕುರುಬರು ಹೊಲಗಳಲ್ಲಿದ್ದುಕೊಂಡು ರಾತ್ರಿಯಲ್ಲಿ ಕುರಿಮಂದೆಗಳನ್ನು
ಕಾಯುತ್ತಿದ್ದರು. 9ಇದ್ದಕ್ಕಿದ್ದಂತೆ ದೇವದೂತನೊಬ್ಬನು ಅವರೆದುರಿಗೆ ಪ್ರತ್ಯಕ್ಷ ಆಗಲು ಸರ್ವೇಶ್ವರನ ಪ್ರಭೆ
ಅವರ ಸುತ್ತಲೂ ಪ್ರಕಾಶಿಸಿತು. ಅವರು ಬಹಳವಾಗಿ ಹೆದರಿದರು. 10ಆ ದೂತನು ಅವರಿಗೆ,
"ಭಯಪಡಬೇಡಿ, ಇಗೋ, ಜನರೆಲ್ಲರಿಗೂ ಪರಮಾನಂದವನ್ನು ತರುವ ಶುಭಸಂದೇಶವನ್ನು ನಿಮಗೆ
ತಿಳಿಸುತ್ತೇನೆ. 11ಅದೇನೆಂದರೆ, ಇಂದೇ ದಾವೀದನ ಊರಿನಲ್ಲಿ ನಿಮಗೋಸ್ಕರ ಲೋಕೋದ್ಧಾರಕ ಜನಿಸಿದ್ದಾರೆ.

ಅವರೇ ಪ್ರಭು ಕ್ರಿಸ್ತ. [12]ಇಗೋ, ನಿಮಗೊಂದು ಸೂಚನೆ – ಆ ಶಿಶುವನ್ನು ಬಟ್ಟೆಯಲ್ಲಿ ಸುತ್ತಿ
ಗೋದಲಿಯೊಂದರಲ್ಲಿ ಮಲಗಿಸಿರುವುದನ್ನು ಕಾಣುವಿರಿ," ಎಂದನು.

13 ತಕ್ಷಣವೇ ಆ ದೂತನ ಸಂಗಡ ಸ್ವರ್ಗದ ದೂತಪರಿವಾರವೊಂದು ಕಾಣಿಸಿಕೊಂಡಿತು.
[14]"ಮಹೋನ್ನತದಲ್ಲಿ ದೇವರಿಗೆ ಮಹಿಮೆ; ಭೂಲೋಕದಲ್ಲಿ ದೇವರೊಲಿದ ಮಾನವರಿಗೆ ಶಾಂತಿ
ಸಮಾಧಾನ," ಎಂದು ಸರ್ವೇಶ್ವರನ ಸ್ತುತಿ ಮಾಡಿತು.

15 ದೇವದೂತರು ಸ್ವರ್ಗಕ್ಕೆ ಹಿಂದಿರುಗಿದ ಮೇಲೆ ಕುರುಬರು, 'ಬನ್ನಿ, ಸರ್ವೇಶ್ವರ ನಮಗೆ ತಿಳಿಸಿದ
ಘಟನೆಯನ್ನು ನೋಡಲು ಈಗಲೇ ಬೆತ್ಲೆಹೇಮಿಗೆ ಹೋಗೋಣ,' ಎಂದು ಒಬ್ಬರಿಗೆ ಒಬ್ಬರು ಹೇಳಿಕೊಂಡರು.
[16]ಅಲ್ಲಿಂದ ತ್ವರೆಯಾಗಿ ಹೋಗಿ, ಮರಿಯಳನ್ನೂ ಜೋಸೆಫನನ್ನೂ ಗೋದಲಿಯಲ್ಲಿ ಮಲಗಿದ್ದ ಶಿಶುವನ್ನೂ
ಕಂಡರು. [17]ಕಂಡಮೇಲೆ ಆ ಮಗುವಿನ ವಿಷಯವಾಗಿ ದೂತನು ತಮಗೆ ಹೇಳಿದ್ದನ್ನೆಲ್ಲ ಅವರಿಗೆ
ತಿಳಿಯಪಡಿಸಿದರು. [18]ಕುರುಬರು ಹೇಳಿದ ವಿಷಯವನ್ನು ಕೇಳಿದವರೆಲ್ಲರೂ ಆಶ್ಚರ್ಯಪಟ್ಟರು.
[19]ಮರಿಯಳಾದರೋ ಈ ವಿಷಯಗಳನ್ನೆಲ್ಲಾ ಮನಸ್ಸಿನಲ್ಲಿಯೇ ಇಟ್ಟುಕೊಂಡು ಆಲೋಚಿಸುತ್ತಾ ಬಂದಳು.
[20]ಇತ್ತ, ಕುರುಬರು ತಾವು ಕೇಳಿದ್ದನ್ನು ನೆನೆಯುತ್ತಾ, ದೇವರ ಮಹಿಮೆಯನ್ನು ಸಾರುತ್ತಾ, ಕೊಂಡಾಡುತ್ತಾ
ಹಿಂದಿರುಗಿದರು. ದೇವದೂತನು ಅವರಿಗೆ ತಿಳಿಸಿದಂತೆ ಎಲ್ಲವೂ ಸಂಭವಿಸಿತ್ತು.

### ಶಿಶು ಯೇಸುವಿನ ನಾಮಕರಣ

21 ಎಂಟನೆಯ ದಿನ ಶಿಶುವಿಗೆ ಸುನ್ನತಿ ಮಾಡಬೇಕಾಗಿದ್ದ ಸಂದರ್ಭದಲ್ಲಿ ಅದಕ್ಕೆ 'ಯೇಸು' ಎಂಬ
ಹೆಸರನ್ನಿಟ್ಟು ನಾಮಕರಣ ಮಾಡಿದರು. ಈ ಹೆಸರನ್ನು ಮರಿಯಳು ಗರ್ಭಿಣಿಯಾಗುವುದಕ್ಕೆ ಮುಂಚೆಯೇ
ದೂತನು ಸೂಚಿಸಿದ್ದನು.

### ಯೇಸುಬಾಲನ ಸಮರ್ಪಣೆ

22 ಮೋಶೆಯ ನಿಯಮದ ಪ್ರಕಾರ ಸೂತಕ ದಿನಗಳು ಮುಗಿದು ಶುದ್ಧೀಕರಣ ದಿನ ಬಂದಾಗ,
ತಂದೆತಾಯಿಗಳು ಆ ಮಗುವನ್ನು ಎತ್ತಿಕೊಂಡು ಜೆರುಸಲೇಮಿಗೆ ಹೋದರು. [23]ಏಕೆಂದರೆ, 'ಮೊದಲು
ಜನಿಸಿದ ಪ್ರತಿಯೊಂದು ಗಂಡು ಮಗುವನ್ನು ಸರ್ವೇಶ್ವರನಿಗೆ ಸಮರ್ಪಿಸಬೇಕಾಗಿತ್ತು. [24]ಅಲ್ಲದೆ,
ಧರ್ಮಶಾಸ್ತ್ರದಲ್ಲೇ ಉಲ್ಲೇಖಿಸಿರುವಂತೆ ಒಂದು ಜೋಡಿ ಬೆಳವಹಕ್ಕಿಗಳನ್ನಾಗಲಿ, ಎರಡು ಪಾರಿವಾಳದ
ಮರಿಗಳನ್ನಾಗಲಿ, ಬಲಿಯನ್ನಾಗಿ ಅರ್ಪಿಸಬೇಕಾಗಿತ್ತು.

25 ಆಗ ಜೆರುಸಲೇಮಿನಲ್ಲಿ ಸಿಮೆಯೋನನೆಂಬ ಒಬ್ಬನು ವಾಸವಾಗಿದ್ದನು. ಸತ್ಪುರುಷನೂ
ದೈವಭಕ್ತನೂ ಆದ ಇವನು, ಇಸ್ರಯೇಲ್ ಜನತೆಯ ಉದ್ಧಾರಕ ಯಾವಾಗ ಬರುವನೋ ಎಂದು
ನಿರೀಕ್ಷಿಸುತ್ತಾ ಇದ್ದನು. ಪವಿತ್ರಾತ್ಮ ಇವನಲ್ಲಿ ನೆಲೆಸಿದ್ದರು. [26]ಸರ್ವೇಶ್ವರ ಕಳುಹಿಸಲಿರುವ ಅಭಿಷಿಕ್ತನಾದ
ಲೋಕೋದ್ಧಾರಕನ ದರ್ಶನವಾಗುವವರೆಗೆ ತನಗೆ ಸಾವಿಲ್ಲವೆಂದು ಪವಿತ್ರಾತ್ಮರಿಂದಲೇ ಆಶ್ವಾಸನೆ
ಪಡೆದಿದ್ದನು. [27]ಆ ಪವಿತ್ರಾತ್ಮರಿಂದ ಪ್ರೇರಿತನಾಗಿ ಅವನು ಮಹಾದೇವಾಲಯಕ್ಕೆ ಬಂದನು. ಧರ್ಮಶಾಸ್ತ್ರದ
ವಿಧಿಯನ್ನು ಪೂರೈಸಲು ಬಾಲಯೇಸುವನ್ನು ತಂದೆತಾಯಿಗಳು ದೇವಾಲಯಕ್ಕೆ ತಂದಾಗ,
[28]ಸಿಮೆಯೋನನು ಆ ಮಗುವನ್ನು ತನ್ನ ಕೈಗಳಲ್ಲಿ ಎತ್ತಿಕೊಂಡು ದೇವರನ್ನು ಹೀಗೆಂದು ಸ್ತುತಿಸಿದನು:

29 "ನಿನ್ನ ಮಾತು ಸರ್ವೇಶ್ವರಾ, ನೆರವೇರಿತಿಂದು;
ಇನ್ನು ತೆರಳಬಿಡು ಶಾಂತಿಯಿಂದ ನಿನ್ನ
ದಾಸನಾದ ಎನ್ನನು.
30 ನೀನಿತ್ತ ಉದ್ದಾರಕನನು ನಾ ಕಂಡೆ ಕಣ್ಣಾರೆ
31 ಜನರೆಲ್ಲರ ಸಮ್ಮುಖದಲ್ಲಿ ನೀನೀತನನು
ಪ್ರತ್ಯಕ್ಷ ಮಾಡಿರುವೆ.

32 ಈತ ಅನ್ಯ ಜನರನ್ನು ಬೆಳಗಿಸುವ ಜ್ಯೋತಿ;
ನಿನ್ನ ಜನ ಇಸ್ರಯೇಲರಿಗೆ
ತರುವನು ಕೀರ್ತಿ."
33 ಮಗುವಿನ ವಿಷಯವಾಗಿ ಹೇಳಿದ ಈ ಮಾತುಗಳನ್ನು ಕೇಳಿ ತಂದೆ ತಾಯಿಗಳು
ಆಶ್ಚರ್ಯಪಟ್ಟರು. 34ಅವರನ್ನು ಸಿಮೆಯೋನನು ಆಶೀರ್ವದಿಸಿದನು. ತಾಯಿ ಮರಿಯಳಿಗೆ, "ಇಗೋ, ಈ
ಮಗು ಇಸ್ರಯೇಲರಲ್ಲಿ ಅನೇಕರ ಉನ್ನತಿಗೂ ಅನೇಕರ ಅವನತಿಗೂ ಕಾರಣನಾಗುವನು. ಅನೇಕರು
ಪ್ರತಿಭಟಿಸುವ ದೈವಸಂಕೇತವಾಗುವನು. ಇದರಿಂದ ಅನೇಕರ ಹೃದಯದಾಳದ ಭಾವನೆಗಳು
ಬಯಲಾಗುವುವು. 35(ನಿನ್ನ ವಿಷಯದಲ್ಲಿ ಹೇಳುವುದಾದರೆ, ದುಃಖವೆಂಬ ಅಲಗೊಂದು ನಿನ್ನ
ಅಂತರಂಗವನ್ನು ಸೀಳುವುದು,)" ಎಂದು ಹೇಳಿದನು.
36 ಇದಲ್ಲದೆ ಅಲ್ಲಿ ಅಶೇರನ ವಂಶಕ್ಕೆ ಸೇರಿದ ಫನುವೇಲನ ಮಗಳಾದ ಅನ್ನಳೆಂಬ
ಪ್ರವಾದಿನಿಯಿದ್ದಳು. ಅವಳು ಮುದಿಪ್ರಾಯದವಳು, ಮದುವೆಯಾಗಿ ಏಳು ವರ್ಷ ಮಾತ್ರ ಗಂಡನೊಡನೆ
ಬಾಳಿ ವಿಧವೆಯಾದವಳು. 37ಅವಳಿಗೆ ಸುಮಾರು ಎಂಭತ್ತನಾಲ್ಕು ವರ್ಷ ವಯಸ್ಸು. ಮಹಾ
ದೇವಾಲಯವನ್ನು ಬಿಟ್ಟು ಅವಳು ಎಲ್ಲಿಗೂ ಹೋಗುತ್ತಿರಲಿಲ್ಲ; ಹಗಲಿರುಳು ಉಪವಾಸ ಪ್ರಾರ್ಥನೆಗಳಿಂದ
ದೇವಾರಾಧನೆಯಲ್ಲಿ ನಿರತಳಾಗಿದ್ದಳು. 38ಅವಳು ಅದೇ ಸಂದರ್ಭದಲ್ಲಿ ಅಲ್ಲಿಗೆ ಬಂದು, ದೇವರಿಗೆ
ಕೃತಜ್ಞತಾಸ್ತುತಿ ಸಲ್ಲಿಸಿ, ಜೆರುಸಲೇಮಿನ ವಿಮೋಚನೆಯನ್ನು ಎದುರು ನೋಡುತ್ತಿದ್ದ ಅಲ್ಲಿಯವರಿಗೆಲ್ಲಾ ಆ
ಶಿಶುವಿನ ವಿಷಯವಾಗಿ ಹೇಳತೊಡಗಿದಳು.

### ಮರಳಿ ನಜರೇತಿಗೆ

39 ಸರ್ವೇಶ್ವರನ ಧರ್ಮಶಾಸ್ತ್ರಕ್ಕನುಸಾರ ಎಲ್ಲ ವಿಧಿಗಳನ್ನು ನೆರವೇರಿಸಿದ ಮೇಲೆ ಜೋಸೆಫ್ ಮತ್ತು
ಮರಿಯಳು ಗಲಿಲೇಯ ಪ್ರಾಂತ್ಯದಲ್ಲಿದ್ದ ತಮ್ಮ ಸ್ವಗ್ರಾಮವಾದ ನಜರೇತಿಗೆ ಹಿಂದಿರುಗಿದರು. 40ಬಾಲಕ
ಯೇಸು ಬೆಳೆದಂತೆ ಶಕ್ತರೂ ಜ್ಞಾನ ಸಂಪೂರ್ಣರೂ ಆದರು. (ಇದಲ್ಲದೆ) ದೈವಾನುಗ್ರಹ ಅವರ ಮೇಲಿತ್ತು.

### ಯೇಸು ಹನ್ನೆರಡನೇ ವರ್ಷದಲ್ಲಿ

41 ಯೇಸುಸ್ವಾಮಿಯ ತಂದೆತಾಯಿಗಳು ಪ್ರತಿವರ್ಷವೂ ಪಾಸ್ಕಹಬ್ಬಕ್ಕೆ ಜೆರುಸಲೇಮಿಗೆ
ಹೋಗುತ್ತಿದ್ದರು. 42ಯೇಸುವಿಗೆ ಹನ್ನೆರಡು ವರ್ಷವಾದಾಗ ವಾಡಿಕೆಯ ಪ್ರಕಾರ ಹಬ್ಬಕ್ಕೆ ಹೋದರು. 43ಹಬ್ಬ
ಮುಗಿಸಿಕೊಂಡು ಅವರು ಹಿಂದಿರುಗಿ ಬರುವಾಗ ಬಾಲಕಯೇಸು ಜೆರುಸಲೇಮಿನಲ್ಲಿಯೇ ಉಳಿದುಬಿಟ್ಟರು.
44ಇದು ತಂದೆತಾಯಿಗಳಿಗೆ ತಿಳಿಯದು. ಮಗನು ಯಾತ್ರಿಕರ ಗುಂಪಿನಲ್ಲಿ ಬರುತ್ತಿರಬಹುದೆಂದು ಭಾವಿಸಿ
ಒಂದು ದಿನದ ಪ್ರಯಾಣ ಬಂದುಬಿಟ್ಟಿದ್ದರು. ನಂತರ ಮಗನನ್ನು ಕಾಣದೆ ತಮ್ಮ ಬಂಧುಬಳಗದವರಲ್ಲೂ
ಪರಿಚಿತರಲ್ಲೂ ಹುಡುಕಾಡಿದರು. 45ಅಲ್ಲೆಲ್ಲೂ ಕಾಣದೆ ಅವರನ್ನು ಹುಡುಕಿಕೊಂಡು ಜೆರುಸಲೇಮಿಗೆ ಮರಳಿ
ಬಂದರು. 46ಮೂರು ದಿನಗಳ ಮೇಲೆ ಮಹಾದೇವಾಲಯದಲ್ಲಿ ಅವರನ್ನು ಕಂಡಾಗ ಅಲ್ಲಿ ಯೇಸು,
ಬೋಧಕರ ಮಧ್ಯೆ ಕುಳಿತುಕೊಂಡು ಅವರ ಉಪದೇಶವನ್ನು ಆಲಿಸುತ್ತಾ ಅವರಿಗೆ ಪ್ರಶ್ನೆಹಾಕುತ್ತಾ ಇದ್ದರು.
47ಬಾಲಕನ ಪ್ರಶ್ನೋತ್ತರಗಳನ್ನು ಕೇಳುತ್ತಿದ್ದ ಎಲ್ಲರೂ ಆತನ ಜ್ಞಾನವನ್ನು ಕಂಡು ಬೆರಗಾದರು.
48ತಂದೆತಾಯಿಗಳು ಮಗನನ್ನು ಅಲ್ಲಿ ಕಂಡು ವಿಸ್ಮಯಗೊಂಡರು. ಆಗ ತಾಯಿಯು, "ಕಂದಾ, ನಮಗೆ ಏಕೆ
ಹೀಗೆ ಮಾಡಿದೆ? ನಿನ್ನ ತಂದೆಯೂ ನಾನೂ ಎಷ್ಟೋ ಕಳವಳಪಟ್ಟು ನಿನ್ನನ್ನು ಹುಡುಕಾಡಿದೆವಲ್ಲಾ,"
ಎಂದಳು. 49ಅದಕ್ಕೆ ಉತ್ತರವಾಗಿ ಯೇಸು, "ನೀವು ನನ್ನನ್ನು ಹುಡುಕಿದ್ದೇಕೆ? ನಾನು ನನ್ನ ತಂದೆಯ
ಆಲಯದಲ್ಲೇ ಇರಬೇಕೆಂದು ನಿಮಗೆ ತಿಳಿಯದೆ ಹೋಯಿತೆ?" ಎಂದರು. 50ಆದರೆ ಅವರ ಮಾತು
ತಂದೆತಾಯಿಗಳಿಗೆ ಅರ್ಥವಾಗಲಿಲ್ಲ.

51 ಬಳಿಕ ಯೇಸು ತಂದೆತಾಯಿಗಳೊಡನೆ ನಜರೇತಿಗೆ ಬಂದರು. ಅಲ್ಲಿ ಅವರಿಗೆ ವಿಧೇಯರಾಗಿ
ನಡೆದುಕೊಳ್ಳುತ್ತಿದ್ದರು. ಈ ವಿಷಯಗಳನ್ನೆಲ್ಲಾ ತಾಯಿ ಮರಿಯಳು ತನ್ನ ಮನಸ್ಸಿನಲ್ಲಿ ಸಂಗ್ರಹಿಸಿ
ಇಟ್ಟುಕೊಂಡಳು. 52ಯೇಸು ಬೆಳೆದಂತೆ ಜ್ಞಾನದಲ್ಲಿ ಪ್ರವರ್ಧಿಸುತ್ತಾ ದೇವರಿಗೂ ಮಾನವರಿಗೂ ಅಚ್ಚು
ಮೆಚ್ಚಾಗುತ್ತಾ ಬಂದರು.

## ಸ್ನಾನಿಕ ಯೊವಾನ್ನನ ಬೋಧನೆ

(ಮತ್ತಾ. 3.1–12; ಮಾರ್ಕ 1.1–8; ಯೊವಾ. 1.19–28)

**3** ಅದು ತಿಬೇರಿಯಸ್ ಚಕ್ರವರ್ತಿಯ ಆಡಳಿತದ ಹದಿನೈದನೆಯ ವರ್ಷ. ಆ ಕಾಲದಲ್ಲಿ ಜುದೇಯ
ಪ್ರಾಂತ್ಯಕ್ಕೆ ಪೊನ್ಸಿಯುಸ್ ಪಿಲಾತನು ರಾಜ್ಯಪಾಲನಾಗಿದ್ದನು. ಗಲಿಲೇಯ ಪ್ರಾಂತ್ಯಕ್ಕೆ ಹೆರೋದನೂ ಇತುರೆಯ
ಮತ್ತು ತ್ರಕೋನಿತಿ ಪ್ರಾಂತ್ಯಗಳಿಗೆ ಇವನ ತಮ್ಮನಾದ ಫಿಲಿಪ್ಪನೂ ಮತ್ತು ಅಬಿಲೇನೆ ಪ್ರಾಂತ್ಯಕ್ಕೆ ಲುಸಾನಿಯನೂ
ಸಾಮಂತರಾಗಿದ್ದರು. 2ಅನ್ನನು ಮತ್ತು ಕಾಯಿಫನು ಅಂದಿನ ಪ್ರಧಾನ ಯಾಜಕರು. ಆಗ ಬೆಂಗಾಡಿನಲ್ಲಿ
ಜಕರೀಯನ ಮಗ ಯೊವಾನ್ನನಿಗೆ ದೇವರ ಸಂದೇಶದ ಬೋಧೆ ಆಯಿತು. 3ಆತನು ಜೋರ್ಡನ್ ನದಿಯ
ಪರಿಸರ ಪ್ರಾಂತ್ಯದಲ್ಲೆಲ್ಲಾ ಸಂಚರಿಸುತ್ತಾ, "ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖರಾಗಿ ದೇವರಿಗೆ
ಅಭಿಮುಖರಾಗಿರಿ ಮತ್ತು ಸ್ನಾನದೀಕ್ಷೆ ಪಡೆದುಕೊಳ್ಳಿರಿ; ದೇವರು ನಿಮ್ಮ ಪಾಪಗಳನ್ನು ಕ್ಷಮಿಸಿ ಬಿಡುವರು,"
ಎಂದು ಸಾರಿ ಹೇಳುತ್ತಿದ್ದನು. 4ಈ ಬಗ್ಗೆ ಪ್ರವಾದಿ ಯೆಶಾಯನ ಗ್ರಂಥದಲ್ಲಿ ಮುಂಚಿತವಾಗಿಯೇ ಹೀಗೆಂದು
ಬರೆದಿಡಲಾಗಿದೆ:

" 'ಪ್ರಭುವಿಗಾಗಿ ಮಾರ್ಗವನ್ನು ಸಿದ್ಧಪಡಿಸಿರಿ,
ಆತನ ಆಗಮನಕ್ಕಾಗಿ ಹಾದಿಯನ್ನು
ಸರಾಗ ಮಾಡಿರಿ'
ಎಂದು ಬೆಂಗಾಡಿನಲ್ಲಿ ಒಬ್ಬನು
ಘೋಷಿಸುತ್ತಿದ್ದಾನೆ.
5 ಹಳ್ಳಕೊಳ್ಳಗಳೆಲ್ಲ ಭರ್ತಿಯಾಗಬೇಕು;
ಬೆಟ್ಟಗುಡ್ಡಗಳು ಮಟ್ಟವಾಗಬೇಕು;
ಅಂಕುಡೊಂಕಾದವು ನೆಟ್ಟಗಾಗಬೇಕು;
ತಗ್ಗುಮುಗ್ಗಾದ ಹಾದಿಗಳು ಹಸನಾಗಬೇಕು.
6 ಆಗ ದೇವರು ದಯಪಾಲಿಸುವ
ಜೀವೋದ್ಧಾರವನ್ನು
ಮಾನವರೆಲ್ಲರು ಕಾಣುವರು."

7 ಯೊವಾನ್ನನ ಬಳಿಗೆ ಸ್ನಾನದೀಕ್ಷೆ ಪಡೆಯಲು ಜನರು ಗುಂಪುಗುಂಪಾಗಿ ಬರುತ್ತಿದ್ದರು. ಆತನು
ಅವರಿಗೆ, "ಎಲೈ ವಿಷಸರ್ಪಗಳ ಪೀಳಿಗೆಯೇ, ಬರಲಿರುವ ದೈವಕೋಪದಿಂದ ತಪ್ಪಿಸಿಕೊಳ್ಳಬಹುದೆಂದು
ನಿಮಗೆ ಎಚ್ಚರಿಕೆ ಕೊಟ್ಟವರಾರು? 8ಪಾಪಕ್ಕೆ ವಿಮುಖರಾಗಿದ್ದೀರಿ ಎಂಬುದನ್ನು ಸತ್ಕಾರ್ಯಗಳಿಂದ
ವ್ಯಕ್ತಪಡಿಸಿರಿ. 'ಅಬ್ರಹಾಮನೇ ನಮ್ಮ ಪಿತಾಮಹ,' ಎಂದು ನಿಮ್ಮ ನಿಮ್ಮಲ್ಲೇ ಕೊಚ್ಚಿಕೊಳ್ಳಬೇಡಿ; ಈ
ಕಲ್ಲುಗಳಿಂದಲೂ ದೇವರು ಅಬ್ರಹಾಮನಿಗೆ ಸಂತಾನ ಪ್ರಾಪ್ತಿಯಾಗುವಂತೆ ಮಾಡಬಲ್ಲರೆಂದು ನಾನು ನಿಮಗೆ
ಹೇಳುತ್ತೇನೆ. 9ಈಗಾಗಲೇ ಮರದ ಬುಡಕ್ಕೆ ಕೊಡಲಿ ಬಿದ್ದಿದೆ; ಒಳ್ಳೆಯ ಫಲವನ್ನು ಕೊಡದ ಪ್ರತಿಯೊಂದೂ
ಮರವನ್ನು ಕಡಿದು ಬೆಂಕಿಗೆ ಹಾಕಲಾಗುವುದು," ಎಂದನು.

10 ಆಗ ಜನಸಮೂಹವು, "ಹಾಗಾದರೆ ನಾವೇನು ಮಾಡಬೇಕು?" ಎಂದು ಕೇಳಲು, 11"ನಿಮಗೆ
ಎರಡು ಅಂಗಿಗಳಿದ್ದರೆ, ಒಂದನ್ನು ಏನೂ ಇಲ್ಲದವನಿಗೆ ಕೊಡಿ; ಅಂತೆಯೇ ಆಹಾರ ಉಳ್ಳವನು

ಇಲ್ಲದವನೊಂದಿಗೆ ಹಂಚಿಕೊಳ್ಳಲಿ," ಎಂದು ಉತ್ತರಕೊಟ್ಟನು. 12ಅನಂತರ ಸುಂಕದವರು ಸಹ ಸ್ನಾನದೀಕ್ಷೆ
ಪಡೆಯಲು ಬಂದು, "ಬೋಧಕರೇ, ನಾವೇನು ಮಾಡಬೇಕು?" ಎಂದು ಕೇಳಿದಾಗ, 13"ಗೊತ್ತು
ಮಾಡಿರುವುದಕ್ಕಿಂತ ಹೆಚ್ಚಾಗಿ ಕಿತ್ತುಕೊಳ್ಳಬೇಡಿ," ಎಂದನು. 14"ನಾವು ಮಾಡಬೇಕಾದುದೇನು?" ಎಂದು
ಸಿಪಾಯಿಗಳು ಮುಂದೆ ಬಂದು ಪ್ರಶ್ನಿಸಿದಾಗ, "ಬಲಾತ್ಕಾರದಿಂದಾಗಲಿ, ಸುಳ್ಳು ಬೆದರಿಕೆಯಿಂದಾಗಲಿ,
ಯಾರನ್ನೂ ಸುಲಿಗೆ ಮಾಡಬೇಡಿ; ನಿಮಗೆ ಬರುವ ಸಂಬಳದಿಂದ ತೃಪ್ತರಾಗಿರಿ," ಎಂದು ಆತ
ಉತ್ತರವಿತ್ತನು.

15 "ಈ ಯೊವಾನ್ನನೇ ಎಲ್ಲರು ಎದುರು ನೋಡುತ್ತಾ ಇರುವ ಅಭಿಷಿಕ್ತನಾದ ಲೋಕೋದ್ಧಾರಕ
ಆಗಿರಬಹುದೇ" ಎಂದು ಜನರು ತಮ್ಮ ಮನಸ್ಸಿನಲ್ಲೇ ಆಲೋಚಿಸುತ್ತಿದ್ದರು. 16ಅದಕ್ಕೆ ಉತ್ತರವಾಗಿ
ಯೊವಾನ್ನನು, "ನಾನು ನಿಮಗೆ ನೀರಿನಿಂದ ಸ್ನಾನದೀಕ್ಷೆ ಕೊಡುತ್ತಿದ್ದೇನೆ. ಆದರೆ ನನಗಿಂತಲೂ ಶಕ್ತರೊಬ್ಬರು
ಬರುತ್ತಾರೆ. ಅವರ ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು ಅರ್ಹನಲ್ಲ; ಅವರು ನಿಮಗೆ ಪವಿತ್ರಾತ್ಮ
ಅವರಿಂದಲೂ ಅಗ್ನಿಯಿಂದಲೂ ದೀಕ್ಷಾಸ್ನಾನ ಕೊಡುವರು. 17ಅವರ ಕೈಯಲ್ಲಿ ಮೊರವಿದೆ. ತಮ್ಮ
ಕಣದಲ್ಲಿಯ ರಾಶಿಯನ್ನು ತೂರಿ, ಗಟ್ಟಿಕಾಳನ್ನು ಮಾತ್ರ ಕಣಜಕ್ಕೆ ತುಂಬುವರು. ಹೊಟ್ಟನ್ನು ಆರಿಸಲಾಗದ
ಬೆಂಕಿಯಲ್ಲಿ ಸುಟ್ಟು ಹಾಕುವರು," ಎಂದು ನುಡಿದನು. 18ಹೀಗೆ ಯೊವಾನ್ನನು ನಾನಾ ವಿಧಗಳಲ್ಲಿ
ಪ್ರಬೋಧಿಸುತ್ತಾ ಜನರಿಗೆ ಶುಭಸಂದೇಶವನ್ನು ಸಾರುತ್ತಾ ಇದ್ದನು.

19 ಸಾಮಂತ ಹೆರೋದನು ಅನೇಕ ದುಷ್ಕೃತ್ಯಗಳನ್ನು ಮಾಡಿದ್ದನು. ಅಲ್ಲದೆ ತನ್ನ ಸೋದರನ
ಹೆಂಡತಿಯಾದ ಹೆರೋದಿಯಳನ್ನು ಇಟ್ಟುಕೊಂಡಿದ್ದನು. ಆದ್ದರಿಂದ ಯೊವಾನ್ನನು ಅವನನ್ನು
ಖಂಡಿಸಿದ್ದನು. 20ಹೆರೋದನು ಯೊವಾನ್ನನನ್ನು ಕಾರಾಗೃಹದಲ್ಲಿ ಬಂಧಿಸಿ, ತನ್ನ ದುಷ್ಕೃತ್ಯಗಳಿಗೆ ಮತ್ತೊಂದು
ದುಷ್ಕೃತ್ಯವನ್ನು ಕೂಡಿಸಿದ್ದನು.

### ಯೇಸು ಪಡೆದ ದೀಕ್ಷಾಸ್ನಾನ

(ಮತ್ತಾ. 3.13–17; ಮಾರ್ಕ 1.9–11; ಯೊವಾ. 1.32–34)

21 ಜನರೆಲ್ಲರು ಸ್ನಾನದೀಕ್ಷೆ ಪಡೆಯುತ್ತಾ ಇದ್ದರು. ಯೇಸುಸ್ವಾಮಿಯೂ ಬಂದು ಸ್ನಾನದೀಕ್ಷೆ ಪಡೆದು
ಪ್ರಾರ್ಥಿಸುತ್ತಿರಲು ಆಕಾಶವು ತೆರೆಯಿತು. 22ಆಗ ಪವಿತ್ರಾತ್ಮ ಸಶರೀರವಾಗಿ ಒಂದು ಪಾರಿವಾಳದ ರೂಪದಲ್ಲಿ
ಯೇಸುವಿನ ಮೇಲೆ ಇಳಿದರು. ಅಲ್ಲದೆ, "ನೀನೇ ನನ್ನ ಪುತ್ರ; ನನಗೆ ಪರಮಪ್ರಿಯನು, ನನ್ನ ಅಪಾರ
ಮೆಚ್ಚುಗೆಗೆ ಪಾತ್ರನು," ಎಂಬ ದೈವವಾಣಿ ಕೇಳಿಸಿತು.

### ಯೇಸುವಿನ ವಂಶಾವಳಿ

(ಮತ್ತಾ. 1.1–17)

23 ಯೇಸುಸ್ವಾಮಿ ಬೋಧಿಸಲು ಪ್ರಾರಂಭಿಸಿದಾಗ ಅವರಿಗೆ ಸುಮಾರು ಮೂವತ್ತು ವರ್ಷ
ವಯಸ್ಸು. ಯೇಸು ಜೋಸೆಫನ ಮಗನೆಂದು ಜನರು ಭಾವಿಸಿದ್ದರು. ಜೋಸೆಫನು ಹೇಲಿಯನಿಗೆ ಹುಟ್ಟಿದನು.

24 ಹೇಲಿಯನು ಮತ್ತಾತನಿಗೆ, ಮತ್ತಾತನು ಲೇವಿಗೆ, ಲೇವಿ ಮೆಲ್ಕಿಯನಿಗೆ, ಮೆಲ್ಕಿಯನ್ನಾಯನಿಗೆ,
ಯನ್ನಾಯ ಜೋಸೆಫನಿಗೆ ಹುಟ್ಟಿದರು.

25 ಜೋಸೆಫ್ ಮತ್ತಥೀಯನಿಗೆ, ಮತ್ತಥೀಯ ಆಮೋಸನಿಗೆ, ಆಮೋಸನು ನಾಹೂಮನಿಗೆ,
ನಾಹೂಮ ಎಸ್ಲಿಯನಿಗೆ, ಎಸ್ಲಿಯ ನಗ್ಗಾಯನಿಗೆ ಹುಟ್ಟಿದರು.

26 ನಗ್ಗಾಯ ಮಹಾಥನಿಗೆ, ಮಹಾಥ ಮತ್ತಥೀಯನಿಗೆ, ಮತ್ತಥೀಯ ಶಿಮಿಯಾನಿಗೆ, ಶಿಮಿಯಾ
ಯೊಸೇಖನಿಗೆ ಹುಟ್ಟಿದರು.

27 ಯೊಸೇಖ ಯೋದನಿಗೆ, ಯೋದನು ಯೊವಾನ್ನನಿಗೆ, ಯೊವಾನ್ನನು ರೇಸನಿಗೆ, ರೇಸನು
ಜೆರುಬಾಬೆಲನಿಗೆ, ಜೆರುಬಾಬೆಲ್ ಸಲಥಿಯೇಲನಿಗೆ, ಸಲಥಿಯೇಲನು ನೇರಿಯನಿಗೆ ಹುಟ್ಟಿದರು.

28 ನೇರಿಯನು ಮೆಲ್ಕಿಯನಿಗೆ, ಮೆಲ್ಕಿಯನು ಅದ್ದಿಯನಿಗೆ, ಅದ್ದಿಯನು ಕೋಸಾಮನಿಗೆ,
ಕೋಸಾಮ್ ಎಲ್ಮದಾಮನಿಗೆ, ಎಲ್ಮದಾಮ್ ಏರನಿಗೆ ಹುಟ್ಟಿದರು.

29 ಏರ್ ಯೆಹೋಷುವನಿಗೆ, ಯೆಹೋಷುವ ಎಲಿಯೇಜರನಿಗೆ, ಎಲಿಯೇಜರ್ ಯೋರೈಮನಿಗೆ, ಯೋರೈಮ್ ಮತ್ತಾತನಿಗೆ, ಮತ್ತಾತನು ಲೇವಿಗೆ ಹುಟ್ಟಿದರು.

30 ಲೇವಿ ಸಿಮಿಯೋನನಿಗೆ, ಸಿಮಿಯೋನ್ ಯೂದನಿಗೆ; ಯೂದ ಜೋಸೆಫನಿಗೆ, ಜೋಸೆಫ್ ಯೊನಾಮನಿಗೆ, ಯೊನಾಮ್ ಎಲಿಯಕೀಮನಿಗೆ ಹುಟ್ಟಿದರು.

31 ಎಲಿಯಕೀಮ್ ಮೆಲೆಯಾನಿಗೆ, ಮೆಲೆಯಾ ಮೆನ್ನನಿಗೆ, ಮೆನ್ನ ಮತ್ತಾಥನಿಗೆ, ಮತ್ತಾಥ ನಾತಾನನಿಗೆ, ನಾತಾನ್ ದಾವೀದನಿಗೆ ಹುಟ್ಟಿದರು.

32 ದಾವೀದ್ ಜೆಸ್ಸೆಯನಿಗೆ, ಜೆಸ್ಸೆಯ ಓಬೇದನಿಗೆ, ಓಬೇದ್ ಬೋವಜನಿಗೆ, ಬೋವಜ್ ಸಲ್ಮೋನನಿಗೆ, ಸಲ್ಮೋನ್ ನಹಸ್ಸೋನನಿಗೆ ಹುಟ್ಟಿದರು.

33 ನಹಸ್ಸೋನ್ ಅಮ್ಮಿನದಾಬನಿಗೆ, ಅಮ್ಮಿನದಾಬನು ಅದ್ಮಿನನಿಗೆ, ಅದ್ಮಿನ್ ಆರ್ನೈಯನಿಗೆ, ಆರ್ನೈಯ ಹೆಸ್ರೋನನಿಗೆ, ಹೆಸ್ರೋನ್ ಪೆರೆಸನಿಗೆ, ಪೆರೆಸ್ ಯೂದನಿಗೆ ಹುಟ್ಟಿದರು.

34 ಯೂದ ಯಕೋಬನಿಗೆ, ಯಕೋಬ್ ಇಸಾಕನಿಗೆ, ಇಸಾಕ ಅಬ್ರಹಾಮನಿಗೆ, ಅಬ್ರಹಾಮ ತೇರನಿಗೆ, ತೇರ ನಹೋರನಿಗೆ ಹುಟ್ಟಿದರು.

35 ನಹೋರ್ ಸೆರೂಗನಿಗೆ, ಸೆರೂಗ್ ರೆಗೂವನಿಗೆ, ರೆಗೂವ ಪೆಲೆಗನಿಗೆ, ಪೆಲೆಗ್ ಹೇಬೆರನಿಗೆ, ಹೇಬೆರ್ ಸಾಲನಿಗೆ ಹುಟ್ಟಿದರು.

36 ಸಾಲ ಕಯಿನನಿಗೆ, ಕಯಿನ್ ಅರ್ಫಕ್ಸಾದನಿಗೆ, ಅರ್ಫಕ್ಸಾದ್ ಶೇಮನಿಗೆ, ಶೇಮ್ ನೋವನಿಗೆ, ನೋವ ಲಾಮೆಕನಿಗೆ, ಲಾಮೆಕ್ ಮತೂಷಲನಿಗೆ ಹುಟ್ಟಿದರು.

37 ಮತೂಷಲ ಹನೋಕನಿಗೆ, ಹನೋಕ್ ಯೆರೆದನಿಗೆ, ಯೆರೆದ್ ಮಹಲಲೇಲನಿಗೆ, ಮಹಲಲೇಲ್ ಕಯಿನನಿಗೆ ಹುಟ್ಟಿದರು.

38 ಕಯಿನನ್ ಎನೋಷನಿಗೆ, ಎನೋಷ ಸೇತನಿಗೆ, ಸೇತ್ ಆದಾಮನಿಗೆ ಹುಟ್ಟಿದರು. ಆದಾಮನು ದೇವರ ಮಗನು.

## ಸೈತಾನನ ಪ್ರಲೋಭನೆಗಳು

(ಮತ್ತಾ. 4.1–11; ಮಾರ್ಕ 1.12–13)

**4** ಯೇಸುಸ್ವಾಮಿ ಪವಿತ್ರಾತ್ಮಭರಿತರಾಗಿ ಜೋರ್ಡನ್ ನದಿತೀರದಿಂದ ಹಿಂದಿರುಗಿದ ಮೇಲೆ ಅದೇ
ಆತ್ಮರಿಂದ ಪ್ರೇರಿತರಾಗಿ ಬೆಂಗಾಡು ಪ್ರದೇಶಕ್ಕೆ ಬಂದರು. [2]ನಾಲ್ವತ್ತು ದಿನ ಅಲ್ಲಿದ್ದಾಗ ಅವರನ್ನು ಪರೀಕ್ಷಿಸಲು
ಪಿಶಾಚಿ ಪ್ರಯತ್ನಿಸಿತು. ಅಷ್ಟು ದಿನಗಳೂ ಏನನ್ನೂ ತಿನ್ನದೆ ಉಪವಾಸವಿದ್ದ ಯೇಸುವಿಗೆ ಆಗ ಹಸಿವಾಯಿತು.
3 ಆಗ ಪಿಶಾಚಿ, "ನೀನು ದೇವರ ಪುತ್ರ ಎಂಬುದು ಸತ್ಯವಾದರೆ ಈ ಕಲ್ಲಿಗೆ ರೊಟ್ಟಿ ಆಗೆಂದು
ಆಜ್ಞೆಮಾಡು," ಎಂದಿತು. [4]ಅದಕ್ಕೆ ಯೇಸು, "ಪವಿತ್ರಗ್ರಂಥದಲ್ಲಿ ಹೇಳಿರುವ ಪ್ರಕಾರ, 'ಮಾನವನು
ಜೀವಿಸುವುದು ಆಹಾರದಿಂದ ಮಾತ್ರವಲ್ಲ'," ಎಂದು ಉತ್ತರಿಸಿದರು.
5 ಬಳಿಕ ಪಿಶಾಚಿ ಯೇಸುವನ್ನು ಎತ್ತರಕ್ಕೆ ಕರೆದೊಯ್ದು ಪ್ರಪಂಚದ ಎಲ್ಲಾ ರಾಜ್ಯಗಳನ್ನು
ಕ್ಷಣಮಾತ್ರದಲ್ಲಿ ತೋರಿಸಿ, [6]"ಇವುಗಳ ಸರ್ವಾಧಿಕಾರವನ್ನೂ ವೈಭವವನ್ನೂ ನಿನಗೆ ಕೊಡುವೆನು. ಇವೆಲ್ಲಾ
ನನ್ನ ಅಧೀನದಲ್ಲಿವೆ. ನನ್ನ ಇಷ್ಟ ಬಂದವರಿಗೆ ಇವನ್ನು ಕೊಡಬಲ್ಲೆ. [7]ನೀನು ನನಗೆ ಅಡ್ಡ ಬಿದ್ದೆಯಾದರೆ
ಇದೆಲ್ಲಾ ನಿನ್ನದಾಗುವುದು," ಎಂದಿತು. [8]ಅದಕ್ಕೆ ಯೇಸು ಪ್ರತ್ಯುತ್ತರವಾಗಿ, " 'ನಿನ್ನ ದೇವರಾದ
ಸರ್ವೇಶ್ವರನನ್ನು ಆರಾಧಿಸು; ಅವರೊಬ್ಬರಿಗೇ ಸೇವೆ ಸಲ್ಲಿಸು,' ಎಂದು ಪವಿತ್ರ ಗ್ರಂಥದಲ್ಲಿ ಬರೆಯಲಾಗಿದೆ,"
ಎಂದರು.
9 ಅನಂತರ ಪಿಶಾಚಿ ಯೇಸುವನ್ನು ಜೆರುಸಲೇಮಿಗೆ ಕರೆದೊಯ್ದು ಮಹಾದೇವಾಲಯದ
ಗೋಪುರದ ತುತ್ತತುದಿಯ ಮೇಲೆ ನಿಲ್ಲಿಸಿ, "ನೀನು ದೇವರ ಪುತ್ರನೆಂಬುದು ಸತ್ಯವಾದರೆ ಇಲ್ಲಿಂದ ಕೆಳಕ್ಕೆ

ಧುಮುಕು. 10ಏಕೆಂದರೆ, ಪವಿತ್ರಗ್ರಂಥದಲ್ಲಿ ಬರೆದಿರುವ ಪ್ರಕಾರ ನಿನ್ನನ್ನು ಕಾಪಾಡುವಂತೆ ದೇವರೇ ತಮ್ಮ
ದೂತರಿಗೆ ಆಜ್ಞಾಪಿಸುವರು, ಮತ್ತು 11'ಇವರು, ನಿನ್ನ ಕಾಲುಗಳು ಕಲ್ಲುಗಳಿಗೆ ತಾಗದಂತೆ ನಿನ್ನನ್ನು ತಮ್ಮ
ಕೈಗಳಲ್ಲಿ ಆತುಕೊಳ್ಳುವರು'," ಎಂದಿತು. 12ಅದಕ್ಕೆ ಯೇಸು, " 'ನಿನ್ನ ದೇವರು ಸರ್ವೇಶ್ವರ; ನೀನು ಅವರನ್ನು
ಪರೀಕ್ಷಿಸಬಾರದು,' ಎಂದು ಸಹ ಪವಿತ್ರಗ್ರಂಥ ಹೇಳುತ್ತದೆ," ಎಂದು ಉತ್ತರಕೊಟ್ಟರು. 13ಹೀಗೆ ಪಿಶಾಚಿ
ಯೇಸುವನ್ನು ನಾನಾ ವಿಧದಲ್ಲಿ ಶೋಧಿಸಿದ ನಂತರ ತಕ್ಕ ಕಾಲ ಬರುವ ತನಕ ಅವರನ್ನು ಬಿಟ್ಟು
ಹೋಯಿತು.

### ಗಲಿಲೇಯದಲ್ಲಿ ಬೋಧನೆ

(ಮತ್ತಾ. 4.12–17; ಮಾರ್ಕ 1.14–15)

14 ಯೇಸುಸ್ವಾಮಿ ಪವಿತ್ರಾತ್ಮ ಶಕ್ತಿಯಿಂದ ಕೂಡಿ ಗಲಿಲೇಯಕ್ಕೆ ಮರಳಿಬಂದರು. ಅವರ ವಿಷಯ
ಸುತ್ತಮುತ್ತೆಲ್ಲಾ ಹರಡಿತು. 15ಅಲ್ಲಿನ ಪ್ರಾರ್ಥನಾ ಮಂದಿರಗಳಲ್ಲಿ ಅವರು ಬೋಧಿಸುತ್ತಾ ಬಂದರು. ಎಲ್ಲರೂ
ಅವರನ್ನು ಹೊಗಳುವವರೇ!

### ಸ್ವಗ್ರಾಮದಲ್ಲಿ ಸನ್ಮಾನವಿಲ್ಲ

(ಮತ್ತಾ. 13.54–58; ಮಾರ್ಕ 6.1–6)

16 ಯೇಸುಸ್ವಾಮಿ ತಾವು ಬೆಳೆದ ಊರಾದ ನಜರೇತಿಗೆ ಬಂದರು. ವಾಡಿಕೆಯ ಪ್ರಕಾರ ಸಬ್ಬತ್‍ದಿನ
ಪ್ರಾರ್ಥನಾಮಂದಿರಕ್ಕೆ ಹೋದರು. ಅಲ್ಲಿ ಪವಿತ್ರ ಗ್ರಂಥವನ್ನು ಓದುವುದಕ್ಕೆ ಅವರು ಎದ್ದು ನಿಂತಾಗ,
17ಪ್ರವಾದಿ ಯೆಶಾಯನ ಗ್ರಂಥದ ಸುರುಳಿಯನ್ನು ಅವರ ಕೈಗೆ ಕೊಟ್ಟರು. ಅದನ್ನು ಬಿಚ್ಚಿದಾಗ ಈ ಕೆಳಗಿನ
ವಚನಗಳು ಯೇಸುವಿನ ಕಣ್ಣಿಗೆ ಬಿದ್ದವು:

18 "ದೇವರಾತ್ಮ ನನ್ನ ಮೇಲಿದೆ
ದೀನದಲಿತರಿಗೆ ಶುಭಸಂದೇಶವನ್ನು
ಬೋಧಿಸಲೆಂದು
ಅವರೆನ್ನನು ಅಭಿಷೇಕಿಸಿದ್ದಾರೆ;
ಬಂಧಿತರಿಗೆ ಬಿಡುಗಡೆಯನ್ನು,
ಅಂಧರಿಗೆ ದೃಷ್ಟಿದಾನವನ್ನು ಪ್ರಕಟಿಸಲೂ
ಶೋಷಿತರಿಗೆ ಸ್ವಾತಂತ್ರ್ಯ ನೀಡಲೂ
19 ದೇವರು ತಮ್ಮ ಜನತೆಯನ್ನು ಉದ್ಧರಿಸುವ
ಕಾಲ ಬಂತೆಂದು ಸಾರಲೂ
ಅವರು ನನ್ನನ್ನು ಕಳುಹಿಸಿದ್ದಾರೆ."

20 ಈ ವಾಕ್ಯವನ್ನು ಓದಿ, ಸುರುಳಿಯನ್ನು ಸುತ್ತಿ, ಪ್ರಾರ್ಥನಾಮಂದಿರದ ಸೇವಕನ ಕೈಗಿತ್ತು, ಯೇಸು
ಕುಳಿತುಕೊಂಡರು. ಅಲ್ಲಿದ್ದ ಎಲ್ಲರ ಕಣ್ಣುಗಳು ಅವರ ಮೇಲೆಯೇ ನಾಟಿದ್ದವು. 21ಆಗ ಯೇಸು, "ನೀವು ಈ
ಪವಿತ್ರ ವಾಕ್ಯವನ್ನು ಕೇಳುತ್ತಿದ್ದ ಹಾಗೆಯೇ ಅದು ಇಂದು ನೆರವೇರಿತು," ಎಂದು ವಿವರಿಸಲಾರಂಭಿಸಿದರು.
22ಎಲ್ಲರೂ ಅವರನ್ನು ಬಹುವಾಗಿ ಮೆಚ್ಚಿಕೊಂಡರು. ಅವರ ಬಾಯಿಂದ ಬಂದ ಮಧುರ ಮಾತುಗಳನ್ನು
ಕೇಳಿ ಅಚ್ಚರಿಗೊಂಡರು. "ಇವನು ಜೋಸೆಫನ ಮಗನಲ್ಲವೇ?" ಎಂದು ಮಾತನಾಡಿಕೊಂಡರು. 23ಅನಂತರ
ಯೇಸು ಅವರಿಗೆ, " 'ವೈದ್ಯನೇ, ಮೊದಲು ನಿನ್ನನ್ನು ನೀನು ಗುಣಪಡಿಸಿಕೊ', ಎಂಬ ಗಾದೆಯನ್ನು ನೀವು
ನಿಸ್ಸಂದೇಹವಾಗಿ ನನಗೆ ಅನ್ವಯಿಸುವಿರಿ; ಅಲ್ಲದೆ, 'ಕಫೆರ್ನವುಮಿನಲ್ಲಿ ನೀನು ಎಂಥೆಂಥ
ಮಹತ್ಕಾರ್ಯಗಳನ್ನು ಮಾಡಿದೆ ಎಂದು ನಾವು ಕೇಳಿದ್ದೇವೆ; ಅಂಥವುಗಳನ್ನು ಈ ನಿನ್ನ ಸ್ವಂತ ಊರಿನಲ್ಲೂ
ಮಾಡು,' ಎಂದೂ ಹೇಳುವಿರಿ. 24ಆದರೆ ಯಾವ ಪ್ರವಾದಿಯೂ ಸ್ವಗ್ರಾಮದಲ್ಲಿ ಸನ್ಮಾನಿತನಲ್ಲ ಎಂದು
ನಿಮಗೆ ನಿಶ್ಚಯವಾಗಿ ಹೇಳುತ್ತೇನೆ. 25ಹಿಂದೆ ನಡೆದ ಒಂದು ಸಂಗತಿಯನ್ನು ಕೇಳಿ: ಎಲೀಯನ ಕಾಲದಲ್ಲಿ
ಮೂರು ವರ್ಷ ಆರು ತಿಂಗಳು ಮಳೆ ಬಾರದೆ ದೇಶದಲ್ಲೆಲ್ಲಾ ದೊಡ್ಡ ಕ್ಷಾಮ ಬಂದೊದಗಿತ್ತು. ಆಗ

ಇಸ್ರಯೇಲ್ ನಾಡಿನಲ್ಲಿ ಎಷ್ಟೋ ಮಂದಿ ವಿಧವೆಯರಿದ್ದರು. 26ಅವರಾರ ಬಳಿಗೂ ದೇವರು ಎಲೀಯನನ್ನು
ಕಳಿಸಲಿಲ್ಲ. ಸಿದೋನ್ ದೇಶಕ್ಕೆ ಸೇರಿದ ಸರೆಪ್ತ ಊರಿನ ಒಬ್ಬ ವಿಧವೆಯ ಬಳಿಗೆ ಮಾತ್ರ ಕಳಿಸಿದರು.
27ಅಂತೆಯೇ, ಎಲೀಷನೆಂಬ ಪ್ರವಾದಿಯ ಕಾಲದಲ್ಲಿ ಇಸ್ರಯೇಲ್ ನಾಡಿನಲ್ಲಿ ಅನೇಕ ಕುಷ್ಠರೋಗಿಗಳು
ಇದ್ದರು. ಅವರಲ್ಲಿ ಸಿರಿಯ ದೇಶದ ನಾಮನನನ್ನು ಬಿಟ್ಟು ಮಿಕ್ಕ ಯಾರೂ ಗುಣಮುಖರಾಗಲಿಲ್ಲ," ಎಂದು
ಹೇಳಿದರು.

28 ಇದನ್ನು ಕೇಳಿ, ಪ್ರಾರ್ಥನಾಮಂದಿರದಲ್ಲಿ ಇದ್ದ ಎಲ್ಲರೂ ಕಡುಗೋಪಗೊಂಡರು.
29ಯೇಸುವನ್ನು ಆ ಊರಹೊರಕ್ಕೆ ಎಳೆದುಕೊಂಡು, ತಮ್ಮ ಊರಿದ್ದ ಗುಡ್ಡದ ತುದಿಗೆ ಕೊಂಡೊಯ್ದು,
ಅಲ್ಲಿಂದ ಅವರನ್ನು ಕೆಳಕ್ಕೆ ದಬ್ಬಬೇಕೆಂದಿದ್ದರು. 30ಯೇಸುವಾದರೋ, ಅವರ ನಡುವೆಯೇ ನಡೆದು, ತಮ್ಮ
ದಾರಿ ಹಿಡಿದು ಹೋದರು.

### ಕಫೆರ್ನವುಮಿನಲ್ಲಿ ಬೋಧನೆ ದೆವ್ವಗಳ ಉಚ್ಚಾಟನೆ

(ಮಾರ್ಕ 1.21–28)

31 ಬಳಿಕ ಯೇಸುಸ್ವಾಮಿ ಗಲಿಲೇಯ ಪ್ರಾಂತ್ಯದ ಕಫೆರ್ನವುಮ್ ಎಂಬ ಊರಿಗೆ ಬಂದು
ಸಬ್ಬತ್‍ದಿನ ಅಲ್ಲಿನ ಜನರಿಗೆ ಬೋಧಿಸುತ್ತಿದ್ದರು. 32ಅವರು ಅಧಿಕಾರವಾಣಿಯಿಂದ ಉಪದೇಶಿಸುತ್ತಿದ್ದುದನ್ನು
ಕೇಳಿ ಜನರೆಲ್ಲರೂ ಬೆರಗಾದರು. 33ದುಷ್ಟದೆವ್ವ ಹಿಡಿದಿದ್ದ ಒಬ್ಬನು ಆ ಪ್ರಾರ್ಥನಾ ಮಂದಿರದಲ್ಲಿ ಇದ್ದನು.
34ಅವನು, "ನಜರೇತಿನ ಯೇಸುವೇ, ನಿಮಗೇಕೆ ನಮ್ಮ ಗೊಡವೆ? ನೀವು ನಮ್ಮ ವಿನಾಶಕ್ಕಾಗಿ
ಬಂದವರೇನು? ನೀವು ಯಾರೆಂದು ನನಗೆ ಗೊತ್ತು; ದೇವರಿಂದ ಬಂದ ಪರಮಪೂಜ್ಯರು ನೀವು," ಎಂದು
ಗಟ್ಟಿಯಾಗಿ ಕಿರುಚಿದನು. 35ಆದರೆ ಯೇಸು ಅವನನ್ನು ಗದರಿಸಿ, "ಸುಮ್ಮನಿರು, ಇವನನ್ನು ಬಿಟ್ಟು ತೊಲಗು,"
ಎಂದು ದೆವ್ವಕ್ಕೆ ಆಜ್ಞಾಪಿಸಿದರು. ಆ ದೆವ್ವ ಎಲ್ಲರ ಎದುರಿಗೇ ಅವನನ್ನು ಕೆಡವಿ, ಯಾವ ಕೆಡುಕನ್ನೂ ಮಾಡದೆ
ಅವನನ್ನು ಬಿಟ್ಟುಹೋಯಿತು. 36ಜನರೆಲ್ಲರೂ ಆಶ್ಚರ್ಯಚಕಿತರಾದರು. "ಎಂಥಾ ಮಾತುಗಳಿವು!
ಅಧಿಕಾರದಿಂದಲೂ ಶಕ್ತಿಯಿಂದಲೂ ದೆವ್ವಗಳಿಗೆ ಕೂಡ ಆಜ್ಞೆ ಮಾಡುತ್ತಾನೆ; ಅವು ಈತ ಹೇಳಿದ ಹಾಗೆ
ಕೇಳುತ್ತವಲ್ಲಾ!" ಎಂದು ತಮ್ಮ ತಮ್ಮೊಳಗೇ ಮಾತನಾಡಿಕೊಂಡರು. 37ಯೇಸುವಿನ ಸಮಾಚಾರ ಆ
ಪ್ರಾಂತ್ಯದಲ್ಲೆಲ್ಲಾ ಹಬ್ಬಿ ಹರಡಿತು.

### ಪೇತ್ರನ ಅತ್ತೆಗೆ ಜ್ವರ ನಿವಾರಣೆ

(ಮತ್ತಾ. 8.14–15; ಮಾರ್ಕ 1.29–31)

38 ಪ್ರಾರ್ಥನಾಮಂದಿರದಿಂದ ಹೊರಟ ಯೇಸುಸ್ವಾಮಿ ಸಿಮೋನನ ಮನೆಗೆ ಬಂದರು. ಆ
ಸಿಮೋನನ ಅತ್ತೆ ವಿಷಮ ಜ್ವರದಿಂದ ನರಳುತ್ತಿದ್ದಳು. ಅಲ್ಲಿದ್ದವರು ಅವಳ ಪರವಾಗಿ ಯೇಸುವಿನಲ್ಲಿ
ಮೊರೆಯಿಟ್ಟರು. 39ಯೇಸು ಆಕೆಯ ಬಳಿ ನಿಂತು, ಬಾಗಿ, ಜ್ವರಕ್ಕೆ ಬಿಟ್ಟು ಹೋಗೆಂದು ಆಜ್ಞಾಪಿಸಿದರು; ಅದು
ಬಿಟ್ಟು ಹೋಯಿತು. ಆ ಕ್ಷಣವೇ ಆಕೆ ಎದ್ದು ಅವರೆಲ್ಲರನ್ನು ಸತ್ಕರಿಸಿದಳು.

### ರೋಗಿಗಳಿಗೆ ಆರೋಗ್ಯದಾನ

(ಮತ್ತಾ. 8.16–17; ಮಾರ್ಕ 1.32–34)

40 ಸಂಜೆಯಾಗುತ್ತಿದ್ದಂತೆ ಜನರು ತಮ್ಮ ಮನೆಯಲ್ಲಿ ವಿಧವಿಧವಾದ ಕಾಯಿಲೆಯಿಂದ
ನರಳುತ್ತಿದ್ದವರನ್ನೆಲ್ಲಾ ಯೇಸುಸ್ವಾಮಿಯ ಬಳಿಗೆ ಕರೆತಂದರು. ಯೇಸು ಪ್ರತಿಯೊಬ್ಬನ ಮೇಲೆ ತಮ್ಮ
ಕೈಯಿಟ್ಟು ಗುಣಪಡಿಸಿದರು. 41ಅನೇಕರ ಮೈಮೇಲಿದ್ದ ದೆವ್ವಗಳು ಸಹ, "ನೀನು ದೇವರ ಪುತ್ರ", ಎಂದು
ಬೊಬ್ಬೆಹಾಕುತ್ತಾ ಬಿಟ್ಟುಹೋದುವು. ಇವರೇ 'ಕ್ರಿಸ್ತ' ಎಂದು ಅವುಗಳು ತಿಳಿದಿದ್ದರಿಂದ ಯೇಸು ಅವುಗಳನ್ನು
ಗದರಿಸಿ ಮಾತೆತ್ತಲು ಬಿಡಲಿಲ್ಲ.

### ಜುದೇಯ ಪ್ರಾಂತ್ಯದಲ್ಲಿ ಬೋಧನೆ

(ಮಾರ್ಕ 1.35–39)

42 ಬೆಳಗಾಗುತ್ತಲೇ, ಯೇಸುಸ್ವಾಮಿ ಅಲ್ಲಿಂದ ಹೊರಟು ನಿರ್ಜನ ಸ್ಥಳಕ್ಕೆ ಹೋದರು.
ಜನಸಮೂಹವು ಅವರನ್ನು ಹುಡುಕಿಕೊಂಡು ಅಲ್ಲಿಗೂ ಬಂದಿತು; ತಮ್ಮನ್ನು ಬಿಟ್ಟು ಹೋಗಬಾರದೆಂದು
ಜನರು ತಡೆಗಟ್ಟಲು ಯತ್ನಿಸಿದರು. 43ಅವರಿಗೆ ಯೇಸು, "ದೇವರ ಸಾಮ್ರಾಜ್ಯದ ಶುಭಸಂದೇಶವನ್ನು ಬೇರೆ
ಬೇರೆ ಊರುಗಳಿಗೂ ನಾನು ಬೋಧಿಸಬೇಕಾಗಿದೆ. ನನ್ನನ್ನು ಕಳುಹಿಸಿರುವುದು ಅದಕ್ಕಾಗಿಯೇ," ಎಂದರು.
44ಬಳಿಕ ಜುದೇಯ ಪ್ರಾಂತ್ಯದ ಪ್ರಾರ್ಥನಾಮಂದಿರಗಳಲ್ಲಿ ಯೇಸು ಬೋಧಿಸುತ್ತಿದ್ದರು.

### ಜಗದ ಜಲಗಾರರು

(ಮತ್ತಾ. 4.18–22; ಮಾರ್ಕ 1.16–20)

**5** ಒಮ್ಮೆ ಯೇಸುಸ್ವಾಮಿ ಗೆನೆಸರೇತ್ ಎಂಬ ಸರೋವರದ ತೀರದಲ್ಲಿ ನಿಂತಿದ್ದಾಗ, ಜನಸಮೂಹವು
ದೇವರ ವಾಕ್ಯವನ್ನು ಕೇಳಲು ನೂಕುನುಗ್ಗಲಾಗಿ ಬಂದು ಅವರನ್ನು ಒತ್ತರಿಸುತ್ತಿತ್ತು. 2ಆಗ ದಡದ ಮೇಲಿದ್ದ
ಎರಡು ದೋಣಿಗಳು ಯೇಸುವಿನ ಕಣ್ಣಿಗೆ ಬಿದ್ದವು. ಬೆಸ್ತರು ದೋಣಿಗಳನ್ನು ಅಲ್ಲಿಯೇ ಬಿಟ್ಟು ತಮ್ಮ
ಬಲೆಗಳನ್ನು ತೊಳೆಯುತ್ತಿದ್ದರು. 3ಆ ದೋಣಿಗಳಲ್ಲಿ ಒಂದು ಸಿಮೋನನದು. ಯೇಸು ಅದನ್ನು ಹತ್ತಿ,
ದಡದಿಂದ ಸ್ವಲ್ಪ ದೂರ ತಳ್ಳಲು ಹೇಳಿ, ಅದರಲ್ಲೇ ಕುಳಿತುಕೊಂಡು ತಮ್ಮ ಬೋಧನೆಯನ್ನು
ಮುಂದುವರಿಸಿದರು.

4 ಬೋಧನೆ ಮುಗಿದದ್ದೇ ಸಿಮೋನನಿಗೆ, "ನೀರು ಆಳವಾಗಿರುವ ಸ್ಥಳಕ್ಕೆ ದೋಣಿಯನ್ನು ಹಾಯಿಸಿ,
ಮೀನುಬೇಟೆಗೆ ನಿಮ್ಮ ಬಲೆಗಳನ್ನು ಹಾಕಿರಿ," ಎಂದರು, 5ಅದಕ್ಕೆ ಸಿಮೋನನು "ಗುರುವೇ, ನಾವು
ರಾತ್ರಿಯೆಲ್ಲಾ ದುಡಿದಿದ್ದೇವೆ; ಏನೂ ಸಿಗಲಿಲ್ಲ. ಆದರೂ ನಿಮ್ಮ ಮಾತಿಗೆ ಬೆಲೆ ಕೊಟ್ಟು ಬಲೆಗಳನ್ನು
ಹಾಕುತ್ತೇವೆ," ಎಂದನು. 6ಬಲೆಗಳನ್ನು ಹಾಕಿದ್ದೇ ಮೀನುಗಳು ರಾಶಿ ರಾಶಿಯಾಗಿ ಸಿಕ್ಕಿಕೊಂಡವು; ಬಲೆಗಳು
ಹರಿದುಹೋಗುವುದರಲ್ಲಿದ್ದವು. 7ಆದುದರಿಂದ ಬೇರೆ ದೋಣಿಯಲ್ಲಿದ್ದ ತಮ್ಮ ಸಂಗಡಿಗರಿಗೆ ಸನ್ನೆ ಮಾಡಿ
ಸಹಾಯಕ್ಕಾಗಿ ಕರೆದುಕೊಂಡರು. ಅವರೆಲ್ಲರೂ ಸೇರಿ ಮೀನುಗಳನ್ನು ತುಂಬಿಕೊಳ್ಳಲು, ದೋಣಿಗಳೆರಡೂ
ಮುಳುಗಲು ಆರಂಭಿಸಿದವು. 8ಇದನ್ನು ಕಂಡ ಸಿಮೋನ್ ಪೇತ್ರನು ಯೇಸುವಿನ ಕಾಲಿಗೆ ಬಿದ್ದು, "ಸ್ವಾಮೀ,
ನಾನು ಪಾಪಾತ್ಮ; ನನ್ನಿಂದ ದೂರವಿರಿ!" ಎಂದನು. 9ಹಿಡಿದ ಮೀನಿನ ರಾಶಿಯನ್ನು ಕಂಡು ಅವನ
ಸಂಗಡಿಗರೆಲ್ಲರೂ ನಿಬ್ಬೆರಗಾಗಿ ಹೋಗಿದ್ದರು. 10ಸಿಮೋನನ ಪಾಲುಗಾರರಾದ ಜೆಬೆದಾಯನ ಮಕ್ಕಳು –
ಯಕೋಬ ಮತ್ತು ಯೊವಾನ್ನರು – ಹಾಗೆಯೇ ಬೆರಗಾಗಿದ್ದರು. ಆಗ ಯೇಸು ಸಿಮೋನನಿಗೆ, "ಹೆದರಬೇಡ,
ಇಂದಿನಿಂದ ನೀನು ಮೀನು ಹಿಡಿಯುವ ಬದಲು ಮನುಷ್ಯರನ್ನೇ ಹಿಡಿಯುವವನು ಆಗುವೆ," ಎಂದರು.
11ಆ ಬೆಸ್ತರು ದೋಣಿಗಳನ್ನು ದಡಕ್ಕೆ ಸಾಗಿಸಿದ್ದೇ ಎಲ್ಲವನ್ನೂ ತ್ಯಜಿಸಿಬಿಟ್ಟು ಯೇಸುವನ್ನು ಹಿಂಬಾಲಿಸಿದರು.

### ಕುಷ್ಠರೋಗಿಯ ಮೇಲೆ ಕನಿಕರ

(ಮತ್ತಾ. 8.1–4; ಮಾರ್ಕ 1.40–45)

12 ಯೇಸುಸ್ವಾಮಿ ಒಂದು ಪಟ್ಟಣದಲ್ಲಿ ಇದ್ದಾಗ, ಮೈಯೆಲ್ಲಾ ಕುಷ್ಠ ಹಿಡಿದಿದ್ದ ರೋಗಿ ಒಬ್ಬನು
ಅಲ್ಲಿಗೆ ಬಂದು ಅವರಿಗೆ ಅಡ್ಡಬಿದ್ದು, "ಸ್ವಾಮೀ, ತಾವು ಮನಸ್ಸುಮಾಡಿದರೆ ನನ್ನನ್ನು ಗುಣಮಾಡಬಲ್ಲಿರಿ,"
ಎಂದು ಬೇಡಿಕೊಂಡನು. 13ಯೇಸು ಕೈಚಾಚಿ ಅವನನ್ನು ಮುಟ್ಟಿ, "ಖಂಡಿತವಾಗಿಯೂ ನನಗೆ ಮನಸ್ಸಿದೆ;
ನಿನಗೆ ಗುಣವಾಗಲಿ," ಎಂದರು. ತಕ್ಷಣವೇ ಕುಷ್ಠವು ಮಾಯವಾಗಿ ಅವನು ಗುಣಹೊಂದಿದನು. 14ಇದನ್ನು
ಯಾರಿಗೂ ಹೇಳಕೂಡದು ಎಂದು ಯೇಸು ಅವನನ್ನು ಎಚ್ಚರಿಸಿ, "ನೀನು ನೆಟ್ಟಗೆ ಯಾಜಕನ ಬಳಿಗೆ

ಹೋಗು; ಅವನು ನಿನ್ನನ್ನು ಪರೀಕ್ಷಿಸಿ ನೋಡಲಿ; ನಂತರ ಮೋಶೆ ನಿಯಮಿಸಿರುವ ಪ್ರಕಾರ ನೀನು ಗುಣಹೊಂದಿದ್ದಕ್ಕಾಗಿ ಶುದ್ಧೀಕರಣ ವಿಧಿಯನ್ನು ಅನುಸರಿಸು; ಇದು ಜನರಿಗೆ ಸಾಕ್ಷಿಯಾಗಿರಲಿ," ಎಂದರು.

15 ಯೇಸು ಎಷ್ಟು ಎಚ್ಚರಿಸಿದರೋ ಅಷ್ಟೂ ಅಧಿಕವಾಗಿ ಅವರ ಸುದ್ದಿ ಹರಡಿತು. ಅವರ
ಉಪದೇಶವನ್ನು ಕೇಳುವುದಕ್ಕೂ ತಮ್ಮ ತಮ್ಮ ರೋಗರುಜಿನಗಳಿಂದ ವಿಮುಕ್ತರಾಗುವುದಕ್ಕೂ ಜನರು
ತಂಡೋಪತಂಡವಾಗಿ ಬರುತ್ತಿದ್ದರು. [16]ಯೇಸುವಾದರೋ ನಿರ್ಜನ ಪ್ರದೇಶಕ್ಕೆ ಹೋಗಿ ಎಂದಿನಂತೆ
ಪ್ರಾರ್ಥನೆಯಲ್ಲಿ ಮಗ್ನರಾಗುತ್ತಿದ್ದರು.

### ಪಾಪವಿಮೋಚಕ ಯೇಸು

(ಮತ್ತಾ. 9.1–8; ಮಾರ್ಕ 2.1–12)

17 ಒಮ್ಮೆ ಯೇಸುಸ್ವಾಮಿ ಬೋಧನೆ ಮಾಡುತ್ತಾ ಇದ್ದಾಗ, ಫರಿಸಾಯರೂ ಧರ್ಮಶಾಸ್ತ್ರಜ್ಞರೂ ಅವರ ಹತ್ತಿರ ಕುಳಿತಿದ್ದರು. ಇವರು ಗಲಿಲೇಯ ಹಾಗೂ ಜುದೇಯ ಪ್ರಾಂತ್ಯದ ಊರೂರುಗಳಿಂದಲೂ ಜೆರುಸಲೇಮ್ ಪಟ್ಟಣದಿಂದಲೂ ಬಂದಿದ್ದರು. ಗುಣಪಡಿಸುವಂತಹ ದೈವಶಕ್ತಿ ಯೇಸುವಿನಲ್ಲಿತ್ತು.

18 ಆಗ ಕೆಲವರು ಒಬ್ಬ ಪಾರ್ಶ್ವವಾಯು ರೋಗಿಯನ್ನು ಹಾಸಿಗೆಯ ಸಮೇತ ಹೊತ್ತುಕೊಂಡು
ಅಲ್ಲಿಗೆ ಬಂದರು. ರೋಗಿಯನ್ನು ಒಳಕ್ಕೆ ತೆಗೆದುಕೊಂಡು ಹೋಗಿ ಯೇಸುವಿನ ಮುಂದೆಯೇ ಇಡಬೇಕೆಂದು
ಪ್ರಯತ್ನಿಸಿದರು. [19]ಆದರೆ ಜನಸಂದಣಿಯ ನಿಮಿತ್ತ ದಾರಿಮಾಡಲಾಗಲಿಲ್ಲ. ಆಗ ಅವರು ಮನೆಯ ಮೇಲೆ
ಹತ್ತಿ, ಹೆಂಚುಗಳನ್ನು ತೆಗೆದು, ಅಲ್ಲಿಂದ ರೋಗಿಯನ್ನು ಹಾಸಿಗೆಯ ಸಹಿತ ಯೇಸುವಿನ ಮುಂದೆ
ಇಳಿಸಿದರು.

20 ಯೇಸು ಅವರ ವಿಶ್ವಾಸವನ್ನು ಮೆಚ್ಚಿ, "ತಮ್ಮಾ, ನಿನ್ನ ಪಾಪಗಳನ್ನು ಕ್ಷಮಿಸಲಾಗಿದೆ," ಎಂದರು.
[21]ಇದನ್ನು ಕೇಳಿದ ಧರ್ಮಶಾಸ್ತ್ರಿಗಳೂ ಫರಿಸಾಯರೂ, "ದೇವದೂಷಣೆ ಆಡುತ್ತಿರುವ ಇವನಾರು?
ದೇವರೊಬ್ಬರನ್ನು ಬಿಟ್ಟರೆ ಪಾಪಗಳನ್ನು ಕ್ಷಮಿಸಿ ಪರಿಹರಿಸಲು ಬೇರೆ ಯಾರಿಂದ ಸಾಧ್ಯ?" ಎಂದು ತಮ್ಮಲ್ಲೇ
ಹೇಳಿಕೊಳ್ಳಲು ಆರಂಭಿಸಿದರು. [22]ಯೇಸು ಅವರ ಆಲೋಚನೆಗಳನ್ನು ಗ್ರಹಿಸಿಕೊಂಡು, "ನೀವು ನಿಮ್ಮ
ಮನಸ್ಸಿನಲ್ಲಿ ಆಲೋಚಿಸುತ್ತಾ ಇರುವುದೇನು? [23]'ನಿನ್ನ ಪಾಪಗಳನ್ನು ಕ್ಷಮಿಸಲಾಗಿದೆ,' ಎನ್ನುವುದು
ಸುಲಭವೋ ಅಥವಾ 'ಎದ್ದು ನಡೆ' ಎನ್ನುವುದು ಸುಲಭವೋ? [24]ಭೂಲೋಕದಲ್ಲಿ ಪಾಪಗಳನ್ನು ಕ್ಷಮಿಸಲು
ನರಪುತ್ರನಿಗೆ ಅಧಿಕಾರ ಉಂಟೆಂದು ಈ ಮೂಲಕ ನಿಮಗೆ ಖಚಿತವಾಗಬೇಕು," ಎಂದು ಹೇಳಿ, ಆ
ಪಾರ್ಶ್ವವಾಯು ರೋಗಿಯ ಕಡೆ ನೋಡಿ, " 'ಏಳು, ನಿನ್ನ ಹಾಸಿಗೆಯನ್ನು ಎತ್ತಿಕೊಂಡು ಮನೆಗೆ ಹೊರಡು,'
ಎಂದು ನಿನಗೆ ಆಜ್ಞಾಪಿಸುತ್ತೇನೆ" ಎಂದರು. [25]ತಕ್ಷಣವೇ ಅವರೆಲ್ಲರೂ ನೋಡುತ್ತಿದ್ದ ಹಾಗೆ ಅವನು ಎದ್ದು,
ಮಲಗಿದ್ದ ಹಾಸಿಗೆಯನ್ನು ಎತ್ತಿಕೊಂಡು, ದೇವರನ್ನು ಸ್ತುತಿಸುತ್ತಾ ತನ್ನ ಮನೆಗೆ ಹೋದನು. [26]ಎಲ್ಲರೂ
ನಿಬ್ಬೆರಗಾಗಿ, 'ನಾವು ಈ ದಿನ ಎಂಥ ಅಪೂರ್ವ ಕಾರ್ಯವನ್ನು ಕಂಡೆವು!' ಎಂದು ಭಯಭಕ್ತಿಯಿಂದ
ದೇವರನ್ನು ಕೊಂಡಾಡಿದರು.

### ಸುಂಕದ ಇಲಾಖೆಯಿಂದ ಶಿಷ್ಯನ ಆಯ್ಕೆ

(ಮತ್ತಾ. 9.9–13; ಮಾರ್ಕ 2.13–17)

27 ಅನಂತರ ಯೇಸುಸ್ವಾಮಿ ಅಲ್ಲಿಂದ ಹೋಗುತ್ತಿದ್ದಾಗ ಲೇವಿ ಎಂಬ ಸುಂಕದವನನ್ನು ಕಂಡರು.
ಅವನು ಸುಂಕ ವಸೂಲಿಗಾಗಿ ಉಕ್ಕಡದಲ್ಲಿ ಕುಳಿತಿದ್ದನು. "ನನ್ನನ್ನು ಹಿಂಬಾಲಿಸು," ಎಂದು ಹೇಳಿ ಯೇಸು
ಅವನನ್ನು ಕರೆದರು. [28]ಲೇವಿಯು ಎದ್ದು ಎಲ್ಲವನ್ನೂ ಪರಿತ್ಯಜಿಸಿ, ಯೇಸುವನ್ನು ಹಿಂಬಾಲಿಸಿದನು.

29 ತರುವಾಯ ಆ ಲೇವಿ ತನ್ನ ಮನೆಯಲ್ಲಿ ಯೇಸುವಿಗೆ ಒಂದು ದೊಡ್ಡ ಔತಣವನ್ನು
ಏರ್ಪಡಿಸಿದನು. ಬಹುಜನ ಸುಂಕದವರೂ ಇತರರೂ ಯೇಸುವಿನ ಪಂಕ್ತಿಯಲ್ಲೇ ಊಟಕ್ಕೆ ಕುಳಿತಿದ್ದರು.
[30]ಇದನ್ನು ಕಂಡ ಫರಿಸಾಯರು ಮತ್ತು ಅವರ ಪಂಥಕ್ಕೆ ಸೇರಿದ ಧರ್ಮಶಾಸ್ತ್ರಜ್ಞರು ಗೊಣಗಾಡುತ್ತಾ,
ಯೇಸುವಿನ ಶಿಷ್ಯರ ಬಳಿಗೆ ಬಂದು, "ನೀವು ಸುಂಕದವರ ಮತ್ತು ಪಾಪಿಷ್ಠರ ಜೊತೆಯಲ್ಲಿ ಏಕೆ ತಿನ್ನುತ್ತೀರಿ,
ಕುಡಿಯುತ್ತೀರಿ?" ಎಂದು ಪ್ರಶ್ನಿಸಿದರು. [31]ಅದಕ್ಕೆ ಯೇಸು ಪ್ರತ್ಯುತ್ತರವಾಗಿ, "ವೈದ್ಯನ ಅವಶ್ಯಕತೆಯಿರುವುದು

ರೋಗಿಗಳಿಗೆ, ಆರೋಗ್ಯವಂತರಿಗಲ್ಲ; 32ನಾನು ಬಂದಿರುವುದು ಧರ್ಮಿಷ್ಠರನ್ನು ಕರೆಯುವುದಕ್ಕಲ್ಲ, 'ಪಶ್ಚತ್ತಾಪಪಟ್ಟು ಪಾಪಕ್ಕೆ ವಿಮುಖರಾಗಿ, ದೇವರಿಗೆ ಅಭಿಮುಖಿಗಳಾಗಿರಿ' ಎಂದು ಪಾಪಿಷ್ಠರನ್ನು ಕರೆಯುವುದಕ್ಕೆ," ಎಂದರು.

### ವಿವಾಹದಲ್ಲಿ ಉಪವಾಸವೆ?

(ಮತ್ತಾ. 9.14–17; ಮಾರ್ಕ 2.18–22)

33 "ಯೊವಾನ್ನನ ಶಿಷ್ಯರು ಪದೇ ಪದೇ ಉಪವಾಸವಿದ್ದು ಪ್ರಾರ್ಥನೆ ಮಾಡುತ್ತಾರೆ. ಅದರಂತೆಯೇ, ಫರಿಸಾಯರ ಶಿಷ್ಯರೂ ಮಾಡುತ್ತಾರೆ. ನಿನ್ನ ಶಿಷ್ಯರಾದರೋ ತಿಂದು ಕುಡಿಯುವುದರಲ್ಲಿಯೇ ಇದ್ದಾರೆ," ಎಂದು ಕೆಲವರು ಮೂದಲಿಸಿದರು. 34ಅದಕ್ಕೆ ಯೇಸು, "ಮದುವಣಿಗನು ಜೊತೆಯಲ್ಲಿರುವಾಗ ಮದುವೆಯ ಅತಿಥಿಗಳನ್ನು ಉಪವಾಸವಿರಿಸಲಾದೀತೆ? 35ಮದುವಣಿಗನು ಅವರಿಂದ ಅಗಲಬೇಕಾಗುವ ಕಾಲವು ಬರುವುದು. ಆ ದಿನಗಳು ಬಂದಾಗ ಅವರು ಉಪವಾಸಮಾಡುವರು," ಎಂದು ಉತ್ತರಕೊಟ್ಟರು.

36 ಮತ್ತೆ ಅವರಿಗೆ ಯೇಸು ಈ ಸಾಮತಿಯನ್ನು ಹೇಳಿದರು: "ಹಳೆಯ ಅಂಗಿಗೆ ತೇಪೆ ಹಾಕಲು ಹೊಸ ಅಂಗಿಯಿಂದ ತುಂಡನ್ನು ಯಾರೂ ಹರಿಯುವುದಿಲ್ಲ. ಹಾಗೆ ಮಾಡಿದ್ದೇ ಆದರೆ ಹೊಸದೂ ಹರುಕಲಾಗಿ, ಹಳೆಯದೂ ಹೊಸ ತೇಪೆಗೆ ಹೊಂದಿಕೆಯಾಗದೆ ಹೋಗುತ್ತದೆ. 37ಅಂತೆಯೇ, ಹಳೆಯ ಬುದ್ದಲಿಗಳಲ್ಲಿ ಹೊಸ ಮದ್ಯವನ್ನು ಯಾರೂ ತುಂಬಿಡುವುದಿಲ್ಲ. ತುಂಬಿ ಇಟ್ಟರೆ, ಹೊಸ ಮದ್ಯವು ಬುದ್ದಲಿಗಳನ್ನು ಬಿರಿಯುತ್ತದೆ; ಮದ್ಯ ಚೆಲ್ಲಿ ಹೋಗುತ್ತದೆ; ಬುದ್ದಲಿಗಳೂ ಹಾಳಾಗುತ್ತವೆ. 38ಆದುದರಿಂದ ಹೊಸ ಮದ್ಯವನ್ನು ಹೊಸ ಬುದ್ದಲಿಗಳಲ್ಲೇ ತುಂಬಿಡಬೇಕು. 39ಹಳೇ ಮದ್ಯ ಕುಡಿದವನಿಗೆ ಹೊಸದು ರುಚಿಸುವುದಿಲ್ಲ. ಅವನು ಹಳೆಯದೇ ಶ್ರೇಷ್ಠವೆನ್ನುತ್ತಾನೆ," ಎಂದರು.

### ಯೇಸುಸ್ವಾಮಿ ಸಬ್ಬತ್ತಿಗೂ ಒಡೆಯ

(ಮತ್ತಾ. 12.1–8; ಮಾರ್ಕ 2.23–28)

**6** ಒಂದು ಸಬ್ಬತ್‍ದಿನ ಯೇಸುಸ್ವಾಮಿ ಗೋದಿಯ ಹೊಲಗಳನ್ನು ಹಾದುಹೋಗುತ್ತಿದ್ದರು. ಅವರ ಶಿಷ್ಯರು ಕೆಲವು ತೆನೆಗಳನ್ನು ಕಿತ್ತು ಕೈಗಳಲ್ಲಿ ಹೊಸಕಿ ತಿನ್ನಲಾರಂಭಿಸಿದರು. 2ಅದನ್ನು ಕಂಡ ಫರಿಸಾಯರಲ್ಲಿ ಕೆಲವರು, "ಸಬ್ಬತ್ ದಿನದಲ್ಲಿ ನಿಷಿದ್ಧವಾದುದನ್ನು ನೀವು ಮಾಡುವುದೇಕೆ?" ಎಂದು ಅವರನ್ನು ಆಕ್ಷೇಪಿಸಿದರು. 3ಅದಕ್ಕೆ ಯೇಸು, "ದಾವೀದನು ಮತ್ತು ಅವನ ಸಂಗಡಿಗರು ಹಸಿದಿದ್ದಾಗ ಏನು ಮಾಡಿದರೆಂಬುದನ್ನು ನೀವು ಓದಿರಬೇಕಲ್ಲವೆ? 4ದಾವೀದನು ದೇವಮಂದಿರದೊಳಕ್ಕೆ ಹೋಗಿ ಯಾಜಕರ ಹೊರತು ಬೇರೆ ಯಾರೂ ತಿನ್ನಬಾರದಾಗಿದ್ದ ನೈವೇದ್ಯದ ರೊಟ್ಟಿಗಳನ್ನೇ ತೆಗೆದುಕೊಂಡು ತಿಂದುದಲ್ಲದೆ ತನ್ನ ಸಂಗಡಿಗರಿಗೂ ಕೊಟ್ಟನು ಅಲ್ಲವೆ? 5ನರಪುತ್ರನು ಸಬ್ಬತ್ತಿಗೆ ಒಡೆಯನಾಗಿದ್ದಾನೆ," ಎಂದು ಉತ್ತರಕೊಟ್ಟರು.

### ಸತ್ಕಾರ್ಯಕ್ಕೆ ಕಾಲಭೇದವಿಲ್ಲ

(ಮತ್ತಾ. 12.9–14; ಮಾರ್ಕ 3.1–6)

6 ಮತ್ತೊಂದು ಸಬ್ಬತ್‍ದಿನ ಯೇಸುಸ್ವಾಮಿ ಪ್ರಾರ್ಥನಾಮಂದಿರಕ್ಕೆ ಹೋಗಿ ಉಪದೇಶ ಮಾಡುತ್ತಿದ್ದರು. ಅಲ್ಲಿ ಬಲಗೈ ಬತ್ತಿ ಹೋಗಿದ್ದ ಒಬ್ಬಾತ ಇದ್ದನು. 7ಅವನನ್ನು ಸಬ್ಬತ್ ದಿನದಲ್ಲಿ ಸ್ವಸ್ಥಪಡಿಸಿದ್ದೇ ಆದರೆ ಯೇಸುವಿನ ವಿರುದ್ಧ ತಪ್ಪು ಹೊರಿಸಬಹುದೆಂಬ ಉದ್ದೇಶದಿಂದ ಧರ್ಮಶಾಸ್ತ್ರಿಗಳು ಮತ್ತು ಫರಿಸಾಯರು ಹೊಂಚುಹಾಕಿ ನೋಡುತ್ತಿದ್ದರು. 8ಯೇಸು ಅವರ ಆಲೋಚನೆಗಳನ್ನರಿತು ಬತ್ತಿದ ಕೈಯುಳ್ಳವನಿಗೆ, "ಬಂದು ಇಲ್ಲಿ ನಿಲ್ಲು," ಎಂದರು. ಅವನು ಎದ್ದು ಬಂದು ನಿಂತನು. 9ಆಗ ಯೇಸು ಅವರಿಗೆ, "ನಾನು ನಿಮಗೊಂದು ಪ್ರಶ್ನೆ ಹಾಕುತ್ತೇನೆ: ಸಬ್ಬತ್ ದಿನದಲ್ಲಿ ಏನು ಮಾಡುವುದು ಧರ್ಮ? ಒಳಿತನ್ನೋ ಅಥವಾ ಕೆಡುಕನ್ನೋ? ಒಬ್ಬನ ಪ್ರಾಣವನ್ನು ಉಳಿಸುವುದೋ ಅಥವಾ ಅಳಿಸುವುದೋ?"

ಎಂದರು. [10]ಅನಂತರ ಸುತ್ತಲೂ ಇದ್ದವರೆಲ್ಲರನ್ನು ದಿಟ್ಟಿಸಿ ನೋಡಿ ಬತ್ತಿದ ಕೈಯುಳ್ಳವನ ಕಡೆ ತಿರುಗಿ, "ನಿನ್ನ
ಕೈಯನ್ನು ಚಾಚು," ಎಂದರು. ಅವನು ಚಾಚಿದ. ಕೈ ಸ್ವಸ್ಥವಾಯಿತು. [11]ಅವರಾದರೋ ಕ್ರೋಧಭರಿತರಾಗಿ,
ಯೇಸುವಿಗೆ ಏನಾದರೂ ಮಾಡಬೇಕೆಂದು ತಮ್ಮತಮ್ಮೊಳಗೆ ಸಂಚುಮಾಡಿದರು.

### ಹನ್ನೆರಡು ಮಂದಿ ಪ್ರೇಷಿತರ ಆಯ್ಕೆ

(ಮತ್ತಾ. 10.1–4; ಮಾರ್ಕ 3.13–19)

12 ಒಮ್ಮೆ ಯೇಸುಸ್ವಾಮಿ ಪ್ರಾರ್ಥನೆ ಮಾಡಲು ಬೆಟ್ಟವನ್ನೇರಿದರು. ರಾತ್ರಿಯೆಲ್ಲಾ ದೇವರ
ಪ್ರಾರ್ಥನೆಯಲ್ಲಿ ಕಳೆದರು. [13]ಬೆಳಗಾದಾಗ ತಮ್ಮ ಶಿಷ್ಯರನ್ನು ಕರೆದು, ಅವರಲ್ಲಿ ಹನ್ನೆರಡು ಮಂದಿಯನ್ನು
ಆರಿಸಿಕೊಂಡು, ಅವರಿಗೆ 'ಪ್ರೇಷಿತರು' ಎಂದು ಹೆಸರಿಟ್ಟರು. [14]ಹೀಗೆ ಆಯ್ಕೆ ಆದವರು: ಪೇತ್ರನೆಂದು ಹೆಸರು
ಪಡೆದ ಸಿಮೋನ ಮತ್ತು ಅವನ ಸಹೋದರ ಅಂದ್ರೆಯ, ಯಕೋಬ ಮತ್ತು ಯೊವಾನ್ನ, ಫಿಲಿಪ್ಪ ಮತ್ತು
ಬಾರ್ತೊಲೊಮಾಯ, [15]ಮತ್ತಾಯ ಮತ್ತು ತೋಮ, ಅಲ್ಫಾಯನ ಮಗ ಯಕೋಬ ಮತ್ತು ದೇಶಾಭಿಮಾನಿ
ಎನಿಸಿಕೊಂಡಿದ್ದ ಸಿಮೋನ, [16]ಯಕೋಬನ ಮಗ ಯೂದ ಮತ್ತು ಗುರುದ್ರೋಹಿಯಾಗಲಿದ್ದ ಯೂದ
ಇಸ್ಕರಿಯೋತ.

### ಗುಣಪಡಿಸುವ ದಿವ್ಯಶಕ್ತಿ

(ಮತ್ತಾ. 4.23–25)

17 ಅನಂತರ ಯೇಸುಸ್ವಾಮಿ ಅವರೊಂದಿಗೆ ಬೆಟ್ಟದಿಂದ ಇಳಿದು, ಸಮತಟ್ಟಾದ ಸ್ಥಳಕ್ಕೆ ಬಂದರು.
ಶಿಷ್ಯರ ದೊಡ್ಡ ಗುಂಪು ಅಲ್ಲಿ ನೆರೆದಿತ್ತು. ಜುದೇಯ ಪ್ರಾಂತ್ಯದಿಂದಲೂ ಜೆರುಸಲೇಮ್ ಪಟ್ಟಣದಿಂದಲೂ
ಸಮುದ್ರ ತೀರದ ಟೈರ್ ಹಾಗೂ ಸಿದೋನ್ ಪಟ್ಟಣಗಳಿಂದಲೂ ಜನಸಮೂಹ ಅಲ್ಲಿಗೆ ಬಂದಿತ್ತು.
[18]ಯೇಸುವಿನ ಬೋಧನೆಯನ್ನು ಕೇಳುವುದಕ್ಕೂ ತಮ್ಮ ರೋಗರುಜಿನಗಳಿಂದ ವಿಮುಕ್ತರಾಗುವುದಕ್ಕೂ ಜನರು
ಅಲ್ಲಿಗೆ ಬಂದು ಸೇರಿದ್ದರು. ದೆವ್ವಪೀಡಿತರು ಕೂಡ ಬಂದು ಸ್ವಸ್ಥರಾಗುತ್ತಿದ್ದರು. [19]ಯೇಸುವಿನಿಂದ ದಿವ್ಯಶಕ್ತಿ
ಹರಿದು ಎಲ್ಲರನ್ನೂ ಗುಣಪಡಿಸುತ್ತಿತ್ತು. ಆದುದರಿಂದ ಅಲ್ಲಿದ್ದ ಜನರೆಲ್ಲರು ಯೇಸುವನ್ನು ಮುಟ್ಟಲು
ತವಕಪಡುತ್ತಿದ್ದರು.

### ಪರ್ವತ ಪ್ರವಚನಗಳು

(ಮತ್ತಾ. 5.1–12)

20 ಯೇಸುಸ್ವಾಮಿ ತಮ್ಮ ಶಿಷ್ಯರ ಕಡೆಗೆ ದೃಷ್ಟಿಸಿ
ನೋಡಿ ಹೀಗೆಂದು ಬೋಧಿಸಿದರು:
"ದೀನದಲಿತರೇ, ನೀವು ಭಾಗ್ಯವಂತರು!
ದೇವರ ಸಾಮ್ರಾಜ್ಯ ನಿಮ್ಮದು.
21 ಈಗ ಹಸಿದಿರುವವರೇ, ನೀವು
ಭಾಗ್ಯವಂತರು!
ನಿಮಗೆ ಸಂತೃಪ್ತಿಯಾಗುವುದು.
ಈಗ ಅತ್ತು ಗೋಳಾಡುವವರೇ,
ನೀವು ಭಾಗ್ಯವಂತರು!
ನೀವು ನಕ್ಕುನಲಿದಾಡುವಿರಿ!

22–23 ನರಪುತ್ರನ ಶಿಷ್ಯರು ನೀವಾದುದರಿಂದ ನಿಮ್ಮನ್ನು ದ್ವೇಷಿಸಿ, ಬಹಿಷ್ಕರಿಸಿ, ಧಿಕ್ಕರಿಸಿ, ನಿಮ್ಮ
ಹೆಸರೆತ್ತುವುದು ಕೂಡ ಕೇಡೆಂದು ತಿರಸ್ಕರಿಸುವಾಗ ನೀವು ಭಾಗ್ಯವಂತರು!

ಈ ಜನರ ಪೂರ್ವಜರು ಪ್ರವಾದಿಗಳನ್ನು ಹೀಗೆಯೇ ತೆಗಳಿದ್ದರು. ಇದೆಲ್ಲಾ ಸಂಭವಿಸುವಾಗ ಹಿಗ್ಗಿ
ನಲಿದಾಡಿರಿ. ಏಕೆಂದರೆ, ಸ್ವರ್ಗದಲ್ಲಿ ನಿಮಗೆ ಲಭಿಸುವ ಪ್ರತಿಫಲವು ಮಹತ್ತರವಾದುದು.

## ಶಾಪಗ್ರಸ್ತರು ಯಾರು?

24 "ಆದರೆ ಧನಿಕರೇ, ನಿಮಗೆ ಧಿಕ್ಕಾರ!
ನೀವು ಸುಖಜೀವನವನ್ನು ಅನುಭವಿಸಿ ಆಗಿದೆ.
25 ಈಗ ತಿಂದು ತೃಪ್ತಿಯಾಗಿರುವವರೇ,
ನಿಮಗೆ ಧಿಕ್ಕಾರ!
ನೀವು ಹಸಿದು ಬಳಲುವಿರಿ.
ಈಗ ನಕ್ಕುನಲಿದಾಡುವವರೇ,
ನಿಮಗೆ ಧಿಕ್ಕಾರ!
ನೀವು ದುಃಖಿಸಿ ಗೋಳಾಡುವಿರಿ.
26 ಜನರೆಲ್ಲರಿಂದ ಹೊಗಳಿಸಿಕೊಳ್ಳುವಾಗ
ನಿಮಗೆ ಧಿಕ್ಕಾರ !
ಕಪಟ ಪ್ರವಾದಿಗಳೂ ಈ ಜನರ
ಪೂರ್ವಜರಿಂದ
ಹೀಗೆಯೇ ಹೊಗಳಿಸಿಕೊಂಡಿದ್ದರು.

## ಶತ್ರುಪ್ರೇಮ

(ಮತ್ತಾ. 5.38–48; 7.12)

27 "ನನ್ನನ್ನು ಆಲಿಸುತ್ತಿರುವವರೇ,
ನನ್ನ ಮಾತನ್ನು ಕೇಳಿರಿ:
'ನಿಮ್ಮ ಶತ್ರುಗಳನ್ನು ಪ್ರೀತಿಸಿರಿ,
ನಿಮ್ಮನ್ನು ದ್ವೇಷಿಸುವವರನ್ನು ಸತ್ಕರಿಸಿರಿ.
28 ನಿಮ್ಮನ್ನು ಶಪಿಸುವವರನ್ನು ಆಶೀರ್ವದಿಸಿರಿ,
ನಿಮ್ಮನ್ನು ನಿಂದಿಸುವವರಿಗಾಗಿ ಪ್ರಾರ್ಥಿಸಿರಿ.
29 ನಿನ್ನ ಒಂದು ಕೆನ್ನೆಗೆ ಹೊಡೆಯುವವನಿಗೆ
ಇನ್ನೊಂದು ಕೆನ್ನೆಯನ್ನು ಒಡ್ಡು,
ನಿನ್ನ ಮೇಲಂಗಿಯನ್ನು ಕಿತ್ತುಕೊಳ್ಳುವವನಿಗೆ
ಒಳ ಅಂಗಿಯನ್ನೂ ತೆಗೆದುಕೊಳ್ಳಲು ಬಿಡು.
30 ಕೇಳಿಕೊಳ್ಳುವ ಪ್ರತಿಯೊಬ್ಬನಿಗೂ ಕೊಡು,
ನಿನ್ನ ಸೊತ್ತನ್ನು ಕಸಿದುಕೊಳ್ಳುವವನಿಂದ
ತಿರುಗಿ ಕೇಳದಿರು.
31 ಅಲ್ಲದೆ, ಇತರರು ನಿಮಗೆ ಏನೇನು
ಮಾಡಬೇಕೆಂದು ನೀವು
ಅಪೇಕ್ಷಿಸುತ್ತೀರೋ
ಅದನ್ನೇ ನೀವು ಅವರಿಗೆ ಮಾಡಿರಿ.
32 ನಿಮ್ಮನ್ನು ಪ್ರೀತಿಸುವವರನ್ನೇ ನೀವು
ಪ್ರೀತಿಸಿದರೆ ಅದೇನು ಪುಣ್ಯ?
ಪಾಪಿಷ್ಠರು ಸಹ ತಮ್ಮನ್ನು
ಪ್ರೀತಿಸುವವರನ್ನು ಪ್ರೀತಿಸುತ್ತಾರಲ್ಲವೆ?
33 ಉಪಕಾರ ಮಾಡಿದವರಿಗೇ ಉಪಕಾರ

ಮಾಡಿದರೆ ಅದೇನು ಪುಣ್ಯ?
ಪಾಪಿಷ್ಠರು ಸಹ ಹಾಗೆಯೇ
ಮಾಡುತ್ತಾರಲ್ಲವೆ?
34 ಸಾಲತೀರಿಸುವಂಥ ನಂಬಿಗಸ್ಥರಿಗೇ
ಸಾಲಕೊಟ್ಟರೆ ಅದೇನು ಪುಣ್ಯ?
ಕೊಟ್ಟಷ್ಟೂ ಬರುತ್ತದೆಂದು ಪಾಪಿಷ್ಠರು
ಸಹ ಸಾಲ ಕೊಡುತ್ತಾರಲ್ಲವೆ?'

35 "ಆದುದರಿಂದ ನಿಮ್ಮ ಶತ್ರುಗಳನ್ನು ಪ್ರೀತಿಸಿರಿ. ಅವರಿಗೆ ಒಳಿತನ್ನೇ ಮಾಡಿರಿ. ಪ್ರತಿಯಾಗಿ ಪಡೆಯುವ ಆಶೆಯಿಡದೆ ಸಾಲ ಕೊಡಿ. ಆಗ ನಿಮಗೆ ಮಹತ್ತಾದ ಸಂಭಾವನೆ ದೊರಕುವುದು. ನೀವು ಮಹೋನ್ನತ ದೇವರ ಮಕ್ಕಳಾಗುವಿರಿ. ದೇವರು ದುರ್ಜನರಿಗೂ ಒಳ್ಳೆಯವರು, ಕೃತಘ್ನರಿಗೂ ಒಳ್ಳೆಯವರು.
36ನಿಮ್ಮ ತಂದೆಯಾದ ದೇವರಂತೆ ನೀವೂ ದಯಾವಂತರಾಗಿರಿ.

## ನೀವು ಕೊಟ್ಟ ಅಳತೆಯಲ್ಲೇ ನಿಮಗೆ ಅಳೆಯಲಾಗುವುದು

(ಮತ್ತಾ. 7.1–5)

37 "ನೀವು ಇತರರ ಬಗ್ಗೆ ತೀರ್ಪುಕೊಡಬೇಡಿ, ಆಗ ದೇವರು ನಿಮ್ಮ ಬಗ್ಗೆ ತೀರ್ಪು ಕೊಡುವುದಿಲ್ಲ; ಪರರನ್ನು ದಂಡನೆಗೆ ಗುರಿಮಾಡಬೇಡಿ, ದೇವರು ನಿಮ್ಮನ್ನೂ ದಂಡನೆಗೆ ಗುರಿಮಾಡುವುದಿಲ್ಲ.
38ಪರರನ್ನು ಕ್ಷಮಿಸಿರಿ, ದೇವರು ನಿಮ್ಮನ್ನೂ ಕ್ಷಮಿಸುವರು; ಪರರಿಗೆ ಕೊಡಿ, ದೇವರು ನಿಮಗೂ ಕೊಡುವರು; ಅಳತೆಯಲ್ಲಿ ತುಂಬಿ, ಕುಲುಕಿ, ಅದುಮಿ ತುಳುಕುವಂತೆ ಅಳೆದು ನಿಮ್ಮ ಮಡಿಲಿಗೆ ಹಾಕುವರು. ನೀವು ಕೊಟ್ಟ ಅಳತೆಯಲ್ಲೇ ದೇವರು ನಿಮಗೂ ಅಳೆದು ಕೊಡುವರು," ಎಂದರು.

39 ಯೇಸುಸ್ವಾಮಿ ಅವರಿಗೆ ಈ ಸಾಮತಿಯನ್ನೂ ಹೇಳಿದರು: "ಕುರುಡನು ಕುರುಡನಿಗೆ ದಾರಿ ತೋರಿಸಲಾದೀತೆ? ಇಬ್ಬರೂ ಹಳ್ಳದಲ್ಲಿ ಬೀಳುವುದಿಲ್ಲವೆ?
40ಗುರುವಿಗಿಂತ ಶಿಷ್ಯನು ಶ್ರೇಷ್ಠನಲ್ಲ; ಆದರೂ ಪೂರ್ಣ ಶಿಕ್ಷಣ ಪಡೆದ ಪ್ರತಿಯೊಬ್ಬನೂ ಗುರುವಿನಂತೆ ಆಗುವನು.

41 "ನಿನ್ನ ಕಣ್ಣಿನಲ್ಲಿರುವ ದಿಮ್ಮಿಯನ್ನು ನೋಡದೆ, ಸೋದರನ ಕಣ್ಣಿನಲ್ಲಿರುವ ಅಣುವನ್ನು ಗಮನಿಸುವುದೇಕೆ?
42ನಿನ್ನ ಕಣ್ಣಿನಲ್ಲಿರುವ ದಿಮ್ಮಿಯನ್ನೇ ಕಾಣಲಾರದ ನೀನು, 'ತಮ್ಮಾ ತಾಳು, ನಿನ್ನ ಕಣ್ಣಿನಲ್ಲಿರುವ ಅಣುವನ್ನು ತೆಗೆದು ಬಿಡುತ್ತೇನೆ,' ಎಂದು ಸೋದರನಿಗೆ ಹೇಗೆ ಹೇಳಬಲ್ಲೆ? ಎಲೈ ಕಪಟಿಯೇ, ಮೊದಲು ನಿನ್ನ ಕಣ್ಣಿನಲ್ಲಿರುವ ದಿಮ್ಮಿಯನ್ನು ತೆಗೆದು ಹಾಕು, ಅನಂತರ ನಿನ್ನ ಸೋದರನ ಕಣ್ಣಿನಲ್ಲಿರುವ ಅಣುವನ್ನು ತೆಗೆದು ಹಾಕಲು ನಿನಗೆ ಕಣ್ಣು ನಿಚ್ಚಳವಾಗಿ ಕಾಣಿಸುವುದು.

## ಬೇವನ್ನು ಬಿತ್ತಿ ಮಾವನ್ನು ಕೊಯ್ಯಲಾಗದು

(ಮತ್ತಾ. 7.16–20, 12.33–35)

43 "ಒಳ್ಳೆಯ ಮರವು ಕೆಟ್ಟ ಫಲವನ್ನು ಕೊಡುವುದಿಲ್ಲ; ಕೆಟ್ಟ ಮರವು ಒಳ್ಳೆಯ ಫಲವನ್ನು ಕೊಡುವುದಿಲ್ಲ.
44ಪ್ರತಿಯೊಂದು ಮರದ ಗುಣವನ್ನು ಅದರ ಹಣ್ಣಿನಿಂದ ಗುರುತಿಸಬಹುದು. ಮುಳ್ಳು ಗಿಡದಲ್ಲಿ ಅಂಜೂರ ಕೀಳುವಂತಿಲ್ಲ. ಮುಳ್ಳು ಕಳ್ಳಿಯಲ್ಲಿ ದ್ರಾಕ್ಷಿ ಕೊಯ್ಯುವಂತಿಲ್ಲ.
45ಒಳ್ಳೆಯವನು ತನ್ನ ಹೃದಯವೆಂಬ ಬೊಕ್ಕಸದಿಂದ ಒಳ್ಳೆಯದನ್ನೇ ಹೊರತರುತ್ತಾನೆ. ಕೆಟ್ಟವನು ಕೆಟ್ಟ ಬೊಕ್ಕಸದಿಂದ ಕೆಟ್ಟದ್ದನ್ನೇ ಹೊರ ತರುತ್ತಾನೆ. ಹೃದಯದಲ್ಲಿ ತುಂಬಿರುವುದೇ ಬಾಯಿಮಾತಾಗಿ ತುಳುಕುತ್ತದೆ.

## ಸುಭದ್ರ ಅಸ್ತಿವಾರ

(ಮತ್ತಾ. 7.24–27)

46 "ನೀವು ನನ್ನನ್ನು 'ಸ್ವಾಮೀ, ಸ್ವಾಮೀ,' ಎಂದು ಕರೆಯುತ್ತೀರಿ; ಆದರೆ ನನ್ನ ಮಾತಿನಂತೆ ನಡೆಯುವುದಿಲ್ಲವೇಕೆ?
47ನನ್ನ ಬಳಿಗೆ ಬಂದು ನನ್ನ ಮಾತನ್ನು ಕೇಳಿ, ಅದರಂತೆ ನಡೆಯುವ ಪ್ರತಿಯೊಬ್ಬನೂ

ಎಂಥವನಿಗೆ ಸಮಾನನೆಂದು ನಿಮಗೆ ಹೇಳುತ್ತೇನೆ ಕೇಳಿ: [48]ಆಳವಾಗಿ ಅಡಿಪಾಯ ತೆಗೆದು, ಬಂಡೆಕಲ್ಲಿನ
ಮೇಲೆ ಅಸ್ತಿವಾರ ಹಾಕಿ ಮನೆಕಟ್ಟಿದವನಿಗೆ ಅವನು ಸಮಾನನು; ಹುಚ್ಚು ಹೊಳೆ ಬಂದು ಪ್ರವಾಹವು ಆ
ಮನೆಗೆ ಅಪ್ಪಳಿಸಿದರೂ ಅದು ಕದಲಲಿಲ್ಲ. ಕಾರಣ – ಆ ಮನೆಯನ್ನು ಸುಭದ್ರವಾಗಿ ಕಟ್ಟಲಾಗಿತ್ತು. [49]ನನ್ನ
ಮಾತನ್ನು ಕೇಳಿಯೂ ಅದರಂತೆ ನಡೆಯದವನು ಅಸ್ತಿವಾರವೇ ಇಲ್ಲದೆ ಬರಿಯ ಮಣ್ಣಿನ ಮೇಲೆ ಮನೆ
ಕಟ್ಟಿದವನಿಗೆ ಸಮಾನನು. ಆ ಮನೆಗೆ ಪ್ರವಾಹವು ಅಪ್ಪಳಿಸಿದಾಗ ಒಡನೆಯೇ ಅದು ಕುಸಿದು ಬಿತ್ತು, ಆ
ಮನೆಗೆ ಒದಗಿದ ಪತನವೋ ವಿಪರೀತ!” ಎಂದರು.

## ಶತಾಧಿಪತಿಯ ಅತಿಶಯ ವಿಶ್ವಾಸ

(ಮತ್ತಾ. 8.5–13)

**7** ಜನರಿಗೆ ಮನಮುಟ್ಟುವಂತೆ ಬೋಧನೆ ಮಾಡಿದ ನಂತರ ಯೇಸುಸ್ವಾಮಿ ಕಫೆರ್ನವುಮ್ ಎಂಬ ಊರಿಗೆ
ಬಂದರು. [2]ಅಲ್ಲಿ ರೋಮ್ ಶತಾಧಿಪತಿಯೊಬ್ಬನ ನೆಚ್ಚಿನ ಸೇವಕನು ಕಾಯಿಲೆಯಿಂದ ಸಾಯುವುದರಲ್ಲಿದ್ದನು.
[3]ಶತಾಧಿಪತಿ ಯೇಸುವಿನ ವಿಷಯವನ್ನು ಕೇಳಿ ಅವರ ಬಳಿಗೆ ಯೆಹೂದ್ಯ ಪ್ರಮುಖರನ್ನು ಕಳುಹಿಸಿ, ತನ್ನ
ಸೇವಕನನ್ನು ಗುಣಪಡಿಸಲು ಬರಬೇಕೆಂದು ಮನವಿ ಮಾಡಿಕೊಂಡನು. [4]ಅವರು ಯೇಸುವಿನ ಬಳಿಗೆ
ಬಂದು, “ಆ ಶತಾಧಿಪತಿ ನಿಮ್ಮ ಉಪಕಾರಕ್ಕೆ ಅರ್ಹನು; [5]ನಮ್ಮ ಜನರ ಮೇಲೆ ಅವನಿಗೆ ಪ್ರೀತಿ ಇದೆ;
ಅಲ್ಲದೆ ನಮ್ಮ ಪ್ರಾರ್ಥನಾಮಂದಿರವನ್ನು ಕಟ್ಟಿಸಿಕೊಟ್ಟವನೂ ಅವನೇ,” ಎಂದು ಬಹಳವಾಗಿ ವಿನಂತಿಸಿದರು.
6 ಯೇಸು ಅವರ ಸಂಗಡವೇ ಹೊರಟರು. ಮನೆಯಿಂದ ಸ್ವಲ್ಪ ದೂರವಿರುವಾಗಲೇ, ಶತಾಧಿಪತಿ
ತನ್ನ ಗೆಳೆಯರ ಮುಖಾಂತರ, “ಪ್ರಭುವೇ, ಇಷ್ಟು ಶ್ರಮ ತೆಗೆದುಕೊಳ್ಳಬೇಡಿ; ತಾವು ನನ್ನ ಮನೆಗೆ ಬರುವಷ್ಟು
ಯೋಗ್ಯತೆ ನನಗಿಲ್ಲ. [7]ನಾನೇ ತಮ್ಮಲ್ಲಿಗೆ ಬರೋಣವೆಂದರೆ ಆ ಯೋಗ್ಯತೆಯೂ ನನಗಿಲ್ಲ. ತಾವು ಒಂದು
ಮಾತು ಹೇಳಿದರೆ ಸಾಕು, ನನ್ನ ಸೇವಕ ಸ್ವಸ್ಥನಾಗುವನು. [8]ಏಕೆಂದರೆ, ನಾನೂ ಮತ್ತೊಬ್ಬರ
ಕೈಕೆಳಗಿರುವವನು; ನನ್ನ ಅಧೀನದಲ್ಲೂ ಸೈನಿಕರಿದ್ದಾರೆ. ಅವರಲ್ಲಿ ಒಬ್ಬನಿಗೆ ನಾನು ‘ಬಾ,’ ಎಂದರೆ ಬರುತ್ತಾನೆ.
ಇನ್ನೊಬ್ಬನಿಗೆ ‘ಹೋಗು,’ ಎಂದರೆ ಹೋಗುತ್ತಾನೆ. ಸೇವಕನಿಗೆ ‘ಇಂಥದ್ದನ್ನು ಮಾಡು,’ ಎಂದರೆ
ಮಾಡುತ್ತಾನೆ.” ಎಂದು ಹೇಳಿ ಕಳುಹಿಸಿದನು. [9]ಅವನ ಈ ಮಾತುಗಳನ್ನು ಕೇಳಿದಾಗ ಯೇಸುವಿಗೆ
ಆಶ್ಚರ್ಯವಾಯಿತು. ತಮ್ಮ ಹಿಂದೆ ಬರುತ್ತಿದ್ದ ಜನರ ಗುಂಪಿನ ಕಡೆ ತಿರುಗಿನೋಡಿ, “ಇಂಥ ಗಾಢ
ವಿಶ್ವಾಸವನ್ನು ನಾನು ಇಸ್ರಯೇಲ್ ಜನರಲ್ಲೂ ಕಾಣಲಿಲ್ಲವೆಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ,”
ಎಂದರು. [10]ಇತ್ತ ಶತಾಧಿಪತಿಯ ಕಡೆಯಿಂದ ಬಂದವರು ಮನೆಗೆ ಹಿಂದಿರುಗಿದಾಗ ಕಾಯಿಲೆಬಿದ್ದಿದ್ದ ಆ
ಸೇವಕನು ಸ್ವಸ್ಥನಾಗಿದ್ದುದನ್ನು ಕಂಡರು.

## ವಿಧವೆಯ ಮಗನಿಗೆ ಜೀವದಾನ

11 ಇದಾದನಂತರ ಯೇಸುಸ್ವಾಮಿ ನಾಯಿನ್ ಎಂಬ ಊರಿಗೆ ಹೊರಟರು. ಅವರೊಂದಿಗೆ ಶಿಷ್ಯರೂ
ಅನೇಕ ಜನರೂ ಹೊರಟರು. [12]ಊರಬಾಗಿಲನ್ನು ಸಮೀಪಿಸಿದಾಗ, ಒಂದು ಶವಯಾತ್ರೆಯನ್ನು ಅವರು
ಎದುರುಗೊಂಡರು. ಆ ಸತ್ತವನು ತನ್ನ ತಾಯಿಗೆ ಒಬ್ಬನೇ ಮಗ. ಆಕೆಯೋ ವಿಧವೆ. ಜನರ ದೊಡ್ಡ
ಗುಂಪೊಂದು ಆಕೆಯೊಡನೆ ಬರುತ್ತಿತ್ತು. [13]ಪ್ರಭು ಯೇಸು ಆಕೆಯನ್ನು ಕಂಡದ್ದೇ ಕನಿಕರಗೊಂಡು,
‘ಅಳಬೇಡ’ ಎಂದು ಹೇಳಿ, [14]ಚಟ್ಟದ ಹತ್ತಿರಕ್ಕೆ ಬಂದು, ಅದನ್ನು ಮುಟ್ಟಿದರು. ಹೊತ್ತುಕೊಂಡು
ಹೋಗುತ್ತಿದ್ದವರು ಹಾಗೆಯೇ ನಿಂತರು. ಆಗ ಯೇಸು, “ಯುವಕನೇ, ನಾನು ನಿನಗೆ ಹೇಳುತ್ತೇನೆ,
ಎದ್ದೇಳು,” ಎಂದರು. [15]ಸತ್ತವನು ಎದ್ದು ಕುಳಿತು ಮಾತನಾಡಲಾರಂಭಿಸಿದನು. ಯೇಸು ಆ ಮಗನನ್ನು
ತಾಯಿಗೆ ಒಪ್ಪಿಸಿದರು. [16]ಎಲ್ಲರೂ ಭಯಭ್ರಾಂತರಾದರು. “ಮಹಾಪ್ರವಾದಿಯೊಬ್ಬನು ನಮ್ಮಲ್ಲೇ
ಉದಯಿಸಿದ್ದಾನೆ; ದೇವರು ತಮ್ಮ ಜನರನ್ನು ರಕ್ಷಿಸಲು ಬಂದಿದ್ದಾರೆ,” ಎಂದು ದೇವರನ್ನು ಕೊಂಡಾಡಿದರು.
[17]ಯೇಸುವಿನ ಈ ಸಮಾಚಾರ ಜುದೇಯ ನಾಡಿನಲ್ಲೆಲ್ಲಾ ಹಾಗೂ ಸುತ್ತಮುತ್ತಲಿನ ಪ್ರಾಂತ್ಯದಲ್ಲೆಲ್ಲಾ ಹರಡಿತು.

## ಸ್ನಾನಿಕ ಯೊವಾನ್ನನ ಪ್ರಶ್ನೆಗೆ ಉತ್ತರ

(ಮತ್ತಾ. 11.1–19)

18 ನಡೆದ ಈ ವಿಷಯವೆಲ್ಲ ಯೊವಾನ್ನನಿಗೆ ತನ್ನ ಶಿಷ್ಯರ ಮುಖಾಂತರ ತಿಳಿಯಿತು. [19]ಆತನು ತನ್ನ
ಶಿಷ್ಯರಲ್ಲಿ ಇಬ್ಬರನ್ನು ಕರೆದು, "ಬರಬೇಕಾದವರು ನೀವೋ ಅಥವಾ ಬೇರೊಬ್ಬರಿಗಾಗಿ ನಾವು ಎದುರು
ನೋಡಬೇಕೋ?" ಎಂದು ಯೇಸುಸ್ವಾಮಿಯನ್ನು ಕೇಳಲು ಅವರ ಬಳಿಗೆ ಕಳುಹಿಸಿದನು. [20]ಆ ಶಿಷ್ಯರು
ಯೇಸುವಿನ ಬಳಿಗೆ ಬಂದು, ಬರಬೇಕಾದವರು ನೀವೋ ಅಥವಾ ನಾವು ಬೇರೊಬ್ಬರನ್ನು ಎದುರು
ನೋಡಬೇಕೊ ಎಂದು ವಿಚಾರಿಸಲು ಸ್ನಾನಿಕ ಯೊವಾನ್ನ ನಮ್ಮನ್ನು ತಮ್ಮ ಬಳಿಗೆ ಕಳುಹಿಸಿದ್ದಾರೆ," ಎಂದರು.
[21]ಅದೇ ಸಮಯದಲ್ಲಿ ಯೇಸು ರೋಗರುಜಿನಗಳಿಂದ ನರಳುತ್ತಿದ್ದ ಹಾಗೂ ದೆವ್ವ ಹಿಡಿದಿದ್ದ ಅನೇಕರನ್ನು
ಗುಣಪಡಿಸುತ್ತಿದ್ದರು ಮತ್ತು ಹಲವು ಮಂದಿ ಕುರುಡರಿಗೆ ದೃಷ್ಟಿಯನ್ನು ದಯಪಾಲಿಸುತ್ತಿದ್ದರು. [22]ಯೇಸು
ಅವರಿಗೆ ಪ್ರತ್ಯುತ್ತರವಾಗಿ, "ನೀವು ಕಂಡದ್ದನ್ನೂ ಕೇಳಿದ್ದನ್ನೂ ಯೊವಾನ್ನನಿಗೆ ಹೋಗಿ ತಿಳಿಸಿರಿ: ಕುರುಡರು
ನೋಡುತ್ತಾರೆ, ಕುಂಟರು ನಡೆಯುತ್ತಾರೆ, ಕುಷ್ಠರೋಗಿಗಳು ಸ್ವಸ್ಥರಾಗುತ್ತಾರೆ, ಕಿವುಡರು ಕೇಳುತ್ತಾರೆ, ಸತ್ತವರು
ಮತ್ತೆ ಜೀವ ಪಡೆಯುತ್ತಾರೆ. ದೀನದಲಿತರಿಗೆ ಶುಭಸಂದೇಶವನ್ನು ಪ್ರಕಟಿಸಲಾಗುತ್ತಿದೆ. [23]ನನ್ನಲ್ಲಿ ವಿಶ್ವಾಸ
ಕಳೆದುಕೊಳ್ಳದವನು ಭಾಗ್ಯವಂತನು," ಎಂದು ಹೇಳಿ ಕಳುಹಿಸಿದರು.

24 ಬಂದಿದ್ದ ಶಿಷ್ಯರು ಹಿಂದಕ್ಕೆ ಹೋದ ಬಳಿಕ, ಯೇಸು ಜನಸಮೂಹಕ್ಕೆ ಯೊವಾನ್ನನನ್ನು ಕುರಿತು
ಹೀಗೆಂದರು: "ಬೆಂಗಾಡಿನಲ್ಲಿ ನೀವು ಏನನ್ನು ನೋಡಲೆಂದು ಹೋದಿರಿ? ಗಾಳಿಗೆ ಓಲಾಡುವ ಜೊಂಡನ್ನೇ?
[25]ಇಲ್ಲವಾದರೆ ಮತ್ತೇನನ್ನು ನೋಡಹೋದಿರಿ? ನಯವಾದ ರೇಷ್ಮೆ ಉಡುಪನ್ನು ಧರಿಸಿರುವ ವ್ಯಕ್ತಿಯನ್ನೇ?
ಅಂಥ ಶೃಂಗಾರವಾದ ಉಡುಗೆ ತೊಡುಗೆಯನ್ನು ಧರಿಸಿ, ಭೋಗಜೀವನ ನಡೆಸುವವರು
ಅರಮನೆಗಳಲ್ಲಿರುತ್ತಾರಷ್ಟೆ! [26]ಹಾಗಾದರೆ ನೀವು ಇನ್ನೇನನ್ನು ನೋಡಲು ಹೋದಿರಿ? ಪ್ರವಾದಿಯನ್ನೇ?
ಹೌದು, ಪ್ರವಾದಿಗಿಂತಲೂ ಶ್ರೇಷ್ಠನಾದವನನ್ನು ನೋಡಿದಿರಿ, ಎಂಬುದು ನಿಜ.

27 " 'ಇಗೋ, ನನ್ನ ದೂತನನ್ನು ನಿನಗೆ ಮುಂದಾಗಿ ಕಳುಹಿಸುವೆನು. ಆತನು ನಿನ್ನ ಮಾರ್ಗವನ್ನು
ಮುಂಚಿತವಾಗಿ ಸಿದ್ಧಗೊಳಿಸುವನು,' ಎಂದು ಪವಿತ್ರಗ್ರಂಥದಲ್ಲಿ ಪ್ರಸ್ತಾಪಿಸಿರುವುದು ಈ ಯೊವಾನ್ನನನ್ನು
ಕುರಿತೇ. [28]ಮಾನವನಾಗಿ ಜನಿಸಿದ ಯಾವನೂ ಸ್ನಾನಿಕ ಯೊವಾನ್ನನಿಗಿಂತ ಶ್ರೇಷ್ಠನಲ್ಲ ಎಂದು ನಿಮಗೆ
ನಿಶ್ಚಯವಾಗಿ ಹೇಳುತ್ತೇನೆ. ಆದರೂ ದೇವರ ಸಾಮ್ರಾಜ್ಯದಲ್ಲಿ ಕನಿಷ್ಠನು ಕೂಡ ಅವನಿಗಿಂತ ಶ್ರೇಷ್ಠನೇ ಸರಿ,"
ಎಂದರು.

29 ಯೊವಾನ್ನನ ಉಪದೇಶವನ್ನು ಜನ ಸಾಮಾನ್ಯರೆಲ್ಲರೂ ಕೇಳಿದರು. ಅವರು, ವಿಶೇಷವಾಗಿ
ಸುಂಕದವರು, ದೈವಯೋಜನೆಗೆ ತಲೆಬಾಗಿ ಆತನಿಂದ ಸ್ನಾನದೀಕ್ಷೆಯನ್ನು ಪಡೆದರು. [30]ಆದರೆ ಫರಿಸಾಯರು
ಮತ್ತು ಧರ್ಮಶಾಸ್ತ್ರಿಗಳು ತಮ್ಮನ್ನು ಕುರಿತಾದ ದೈವೇಚ್ಛೆಯನ್ನು ಅಲ್ಲಗಳೆದು, ಯೊವಾನ್ನನಿಂದ
ಸ್ನಾನದೀಕ್ಷೆಯನ್ನು ಪಡೆಯದೆಹೋದರು.

## ಲೋಕನೀತಿ ದೈವನೀತಿಯಲ್ಲ

31 ಯೇಸುಸ್ವಾಮಿ ತಮ್ಮ ಬೋಧನೆಯನ್ನು ಮುಂದುವರಿಸುತ್ತಾ, "ಈ ಕಾಲದ ಜನರನ್ನು ಯಾರಿಗೆ
ಹೋಲಿಸಲಿ? ಇವರು ಯಾರನ್ನು ಹೋಲುತ್ತಾರೆ? [32]ಪೇಟೆಬೀದಿಯಲ್ಲಿ ಕುಳಿತು,

'ನಾವು ಕೊಳಲನೂದಲು
ನೀವು ಕುಣಿದಾಡಲಿಲ್ಲ;
ನಾವು ಶೋಕಗೀತೆಗಳ ಹಾಡಲು
ನೀವು ಕಣ್ಣೀರಿಡಲಿಲ್ಲ'

ಎಂದು ಒಬ್ಬರಿಗೊಬ್ಬರು ಕೂಗಾಡುವ ಮಕ್ಕಳನ್ನು ಹೋಲುತ್ತಾರೆ. [33]ಸ್ನಾನಿಕ ಯೊವಾನ್ನನು ಬಂದಾಗ ಅನ್ನ
ಆಹಾರವನ್ನು ಸೇವಿಸಲಿಲ್ಲ, ದ್ರಾಕ್ಷಾರಸವನ್ನು ಮುಟ್ಟಲಿಲ್ಲ; ನೀವು, 'ಅವನಿಗೆ ದೆವ್ವ ಹಿಡಿದಿದೆ,' ಎಂದು
ಹೇಳಿದಿರಿ; [34]ನರಪುತ್ರನು ಬಂದಾಗ ಅನ್ನ ಪಾನೀಯಗಳನ್ನು ಸೇವಿಸಿದನು; ನೀವು, 'ಇವನೊಬ್ಬ ಹೊಟ್ಟೆಬಾಕ,

ಕುಡುಕ, ಸುಂಕದವರ ಹಾಗೂ ಪಾಪಿಷ್ಠರ ಗೆಳೆಯ, ಎನ್ನುತ್ತೀರಿ. 35ಆದರೆ ದೈವಜ್ಞಾನವೇ ನಿಜವಾದ
ಜ್ಞಾನವೆಂದು ಅದನ್ನು ಅಂಗೀಕರಿಸುವ ಎಲ್ಲರೂ ಸಮರ್ಥಿಸುತ್ತಾರೆ," ಎಂದರು.

**ಪತಿತ ಪಾವನ ಯೇಸು**

36 ಒಬ್ಬ ಫರಿಸಾಯನು ಯೇಸುಸ್ವಾಮಿಯನ್ನು ಊಟಕ್ಕೆ ಆಹ್ವಾನಿಸಿದನು. ಯೇಸು ಅವನ ಮನೆಗೆ
ಹೋಗಿ ಊಟಕ್ಕೆ ಕುಳಿತರು. 37ಅದೇ ಊರಿನಲ್ಲಿ ಪತಿತೆಯೊಬ್ಬಳು ಇದ್ದಳು. ಆಕೆ, ಫರಿಸಾಯನ ಮನೆಯಲ್ಲಿ
ಯೇಸು ಊಟಕ್ಕೆ ಕುಳಿತಿದ್ದಾರೆಂದು ಕೇಳಿ ಒಂದು ಅಮೃತಶಿಲೆಯ ಭರಣಿ ತುಂಬ ಸುಗಂಧ ತೈಲವನ್ನು
ತೆಗೆದುಕೊಂಡು ಅಲ್ಲಿಗೆ ಬಂದಳು. 38ಅವಳು ಯೇಸುವಿನ ಹಿಂಬದಿಯಲ್ಲಿ ಅಳುತ್ತಾ ನಿಂತು, ತನ್ನ
ಕಂಬನಿಯಿಂದ ಅವರ ಪಾದಗಳನ್ನು ತೊಳೆದು ತಲೆಕೂದಲಿನಿಂದ ಒರಸಿ, ಆ ಪಾದಗಳಿಗೆ ಮುತ್ತಿಟ್ಟು,
ಸುಗಂಧ ತೈಲವನ್ನು ಹಚ್ಚಿದಳು. 39ಯೇಸುವನ್ನು ಆಹ್ವಾನಿಸಿದ ಫರಿಸಾಯನು ಇದನ್ನು ನೋಡಿ, 'ಇವನು
ನಿಜವಾಗಿಯೂ ಪ್ರವಾದಿಯಾಗಿದ್ದರೆ ತನ್ನನ್ನು ಮುಟ್ಟುತ್ತಿರುವ ಇವಳು ಯಾರು, ಎಂಥಾ ಪತಿತಳು, ಎಂದು
ತಿಳಿದುಕೊಳ್ಳುತ್ತಿದ್ದನು' ಎಂದು ತನ್ನೊಳಗೇ ಅಂದುಕೊಂಡನು. 40ಅದಕ್ಕೆ ಯೇಸು, "ಸಿಮೋನ್, ನಾನು
ನಿನಗೆ ಹೇಳಬೇಕಾದ ವಿಷಯ ಒಂದಿದೆ," ಎಂದರು. ಸಿಮೋನನು, "ಅದೇನು ಹೇಳಿ ಗುರುವೇ," ಎಂದನು.
41ಆಗ ಯೇಸು, "ಒಬ್ಬ ಸಾಲಿಗನಿಗೆ ಇಬ್ಬರು ಸಾಲಗಾರರಿದ್ದರು. ಒಬ್ಬನು ಐನೂರು, ಇನ್ನೊಬ್ಬನು ಐವತ್ತು
ಬೆಳ್ಳಿ ನಾಣ್ಯಗಳನ್ನು ಅವನಿಗೆ ಸಾಲ ಕೊಡಬೇಕಾಗಿತ್ತು. 42ಆ ಇಬ್ಬರಿಗೂ ಸಾಲ ತೀರಿಸಲು ಸಾಧ್ಯವಾಗಲಿಲ್ಲ.
ಸಾಲಿಗನು ಇಬ್ಬರ ಸಾಲವನ್ನು ಮನ್ನಾ ಮಾಡಿದನು. ಈಗ ಹೇಳು, ಈ ಇಬ್ಬರಲ್ಲಿ "ಯಾರಿಗೆ ಆ ಸಾಲಿಗನ
ಮೇಲೆ ಹೆಚ್ಚು ಪ್ರೀತಿ?" ಎಂದು ಕೇಳಿದರು. 43ಅದಕ್ಕೆ ಸಿಮೋನನು, "ಯಾರು ಹೆಚ್ಚು ಸಾಲದಿಂದ ಬಿಡುಗಡೆ
ಹೊಂದಿದ್ದಾನೋ ಅವನೇ ಎಂದು ತೋರುತ್ತದೆ," ಎಂದನು. "ಸರಿಯಾಗಿ ಹೇಳಿದೆ," ಎಂದರು ಯೇಸು.
44ಅನಂತರ ಆ ಮಹಿಳೆಯ ಕಡೆ ತಿರುಗಿ ಸಿಮೋನನಿಗೆ, "ಈಕೆಯನ್ನು ನೋಡಿದೆಯಾ? ನಾನು ನಿನ್ನ ಮನೆಗೆ
ಬಂದಾಗ ನೀನು ನನ್ನ ಕಾಲಿಗೆ ನೀರು ಕೊಡಲಿಲ್ಲ; ಈಕೆಯಾದರೋ ನನ್ನ ಪಾದಗಳನ್ನು ತನ್ನ ಕಣ್ಣೀರಿನಿಂದ
ತೊಳೆದು ತಲೆಗೂದಲಿನಿಂದ ಒರೆಸಿರುವಳು. 45ನೀನು ನನಗೆ ಮುತ್ತಿಟ್ಟು ಸ್ವಾಗತಿಸಲಿಲ್ಲ; ಆದರೆ ಈಕೆ ಒಳಗೆ
ಬಂದಾಗಿನಿಂದ ನನ್ನ ಪಾದಗಳಿಗೆ ಮುತ್ತಿಡುವುದನ್ನು ನಿಲ್ಲಿಸಿಲ್ಲ; 46ನನ್ನ ತಲೆಗೆ ನೀನು ಎಣ್ಣೆ ಹಚ್ಚಲಿಲ್ಲ;
ಈಕೆಯೋ ನನ್ನ ಪಾದಗಳಿಗೆ ಸುಗಂಧ ತೈಲವನ್ನು ಹಚ್ಚಿರುವಳು. 47ಆದ್ದರಿಂದ ನಾನು ನಿನಗೆ
ಹೇಳುವುದೇನೆಂದರೆ, ಈಕೆ ಮಾಡಿದ ಪಾಪಗಳು ಅಪಾರವಾದರೂ ಅವನ್ನು ಕ್ಷಮಿಸಲಾಗಿವೆ; ಇದಕ್ಕೆ ಈಕೆ
ತೋರಿಸಿರುವ ಅಧಿಕವಾದ ಪ್ರೀತಿಯೇ ಸಾಕ್ಷಿ. ಕಡಿಮೆ ಕ್ಷಮೆಪಡೆದವನು ಕಡಿಮೆ ಪ್ರೀತಿ ತೋರಿಸುತ್ತಾನೆ,"
ಎಂದರು. 48ಅನಂತರ ಯೇಸು ಆ ಮಹಿಳೆಗೆ: "ನಿನ್ನ ಪಾಪಗಳನ್ನು ಕ್ಷಮಿಸಲಾಗಿದೆ," ಎಂದರು.
49ಜೊತೆಯಲ್ಲಿ ಊಟಕ್ಕೆ ಕುಳಿತಿದ್ದವರು ಇದನ್ನು ಕೇಳಿ, "ಪಾಪಗಳನ್ನು ಕೂಡ ಕ್ಷಮಿಸುವ ಈತ ಯಾರು?"
ಎಂದು ತಮ್ಮತಮ್ಮಲ್ಲೇ ಹೇಳಿಕೊಂಡರು. 50ಯೇಸು ಆಕೆಗೆ, "ನಿನ್ನ ವಿಶ್ವಾಸ ನಿನ್ನನ್ನು ಉದ್ಧಾರ ಮಾಡಿದೆ;
ಸಮಾಧಾನದಿಂದ ಹೋಗು," ಎಂದರು.

**ಯೇಸುವಿನ ಭಕ್ತೆಯರು**

**8** ತರುವಾಯ ಯೇಸುಸ್ವಾಮಿ ದೇವರ ಸಾಮ್ರಾಜ್ಯದ ಶುಭಸಂದೇಶವನ್ನು ಸಾರುತ್ತಾ ಪಟ್ಟಣಗಳಲ್ಲೂ
ಹಳ್ಳಿಗಳಲ್ಲೂ ಸಂಚಾರ ಮಾಡಿದರು. ಹನ್ನೆರಡು ಮಂದಿ ಶಿಷ್ಯರೂ ಅವರೊಡನೆ ಇದ್ದರು. 2ದೆವ್ವಗಳ
ಕಾಟದಿಂದಲೂ ರೋಗರುಜಿನಗಳಿಂದಲೂ ಬಿಡುಗಡೆ ಹೊಂದಿದ್ದ ಕೆಲವು ಮಹಿಳೆಯರು ಅವರ
ಜೊತೆಯಲ್ಲಿದ್ದರು. ಅವರಾರೆಂದರೆ: ಏಳು ದೆವ್ವಗಳಿಂದ ವಿಮುಕ್ತಳಾಗಿದ್ದ ಮಗ್ದಲದ ಮರಿಯಳು,
3ಹೆರೋದನ ಅರಮನೆಯ ಮೇಲ್ವಿಚಾರಕನಾಗಿದ್ದ ಕೂಜನ ಪತ್ನಿ ಯೊವಾನ್ನಳು, ಅಲ್ಲದೆ ಸುಸಾನ್ನಳು,
ಮತ್ತಿತರ ಅನೇಕರು. ಇವರು ತಮ್ಮ ಆಸ್ತಿಪಾಸ್ತಿಯನ್ನು ವೆಚ್ಚಮಾಡಿ ಯೇಸುವಿಗೂ ಅವರ ಶಿಷ್ಯರಿಗೂ
ಉಪಚಾರಮಾಡುತ್ತಿದ್ದರು.

## ಬಿತ್ತುವವನ ಸಾಮತಿ

(ಮತ್ತಾ. 13.1–9; ಮಾರ್ಕ 4.1–9)

4 ಜನರು ಊರೂರುಗಳಿಂದ ಹೊರಟು ಯೇಸುಸ್ವಾಮಿಯ ಬಳಿಗೆ ಬಂದರು. ಜನ ಸಮೂಹವು
ಹೆಚ್ಚುತ್ತಿದ್ದಂತೆ ಯೇಸು ಈ ಸಾಮತಿಯನ್ನು ಹೇಳಿದರು: 5"ಒಬ್ಬ ರೈತನು ಬಿತ್ತುವುದಕ್ಕೆ ಹೋದನು. ಬಿತ್ತನೆ
ಮಾಡುತ್ತಿದ್ದಾಗ ಕೆಲವು ಬೀಜಗಳು ಕಾಲ್ದಾರಿಯಲ್ಲಿ ಬಿದ್ದವು. ಅವು ಕಾಲ್ತುಳಿತಕ್ಕೆ ಸಿಕ್ಕಿಹೋದವು. ಅವುಗಳನ್ನು
ಆಕಾಶದ ಪಕ್ಷಿಗಳು ತಿಂದುಬಿಟ್ಟವು. 6ಮತ್ತೆ ಕೆಲವು ಬೀಜಗಳು ಕಲ್ಲುಭೂಮಿಯ ಮೇಲೆ ಬಿದ್ದವು. ಅವು
ಮೊಳೆತಾಗಲೂ ತೇವವಿಲ್ಲದ ಕಾರಣ ಒಣಗಿ ಹೋದವು. 7ಇನ್ನೂ ಕೆಲವು ಮುಳ್ಳುಪೊದೆಗಳ ನಡುವೆ
ಬಿದ್ದವು. ಮುಳ್ಳುಪೊದೆಗಳು ಅವುಗಳೊಡನೆ ಬೆಳೆದು ಸಸಿಗಳನ್ನು ಅದುಮಿಬಿಟ್ಟವು. 8ಇನ್ನೂ ಕೆಲವು
ಬೀಜಗಳು ಹದವಾದ ಭೂಮಿಯಲ್ಲಿ ಬಿದ್ದವು. ಅವು ಬೆಳೆದು ನೂರ್ಮಡಿ ಫಸಲನ್ನು ಕೊಟ್ಟವು." ಈ
ಸಾಮತಿಯನ್ನು ಮುಗಿಸಿದ ಮೇಲೆ ಯೇಸು, "ಕೇಳುವುದಕ್ಕೆ ಕಿವಿಯುಳ್ಳವನು ಕೇಳಿಸಿಕೊಳ್ಳಲಿ," ಎಂದು ಒತ್ತಿ
ಹೇಳಿದರು.

9 ಶಿಷ್ಯರು, 'ಈ ಸಾಮತಿಯ ಅರ್ಥವೇನು?' ಎಂದು ಕೇಳಿದಾಗ, ಯೇಸು ಇಂತೆಂದರು: 10"ದೇವರ
ಸಾಮ್ರಾಜ್ಯದ ರಹಸ್ಯಗಳನ್ನು ಅರಿತುಕೊಳ್ಳುವ ಸದವಕಾಶವನ್ನು ನಿಮಗೆ ಕೊಡಲಾಗಿದೆ.
ಬೇರೆಯವರಿಗಾದರೋ ಅವು ಸಾಮತಿಗಳ ರೂಪದಲ್ಲಿ ಮರೆಯಾಗಿವೆ. ಅವರು ಕಣ್ಣಾರೆ ನೋಡಿದರೂ
ಕಾಣರು, ಕಿವಿಯಾರೆ ಕೇಳಿದರೂ ಗ್ರಹಿಸರು."

11 "ಸಾಮತಿಯ ಅರ್ಥ ಹೀಗಿದೆ: ಬೀಜ ಎಂದರೆ ದೇವರ ವಾಕ್ಯ. 12ಕಾಲ್ದಾರಿಯಲ್ಲಿ ಬಿದ್ದ ಬೀಜಗಳು
ಎಂದರೆ ಆ ವಾಕ್ಯವನ್ನು ಕೇಳಿದವರು. ಆದರೆ ಅವರು ವಿಶ್ವಾಸಿಸಿ ಜೀವೋದ್ಧಾರವನ್ನು ಪಡೆಯದಂತೆ ಪಿಶಾಚಿ
ಬಂದು ಆ ವಾಕ್ಯವನ್ನು ಅವರ ಹೃದಯದಿಂದ ಕೂಡಲೇ ತೆಗೆದುಬಿಡುತ್ತದೆ.
13ಕಲ್ಲು ಭೂಮಿಯ ಮೇಲೆ ಬಿದ್ದ ಬೀಜಗಳು ಎಂದರೆ ದೇವರ ವಾಕ್ಯವನ್ನು ಕೇಳಿ ಸಂತೋಷದಿಂದ
ಸ್ವೀಕರಿಸಿದವರು; ಅದು ಅವರಲ್ಲಿ ಬೇರೂರದ ಕಾರಣ ಅವರು ಸ್ವಲ್ಪ ಕಾಲ ವಿಶ್ವಾಸಿಸುತ್ತಾರೆ; ಶೋಧನೆಯ
ಸಮಯದಲ್ಲಿ ಅದನ್ನು ತೊರೆದುಬಿಡುತ್ತಾರೆ. 14ಮುಳ್ಳುಪೊದೆಗಳ ನಡುವೆ ಬಿದ್ದ ಬೀಜಗಳು ಎಂದರೆ ದೇವರ
ವಾಕ್ಯವನ್ನು ಕೇಳಿದ ಇನ್ನಿತರರು. ಆದರೆ ಕಾಲ ಕ್ರಮೇಣ ಬಾಳಿನ ಬವಣೆಗಳು, ಐಶ್ವರ್ಯದ ವ್ಯಾಮೋಹಗಳು
ಹಾಗೂ ಸುಖಭೋಗಗಳು ಇವರನ್ನು ಅದುಮಿ ಬಿಡುತ್ತವೆ; ಇವರ ಫಲ ಪಕ್ವವಾಗುವುದಿಲ್ಲ. 15ಹದವಾದ
ಭೂಮಿಯ ಮೇಲೆ ಬಿದ್ದ ಬೀಜಗಳು ಎಂದರೆ ದೇವರ ವಾಕ್ಯವನ್ನು ಕೇಳಿ ಅದನ್ನು ಸದ್ಗುಣಶೀಲ ಹಾಗೂ
ಸಾತ್ವಿಕವಾದ ಹೃದಯದಲ್ಲಿಟ್ಟು ಸಹನೆಯಿಂದ ಫಲ ತರುವವರು."

## ದೀಪದ ಸ್ಥಾನಮಾನ

(ಮತ್ತಾ. 4.21–25)

16 "ದೀಪವನ್ನು ಹಚ್ಚಿ ಯಾರೂ ಅದನ್ನು ಪಾತ್ರೆಯಿಂದ ಮುಚ್ಚಿಡುವುದಿಲ್ಲ; ಮಂಚದ ಕೆಳಗೆ
ಬಚ್ಚಿಡುವುದಿಲ್ಲ. ಮನೆಯೊಳಕ್ಕೆ ಬರುವವರಿಗೆ ಬೆಳಕು ಕಾಣಿಸುವಂತೆ ಅದನ್ನು ದೀಪಸ್ತಂಭದ ಮೇಲಿಡುತ್ತಾರೆ.
17ಬಟ್ಟಬಯಲಾಗದ ಮುಚ್ಚು ಮರೆಯಿಲ್ಲ; ಬೆಳಕಿಗೆ ಬಾರದ ಹಾಗೂ ರಟ್ಟಾಗದ ಗುಟ್ಟಿಲ್ಲ.

18 "ಆದ್ದರಿಂದ ನೀವು ಕಿವಿಕೊಡುವಾಗ ಎಚ್ಚರಿಕೆಯಿಂದಿರಿ; ಏಕೆಂದರೆ, ಉಳ್ಳವನಿಗೆ ಇನ್ನೂ ಹೆಚ್ಚಾಗಿ
ಕೊಡಲಾಗುತ್ತದೆ, ಇಲ್ಲದವನಿಂದ ತನಗಿದೆ ಎಂದುಕೊಳ್ಳುವ ಕಿಂಚಿತ್ತನ್ನೂ ಕಸಿದುಕೊಳ್ಳಲಾಗುತ್ತದೆ," ಎಂದರು.

## ಹೊಸ ಬಂಧುಬಳಗ

(ಮತ್ತಾ. 12.46–50; ಮಾರ್ಕ 3.31–35)

19 ಯೇಸುಸ್ವಾಮಿಯ ತಾಯಿ ಹಾಗೂ ಸಹೋದರರು ಯೇಸು ಇದ್ದೆಡೆಗೆ ಬಂದರು. ಆದರೆ
ಜನಸಂದಣಿಯ ನಿಮಿತ್ತ ಹತ್ತಿರಕ್ಕೆ ಬರಲಾಗಲಿಲ್ಲ. 20ಯೇಸುವಿಗೆ, "ನಿಮ್ಮ ತಾಯಿಯು ಮತ್ತು ಸಹೋದರರು

ನಿಮ್ಮನ್ನು ಕಾಣಬೇಕೆಂದು ಹೊರಗೆ ನಿಂತಿದ್ದಾರೆ," ಎಂದು ತಿಳಿಸಲಾಯಿತು. [21]ಅದಕ್ಕೆ ಯೇಸು, "ದೇವರ
ವಾಕ್ಯವನ್ನು ಕೇಳಿ ಅದರಂತೆ ನಡೆಯುವವರೇ ನನಗೆ ತಾಯಿ ಮತ್ತು ಅಣ್ಣ ತಮ್ಮಂದಿರು," ಎಂದರು.

### ತುಫಾನಿಗೂ ತರಂಗಗಳಿಗೂ ಒಡೆಯ

(ಮತ್ತಾ. 8.23–27; ಮಾರ್ಕ 4.35–41)

22 ಒಂದು ದಿನ ಯೇಸುಸ್ವಾಮಿ ತಮ್ಮ ಶಿಷ್ಯರ ಸಂಗಡ ದೋಣಿಯನ್ನು ಹತ್ತಿ, "ಸರೋವರದ
ಆಚೆಯ ದಡಕ್ಕೆ ಹೋಗೋಣ," ಎಂದರು. ಅಂತೆಯೇ ಎಲ್ಲರೂ ಹೊರಟರು. [23]ದೋಣಿ ಸಾಗುತ್ತಿದ್ದಾಗ,
ಯೇಸು ನಿದ್ರಾವಶರಾದರು. ಅಷ್ಟರಲ್ಲಿ ಸರೋವರದ ಮೇಲೆ ಬಿರುಗಾಳಿ ಎದ್ದಿತು. ದೋಣಿ ನೀರಿನಿಂದ
ತುಂಬಿ ಅವರೆಲ್ಲರೂ ಅಪಾಯಕ್ಕೆ ಒಳಗಾದರು. [24]ಶಿಷ್ಯರು ಬಂದು ಯೇಸುವನ್ನು ಎಬ್ಬಿಸಿ, "ಸ್ವಾಮಿ, ಸ್ವಾಮಿ,
ನಾವು ಸಾಯುತ್ತಿದ್ದೇವೆ," ಎಂದರು. ಯೇಸು ಎಚ್ಚೆತ್ತು ಬಿರುಗಾಳಿಯನ್ನೂ ಭೋರ್ಗರೆಯುತ್ತಿದ್ದ ಅಲೆಗಳನ್ನೂ
ಗದರಿಸಿದರು. ಅವು ಸ್ತಬ್ಧವಾದವು. ವಾತಾವರಣ ಶಾಂತವಾಯಿತು. [25]ಆಗ ಯೇಸು ಶಿಷ್ಯರಿಗೆ, "ಎಲ್ಲಿ
ಹೋಯಿತು ನಿಮ್ಮ ವಿಶ್ವಾಸ?" ಎಂದು ಪ್ರಶ್ನಿಸಿದರು. ಶಿಷ್ಯರು ಭಯಭೀತರಾಗಿ, 'ಗಾಳಿಗೂ ನೀರಿಗೂ
ಆಜ್ಞೆಕೊಡುವ ಇವರು ಯಾರಿರಬಹುದು! ಅವು ಇವರು ಹೇಳಿದ ಹಾಗೆ ಕೇಳುತ್ತವೆಯಲ್ಲಾ!' ಎಂದು
ಸೋಜಿಗದಿಂದ ತಮ್ಮ ತಮ್ಮೊಳಗೇ ಮಾತನಾಡಿಕೊಂಡರು.

### ದೆವ್ವಪೀಡಿತನಿಗೆ ಬಿಡುಗಡೆ

(ಮತ್ತಾ. 8.28–34; ಮಾರ್ಕ 5.1–20)

26 ಯೇಸುಸ್ವಾಮಿ ಮತ್ತು ಶಿಷ್ಯರು ದೋಣಿಯಲ್ಲೇ ಮುಂದೆ ಸಾಗಿ ಗಲಿಲೇಯಕ್ಕೆ ಎದುರಾಗಿದ್ದ
ಗೆರಸೇನರ ನಾಡಿಗೆ ಬಂದು ಸೇರಿದರು. [27]ಯೇಸು ದಡದ ಮೇಲೆ ಕಾಲಿಟ್ಟದ್ದೇ ತಡ, ಆ ಊರಿನವನೊಬ್ಬನು
ಬಂದು ಅವರನ್ನು ಎದುರುಗೊಂಡನು. ಅವನಿಗೆ ಪಿಶಾಚಿ ಹಿಡಿದಿತ್ತು. ಅವನು ಬಟ್ಟೆತೊಟ್ಟು ಬಹಳ
ದಿನಗಳಾಗಿತ್ತು: ಮನೆ ಬಿಟ್ಟು ಸಮಾಧಿಗಳ ಗುಹೆಗಳಲ್ಲೇ ವಾಸಿಸುತ್ತಿದ್ದನು. [28]ಯೇಸುವನ್ನು ಕಂಡೊಡನೆ
ಗಟ್ಟಿಯಾಗಿ ಕೂಗುತ್ತಾ ಅವರ ಮುಂದೆ ಅಡ್ಡಬಿದ್ದು, "ಯೇಸುವೇ, ಪರಾತ್ಪರ ದೇವರ ಪುತ್ರರೇ, ನಿಮಗೇಕೆ
ನನ್ನ ಗೊಡವೆ? ದಯವಿಟ್ಟು ನನ್ನನ್ನು ಪೀಡಿಸಬೇಡಿ" ಎಂದು ದನಿಯೆತ್ತಿ ಬೇಡಿಕೊಂಡನು. [29]ಕಾರಣ –
ಅವನನ್ನು ಬಿಟ್ಟು ತೊಲಗಬೇಕೆಂದು ಯೇಸು ದೆವ್ವಕ್ಕೆ ಆಗಲೆ ಕಟ್ಟಪ್ಪಣೆ ಮಾಡಿದ್ದರು. ಎಷ್ಟೋ ಸಾರಿ ಅದು
ಅವನ ಮೇಲೆ ಬಂದಿತ್ತು. ಜನರು ಅವನನ್ನು ಸರಪಳಿ ಸಂಕೋಲೆಗಳಿಂದ ಬಂಧಿಸಿ ಕಾವಲಿನಲ್ಲಿ ಇಟ್ಟಿದ್ದರೂ
ಅವುಗಳನ್ನು ಅವನು ಮುರಿದು ಹಾಕುತ್ತಿದ್ದನು; ದೆವ್ವ ಅವನನ್ನು ಬೆಂಗಾಡಿಗೆ ಅಟ್ಟುತ್ತಿತ್ತು. [30]ಯೇಸು, "ನಿನ್ನ
ಹೆಸರೇನು?" ಎಂದು ಕೇಳಲು, ಅವನು "ಗಣ", ಎಂದು ಉತ್ತರ ಕೊಟ್ಟನು; ಏಕೆಂದರೆ, ಅನೇಕ ಪಿಶಾಚಿಗಳು
ಅವನನ್ನು ಹೊಕ್ಕಿದ್ದವು. [31]ಆ ಪಿಶಾಚಿಗಳು, "ಪಾತಾಳಕ್ಕೆ ಹೋಗಿಬೀಳಿರೆಂದು ನಮಗೆ ಆಜ್ಞೆಮಾಡಬೇಡಿ,"
ಎಂದು ಯೇಸುವನ್ನು ಬೇಡಿಕೊಂಡವು.

32 ಸಮೀಪದಲ್ಲೇ, ಹಂದಿಗಳ ದೊಡ್ಡ ಹಿಂಡೊಂದು ಬೆಟ್ಟದ ತಪ್ಪಲಿನಲ್ಲಿ ಮೇಯುತ್ತಿತ್ತು. ಆ
ಹಂದಿಗಳೊಳಗೆ ಸೇರಿಕೊಳ್ಳಲು ತಮಗೆ ಅಪ್ಪಣೆಯಾಗಬೇಕೆಂದು ಆ ಪಿಶಾಚಿಗಳು ಯೇಸುವನ್ನು
ಬೇಡಿಕೊಂಡವು. ಅವರು ಹಾಗೇ ಅಪ್ಪಣೆಮಾಡಿದರು. [33]ಕೂಡಲೆ ಪಿಶಾಚಿಗಳು ಆ ವ್ಯಕ್ತಿಯಿಂದ ಹೊರಬಂದು
ಹಂದಿಗಳೊಳಗೆ ಹೊಕ್ಕವು. ಇದರ ಪರಿಣಾಮವಾಗಿ ಆ ಹಂದಿಗಳ ಹಿಂಡು ಬೆಟ್ಟದ ಕಡಿದಾದ ಬದಿಯಿಂದ
ಧಾವಿಸಿ ಸರೋವರಕ್ಕೆ ಬಿದ್ದು ನೀರುಪಾಲಾಯಿತು.

34 ಇದನ್ನು ನೋಡಿದೊಡನೆಯೇ, ಹಂದಿ ಮೇಯಿಸುತ್ತಿದ್ದವರು ಓಡಿ ಹೋಗಿ ನಡೆದ ಈ
ಘಟನೆಯನ್ನು ಪಟ್ಟಣದಲ್ಲೂ ಹಳ್ಳಿಯಲ್ಲೂ ತಿಳಿಸಿದರು. [35]ಅದನ್ನು ನೋಡಲು ಜನರು ಹೊರಟು
ಯೇಸುವಿನ ಬಳಿಗೆ ಬಂದರು. ಪಿಶಾಚಿಗಳಿಂದ ಬಿಡುಗಡೆಯಾಗಿದ್ದ ಆ ವ್ಯಕ್ತಿ ಬಟ್ಟೆಯನ್ನು ತೊಟ್ಟುಕೊಂಡು,
ಸ್ವಸ್ಥಬುದ್ಧಿಯುಳ್ಳವನಾಗಿ, ಯೇಸುವಿನ ಪಾದಗಳ ಬಳಿ ಕುಳಿತಿದ್ದನ್ನು ಅವರೆಲ್ಲರೂ ಕಂಡು ಗಾಬರಿಗೊಂಡರು.
[36]ಆಗ, ನಡೆದುದ್ದನ್ನು ಕಣ್ಣಾರೆ ಕಂಡವರು ಪಿಶಾಚಿಗಳಿಂದ ಪೀಡಿತನಾಗಿದ್ದವನು ಬಿಡುಗಡೆಯಾದ
ಬಗೆಯನ್ನು ವಿವರಿಸಿದರು. [37]ಬಹಳವಾಗಿ ದಿಗಿಲುಗೊಂಡಿದ್ದ ಗೆರಸೇನಿನ ಹಾಗೂ ಸುತ್ತಮುತ್ತಲಿನ

ಜನರೆಲ್ಲರೂ ತಮ್ಮನ್ನು ಬಿಟ್ಟು ಹೋಗಬೇಕೆಂದು ಯೇಸುವನ್ನು ಕೇಳಿಕೊಂಡರು. ಯೇಸು ದೋಣಿ ಹತ್ತಿ ಹಿಂದುರಿಗಿದರು. [38]ಪಿಶಾಚಿಗಳಿಂದ ಬಿಡುಗಡೆ ಆಗಿದ್ದ ಆ ವ್ಯಕ್ತಿಯಾದರೋ, "ನನ್ನನ್ನು ನಿಮ್ಮ ಜೊತೆಯಲ್ಲೇ ಕರೆದುಕೊಂಡು ಹೋಗಿ," ಎಂದು ಬಿನ್ನವಿಸಿಕೊಂಡನು. [39]ಆದರೆ ಯೇಸು, "ನಿನ್ನ ಮನೆಗೆ ಹಿಂದಿರುಗಿ ಹೋಗು, ದೇವರು ನಿನಗೆ ಎಂಥಾ ಉಪಕಾರ ಮಾಡಿದ್ದಾರೆಂಬುದನ್ನು ಪ್ರಕಟಿಸು," ಎಂದು ಅವನನ್ನು ಬೀಳ್ಕೊಟ್ಟರು. ಅವನು ಹೋಗಿ, ಯೇಸು ತನಗೆ ಮಾಡಿದ ಮಹದುಪಕಾರವನ್ನು ಊರಿನಲ್ಲೆಲ್ಲಾ ಪ್ರಚಾರ ಮಾಡಿದನು.

## ಯಾಯಿರನ ಮಗಳಿಗೆ ಜೀವದಾನ ರಕ್ತಸ್ರಾವದ ಸ್ತ್ರೀಗೆ ಆರೋಗ್ಯದಾನ

(ಮತ್ತಾ. 9.18–26; ಮಾರ್ಕ 5.21–43)

40 ಯೇಸುಸ್ವಾಮಿ ಹಿಂದಿರುಗಿ ಬಂದುದೇ, ದಡದಲ್ಲಿ ಎದುರುನೋಡುತ್ತಿದ್ದ ಜನಸಮೂಹವು ಅವರನ್ನು ಸ್ವಾಗತಿಸಿತು. [41]ಅಷ್ಟರಲ್ಲಿ ಪ್ರಾರ್ಥನಾ ಮಂದಿರದ ಅಧಿಕಾರಿ ಯಾಯಿರನೆಂಬವನು ಅಲ್ಲಿಗೆ ಬಂದು, ಯೇಸುವಿನ ಪಾದಕ್ಕೆರಗಿ, ತನ್ನ ಮನೆಗೆ ಬರಬೇಕೆಂದು ವಿನಂತಿಸಿದನು. [42]ಕಾರಣ ಸುಮಾರು ಹನ್ನೆರಡು ವರ್ಷ ವಯಸ್ಸಿನ ಅವನ ಏಕೈಕ ಪುತ್ರಿ ಮರಣಾವಸ್ಥೆಯಲ್ಲಿದ್ದಳು. ಯೇಸು ಹೊರಟು ಬರುವಾಗ ಜನರ ಗುಂಪು ಅವರನ್ನು ಸುತ್ತಲೂ ಒತ್ತರಿಸುತ್ತಿತ್ತು. [43]ಹನ್ನೆರಡು ವರ್ಷಗಳಿಂದಲೂ ರಕ್ತಸ್ರಾವ ರೋಗದಿಂದ ನರಳುತ್ತಾ ಇದ್ದ ಮಹಿಳೆಯೊಬ್ಬಳು ಆ ಗುಂಪಿನಲ್ಲಿ ಇದ್ದಳು. ಆಕೆ ತನ್ನ ಆಸ್ತಿಪಾಸ್ತಿಯನ್ನೆಲ್ಲಾ ವೈದ್ಯರಿಗೆ ವೆಚ್ಚ ಮಾಡಿದ್ದರೂ ಆಕೆಯನ್ನು ಗುಣಪಡಿಸಲು ಯಾರಿಂದಲೂ ಸಾಧ್ಯವಾಗಿರಲಿಲ್ಲ. [44]ಆಕೆ ಹಿಂಬದಿಯಿಂದ ಬಂದು ಯೇಸುಸ್ವಾಮಿಯ ಉಡುಪಿನ ಅಂಚನ್ನು ಮುಟ್ಟಿದಳು. ಆ ಕ್ಷಣವೇ ಅವಳ ರಕ್ತಸ್ರಾವವು ನಿಂತುಹೋಯಿತು. [45]ಆಗ ಯೇಸು, "ನನ್ನನ್ನು ಮುಟ್ಟಿದವರು ಯಾರು?" ಎಂದು ಕೇಳಿದರು. ಯಾರೂ ಮುಟ್ಟಲಿಲ್ಲವೆಂದು ಎಲ್ಲರು ಹೇಳುತ್ತಿರಲು ಪೇತ್ರನು, "ಪ್ರಭೂ, ಇಷ್ಟೊಂದು ಜನರು ಮೇಲೆ ಮೇಲೆ ಬೀಳುತ್ತಾ ನಿಮ್ಮನ್ನು ಒತ್ತರಿಸುತ್ತಿದ್ದಾರಲ್ಲಾ," ಎಂದನು. [46]ಅದಕ್ಕೆ ಯೇಸು, "ಯಾರೋ ನನ್ನನ್ನು ಮುಟ್ಟಿದ್ದಾರೆ. ಗುಣಪಡಿಸುವ ಶಕ್ತಿ ನನ್ನಿಂದ ಹೊರಹೊಮ್ಮಿದೆ ಎಂದು ನನಗೆ ಗೊತ್ತು," ಎಂದರು. [47]ಆಗ ಆ ಮಹಿಳೆ ತಾನು ಮಾಡಿದ್ದನ್ನು ಇನ್ನು ಮುಚ್ಚಿಡಲು ಸಾಧ್ಯವಿಲ್ಲವೆಂದು ಅರಿತು, ನಡುಗುತ್ತಾ ಬಂದು, ಯೇಸುವಿಗೆ ಅಡ್ಡಬಿದ್ದಳು. ತಾನು ಮುಟ್ಟಿದ್ದಕ್ಕೆ ಕಾರಣವನ್ನೂ ತಾನು ತಕ್ಷಣ ಗುಣಹೊಂದಿದ್ದನ್ನೂ ಎಲ್ಲರ ಮುಂದೆ ಬಹಿರಂಗ ಪಡಿಸಿದಳು. [48]ಯೇಸು ಆಕೆಗೆ, "ಮಗಳೇ, ನಿನ್ನ ವಿಶ್ವಾಸ ನಿನ್ನನ್ನು ಗುಣಪಡಿಸಿದೆ; ಸಮಾಧಾನದಿಂದ ಹೋಗು," ಎಂದರು.

49 ಯೇಸುಸ್ವಾಮಿ ಇನ್ನೂ ಮಾತನಾಡುತ್ತಾ ಇರುವಾಗಲೇ ಒಬ್ಬನು ಯಾಯಿರನ ಮನೆಯಿಂದ ಬಂದು, ಆ ಯಾಯಿರನಿಗೆ, "ನಿಮ್ಮ ಮಗಳು ತೀರಿಹೋದಳು. ಇನ್ನು ಗುರುವಿಗೆ ತೊಂದರೆ ಕೊಡಬೇಡಿ," ಎಂದನು. [50]ಇದನ್ನು ಕೇಳಿದ ಯೇಸು ಯಾಯಿರನಿಗೆ, "ಭಯಪಡಬೇಡ, ನಿನ್ನಲ್ಲಿ ವಿಶ್ವಾಸವೊಂದಿದ್ದರೆ ಸಾಕು, ನಿನ್ನ ಮಗಳು ಬದುಕುವಳು," ಎಂದರು. [51]ಯೇಸು ಅವನ ಮನೆಯನ್ನು ಸೇರಿದುದೇ, ಪೇತ್ರ, ಯೊವಾನ್ನ ಹಾಗೂ ಯಕೋಬ ಮತ್ತು ಆ ಬಾಲಕಿಯ ತಂದೆ ತಾಯಿ ಇವರ ಹೊರತು ಯಾರನ್ನೂ ತನ್ನೊಡನೆ ಒಳಕ್ಕೆ ಬರಗೊಡಲಿಲ್ಲ. [52]ಇತ್ತ, ಸತ್ತ ಬಾಲಕಿಗಾಗಿ ಎಲ್ಲರೂ ಅತ್ತು ಗೋಳಾಡುತ್ತಾ ಇದ್ದರು. ಯೇಸುವಾದರೋ, "ಅಳಬೇಡಿ, ಅವಳು ಸತ್ತಿಲ್ಲ, ನಿದ್ರಿಸುತ್ತಿದ್ದಾಳೆ," ಎಂದರು. [53]ಬಾಲಕಿ ಸತ್ತು ಹೋಗಿರುವುದನ್ನು ಅರಿತಿದ್ದ ಜನರು ಯೇಸುವನ್ನು ಪರಿಹಾಸ್ಯ ಮಾಡತೊಡಗಿದರು. [54]ಯೇಸು ಅವಳ ಕೈ ಹಿಡಿದು, "ಮಗೂ, ಎದ್ದೇಳು," ಎಂದು ಕೂಗಿ ಹೇಳಿದರು. [55]ಬಾಲಕಿಗೆ ಜೀವ ಮರಳಿ ಬಂದಿತು. ತಕ್ಷಣವೇ ಅವಳು ಎದ್ದಳು. ತಿನ್ನಲು ಏನನ್ನಾದರೂ ಅವಳಿಗೆ ಕೊಡಬೇಕೆಂದು ಯೇಸು ಸೂಚಿಸಿದರು. [56]ಬಾಲಕಿಯ ತಂದೆತಾಯಿಗಳು ಆಶ್ಚರ್ಯಚಕಿತರಾದರು. ಆಗ ಯೇಸು ನಡೆದ ವಿಷಯವನ್ನು ಯಾರಿಗೂ ತಿಳಿಸಬಾರದೆಂದು ಅವರಿಗೆ ಆಜ್ಞಾಪಿಸಿದರು.

## ಪ್ರೇಷಿತರಿಗೆ ಕೊಟ್ಟ ಆದೇಶ
## (ಮತ್ತಾ. 10.5–15; ಮಾರ್ಕ 6.7–13)

**9** ಯೇಸುಸ್ವಾಮಿ ಹನ್ನೆರಡು ಮಂದಿ ಪ್ರೇಷಿತರನ್ನು ಒಟ್ಟಿಗೆ ಕರೆದು ಎಲ್ಲ ದೆವ್ವಗಳನ್ನು ಬಿಡಿಸಲೂ ರೋಗ
ನಿವಾರಣೆಮಾಡಲೂ ಅವರಿಗೆ ಶಕ್ತಿಯನ್ನು ಮತ್ತು ಅಧಿಕಾರವನ್ನು ಕೊಟ್ಟರು. 2ಅನಂತರ ದೇವರ
ಸಾಮ್ರಾಜ್ಯವನ್ನು ಕುರಿತು ಬೋಧಿಸುವುದಕ್ಕೂ ರೋಗಿಗಳನ್ನು ಗುಣಪಡಿಸುವುದಕ್ಕೂ ಅವರನ್ನು
ಕಳುಹಿಸಿದರು. 3ಕಳುಹಿಸುವಾಗ ಅವರಿಗೆ ಇಂತೆಂದರು, "ಪ್ರಯಾಣಕ್ಕೆಂದು ಏನನ್ನೂ ತೆಗೆದುಕೊಳ್ಳಬೇಡಿ;
ದಂಡ, ಜೋಳಿಗೆ, ಬುತ್ತಿ ಅಥವಾ ಹಣ ಯಾವುದೂ ಬೇಡ. ಎರಡು ಅಂಗಿಗಳೂ ಬೇಕಾಗಿಲ್ಲ. 4ಯಾವ
ಮನೆಯವರು ನಿಮ್ಮನ್ನು ಬರಮಾಡಿಕೊಳ್ಳುತ್ತಾರೋ ಆ ಮನೆಯಲ್ಲೇ ತಂಗಿರಿ. ಅಲ್ಲಿಂದಲೇ ಮುಂದಕ್ಕೆ
ಸಾಗಿರಿ. 5ಯಾವ ಊರಿನವರಾದರೂ ನಿಮ್ಮನ್ನು ಸ್ವಾಗತಿಸದೆ ಹೋದಲ್ಲಿ, ನೀವು ಆ ಊರನ್ನು
ಬಿಟ್ಟುಹೋಗುವಾಗ ನಿಮ್ಮ ಪಾದಕ್ಕೆ ಹತ್ತಿದ ಧೂಳನ್ನು ಕೂಡ ಝಾಡಿಸಿಬಿಡಿ. ಅದು ಅವರ ವಿರುದ್ಧ
ಸಾಕ್ಷಿಯಾಗಿರಲಿ," ಎಂದರು.

6 ಪ್ರೇಷಿತರು ಹೊರಟು ಹಳ್ಳಿಹಳ್ಳಿಗೂ ಹೋಗಿ ಎಲ್ಲ ಕಡೆ ಶುಭಸಂದೇಶವನ್ನು ಬೋಧಿಸಿದರು;
ರೋಗಿಗಳನ್ನು ಗುಣಪಡಿಸಿದರು.

## ಹೆರೋದನ ಹೆದರಿಕೆ

(ಮತ್ತಾ. 14.1–12; ಮಾರ್ಕ 6.14–29)

7 ನಡೆಯುತ್ತಿದ್ದ ಎಲ್ಲ ಸಂಗತಿಗಳು ಸಾಮಂತ ರಾಜ ಹೆರೋದನ ಕಿವಿಗೆ ಬಿದ್ದುವು. ಅವನ ಮನಸ್ಸು
ಕಳವಳಗೊಂಡಿತ್ತು. ಏಕೆಂದರೆ, 'ಯೊವಾನ್ನನು ಮರಳಿ ಜೀವಂತನಾಗಿ ಎದ್ದಿದ್ದಾನೆ' ಎಂದು ಕೆಲವರೂ,
8'ಎಲೀಯನು ಪುನಃ ಕಾಣಿಸಿಕೊಂಡಿದ್ದಾನೆ', ಎಂದು ಇನ್ನು ಕೆಲವರೂ, 'ಪ್ರಾಚೀನ ಪ್ರವಾದಿಗಳಲ್ಲಿ ಒಬ್ಬನು
ಮರಳಿ ಜೀವಂತನಾಗಿದ್ದಾನೆ,' ಎಂದು ಮತ್ತೆ ಕೆಲವರೂ ಹೇಳುತ್ತಿದ್ದರು. 9ಹೆರೋದನಾದರೋ,
'ಯೊವಾನ್ನನೇ ! ಅವನನ್ನು ನಾನೇ ಶಿರಚ್ಛೇದನ ಮಾಡಿಸಿದೆನಲ್ಲಾ; ಮತ್ತೆ ಇವನಾರು? ಇವನ ಬಗ್ಗೆ ಇಂಥಾ
ವಿಷಯಗಳನ್ನೆಲ್ಲ ಕೇಳುತ್ತಾ ಇರುವೆನಲ್ಲಾ!' ಎಂದುಕೊಂಡು, ಯೇಸುವನ್ನು ನೋಡಲು ಅವಕಾಶ
ಹುಡುಕುತ್ತಿದ್ದನು.

## ಆಹಾರ ವಿರಳ – ಭುಜಿಸಿದವರು ಬಹಳ

(ಮತ್ತಾ. 14.13–21; ಮಾರ್ಕ 6.30–44; ಯೊವಾ. 6.1–14)

10 ಇತ್ತ ಪ್ರೇಷಿತರು ಹಿಂದಿರುಗಿ ಬಂದು ತಾವು ಮಾಡಿದ್ದೆಲ್ಲವನ್ನೂ ಯೇಸುಸ್ವಾಮಿಗೆ ವರದಿ
ಮಾಡಿದರು. ಯೇಸು ಅವರನ್ನು ಪ್ರತ್ಯೇಕವಾಗಿ ಕರೆದುಕೊಂಡು ಬೆತ್ಸಾಯಿದ ಎಂಬ ಊರಿನತ್ತ ಹೋದರು.
11ಇದನ್ನು ತಿಳಿದುಕೊಂಡು ಜನಸಮೂಹವು ಅವರನ್ನು ಹಿಂಬಾಲಿಸಿತು. ಯೇಸು ಅವರನ್ನು ಸ್ವಾಗತಿಸಿ,
ದೇವರ ಸಾಮ್ರಾಜ್ಯದ ವಿಷಯವಾಗಿ ಹೇಳಿ, ಅಗತ್ಯವಿದ್ದವರಿಗೆ ಆರೋಗ್ಯದಾನ ಮಾಡಿದರು.

12 ಅಷ್ಟರಲ್ಲಿ ಸಾಯಂಕಾಲವಾಗುತ್ತಾ ಬಂದಿತು. ಹನ್ನೆರಡು ಮಂದಿ ಪ್ರೇಷಿತರು ಯೇಸುವಿನ ಬಳಿಗೆ
ಬಂದು, "ಇದು ನಿರ್ಜನ ಪ್ರದೇಶ, ಜನರನ್ನು ಕಳುಹಿಸಿಬಿಡಿ; ಅವರು ಸಮೀಪದ ಊರುಕೇರಿಗಳಿಗೆ ಹೋಗಿ
ಊಟವಸತಿಯನ್ನು ಒದಗಿಸಿಕೊಳ್ಳಲಿ," ಎಂದರು.

13 ಅದಕ್ಕೆ ಯೇಸು, "ನೀವೇ ಅವರಿಗೆ ಊಟಕ್ಕೆ ಏನಾದರು ಕೊಡಿ," ಎಂದರು. ಅವರು,
"ನಮ್ಮಲ್ಲಿರುವುದು ಐದು ರೊಟ್ಟಿ ಮತ್ತು ಎರಡು ಮೀನು ಮಾತ್ರ; ನಾವು ಹೋಗಿ ಇವರೆಲ್ಲರಿಗೆ ಬೇಕಾಗುವಷ್ಟು
ಊಟ ಕೊಂಡುಕೊಂಡು ಬರಬೇಕೆ?" ಎಂದರು. 14ಏಕೆಂದರೆ ಅಲ್ಲಿ ಗಂಡಸರೇ ಸುಮಾರು ಐದು ಸಾವಿರ
ಮಂದಿ ಇದ್ದರು. ಆಗ ಯೇಸು ಶಿಷ್ಯರಿಗೆ, "ಇವರನ್ನು ಐವತ್ತು ಐವತ್ತರಂತೆ ಪಂಕ್ತಿಯಾಗಿ ಕೂರಿಸಿರಿ,"
ಎಂದು ಹೇಳಲು, 15ಅವರು ಹಾಗೆಯೇ ಎಲ್ಲರನ್ನು ಕುಳ್ಳಿರಿಸಿದರು.

16 ಅನಂತರ ಯೇಸು ಐದು ರೊಟ್ಟಿಗಳನ್ನೂ ಎರಡು ಮೀನುಗಳನ್ನೂ ತೆಗೆದುಕೊಂಡು ಸ್ವರ್ಗದತ್ತ ಕಣ್ಣೆತ್ತಿ ನೋಡಿ, ದೇವರಿಗೆ ಸ್ತೋತ್ರ ಸಲ್ಲಿಸಿದರು. ತರುವಾಯ ಅವುಗಳನ್ನು ಮುರಿದು ಜನಸಮೂಹಕ್ಕೆ ಬಡಿಸುವಂತೆ ಶಿಷ್ಯರಿಗೆ ಕೊಟ್ಟರು. [17]ಎಲ್ಲರೂ ಹೊಟ್ಟೆತುಂಬ ತಿಂದು ಸಂತೃಪ್ತರಾದರು. ಇನ್ನು ಉಳಿದಿದ್ದ ತುಂಡುಗಳನ್ನು ಒಟ್ಟುಗೂಡಿಸಿದಾಗ ಅವು ಹನ್ನೆರಡು ಬುಟ್ಟಿ ತುಂಬ ಆದುವು.

### ಪೇತ್ರನ ವಿಶ್ವಾಸ ಪ್ರಕಟಣೆ ಮತ್ತು ಯೇಸುವಿನ ಮರಣದ ಮುನ್ಸೂಚನೆ

(ಮತ್ತಾ. 16.13–19; ಮಾರ್ಕ 8.27–29)

18 ಒಮ್ಮೆ ಯೇಸುಸ್ವಾಮಿ ಏಕಾಂಗಿಯಾಗಿ ಪ್ರಾರ್ಥನೆಮಾಡುತ್ತಿದ್ದಾಗ ಶಿಷ್ಯರು ಸಮೀಪದಲ್ಲೇ ಇದ್ದರು. “ಜನಸಾಮಾನ್ಯರು ನನ್ನನ್ನು ಯಾರೆನ್ನುತ್ತಾರೆ?” ಎಂದು ಯೇಸು ಅವರನ್ನು ಪ್ರಶ್ನಿಸಿದರು. [19]ಅದಕ್ಕೆ ಅವರು, “ಹಲವರು ತಮ್ಮನ್ನು ‘ಸ್ನಾನಿಕ ಯೊವಾನ್ನ’ ಎನ್ನುತ್ತಾರೆ; ಕೆಲವರು ‘ಎಲೀಯನು’ ಎನ್ನುತ್ತಾರೆ; ಮತ್ತೆ ಕೆಲವರು ‘ಪ್ರಾಚೀನ ಪ್ರವಾದಿಗಳಲ್ಲಿ ಒಬ್ಬನು ಮರಳಿ ಜೀವಂತನಾಗಿದ್ದಾನೆ’ ಎನ್ನುತ್ತಾರೆ,” ಎಂದು ಉತ್ತರವಿತ್ತರು.

20 ಆಗ ಯೇಸು, “ಆದರೆ ನೀವು ನನ್ನನ್ನು ಯಾರೆನ್ನುತ್ತೀರಿ?” ಎಂದು ಪುನಃ ಪ್ರಶ್ನಿಸಿದರು. ಅದಕ್ಕೆ ಪೇತ್ರನು, “ದೇವರಿಂದ ಅಭಿಷಿಕ್ತರಾದ ಲೋಕೋದ್ಧಾರಕ ತಾವೇ” ಎಂದು ಉತ್ತರಕೊಟ್ಟನು. [21]ಈ ವಿಷಯವನ್ನು ಯಾರಿಗೂ ತಿಳಿಸಬಾರದೆಂದು ಯೇಸು ಶಿಷ್ಯರನ್ನು ಆಜ್ಞಾಪೂರ್ವಕವಾಗಿ ಎಚ್ಚರಿಸಿದರು.

22 ಇದಲ್ಲದೆ, “ನರಪುತ್ರನು ಕಠಿಣವಾದ ಯಾತನೆಯನ್ನು ಅನುಭವಿಸಬೇಕಾಗಿದೆ. ಸಭಾ ಪ್ರಮುಖರಿಂದಲೂ ಮುಖ್ಯಯಾಜಕರಿಂದಲೂ ಧರ್ಮಶಾಸ್ತ್ರಿಗಳಿಂದಲೂ ಆತನು ತಿರಸ್ಕೃತನಾಗಿ ಕೊಲ್ಲಲ್ಪಡುವನು. ಆದರೆ ಮೂರನೇ ದಿನ ಆತನು ಪುನರುತ್ಥಾನ ಹೊಂದುವನು,” ಎಂದು ಅವರಿಗೆ ತಿಳಿಸಿದರು.

### ‘ನಾನು ಹೋದರೆ ಹೋಗಬಹುದು’

23 ಯೇಸುಸ್ವಾಮಿ ಎಲ್ಲರನ್ನು ನೋಡಿ ಹೇಳಿದ್ದೇನೆಂದರೆ: “ಯಾರಿಗಾದರೂ ನನ್ನನ್ನು ಹಿಂಬಾಲಿಸಲು ಮನಸ್ಸಿದ್ದರೆ, ಅವನು ತನ್ನನ್ನು ತಾನೇ ಪರಿತ್ಯಜಿಸಿ, ತನ್ನ ಶಿಲುಬೆಯನ್ನು ಅನುದಿನವೂ ಹೊತ್ತುಕೊಂಡು ನನ್ನನ್ನು ಹಿಂಬಾಲಿಸಲಿ. [24]ತನ್ನ ಪ್ರಾಣವನ್ನು ಉಳಿಸಿಕೊಳ್ಳಲು ಹಾತೊರೆಯುವವನು ಅದನ್ನು ಕಳೆದುಕೊಳ್ಳುವನು. ಆದರೆ ನನ್ನ ನಿಮಿತ್ತ ತನ್ನ ಪ್ರಾಣವನ್ನು ಕಳೆದುಕೊಳ್ಳುವವನು ಅದನ್ನು ನಿತ್ಯಕ್ಕೂ ಉಳಿಸಿಕೊಳ್ಳುವನು. [25]ಒಬ್ಬನು ಪ್ರಪಂಚವನ್ನೆಲ್ಲಾ ಗೆದ್ದುಕೊಂಡು ತನ್ನ ಪ್ರಾಣವನ್ನೇ ಕಳೆದುಕೊಂಡರೆ ಅಥವಾ ತೆತ್ತರೆ ಅವನಿಗೆ ಅದರಿಂದ ಬರುವ ಲಾಭವಾದರೂ ಏನು? [26]ಯಾರು ನನ್ನನ್ನೂ ನನ್ನ ಮಾತುಗಳನ್ನೂ ಕುರಿತು ನಾಚಿಕೆಪಡುತ್ತಾರೋ, ಅಂಥವರನ್ನು ಕುರಿತು ನರಪುತ್ರನು ಸಹ, ತನ್ನ ಪಿತನ ಹಾಗೂ ದೇವದೂತರ ಪ್ರಭಾವದೊಡನೆ ಬರುವಾಗ, ನಾಚಿಕೆಪಡುವನು.

27 “ಇಲ್ಲಿರುವವರಲ್ಲಿ ಕೆಲವರು, ದೇವರ ಸಾಮ್ರಾಜ್ಯವನ್ನು ನೋಡದೆ ಸಾವನ್ನು ಸವಿಯುವುದಿಲ್ಲವೆಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ,” ಎಂದರು.

### ಯೇಸುವಿನ ದಿವ್ಯದರ್ಶನ

(ಮತ್ತಾ. 17.1–8; ಮಾರ್ಕ 9.2–8)

28 ಇದನ್ನೆಲ್ಲ ಹೇಳಿ ಸುಮಾರು ಎಂಟು ದಿನಗಳಾದ ಬಳಿಕ ಪೇತ್ರ, ಯೊವಾನ್ನ ಮತ್ತು ಯಕೋಬ ಇವರನ್ನು ತಮ್ಮೊಡನೆ ಕರೆದುಕೊಂಡು ಯೇಸುಸ್ವಾಮಿ ಪ್ರಾರ್ಥನೆಮಾಡಲು ಬೆಟ್ಟವನ್ನು ಹತ್ತಿದರು. [29]ಪ್ರಾರ್ಥನೆಮಾಡುವ ಸಮಯದಲ್ಲಿ ಯೇಸುವಿನ ಮುಖಚರ್ಯೆಯು ಮಾರ್ಪಟ್ಟಿತು. ಅವರ ಉಡುಪು ಬೆಳ್ಳಗೆ ಪ್ರಜ್ವಲಿಸಿತು.

30 ಇದ್ದಕಿದ್ದ ಹಾಗೆ ಮೋಶೆ ಮತ್ತು ಎಲೀಯ ಎಂಬ ಇಬ್ಬರು ಪ್ರವಾದಿಗಳು ಅವರೊಡನೆ ಮಾತನಾಡುತ್ತಿದ್ದರು. [31]ದಿವ್ಯ ವೈಭವದಿಂದ ಕಂಗೊಳಿಸುತ್ತಿದ್ದ ಇವರಿಬ್ಬರು ಯೇಸು ಜೆರುಸಲೇಮಿನಲ್ಲಿ

ಪ್ರಾಣತ್ಯಾಗಮಾಡಿ ದೈವೇಚ್ಛೆಯನ್ನು ನೆರವೇರಿಸಲಿದ್ದ ವಿಷಯವಾಗಿ ಸಂಭಾಷಿಸುತ್ತಿದ್ದರು. [32]ಗಾಢ
ನಿದ್ರೆಯಲ್ಲಿದ್ದ ಪೇತ್ರ ಮತ್ತು ಸಂಗಡಿಗರು ಎಚ್ಚೆತ್ತಾಗ ಯೇಸುವಿನ ಮಹಿಮೆಯನ್ನೂ ಅವರೊಡನೆ ನಿಂತಿದ್ದ
ಆ ಇಬ್ಬರನ್ನೂ ಕಂಡರು. [33]ಅವರಿಬ್ಬರೂ ಯೇಸುವನ್ನು ಬಿಟ್ಟುಹೋಗುತ್ತಿರುವಾಗ, ಪೇತ್ರನು ಯೇಸುವಿಗೆ,
"ಗುರುದೇವಾ, ನಾವು ಇಲ್ಲೇ ಇರುವುದು ಒಳ್ಳೆಯದು; ಅಪ್ಪಣೆಯಾಗಲಿ, ಮೂರು ಗುಡಾರಗಳನ್ನು ಕಟ್ಟುವೆವು
– ತಮಗೊಂದು, ಮೋಶೆಗೊಂದು ಮತ್ತು ಎಲೀಯನಿಗೊಂದು," ಎಂದನು. ತಾನು ಏನು
ಹೇಳುತ್ತಿರುವೆನೆಂದೇ ಪೇತ್ರನು ಗ್ರಹಿಸಲಿಲ್ಲ. [34]ಆತನು ಇದನ್ನು ಹೇಳುತ್ತಿದ್ದ ಹಾಗೆ ಮೇಘವೊಂದು ಬಂದು
ಅವರನ್ನಾವರಿಸಿತು. ಆ ಮೇಘದಲ್ಲಿ ಅವರು ಅದೃಶ್ಯರಾದಾಗ ಶಿಷ್ಯರು ದಿಗಿಲುಗೊಂಡರು. [35]ಅದರೊಳಗಿಂದ,
"ಈತನು ನನ್ನ ಪುತ್ರನು; ನಾನು ಆರಿಸಿಕೊಂಡವನು. ಈತನ ಮಾತಿಗೆ ಕಿವಿಕೊಡಿರಿ," ಎಂಬ ವಾಣಿ
ಕೇಳಿಸಿತು. [36]ಆ ವಾಣಿ ಆದಮೇಲೆ ಕಾಣಿಸಿಕೊಂಡವರು ಯೇಸು ಮಾತ್ರ.
ಶಿಷ್ಯರು ತಾವು ನೋಡಿದ್ದನ್ನು ಕುರಿತು ಆ ದಿನಗಳಲ್ಲಿ ಏನನ್ನೂ ಹೇಳದೆ, ಯಾರಿಗೂ ತಿಳಿಸದೆ, ತತ್ಕಾಲ
ಮೌನದಿಂದ ಇದ್ದರು.

## ದೆವ್ವ ಹಿಡಿದ ಬಾಲಕನಿಗೆ ಬಿಡುಗಡೆ

(ಮತ್ತಾ. 17.14–18; ಮಾರ್ಕ 9.14–27)

37 ಮಾರನೇ ದಿನ ಯೇಸುಸ್ವಾಮಿ ಮತ್ತು ಮೂವರು ಶಿಷ್ಯರು ಬೆಟ್ಟದಿಂದ ಇಳಿದು ಬಂದಾಗ,
ದೊಡ್ಡ ಗುಂಪೊಂದು ಅವರನ್ನು ಎದುರುಗೊಂಡಿತು. [38]ಆ ಗುಂಪಿನಲ್ಲಿದ್ದ ಒಬ್ಬನು, "ಬೋಧಕರೇ, ನನ್ನ
ಮಗನನ್ನು ಕಟಾಕ್ಷಿಸಿರಿ, ನನಗೆ ಇವನೊಬ್ಬನೇ ಮಗ. [39]ಇವನನ್ನು ದೆವ್ವ ಹಿಡಿಯುತ್ತದೆ. ಆಗ ಇದ್ದಕಿದ್ದ ಹಾಗೆ
ಕಿರುಚಿಕೊಳ್ಳುತ್ತಾನೆ; ವಿಲವಿಲನೆ ಒದ್ದಾಡುತ್ತಾನೆ; ಬಾಯಲ್ಲಿ ನೊರೆ ಕಿತ್ತುಕೊಳ್ಳುತ್ತದೆ; ಆ ದೆವ್ವವು ಇವನನ್ನು
ನಿಶ್ಶಕ್ತನನ್ನಾಗಿ ಮಾಡಿಬಿಡುವ ತನಕ ಬಿಟ್ಟುಹೋಗುವುದೇ ಇಲ್ಲ. [40]ಅದನ್ನು ಬಿಡಿಸಬೇಕೆಂದು ತಮ್ಮ ಶಿಷ್ಯರನ್ನು
ಬೇಡಿಕೊಂಡೆ; ಆದರೆ ಅವರಿಂದ ಸಾಧ್ಯವಾಗಲಿಲ್ಲ," ಎಂದು ಕೂಗಿ ಕೇಳಿಕೊಂಡನು. [41]ಇದನ್ನಾಲಿಸಿದ
ಯೇಸು, "ಅಯ್ಯೋ, ವಿಶ್ವಾಸವಿಲ್ಲದ ದುಷ್ಟ ಪೀಳಿಗೆಯೇ, ಇನ್ನೆಷ್ಟು ಕಾಲ ನಿಮ್ಮೊಂದಿಗಿದ್ದು ನಿಮ್ಮನ್ನು
ಸಹಿಸಿಕೊಳ್ಳಲಿ?" ಎಂದು ಹೇಳಿ, "ನಿನ್ನ ಮಗನನ್ನು ಇಲ್ಲಿಗೆ ಕರೆದುಕೊಂಡು ಬಾ," ಎಂದು ಆಜ್ಞಾಪಿಸಿದರು.
[42]ಆ ಹುಡುಗನು ಬರುತ್ತಿರುವಾಗಲೇ ದೆವ್ವವು ಅವನನ್ನು ನೆಲಕ್ಕೆ ಅಪ್ಪಳಿಸಿ ವಿಲವಿಲನೆ ಒದ್ದಾಡಿಸಿತು. ಆಗ
ಯೇಸು ದೆವ್ವವನ್ನು ಗದರಿಸಿ, ಹುಡುಗನನ್ನು ಸ್ವಸ್ಥಮಾಡಿ, ಅವನನ್ನು ಅವನ ತಂದೆಗೆ ಒಪ್ಪಿಸಿದರು. [43]ದೇವರ
ಮಹತ್ವವನ್ನು ಕಂಡ ಎಲ್ಲರೂ ಆಶ್ಚರ್ಯಚಕಿತರಾದರು.

## ಯೇಸುವಿನ ಮರಣದ ಮತ್ತೊಂದು ಮುನ್ಸೂಚನೆ

(ಮತ್ತಾ. 17.22–23; ಮಾರ್ಕ 9.30–32)

ಯೇಸುಸ್ವಾಮಿ ಮಾಡಿದ ಸಕಲ ಮಹತ್ಕಾರ್ಯಗಳನ್ನು ಕುರಿತು ಜನರೆಲ್ಲರೂ
ಸೋಜಿಗಪಡುತ್ತಿರುವಲ್ಲಿ, ಶಿಷ್ಯರಿಗೆ, [44]"ಈ ನನ್ನ ಮಾತು ನಿಮ್ಮ ಕಿವಿಗೆ ಇಳಿಯಲಿ. ಅದೇನೆಂದರೆ:
"ನರಪುತ್ರನು ಜನರ ವಶಕ್ಕೆ ಒಪ್ಪಿಸಲ್ಪಡಲಿದ್ದಾನೆ," ಎಂದರು. [45]ಯೇಸು ಹೇಳಿದ ಈ ಮಾತನ್ನು ಶಿಷ್ಯರು
ಗ್ರಹಿಸಿಕೊಳ್ಳಲಿಲ್ಲ; ಒಗಟಿನ ಹಾಗೆ ಇದ್ದುದರಿಂದ ಅರ್ಥಮಾಡಿಕೊಳ್ಳಲಿಲ್ಲ. ಅದನ್ನು ಕುರಿತು ಯೇಸುವನ್ನು
ಕೇಳುವುದಕ್ಕೂ ಅವರು ಅಂಜಿದರು.

## ಅತ್ಯಲ್ಪನೇ ಅತ್ಯುತ್ತಮನು

(ಮತ್ತಾ. 18.1–5; ಮಾರ್ಕ 9.33–37)

46 ಒಮ್ಮೆ ತಮ್ಮಲ್ಲಿ ಅತಿ ಶ್ರೇಷ್ಠನು ಯಾರೆಂಬ ವಾದ ಶಿಷ್ಯರಲ್ಲಿ ಎದ್ದಿತು. [47]ಅವರ ಮನಸ್ಸಿನ
ಆಲೋಚನೆಗಳನ್ನು ಅರಿತ ಯೇಸು, ಒಂದು ಚಿಕ್ಕ ಮಗುವನ್ನು ತಂದು ತಮ್ಮ ಪಕ್ಕದಲ್ಲಿ ನಿಲ್ಲಿಸಿಕೊಂಡು,
[48]"ಯಾವನು ನನ್ನ ಹೆಸರಿನಲ್ಲಿ ಈ ಮಗುವನ್ನು ಸ್ವೀಕರಿಸುತ್ತಾನೋ ಅವನು ನನ್ನನ್ನೇ ಸ್ವೀಕರಿಸುತ್ತಾನೆ;

ಯಾವನು ನನ್ನನ್ನು ಸ್ವೀಕರಿಸುತ್ತಾನೋ ಅವನು ನನ್ನನ್ನು ಕಳುಹಿಸಿದಾತನನ್ನೇ ಸ್ವೀಕರಿಸುತ್ತಾನೆ. ನಿಮ್ಮೆಲ್ಲರಲ್ಲಿ ಅತ್ಯಲ್ಪನಾದವನೇ ಅತ್ಯುತ್ತಮನು," ಎಂದರು.

### ಶತ್ರುವಲ್ಲದವನು ಮಿತ್ರನು

(ಮತ್ತಾ. 9.38–40)

49 ಆಗ ಯೊವಾನ್ನನು ಯೇಸುವಿಗೆ, "ಗುರುವೇ, ಯಾವನೋ ಒಬ್ಬನು ತಮ್ಮ ಹೆಸರಿನಲ್ಲಿ ದೆವ್ವ
ಬಿಡಿಸುವುದನ್ನು ಕಂಡೆವು. ಅವನು ನಮ್ಮವನಲ್ಲದ ಕಾರಣ ಅವನನ್ನು ತಡೆದೆವು," ಎಂದನು. [50]ಅದಕ್ಕೆ
ಯೇಸು, "ಅವನನ್ನು ತಡೆಯಬೇಡಿ, ನಿಮ್ಮ ವಿರೋಧಿ ಅಲ್ಲದವನು ನಿಮ್ಮ ಪರವಾದಿ," ಎಂದು
ಉತ್ತರಕೊಟ್ಟರು.

### ಸಮಾರಿಯದವರು ತೋರಿದ ತಾತ್ಸಾರ

51 ತಾವು ಸ್ವರ್ಗಾರೋಹಣವಾಗುವ ದಿನಗಳು ಸಮೀಪಿಸಲು ಯೇಸುಸ್ವಾಮಿ ಜೆರುಸಲೇಮಿಗೆ
ಅಭಿಮುಖವಾಗಿ ಹೊರಡಲು ನಿರ್ಧರಿಸಿದರು. [52]ಅಲ್ಲದೆ ತಮಗೆ ಮುಂದಾಗಿ ದೂತರನ್ನು ಕಳುಹಿಸಿದರು.
ಇವರು ಹೊರಟು ಯೇಸುವಿಗೆ ಬೇಕಾದುದನ್ನು ಸಿದ್ಧಮಾಡಲು ಸಮಾರಿಯದ ಒಂದು ಹಳ್ಳಿಗೆ ಬಂದರು.
[53]ಯೇಸು ಜೆರುಸಲೇಮಿಗೆ ಹೋಗುತ್ತಿದ್ದ ಕಾರಣ ಅವರನ್ನು ಅಲ್ಲಿಯ ಜನರು ಬರಗೊಳಿಸಲಿಲ್ಲ. [54]ಇದನ್ನು
ಕಂಡು ಶಿಷ್ಯರಾದ ಯಕೋಬ ಮತ್ತು ಯೊವಾನ್ನ, "ಪ್ರಭೂ, ಆಕಾಶದಿಂದ ಅಗ್ನಿಮಳೆ ಸುರಿದು ಇವರನ್ನು
ನಾಶ ಮಾಡಲಿ ಎಂದು ನಾವು ಆಜ್ಞೆಮಾಡಬಹುದಲ್ಲವೇ?" ಎಂದರು. [55]ಯೇಸು ಅವರ ಕಡೆ ತಿರುಗಿ,
"ನೀವು ಎಂಥ ಸ್ವಭಾವಿಗಳೆಂದು ನಿಮಗೇ ತಿಳಿಯದು. ನರಪುತ್ರನು ಬಂದಿರುವುದು ಮಾನವ ಜೀವಿಗಳ
ವಿನಾಶಕ್ಕೆ ಅಲ್ಲ, ಉದ್ಧಾರಕ್ಕೆ" ಎಂದು ಅವರನ್ನು ಖಂಡಿಸಿದರು. [56]ಅನಂತರ ಯೇಸು ಮತ್ತು ಶಿಷ್ಯರು ಬೇರೆ
ಹಳ್ಳಿಗೆ ಹೋದರು.

### ಅನುಯಾಯಿಗಳು ತ್ಯಜಿಸಬೇಕಾದ ಅಂಟುನಂಟು

(ಮತ್ತಾ. 8.19–22)

57 ಅವರೆಲ್ಲರೂ ದಾರಿಯಲ್ಲಿ ಹೋಗುತ್ತಿದ್ದಾಗ ಒಬ್ಬನು ಯೇಸುವಿಗೆ, "ನೀವು ಎಲ್ಲಿಗೆ ಹೋದರೂ
ನಿಮ್ಮನ್ನು ಹಿಂಬಾಲಿಸುತ್ತೇನೆ," ಎಂದನು. [58]ಯೇಸು ಅವನಿಗೆ, "ನರಿಗಳಿಗೆ ಗುಹೆಗಳುಂಟು; ಆಕಾಶದ
ಪಕ್ಷಿಗಳಿಗೆ ಗೂಡುಗಳುಂಟು; ಆದರೆ ನರಪುತ್ರನಿಗೆ ತಲೆಯಿಡುವುದಕ್ಕೂ ಸ್ಥಳವಿಲ್ಲ," ಎಂದರು. [59]ಇನ್ನೊಬ್ಬನಿಗೆ
ಯೇಸು, "ನನ್ನನ್ನು ಹಿಂಬಾಲಿಸು," ಎಂದು ಹೇಳಿದಾಗ ಅವನು, "ಸ್ವಾಮಿ, ಮೊದಲು ನನ್ನ ತಂದೆಯ
ಉತ್ತರಕ್ರಿಯೆಗಳನ್ನು ಮುಗಿಸುವ ತನಕ ಸಮಯಕೊಡಿ," ಎಂದನು. [60]ಅವನಿಗೆ ಯೇಸು, "ಸತ್ತವರೇ ತಮ್ಮ
ಸತ್ತವರನ್ನು ಸಮಾಧಿಮಾಡಿಕೊಳ್ಳಲಿ; ನೀನಾದರೋ, ಹೋಗು, ದೇವರ ಸಾಮ್ರಾಜ್ಯವನ್ನು ಪ್ರಚಾರಮಾಡು,"
ಎಂದು ಹೇಳಿದರು. [61]ಮತ್ತೊಬ್ಬನು, "ನಿಮ್ಮನ್ನು ಹಿಂಬಾಲಿಸುತ್ತೇನೆ ಪ್ರಭೂ, ಆದರೆ ಮೊದಲು
ಮನೆಯವರನ್ನು ಬೀಳ್ಕೊಟ್ಟು ಬರಲು ಅಪ್ಪಣೆ ಆಗಬೇಕು," ಎಂದನು. ಯೇಸು ಅವನನ್ನು ನೋಡಿ,
"ನೇಗಿಲಿಗೆ ಕೈಹಾಕಿ ಹಿಂದಕ್ಕೆ ನೋಡುವವನು ದೇವರ ಸಾಮ್ರಾಜ್ಯಕ್ಕೆ ತಕ್ಕವನಲ್ಲ," ಎಂದರು.

### ಎಪ್ಪತ್ತೆರಡು ಮಂದಿಯ ನಿಯೋಗ

**10** ಇದಾದ ಮೇಲೆ, ಯೇಸುಸ್ವಾಮಿ ಇನ್ನೂ ಎಪ್ಪತ್ತೆರಡು ಮಂದಿಯನ್ನು ನೇಮಿಸಿ ಅವರನ್ನು
ಇಬ್ಬಿಬ್ಬರನ್ನಾಗಿ ತಾವೇ ಹೋಗಲಿದ್ದ ಊರುಗಳಿಗೂ ಸ್ಥಳಗಳಿಗೂ ಮುಂದಾಗಿ ಕಳಿಸಿದರು. [2]ಕಳುಹಿಸುವಾಗ
ಅವರಿಗೆ ಹೇಳಿದ್ದೇನೆಂದರೆ, "ಬೆಳೆಯೇನೋ ಹೇರಳವಾಗಿದೆ; ಕೊಯ್ಲುಗಾರರೋ ವಿರಳ. ಆದುದರಿಂದ
ಕೊಯ್ಲಿಗೆ ಆಳುಗಳನ್ನು ಕಳುಹಿಸುವಂತೆ ಬೆಳೆಯ ಯಜಮಾನನನ್ನು ಬೇಡಿಕೊಳ್ಳಿ. [3]ಹೋಗಿರಿ, ತೋಳಗಳ

ನಡುವೆ ಕುರಿಮರಿಗಳನ್ನು ಬಿಟ್ಟಂತೆ ನಾನು ನಿಮ್ಮನ್ನು ಕಳುಹಿಸುತ್ತೇನೆ. 4ಹಣದ ಚೀಲವನ್ನಾಗಲಿ,
ಜೋಳಿಗೆಯನ್ನಾಗಲಿ, ಪಾದರಕ್ಷೆಗಳನ್ನಾಗಲಿ ತೆಗೆದುಕೊಂಡು ಹೋಗದಿರಿ. ದಾರಿಯಲ್ಲಿ ಯಾರಿಗೂ
ವಂದನೋಪಚಾರಗಳನ್ನು ಮಾಡಿಕೊಂಡಿರಬೇಡಿ. 5ನೀವು ಯಾವ ಮನೆಗೆ ಹೋದರೂ, 'ಈ ಮನೆಗೆ
ಶಾಂತಿ,' ಎಂದು ಆಶೀರ್ವಾದ ಮಾಡಿ, 6ಶಾಂತಿಪ್ರಿಯನು ಅಲ್ಲಿದ್ದರೆ ನಿಮ್ಮ ಆಶೀರ್ವಾದವು ಅವನ ಮೇಲೆ
ನೆಲೆಸುವುದು. ಇಲ್ಲವಾದರೆ, ಅದು ನಿಮಗೆ ಹಿಂದಿರುಗುವುದು. 7ಮನೆಯಿಂದ ಮನೆಗೆ ಹೋಗದೆ ಆ
ಮನೆಯಲ್ಲೇ ತಂಗಿದ್ದು, ಅಲ್ಲಿಯವರು ಕೊಡುವ ಅನ್ನಪಾನೀಯಗಳನ್ನು ಸೇವಿಸಿರಿ. ದುಡಿಮೆಗಾರನು ಕೂಲಿಗೆ
ಬಾಧ್ಯನು.

8 "ನೀವು ಯಾವ ಊರಿಗೆ ಹೋದರೂ ಜನರು ನಿಮ್ಮನ್ನು ಸ್ವಾಗತಿಸಿದಾಗ, ಅವರು ಬಡಿಸಿದ್ದನ್ನು
ಭುಜಿಸಿರಿ. 9ಅಲ್ಲಿರುವ ರೋಗಿಗಳನ್ನು ಗುಣಪಡಿಸಿರಿ. 'ದೇವರ ಸಾಮ್ರಾಜ್ಯ ನಿಮ್ಮನ್ನು ಸಮೀಪಿಸಿದೆ,' ಎಂದು
ತಿಳಿಸಿರಿ. 10ಆದರೆ ನೀವು ಹೋಗುವ ಊರಿನ ಜನರು ನಿಮ್ಮನ್ನು ಸ್ವಾಗತಿಸದೆ ಹೋದರೆ, ರಸ್ತೆಗಳಿಗೆ ಹೋಗಿ,
11'ನಮ್ಮ ಪಾದಗಳಿಗೆ ಅಂಟಿರುವ ನಿಮ್ಮ ಊರಿನ ಧೂಳನ್ನು ಕೂಡ ನಿಮಗೆ ವಿರುದ್ಧವಾಗಿ ಒದರಿಬಿಡುತ್ತೇವೆ.
ಆದರೂ ದೇವರ ಸಾಮ್ರಾಜ್ಯ ಸಮೀಪಿಸಿದೆ ಎಂಬುದನ್ನು ಮಾತ್ರ ನೀವು ಗಮನದಲ್ಲಿಡಿ,' ಎಂದು ತಿಳಿಸಿರಿ.
12ತೀರ್ಪಿನ ದಿನ ಈ ಊರಿನ ಗತಿ ಸೊದೋಮ್ ಊರಿನ ಗತಿಗಿಂತಲೂ ಕಠಿಣವಾಗಿರುವುದೆಂದು ನಾನು
ನಿಮಗೆ ಹೇಳುತ್ತೇನೆ.

### ಅವಿಶ್ವಾಸಿಗಳ ಅಧೋಗತಿ

(ಮತ್ತಾ. 11.20–24)

13 "ಕೊರಾಜ್ಜಿನ್ ಪಟ್ಟಣವೇ, ನಿನಗೆ ಧಿಕ್ಕಾರ! ಬೆತ್ಸಾಯಿದ ಪಟ್ಟಣವೇ, ನಿನಗೆ ಧಿಕ್ಕಾರ! ನಿಮ್ಮಲ್ಲಿ
ಮಾಡಿದ ಅದ್ಭುತ ಕಾರ್ಯಗಳನ್ನು ಟೈರ್ ಮತ್ತು ಸಿದೋನ್ ಪಟ್ಟಣಗಳಲ್ಲಿ ಮಾಡಿದ್ದರೆ, ಅಲ್ಲಿಯವರು
ಎಂದೋ ಗೋಣಿತಟ್ಟನ್ನು ಉಟ್ಟುಕೊಂಡು, ಬೂದಿಯನ್ನು ಬಳಿದುಕೊಂಡು ಪಶ್ಚಾತ್ತಾಪಪಟ್ಟು ಪಾಪಕ್ಕೆ
ವಿಮುಖರಾಗುತ್ತಿದ್ದರು. 14ಆದುದರಿಂದ ತೀರ್ಪಿನ ದಿನ ಟೈರ್ ಮತ್ತು ಸಿದೋನಿನ ಗತಿಯು ನಿಮಗಿಂತಲೂ
ಸಹನೀಯವಾಗಿರುವುದು. 15ಎಲೈ ಕಫೆರ್ನವುಮ್ ಪಟ್ಟಣವೇ, ನೀನು ಸ್ವರ್ಗಕ್ಕೇರುವೆ ಎಂದು
ನೆನಸುತ್ತಿಯೋ? ಇಲ್ಲ, ಪಾತಾಳಕ್ಕೆ ಇಳಿಯುವೆ," ಎಂದರು ಯೇಸುಸ್ವಾಮಿ.

16 ಅನಂತರ ತಮ್ಮ ಶಿಷ್ಯರನ್ನು ಉದ್ದೇಶಿಸಿ, "ನಿಮ್ಮನ್ನು ಆಲಿಸುವವನು ನನ್ನನ್ನೇ ಆಲಿಸುತ್ತಾನೆ;
ನಿಮ್ಮನ್ನು ಅಲಕ್ಷ್ಯಮಾಡುವವನು ನನ್ನನ್ನೇ ಅಲಕ್ಷ್ಯಮಾಡುತ್ತಾನೆ; ನನ್ನನ್ನು ಅಲಕ್ಷ್ಯಮಾಡುವವನಾದರೋ
ನನ್ನನ್ನು ಕಳುಹಿಸಿದಾತನನ್ನೇ ಅಲಕ್ಷ್ಯ ಮಾಡುತ್ತಾನೆ," ಎಂದರು.

### ಎಪ್ಪತ್ತೆರಡು ಮಂದಿ ನಿಯೋಗದ ವರದಿ

17 ಕಳುಹಿಸಲಾಗಿದ್ದ ಎಪ್ಪತ್ತೆರಡು ಮಂದಿ ಸಂತೋಷಭರಿತರಾಗಿ ಹಿಂದಿರುಗಿ ಬಂದು, "ಸ್ವಾಮಿ,
ನಿಮ್ಮ ಹೆಸರಿನಲ್ಲಿ ಆಜ್ಞೆಮಾಡಿದಾಗ ದೆವ್ವಗಳು ಕೂಡ ನಮಗೆ ಅಧೀನವಾಗುತ್ತವೆ," ಎಂದು ವರದಿ
ಮಾಡಿದರು. 18ಅದಕ್ಕೆ ಯೇಸು, "ಸೈತಾನನು ಆಕಾಶದಿಂದ ಸಿಡಿಲಿನಂತೆ ಬೀಳುವುದನ್ನು ಕಂಡೆನು. 19ಇಗೋ,
ಸರ್ಪಗಳನ್ನು ಹಾಗೂ ಚೇಳುಗಳನ್ನು ತುಳಿಯುವುದಕ್ಕೂ ಶತ್ರುವಿನ ಸಮಸ್ತ ಶಕ್ತಿಯನ್ನು ಜಯಿಸುವುದಕ್ಕೂ
ನಿಮಗೆ ಅಧಿಕಾರ ಕೊಟ್ಟಿದ್ದೇನೆ. ಯವುದೂ ನಿಮಗೆ ಹಾನಿಮಾಡದು. 20ಆದರೂ ದೆವ್ವಗಳು ನಿಮಗೆ
ಅಧೀನವಾಗಿವೆಯೆಂದು ಸಂತೋಷಪಡುವುದಕ್ಕಿಂತ ನಿಮ್ಮ ಹೆಸರುಗಳು ಸ್ವರ್ಗದಲ್ಲಿ ಲಿಖಿತವಾಗಿವೆ ಎಂದು
ಸಂತೋಷಪಡಿ," ಎಂದು ಹೇಳಿದರು.

### ಯೇಸುವಿನ ಸಂತಸ

(ಮತ್ತಾ. 11.25–27, 13.16–17)

21 ಅದೇ ಗಳಿಗೆಯಲ್ಲಿ ಯೇಸುಸ್ವಾಮಿ ಪವಿತ್ರಾತ್ಮರಿಂದ ಹರ್ಷಾವೇಶಗೊಂಡು, "ಪಿತನೇ,
ಭೂಸ್ವರ್ಗಗಳ ಒಡೆಯನೇ, ಈ ವಿಷಯಗಳನ್ನು ಜ್ಞಾನಿಗಳಿಗೂ ಮೇಧಾವಿಗಳಿಗೂ ಮರೆಮಾಡಿ,

ಮಕ್ಕಳಂಥವರಿಗೆ ನೀವು ಶ್ರುತಪಡಿಸಿದ್ದೀರಿ; ಇದಕ್ಕಾಗಿ ನಿಮ್ಮನ್ನು ವಂದಿಸುತ್ತೇನೆ. ಹೌದು ಪಿತನೇ, ಇದೇ
ನಿಮ್ಮ ಸುಪ್ರೀತ ಸಂಕಲ್ಪ. [22]ನನ್ನ ಪಿತ ಸಮಸ್ತವನ್ನೂ ನನ್ನ ವಶಕ್ಕೆ ಒಪ್ಪಿಸಿದ್ದಾರೆ. ಪುತ್ರನು ಯಾರೆಂದು ಪಿತನ
ಹೊರತು ಬೇರಾರೂ ಅರಿಯರು. ಪಿತನು ಯಾರೆಂದು ಪುತ್ರನು ಮತ್ತು ಯಾರಿಗೆ ಪುತ್ರನು ಅವರನ್ನು
ಶ್ರುತಪಡಿಸಲು ಇಚ್ಛೈಸುತ್ತಾನೋ ಅವರೇ ಹೊರತು ಮತ್ತಾರೂ ಅರಿಯರು," ಎಂದು ಹೇಳಿದರು.
[23]ಅನಂತರ ಯೇಸು ಶಿಷ್ಯರ ಕಡೆ ತಿರುಗಿ, ಅವರಿಗೆ ಪ್ರತ್ಯೇಕವಾಗಿ, "ನೀವು ಕಾಣುವುದನ್ನು ಕಾಣುವ
ಕಣ್ಣುಗಳು ಭಾಗ್ಯವುಳ್ಳವು. [24]ಏಕೆಂದರೆ, ಎಷ್ಟೋ ಪ್ರವಾದಿಗಳು ಹಾಗೂ ಅರಸರು ನೀವು ನೋಡುವುದನ್ನು
ನೋಡುವುದಕ್ಕೂ, ನೀವು ಕೇಳುವುದನ್ನು ಕೇಳುವುದಕ್ಕೂ ಆಶಿಸಿದರು. ಆದರೂ ಅದನ್ನು ಅವರು ನೋಡಲೂ
ಇಲ್ಲ, ಕಾಣಲೂ ಇಲ್ಲ ಎಂದು ನಿಮಗೆ ಹೇಳುತ್ತೇನೆ," ಎಂದರು.

## ಸದಯ ಸಮಾರಿತನ ಸಾಮತಿ

25 ಒಬ್ಬ ಶಾಸ್ತ್ರಜ್ಞನು ಎದ್ದು ಯೇಸುಸ್ವಾಮಿಯನ್ನು ಪರೀಕ್ಷಿಸುವ ಉದ್ದೇಶದಿಂದ "ಬೋಧಕರೇ,
ಅಮರಜೀವ ನನಗೆ ಪ್ರಾಪ್ತಿ ಆಗಬೇಕಾದರೆ ನಾನು ಮಾಡಬೇಕಾದುದು ಏನು?" ಎಂದು ಕೇಳಿದನು. [26]ಅದಕ್ಕೆ
ಯೇಸು, "ಧರ್ಮಶಾಸ್ತ್ರದಲ್ಲಿ ಏನು ಬರೆದಿದೆ? ಹೇಗೆ ಪಠಿಸುತ್ತೀಯೆ?" ಎಂದು ಮರುಪ್ರಶ್ನೆ ಹಾಕಿದರು.
[27]ಅವನು, " 'ನಿನ್ನ ಸರ್ವೇಶ್ವರನಾದ ದೇವರನ್ನು ನಿನ್ನ ಪೂರ್ಣ ಹೃದಯದಿಂದಲೂ ನಿನ್ನ ಪೂರ್ಣ
ಆತ್ಮದಿಂದಲೂ ನಿನ್ನ ಪೂರ್ಣ ಶಕ್ತಿಯಿಂದಲೂ ನಿನ್ನ ಪೂರ್ಣ ಮನಸ್ಸಿನಿಂದಲೂ ಪ್ರೀತಿಸು ಮತ್ತು ನಿನ್ನನ್ನು
ನೀನೇ ಪ್ರೀತಿಸಿಕೊಳ್ಳುವಂತೆ ನಿನ್ನ ನೆರೆಯವನನ್ನೂ ಪ್ರೀತಿಸು' ಎಂದಿದೆ," ಎಂದು ಉತ್ತರಕೊಟ್ಟನು.
[28]ಯೇಸು, "ಸರಿಯಾಗಿ ಉತ್ತರಕೊಟ್ಟೆ. ಅದರಂತೆ ಮಾಡು. ನಿನಗೆ ಅಮರಜೀವ ಲಭಿಸುವುದು," ಎಂದನು.
29 ಆದರೆ ಆ ಶಾಸ್ತ್ರಜ್ಞನು ತನ್ನನ್ನು ತಾನೇ ಸಮರ್ಥಿಸಿಕೊಳ್ಳಲು, "ನನ್ನ ನೆರೆಯವನು ಯಾರು?"
ಎಂದು ಯೇಸುವನ್ನು ಮತ್ತೆ ಪ್ರಶ್ನಿಸಿದನು. [30]ಯೇಸು ಅವನಿಗೆ ಹೀಗೆಂದು ವಿವರಿಸಿದರು:
"ಒಬ್ಬನು ಜೆರುಸಲೇಮಿನಿಂದ ಇಳಿದು ಜೆರಿಕೋವಿಗೆ ಪ್ರಯಾಣ ಮಾಡುತ್ತಿದ್ದಾಗ, ದರೋಡೆಗಾರರ
ಕೈಗೆ ಸಿಕ್ಕಿಬಿದ್ದ. ದರೋಡೆಗಾರರು ಅವನನ್ನು ಸುಲಿಗೆ ಮಾಡಿ, ಹೊಡೆದು ಬಡಿದು, ಅರೆಜೀವ ಮಾಡಿ, ಅಲ್ಲೇ
ಬಿಟ್ಟುಹೋದರು. [31]ಅದೇ ಮಾರ್ಗವಾಗಿ ಒಬ್ಬ ಯಾಜಕನು ಹಾದು ಹೋಗಬೇಕಾಗಿ ಬಂದಿತು. ಈತನು,
ಅವನನ್ನು ಕಂಡದ್ದೇ ಆಚೆ ಬಳಸಿಕೊಂಡು ಹೋದ. [32]ಹಾಗೆಯೇ ಲೇವಿಯೊಬ್ಬನು ಆ ಸ್ಥಳಕ್ಕೆ ಬಂದು
ಅವನನ್ನು ನೋಡಿ, ಹಾಗೆಯೇ ಬಳಸಿಕೊಂಡು ಹೋದ. [33]ಆದರೆ ಆ ಮಾರ್ಗವಾಗಿ ಪ್ರಯಾಣ ಮಾಡುತ್ತಿದ್ದ
ಒಬ್ಬ ಸಮಾರಿಯದವನು ಅಲ್ಲಿಗೆ ಬಂದಾಗ, ಅವನನ್ನು ಕಂಡು ಕನಿಕರಪಟ್ಟ. [34]ಹತ್ತಿರಕ್ಕೆ ಹೋಗಿ ಅವನ
ಗಾಯಗಳಿಗೆ ಎಣ್ಣೆಯನ್ನೂ ದ್ರಾಕ್ಷಾರಸವನ್ನೂ ಹಚ್ಚಿ ಅವುಗಳಿಗೆ ಬಟ್ಟೆ ಕಟ್ಟಿದ. ಬಳಿಕ ಅವನನ್ನು ತನ್ನ ಸ್ವಂತ
ವಾಹಕಪಶುವಿನ ಮೇಲೆ ಹತ್ತಿಸಿಕೊಂಡು ಒಂದು ಛತ್ರಕ್ಕೆ ಕರೆದುಕೊಂಡು ಹೋಗಿ, ಆರೈಕೆ ಮಾಡಿದ.
[35]ಮಾರನೆಯ ದಿನ ಎರಡು ದಿನಾರಿ ನಾಣ್ಯಗಳನ್ನು ಛತ್ರದವನಿಗೆ ಕೊಟ್ಟು, 'ಇವನನ್ನು ಚೆನ್ನಾಗಿ ನೋಡಿಕೊ,
ಇದಕ್ಕಿಂತ ಹೆಚ್ಚು ವೆಚ್ಚ ಆದರೆ ನಾನು ಹಿಂದಿರುಗಿ ಬರುವಾಗ ಸಲ್ಲಿಸುತ್ತೇನೆ,' ಎಂದ.
36 "ದರೋಡೆಗಾರರ ಕೈಗೆ ಸಿಕ್ಕಿದವನಿಗೆ ಈ ಮೂವರಲ್ಲಿ ಯಾರು ನೆರೆಯವನೆಂದು ನಿನಗೆ
ತೋರುತ್ತದೆ?" ಎಂದು ಯೇಸು ಆ ಶಾಸ್ತ್ರಜ್ಞನನ್ನು ಕೇಳಿದರು. [37]ಅದಕ್ಕೆ ಅವನು, "ದಯೆ ತೋರಿದವನೇ
ನೆರೆಯವನು," ಎಂದನು. ಆಗ ಯೇಸು, "ಹೋಗು, ನೀನೂ ಹಾಗೆಯೇ ಮಾಡು," ಎಂದು ಹೇಳಿದರು.

## ಸೇವಾಸಕ್ತ ಮಾರ್ತಳು – ಧ್ಯಾನಾಸಕ್ತ ಮರಿಯಳು

38 ಯೇಸುಸ್ವಾಮಿ ತಮ್ಮ ಶಿಷ್ಯರೊಡನೆ ಪ್ರಯಾಣ ಮುಂದುವರಿಸಿ ಒಂದು ಹಳ್ಳಿಗೆ ಬಂದರು. ಅಲ್ಲಿ
ಮಾರ್ತಳೆಂಬ ಮಹಿಳೆ ಅವರನ್ನು ತಮ್ಮ ಮನೆಗೆ ಆಮಂತ್ರಿಸಿದಳು. [39]ಆಕೆಗೆ ಮರಿಯಳೆಂಬ ಸೋದರಿ
ಇದ್ದಳು. ಈಕೆ ಪ್ರಭುವಿನ ಪಾದತಳದಲ್ಲಿ ಕುಳಿತುಕೊಂಡು ಅವರ ಬೋಧನೆಯನ್ನು ಆಲಿಸುತ್ತಿದ್ದಳು.
[40]ಮಾರ್ತಳಾದರೋ, ಅತಿಥಿಸತ್ಕಾರದ ಗಡಿಬಿಡಿಯಲ್ಲಿ ಇದ್ದಳು. ಅವಳು ಬಂದು, "ಪ್ರಭೂ, ನನ್ನ ಸೋದರಿ
ಈ ಕೆಲಸವನ್ನೆಲ್ಲಾ ನನ್ನೊಬ್ಬಳಿಗೇ ಬಿಟ್ಟಿದ್ದಾಳೆ. ನೀವಿದನ್ನು ಗಮನಿಸಬಾರದೇ? ನನಗೆ ಸಹಾಯ
ಮಾಡುವಂತೆ ಅವಳಿಗೆ ಹೇಳಿ," ಎಂದಳು. [41]ಯೇಸು ಆಕೆಗೆ ಪ್ರತ್ಯುತ್ತರವಾಗಿ, "ಮಾರ್ತಾ, ಮಾರ್ತಾ, ನೀನು

ಅನಾವಶ್ಯ ಚಿಂತೆ ಪೇಚಾಟಗಳಿಗೆ ಒಳಗಾಗಿರುವೆ. ಆದರೆ ಅಗತ್ಯವಾದುದು ಒಂದೇ. ಮರಿಯಳು ಉತ್ತಮವಾದುದನ್ನೇ ಆರಿಸಿಕೊಂಡಿದ್ದಾಳೆ. ಅದನ್ನು ಆಕೆಯಿಂದ ಕಸಿದುಕೊಳ್ಳಲಾಗದು," ಎಂದರು.

## ಸ್ವಾಮಿ ಕಲಿಸಿಕೊಟ್ಟ ಪ್ರಾರ್ಥನೆ

(ಮತ್ತಾ. 6.9–13, 7.7–11)

**11** ಒಮ್ಮೆ ಯೇಸುಸ್ವಾಮಿ ಒಂದು ಸ್ಥಳದಲ್ಲಿ ಪ್ರಾರ್ಥನೆಮಾಡುತ್ತಾ ಇದ್ದರು. ಅವರ ಪ್ರಾರ್ಥನೆ ಮುಗಿದ ಮೇಲೆ ಶಿಷ್ಯರಲ್ಲಿ ಒಬ್ಬನು, "ಪ್ರಭುವೇ ಯೊವಾನ್ನನು ತನ್ನ ಶಿಷ್ಯರಿಗೆ ಪ್ರಾರ್ಥನೆ ಮಾಡುವುದನ್ನು ಕಲಿಸಿದ ಹಾಗೆ ನಮಗೂ ಕಲಿಸಿಕೊಡಿ," ಎಂದನು. ಅದಕ್ಕೆ ಯೇಸು ಇಂತೆಂದರು,

"ನೀವು ಹೀಗೆ ಪ್ರಾರ್ಥನೆಮಾಡಬೇಕು:
'ತಂದೆಯೇ,
2 ನಿಮ್ಮ ಪವಿತ್ರನಾಮ ಪೂಜಿತವಾಗಲಿ;
ನಿಮ್ಮ ಸಾಮ್ರಾಜ್ಯ ಬರಲಿ.
3 ನಮಗೆ ಅಗತ್ಯವಾದ ಆಹಾರವನ್ನು
ಅನುದಿನವೂ ಕೊಡಿ.
4 ನಮಗೆ ತಪ್ಪು ಮಾಡಿದ ಪ್ರತಿಯೊಬ್ಬನನ್ನು
ನಾವು ಕ್ಷಮಿಸುವುದರಿಂದ,
ನಮ್ಮ ಪಾಪಗಳನ್ನು ಕ್ಷಮಿಸಿರಿ.
ನಮ್ಮನ್ನು ಶೋಧನೆಗೆ
ಒಳಪಡಿಸಬೇಡಿ'."

## ಪ್ರಾರ್ಥನೆಯ ಫಲ

5 ಪುನಃ ಯೇಸುಸ್ವಾಮಿ ಶಿಷ್ಯರಿಗೆ, "ನಿಮ್ಮಲ್ಲಿ ಒಬ್ಬನು ತನ್ನ ಸ್ನೇಹಿತನ ಮನೆಗೆ ನಡುರಾತ್ರಿಯಲ್ಲಿ
ಹೋಗುತ್ತಾನೆಂದು ಭಾವಿಸೋಣ: ಅವನು, 'ಗೆಳೆಯಾ, ನನಗೆ ಮೂರು ರೊಟ್ಟಿಗಳನ್ನು ಸಾಲವಾಗಿ ಕೊಡು.
6 ಪ್ರಯಾಣದಲ್ಲಿದ್ದ ನನ್ನ ಸ್ನೇಹಿತನೊಬ್ಬನು ಅನಿರೀಕ್ಷಿತವಾಗಿ ನನ್ನ ಮನೆಗೆ ಈಗತಾನೆ ಬಂದಿದ್ದಾನೆ. ಅವನಿಗೆ
ಊಟಕ್ಕಿಡಲು ನನ್ನಲ್ಲಿ ಏನೂ ಇಲ್ಲ,' ಎಂದು ಕೇಳಲು,
7 ಈ ಸ್ನೇಹಿತ ಒಳಗಿನಿಂದಲೇ, 'ನನಗೆ ತೊಂದರೆ
ಕೊಡಬೇಡ; ಬಾಗಿಲು ಹಾಕಿ ಆಗಿದೆ; ನನ್ನ ಮಕ್ಕಳು ನನ್ನ ಕೂಡ ಮಲಗಿದ್ದಾರೆ; ನಾನು ಎದ್ದು ಬಂದು
ಕೊಡುವುದಕ್ಕಾಗುವುದಿಲ್ಲ,' ಎಂದು ಉತ್ತರ ಕೊಡುವುದು ಸಹಜವಲ್ಲವೇ?
8 ಆದರೂ, ತನ್ನ ಗೆಳೆಯ ಇವನು
ಎಂದು ಎದ್ದು ಬಂದು ಕೊಡದೆ ಇದ್ದರೂ, ನಾಚಿಕೆಪಡದೆ ಕೇಳುತ್ತಲೇ ಇದ್ದಾನಲ್ಲಾ ಎಂಬ
ಕಾರಣದಿಂದಾದರೂ ಅವನು ಎದ್ದು ಬಂದು ಕೇಳಿದಷ್ಟನ್ನು ಕೊಡುತ್ತಾನೆಂಬುದು ನಿಜ.
9 ಆದುದರಿಂದ
'ಕೇಳಿರಿ, ನಿಮಗೆ ದೊರಕುವುದು; ಹುಡುಕಿರಿ, ನಿಮಗೆ ಸಿಗುವುದು; ತಟ್ಟಿರಿ, ನಿಮಗೆ ಬಾಗಿಲು
ತೆರೆಯಲಾಗುವುದು.
10 ಏಕೆಂದರೆ ಕೇಳಿಕೊಳ್ಳುವ ಪ್ರತಿಯೊಬ್ಬನಿಗೂ ದೊರಕುವುದು; ಹುಡುಕುವವನಿಗೆ
ಸಿಗುವುದು; ತಟ್ಟುವವನಿಗೆ ಬಾಗಿಲು ತೆರೆಯಲಾಗುವುದು.'

11 "ನಿಮ್ಮಲ್ಲಿ ಯಾವ ತಂದೆ ತಾನೇ ತನ್ನ ಮಗ ಮೀನನ್ನು ಕೇಳಿದರೆ ಹಾವನ್ನು ಕೊಡುತ್ತಾನೆ?
12 ಅಥವಾ ಮೊಟ್ಟೆಯನ್ನು ಕೇಳಿದರೆ ಚೇಳನ್ನು ಕೊಡುತ್ತಾನೆ?
13 ಕೆಟ್ಟವರಾದ ನೀವು ನಿಮ್ಮ ಮಕ್ಕಳಿಗೆ ಒಳ್ಳೆಯ
ಪದಾರ್ಥಗಳನ್ನು ಕೊಡಬಲ್ಲವರಾದರೆ, ಅವಕ್ಕಿಂತಲೂ ಹೆಚ್ಚಾಗಿ ಸ್ವರ್ಗದಲ್ಲಿರುವ ನಿಮ್ಮ ತಂದೆ ತಮ್ಮನ್ನು
ಕೇಳಿಕೊಳ್ಳುವವರಿಗೆ ಪವಿತ್ರಾತ್ಮ ಅವರನ್ನೇ ಅನುಗ್ರಹಿಸಬಲ್ಲರು! ಎಂದು ನಾನು ನಿಮಗೆ ಹೇಳುತ್ತೇನೆ."

### ದೆವ್ವಗಳ ಉಚ್ಛಾಟನೆ – ದೈವೀರಾಜ್ಯದ ಉದ್ಘಾಟನೆ

(ಮತ್ತಾ. 12.22–30; ಮಾರ್ಕ 3.20–27)

14 ಒಮ್ಮೆ ಯೇಸುಸ್ವಾಮಿ ಒಂದು ಮೂಕ ದೆವ್ವವನ್ನು ಬಿಡಿಸುತ್ತಿದ್ದರು. ಆ ದೆವ್ವ ಬಿಟ್ಟು ಹೋದ
ಮೇಲೆ ಮೂಕನು ಮಾತನಾಡಿದನು. ಜನರು ಆಶ್ಚರ್ಯಚಕಿತರಾದರು. 15ಆದರೆ ಅವರಲ್ಲಿ ಕೆಲವರು,
"ಇವನು ದೆವ್ವಗಳ ಒಡೆಯನಾದ ಬೆಲ್ಜೆಬೂಲನ ಶಕ್ತಿಯಿಂದ ದೆವ್ವಗಳನ್ನು ಬಿಡಿಸುತ್ತಾನೆ," ಎಂದರು. ಬೇರೆ
ಕೆಲವರು ಯೇಸುವನ್ನು ಪರೀಕ್ಷಿಸುವುದಕ್ಕಾಗಿ 16ಸ್ವರ್ಗದಿಂದ ಒಂದು ಅದ್ಭುತಕಾರ್ಯವನ್ನು
ಮಾಡಿತೋರಿಸುವಂತೆ ಕೇಳಿದರು. 17ಅವರ ಆಲೋಚನೆಗಳನ್ನು ಅರಿತುಕೊಂಡ ಯೇಸು,
"ಅಂತಃಕಲಹದಿಂದ ಒಡೆದು ಹೋಗಿರುವ ಪ್ರತಿಯೊಂದು ರಾಜ್ಯ ನಾಶವಾಗುವುದು; ಕುಟುಂಬ
ಕುಟುಂಬಗಳು ಕಚ್ಚಾಡಿ ಹಾಳಾಗುವುವು. 18ಅಂತೆಯೇ ಸೈತಾನನ ಪಕ್ಷದವರು ಒಬ್ಬರ ವಿರುದ್ಧ ಒಬ್ಬರು ಜಗಳ
ಆಡಿದರೆ ಅವನ ರಾಜ್ಯ ಹೇಗೆ ತಾನೆ ಉಳಿದೀತು? 19ನಾನು ಬೆಲ್ಜೆಬೂಲನ ಶಕ್ತಿಯಿಂದ ದೆವ್ವಗಳನ್ನು
ಬಿಡಿಸುವುದಾದರೆ ನಿಮ್ಮವರು ಯಾರ ಶಕ್ತಿಯಿಂದ ಬಿಡಿಸುತ್ತಾರೆ? ಆದ್ದರಿಂದ ನೀವು ಹೇಳುವುದು ತಪ್ಪೆಂದು
ನಿಮ್ಮವರೇ ತೀರ್ಪುಕೊಡುವರು. 20ನಾನು ದೇವರ ಶಕ್ತಿಯಿಂದ ದೆವ್ವಗಳನ್ನು ಬಿಡಿಸುವುದಾದರೆ ದೇವರ
ಸಾಮ್ರಾಜ್ಯ ನಿಮ್ಮಲ್ಲಿಗೆ ಈಗಾಗಲೇ ಬಂದಿದೆ, ಎಂಬುದು ಸ್ಪಷ್ಟ.

21 "ಬಲಿಷ್ಠನೊಬ್ಬನು ಸರ್ವಾಯುಧಗಳಿಂದ ಸಜ್ಜಿತನಾಗಿ ತನ್ನ ಮನೆಗೆ ಕಾವಲಿರುವಾಗ ಅವನ
ಆಸ್ತಿಯೆಲ್ಲ ಸುರಕ್ಷಿತವಾಗಿರುತ್ತದೆ. 22ಆದರೆ ಇವನಿಗಿಂತಲೂ ಬಲಿಷ್ಠನು ಎದುರಿಸಿ ಬಂದು ಇವನನ್ನು ಗೆದ್ದಾಗ,
ಇವನು ನೆಚ್ಚಿಕೊಂಡಿದ್ದ ಆಯುಧಗಳನ್ನೆಲ್ಲಾ ಅವನು ಕಿತ್ತುಕೊಂಡು, ಸುಲಿಗೆಯನ್ನು ಹಂಚಿಕೊಡುತ್ತಾನೆ.

23 "ನನ್ನ ಪರವಾಗಿ ಇರದವನು ನನಗೆ ವಿರೋಧಿಯೇ ಸರಿ. ನನ್ನೊಡನೆ ಶೇಖರಿಸದವನು
ಚದುರಿಸುತ್ತಾನೆ," ಎಂದರು.

### ಮರಳಿ ಮನೆಗೆ ಬಂದ ದೆವ್ವ

(ಮತ್ತಾ. 12.43–45)

24 ಯೇಸುಸ್ವಾಮಿ ಬೋಧನೆಯನ್ನು ಮುಂದುವರಿಸುತ್ತಾ, "ದೆವ್ವವು ಒಬ್ಬ ಮನುಷ್ಯನನ್ನು ಬಿಟ್ಟು
ತೊಲಗಿದ ಮೇಲೆ ನೆಲೆಯನ್ನು ಹುಡುಕುತ್ತಾ ಒಣಗಾಡಿನಲ್ಲಿ ಅಲೆದಾಡುತ್ತದೆ. ಅದಕ್ಕೆ ನೆಲೆ ಸಿಗದ ಕಾರಣ
ಅದು, 'ನಾನು ಬಿಟ್ಟುಬಂದ ನನ್ನ ಮನೆಗೇ ಹಿಂದಿರುಗುತ್ತೇನೆ' ಎಂದುಕೊಳ್ಳುತ್ತದೆ. 25ಅದು ಮರಳಿ ಬಂದಾಗ,
ಮನೆ ಗುಡಿಸಿರುವುದನ್ನೂ ಎಲ್ಲವೂ ಚೊಕ್ಕಟವಾಗಿರುವುದನ್ನೂ ಕಾಣುತ್ತದೆ. 26ಪುನಃ ಹೊರಟು ಹೋಗಿ
ತನಗಿಂತಲೂ ಕೆಟ್ಟವುಗಳಾದ ಬೇರೆ ಏಳು ದೆವ್ವಗಳನ್ನು ಕರೆದುಕೊಂಡು ಬರುತ್ತದೆ. ಅವು ಆ ಮನುಷ್ಯನ
ಒಳ ಹೊಕ್ಕು ನೆಲೆಸುತ್ತವೆ. ಕೊನೆಗೆ ಅವನ ಪರಿಸ್ಥಿತಿ ಪೂರ್ವಸ್ಥಿತಿಗಿಂತಲೂ ಅಧೋಗತಿಗೆ ಇಳಿಯುತ್ತದೆ,"
ಎಂದರು.

### ಮಾತೆಗಿಂತಲೂ ಮಿಗಿಲಾದವರು !

27 ಯೇಸುಸ್ವಾಮಿ ಹೀಗೆ ಮಾತನಾಡುತ್ತಿದ್ದಾಗ ಜನಸಮೂಹದಿಂದ ಮಹಿಳೆಯೊಬ್ಬಳು, "ನಿಮ್ಮನ್ನು
ಉದರದಲ್ಲಿ ಹೊತ್ತು, ನಿಮಗೆ ಮೊಲೆಯೂಡಿಸಿದ ತಾಯಿ ಭಾಗ್ಯವಂತಳು!" ಎಂದು ಕೂಗಿ ಹೇಳಿದಳು.
28ಅದಕ್ಕೆ ಯೇಸು, "ಅದಕ್ಕಿಂತಲೂ ದೇವರ ವಾಕ್ಯವನ್ನು ಕೇಳಿ, ಅದನ್ನು ಅನುಸರಿಸುವವನು ಹೆಚ್ಚು
ಭಾಗ್ಯವಂತನು!" ಎಂದರು.

### ಯೋನನ ಸಂಕೇತ

(ಮತ್ತಾ. 12.38–42)

29 ಜನರ ಗುಂಪು ಹೆಚ್ಚುತ್ತಿದ್ದಾಗ, ಯೇಸುಸ್ವಾಮಿ ಹೀಗೆಂದು ಮುಂದುವರಿಸಿದರು: "ಈ ಪೀಳಿಗೆ
ಕೆಟ್ಟ ಪೀಳಿಗೆ. ಇದು ಅದ್ಭುತಕಾರ್ಯವನ್ನು ಸಂಕೇತವಾಗಿ ಕೋರುತ್ತದೆ. ಪ್ರವಾದಿ ಯೋನನ ಸಂಕೇತವೇ

ಹೊರತು ಬೇರೆ ಯಾವ ಸಂಕೇತವೂ ಇದಕ್ಕೆ ದೊರಕದು. [30]ಹೇಗೆಂದರೆ, ನಿನೆವೆ ನಗರದ ಜನರಿಗೆ ಪ್ರವಾದಿ ಯೋನನು ಸಂಕೇತವಾದಂತೆ ನರಪುತ್ರನು ಈ ಸಂತತಿಗೆ ಸಂಕೇತವಾಗಿರುವನು.

31 "ದೈವತೀರ್ಪಿನ ದಿನ ದಕ್ಷಿಣದೇಶದ ರಾಣಿ ಈ ಪೀಳಿಗೆಗೆ ಎದುರಾಗಿ ನಿಂತುಕೊಂಡು, ಇವರನ್ನು ಅಪರಾಧಿಗಳೆಂದು ತೋರಿಸುವಳು. ಆಕೆ ಸೊಲೊಮೋನನ ಜ್ಞಾನೋಕ್ತಿಗಳನ್ನು ಕೇಳುವುದಕ್ಕಾಗಿ ದೇಶದ ಕಟ್ಟಕಡೆಯಿಂದ ಬಂದಳು. ಆದರೆ, ಸೊಲೊಮೋನನಿಗಿಂತಲೂ ಮೇಲಾದವನು ಇಗೋ, ಇಲ್ಲಿದ್ದಾನೆ.
[32]ತೀರ್ಪಿನ ದಿನ ನಿನೆವೆ ನಗರದವರು ಈ ಪೀಳಿಗೆಗೆ ಎದುರಾಗಿ ನಿಂತು ಇದನ್ನು ಅಪರಾಧಿ ಎಂದು ತೋರಿಸುವರು. ಏಕೆಂದರೆ, ಪ್ರವಾದಿ ಯೋನನ ಬೋಧನೆಯನ್ನು ಕೇಳಿ ಪಶ್ಚಾತ್ತಾಪಪಟ್ಟು ಅವರು ದೇವರಿಗೆ ಅಭಿಮುಖರಾದರು. ಆದರೆ ಪ್ರವಾದಿ ಯೋನನಿಗಿಂತಲೂ ಮೇಲಾದವನು ಇಗೋ, ಇಲ್ಲಿದ್ದಾನೆ.

## ನೇತ್ರಗಳೇ ದೇಹದ ದೀಪಗಳು

(ಮತ್ತಾ. 5.15, 6.22–23)

33 "ಯಾರೂ ದೀಪವನ್ನು ಹಚ್ಚಿ ನೆಲಮಾಳಿಗೆಯಲ್ಲಾಗಲಿ, ಬಟ್ಟಲ ಕೆಳಗಾಗಲಿ ಇಡುವುದಿಲ್ಲ. ಮನೆಯೊಳಕ್ಕೆ ಬರುವವರಿಗೆ ಬೆಳಕು ಕಾಣಿಸುವಂತೆ ಅದನ್ನು ದೀಪಸ್ತಂಭದ ಮೇಲಿಡುತ್ತಾರೆ.

34 "ನಿನ್ನ ಕಣ್ಣೇ ದೇಹಕ್ಕೆ ದೀಪ; ನಿನ್ನ ಕಣ್ಣು ಸರಿಯಿದ್ದರೆ ನಿನ್ನ ದೇಹವೆಲ್ಲ ಕಾಂತಿಮಯವಾಗುವುದು. ಅದು ಕೆಟ್ಟಿದ್ದರೆ, ದೇಹವೆಲ್ಲಾ ಕತ್ತಲೆಮಯವಾಗುವುದು. [35]ಆದುದರಿಂದ ನಿನ್ನೊಳಗಿರುವ ಬೆಳಕಿಗೆ ಕತ್ತಲೆ ಕವಿಯದಂತೆ ಎಚ್ಚರಿಕೆವಹಿಸು. [36]ದೇಹದ ಯಾವುದೊಂದು ಭಾಗದಲ್ಲೂ ಕತ್ತಲೆಯಿಲ್ಲದೆ ದೇಹವೆಲ್ಲ ಕಾಂತಿಮಯವಾಗಿದ್ದರೆ, ದೀಪವು ತನ್ನ ಪ್ರಕಾಶದಿಂದ ನಿನ್ನನ್ನು ಬೆಳಗಿಸುವಂತೆ, ನಿನ್ನ ದೇಹದಾದ್ಯಂತವೂ ದೇದೀಪ್ಯಮಾನವಾಗಿರುವುದು," ಎಂದರು.

## ಒಳಗೆ ಕೊಳಕು, ಹೊರಗೆ ಥಳಕು

(ಮತ್ತಾ. 23.1–36; ಮಾರ್ಕ 12.38–40)

37 ಯೇಸುಸ್ವಾಮಿ ತಮ್ಮ ಬೋಧನೆಯನ್ನು ಮುಗಿಸಿದಾಗ, ಫರಿಸಾಯನೊಬ್ಬನು ಅವರನ್ನು ಊಟಕ್ಕೆ ಆಮಂತ್ರಿಸಿದನು. ಯೇಸು ಒಳಕ್ಕೆ ಹೋಗಿ ಊಟಕ್ಕೆ ಕುಳಿತುಕೊಂಡರು. [38]ಊಟಕ್ಕೆ ಮುಂಚೆ ಅವರು ಕೈ ತೊಳೆಯದೆ ಹೋದುದನ್ನು ಕಂಡು ಫರಿಸಾಯನು ಚಕಿತನಾದನು. [39]ಆಗ ಯೇಸು, "ಫರಿಸಾಯರಾದ ನೀವು ಲೋಟ ಹಾಗೂ ಊಟದ ತಟ್ಟೆಗಳ ಹೊರಭಾಗವನ್ನು ಶುಚಿ ಮಾಡುತ್ತೀರಿ; ಆದರೆ ನಿಮ್ಮ ಒಳಭಾಗವು ಲೋಭದಿಂದಲೂ ಕೆಡುಕಿನಿಂದಲೂ ತುಂಬಿದೆ. [40]ಮೂರ್ಖರೇ, ಹೊರಭಾಗವನ್ನು ಮಾಡಿದಾತನು ಒಳಭಾಗವನ್ನು ಮಾಡಲಿಲ್ಲವೇ? [41]ನಿಮ್ಮ ತಟ್ಟೆ ಲೋಟಗಳಲ್ಲಿ ಇರುವುದನ್ನು ಮೊಟ್ಟ ಮೊದಲು ದಾನಮಾಡಿರಿ. ಆಗ ಸಮಸ್ತವೂ ನಿಮಗೆ ಶುದ್ಧಿಯಾಗಿರುವುದು.

42 "ಫರಿಸಾಯರೇ, ನಿಮಗೆ ಧಿಕ್ಕಾರ! ನೀವು ಪುದಿನ, ಸದಾಪು ಮುಂತಾದ ಪಲ್ಯಗಳಲ್ಲೂ ಹತ್ತರಲ್ಲಿ ಒಂದು ಪಾಲು ಸಲ್ಲಿಸುತ್ತೀರಿ, ಸರಿ. ಆದರೆ ನ್ಯಾಯನೀತಿಯನ್ನೂ ದೇವರ ಪ್ರೀತಿಯನ್ನೂ ಬದಿಗೊತ್ತಿದ್ದೀರಿ. ನೀವು ಅವುಗಳನ್ನು ಅಲಕ್ಷ್ಯ ಮಾಡದೆ, ಇವುಗಳನ್ನು ಅನುಷ್ಠಾನಕ್ಕೆ ತರಬೇಕಾಗಿತ್ತು.

43 "ಫರಿಸಾಯರೇ, ನಿಮಗೆ ಧಿಕ್ಕಾರ! ಪ್ರಾರ್ಥನಾ ಮಂದಿರಗಳಲ್ಲಿ ಪ್ರಧಾನ ಆಸನಗಳನ್ನೂ ಪೇಟೆ ಬೀದಿಗಳಲ್ಲಿ ವಂದನೋಪಚಾರಗಳನ್ನೂ ಅಪೇಕ್ಷಿಸುತ್ತೀರಿ. [44]ಅಯ್ಯೋ, ನಿಮಗೆ ಧಿಕ್ಕಾರ! ನೀವು ನೆಲಸಮವಾದ ಸಮಾಧಿಗಳಂತೆ ಇದ್ದೀರಿ. ಸಮಾಧಿಗಳೆಂದು ತಿಳಿಯದೆಯೆ ಜನರು ಅವುಗಳ ಮೇಲೆ ನಡೆದಾಡುತ್ತಾರೆ," ಎಂದರು.

45 ಇದನ್ನು ಕೇಳಿದ ಒಬ್ಬ ಧರ್ಮಶಾಸ್ತ್ರಜ್ಞನು, "ಬೋಧಕರೇ, ನೀವು ಹೀಗೆ ಮಾತನಾಡುವುದರಿಂದ ನಮ್ಮನ್ನೂ ಖಂಡಿಸಿದಂತಾಯಿತು," ಎಂದನು. [46]ಅದಕ್ಕೆ ಯೇಸು, "ಶಾಸ್ತ್ರಜ್ಞರೇ, ನಿಮಗೂ ಧಿಕ್ಕಾರ! ಹೊರಲಾಗದ ಹೊರೆಗಳನ್ನು ನೀವು ಜನರ ಮೇಲೆ ಹೇರುತ್ತೀರಿ; ನೀವಾದರೋ ನಿಮ್ಮ ಕಿರು ಬೆರಳಿನಿಂದ ಕೂಡ ಅವುಗಳನ್ನು ಮುಟ್ಟುವುದಿಲ್ಲ. [47]ನಿಮಗೆ ಧಿಕ್ಕಾರ! ನಿಮ್ಮ ಪಿತೃಗಳು ಕೊಂದು ಹಾಕಿದ ಪ್ರವಾದಿಗಳಿಗೆ ನೀವು ಅಂದದ ಗೋರಿಗಳನ್ನು ನಿರ್ಮಿಸುತ್ತೀರಿ. [48]ನಿಮ್ಮ ಪಿತೃಗಳ ಕೃತ್ಯಗಳನ್ನು ನೀವು ಅನುಮೋದಿಸುತ್ತೀರಿ

ಎಂಬುದಕ್ಕೆ ಇದೇ ಸಾಕ್ಷಿ. ಏಕೆಂದರೆ, ಪ್ರವಾದಿಗಳನ್ನು ಕೊಂದವರು ಅವರಾದರೆ, ಗೋರಿ
ನಿರ್ಮಿಸುತ್ತಿರುವವರು ನೀವು. 49ಈ ಕಾರಣದಿಂದಲೇ 'ದೇವರ ಜ್ಞಾನವು' ಹೇಳಿರುವುದೇನೆಂದರೆ – 'ನಾನು
ಅವರ ಬಳಿಗೆ ಪ್ರವಾದಿಗಳನ್ನೂ ಪ್ರೇಷಿತರನ್ನೂ ಕಳುಹಿಸುವೆನು; ಅವರಲ್ಲಿ ಕೆಲವರನ್ನು ಕೊಲೆ ಮಾಡುವರು;
ಕೆಲವರನ್ನು ಚಿತ್ರಹಿಂಸೆಪಡಿಸುವರು. 50–51ಲೋಕಾದಿಯಿಂದ ಸುರಿಸಲಾದ ಎಲ್ಲಾ ಪ್ರವಾದಿಗಳ ರಕ್ತಕ್ಕೂ
ಅಂದರೆ, ಹೇಬೆಲನ ರಕ್ತ ಮೊದಲ್ಗೊಂಡು, ಬಲಿಪೀಠಕ್ಕೂ ದೇವಾಲಯಕ್ಕೂ ನಡುವೆ ಹತನಾದ ಜಕರೀಯನ
ರಕ್ತದವರೆಗೂ ಈ ಪೀಳಿಗೆಯವರು ಲೆಕ್ಕಕೊಡಬೇಕಾಗುವುದು.' ಹೌದು, ಈ ಪೀಳಿಗೆಯವರೇ ಲೆಕ್ಕಕೊಡ
ಬೇಕಾಗುವುದೆಂದು ನಿಮಗೆ ಸ್ಪಷ್ಟವಾಗಿ ಹೇಳುತ್ತೇನೆ! 52ಧರ್ಮಶಾಸ್ತ್ರಜ್ಞರೇ, ನಿಮಗೆ ಧಿಕ್ಕಾರ! ಜ್ಞಾನವೆಂಬ
ಮಂದಿರದ ಬೀಗದ ಕೈಯನ್ನು ನಿಮ್ಮಲ್ಲೇ ಇಟ್ಟುಕೊಂಡಿದ್ದೀರಿ. ನೀವು ಒಳಕ್ಕೆ ಪ್ರವೇಶಿಸುವುದಿಲ್ಲ; ಪ್ರವೇಶಿಸಲು
ಯತ್ನಿಸುವವರನ್ನೂ ತಡೆಗಟ್ಟುತ್ತೀರಿ," ಎಂದರು.

53 ಬಳಿಕ ಯೇಸು ಅಲ್ಲಿಂದ ಹೊರಗೆ ಬಂದಾಗ ಧರ್ಮಶಾಸ್ತ್ರಿಗಳೂ ಫರಿಸಾಯರೂ ಅವರನ್ನು
ಉಗ್ರವಾಗಿ ಪ್ರತಿಭಟಿಸಲಾರಂಭಿಸಿದರು. ಹಲವಾರು ವಿಷಯಗಳನ್ನು ಕುರಿತು ಮಾತಾಡುವಂತೆ ಕೆಣಕಿ,
54ಅವರ ಮಾತಿನಲ್ಲಿ ಏನಾದರೂ ತಪ್ಪು ಕಂಡು ಹಿಡಿಯಲೇಬೇಕೆಂದು ಹೊಂಚು ಹಾಕುತ್ತಿದ್ದರು.

### ರಟ್ಟಾಗದ ಗುಟ್ಟಿಲ್ಲ

(ಮತ್ತಾ. 10.26–27)

**12** ಇಷ್ಟರಲ್ಲೇ, ಸಾವಿರಾರು ಜನರು ಒಬ್ಬರನ್ನೊಬ್ಬರು ಒತ್ತರಿಸುತ್ತಾ ಕಿಕ್ಕಿರಿದು ನೆರೆದಿದ್ದರು. ಯೇಸು
ಮೊದಲು ಶಿಷ್ಯರನ್ನು ಉದ್ದೇಶಿಸಿ, "ಫರಿಸಾಯರ 'ಹುಳಿ ಹಿಟ್ಟಿನ' ಬಗ್ಗೆ ಅಂದರೆ ಅವರ ಕಪಟತನದ ಬಗ್ಗೆ,
ಎಚ್ಚರಿಕೆಯಿಂದಿರಿ. 2ಮುಚ್ಚುಮರೆಯಾಗಿರುವುದೆಲ್ಲಾ ಬಟ್ಟಬಯಲಾಗುವುದು; ಗುಟ್ಟಾಗಿರುವುದೆಲ್ಲಾ
ರಟ್ಟಾಗುವುದು. 3ನೀವು ಕತ್ತಲಲ್ಲಿ ಹೇಳಿದ್ದೆಲ್ಲವನ್ನು ಬೆಳಕಿನಲ್ಲಿ ಕೇಳಲಾಗುವುದು; ಒಳಕೋಣೆಗಳಲ್ಲಿ
ಕಿವಿಮಾತಾಗಿ ನೀವು ಹೇಳಿದ್ದೆಲ್ಲವನ್ನು ಮನೆಮಾಳಿಗೆಗಳ ಮೇಲಿಂದ ಸಾರಲಾಗುವುದು," ಎಂದರು.

### ಮಾನವನ ಮೌಲ್ಯ

(ಮತ್ತಾ. 10.28–31)

4 "ಗೆಳೆಯರೇ, ನನ್ನ ಮಾತಿಗೆ ಕಿವಿಗೊಡಿ: ದೇಹವನ್ನು ಕೊಂದುಹಾಕುವವರಿಗೆ ಭಯಪಡಬೇಡಿ.
ಕೊಂದುಹಾಕಿದ ಮೇಲೆ ಹೆಚ್ಚೇನು ಮಾಡಲು ಅವರಿಂದಾಗದು. 5ನೀವು ಯಾರಿಗೆ ಭಯಪಡಬೇಕೆಂದು
ಹೇಳುತ್ತೇನೆ, ಕೇಳಿ: ಸತ್ತ ಮೇಲೆ ನರಕದೊಳಕ್ಕೆ ದಬ್ಬಲು ಅಧಿಕಾರವುಳ್ಳಾತನಿಗೆ ಭಯಪಡಿ. ಹೌದು, ಆತನಿಗೆ
ಭಯಪಡಿರೆಂದು ನಿಮಗೆ ಒತ್ತಿ ಹೇಳುತ್ತೇನೆ.

6 "ಎರಡು ಕಾಸಿಗೆ ಐದು ಗುಬ್ಬಚ್ಚಿಗಳನ್ನು ಮಾರುವುದಿಲ್ಲವೇ? ಆದರೂ ಅವುಗಳಲ್ಲಿ ಒಂದನ್ನೂ
ದೇವರು ಮರೆಯುವುದಿಲ್ಲ. 7ಅಷ್ಟು ಮಾತ್ರವಲ್ಲ, ನಿಮ್ಮ ತಲೆಗೂದಲುಗಳು ಸಹ ಎಲ್ಲವೂ ಎಣಿಕೆಯಾಗಿವೆ.
ಭಯಪಡಬೇಡಿ; ಅನೇಕ ಗುಬ್ಬಚ್ಚಿಗಳಿಗಿಂತ ನೀವು ಎಷ್ಟೋ ಮೌಲ್ಯವುಳ್ಳವರು.

### ಬಹಿರಂಗ ಸಾಕ್ಷ್ಯ

(ಮತ್ತಾ. 10.32–33, 12.32; 10.19–20)

8 "ಯಾವನು ಜನರ ಮುಂದೆ ಬಹಿರಂಗವಾಗಿ ತಾನು ನನ್ನವನೆಂದು ಒಪ್ಪಿಕೊಳ್ಳುತ್ತಾನೋ,
ಅವನನ್ನು ನರಪುತ್ರನು ಸಹ ದೇವದೂತರ ಮುಂದೆ ತನ್ನವನೆಂದು ಒಪ್ಪಿಕೊಳ್ಳುವನು. 9ಆದರೆ ಯಾವನು
ತಾನು ನನ್ನವನಲ್ಲ ಎಂದು ಜನರ ಮುಂದೆ ಬಹಿರಂಗವಾಗಿ ನಿರಾಕರಿಸುತ್ತಾನೋ, ಅವನನ್ನು ದೇವದೂತರ
ಮುಂದೆ ನಿರಾಕರಿಸಲಾಗುವುದೆಂಬುದು ನಿಶ್ಚಯ.

10 “ಯಾವನಾದರೂ ನರಪುತ್ರನ ವಿರುದ್ಧ ಮಾತನಾಡಿದರೆ ಅವನಿಗೆ ಕ್ಷಮೆ ದೊರಕಬಹುದು.
ಆದರೆ ಪವಿತ್ರಾತ್ಮ ಅವರನ್ನು ದೂಷಿಸುವವನಿಗೆ ಕ್ಷಮೆಯೇ ದೊರಕದು.

11 “ಪ್ರಾರ್ಥನಾಮಂದಿರಗಳಲ್ಲಿ ಮತ್ತು ನ್ಯಾಯಾಧಿಪತಿಗಳ ಹಾಗೂ ದೇಶಾಧಿಕಾರಿಗಳ ಮುಂದೆ
ನಿಮ್ಮನ್ನು ಎಳೆದೊಯ್ಯುವಾಗ ಹೇಗೆ ವಾದಿಸುವುದು, ಏನು ಹೇಳುವುದು ಎಂದು ಚಿಂತಾಕ್ರಾಂತರಾಗಬೇಡಿ.
12ಏಕೆಂದರೆ, ನೀವು ಹೇಳತಕ್ಕದ್ದನ್ನು ಪವಿತ್ರಾತ್ಮ ಅದೇ ಗಳಿಗೆಯಲ್ಲಿ ನಿಮಗೆ ಕಲಿಸಿಕೊಡುವರು,” ಎಂದರು.

## ದಡ್ಡನಾದ ಧನಿಕ

13 ಜನಸಮೂಹದಿಂದ ಒಬ್ಬನು, “ಬೋಧಕರೇ, ನಮ್ಮ ಪಿತ್ರಾರ್ಜಿತ ಸೊತ್ತನ್ನು ನನಗೆ ಭಾಗಮಾಡಿ
ಕೊಡುವಂತೆ ನನ್ನ ಸೋದರನಿಗೆ ಹೇಳಿ,” ಎಂದು ಕೇಳಿಕೊಂಡನು. 14ಅದಕ್ಕೆ ಯೇಸು, “ಏನಯ್ಯಾ, ನಿಮ್ಮಿಬ್ಬರ
ನ್ಯಾಯತೀರಿಸುವುದಕ್ಕೂ ನಿಮ್ಮ ಸ್ವತ್ತನ್ನು ಭಾಗಮಾಡಿಕೊಡುವುದಕ್ಕೂ ನನ್ನನ್ನು ನೇಮಿಸಿದವರು ಯಾರು?”
ಎಂದು ಮರುಪ್ರಶ್ನೆ ಹಾಕಿದರು. 15ಅನಂತರ ಜನರನ್ನುದ್ದೇಶಿಸಿ, “ಎಚ್ಚರಿಕೆ, ಯಾವ ವಿಧವಾದ ಲೋಭಕ್ಕೂ
ಒಳಗಾಗದಂತೆ ಜಾಗರೂಕರಾಗಿರಿ. ಏಕೆಂದರೆ, ಒಬ್ಬನಿಗೆ ಎಷ್ಟೇ ಸಿರಿಸಂಪತ್ತಿರಲಿ, ಅವನ ನಿಜವಾದ ಜೀವನ
ಅದನ್ನು ಅವಲಂಬಿಸಿಲ್ಲ,” ಎಂದು ಹೇಳಿದರು.

16 ಅನಂತರ ಅವರಿಗೆ ಈ ಸಾಮತಿಯನ್ನು ಹೇಳಿದರು: “ಒಬ್ಬ ಧನಿಕನಿದ್ದ. ಅವನ ಭೂಮಿ ಒಮ್ಮೆ
ಸಮೃದ್ಧಿಯಾದ ಬೆಳೆಕೊಟ್ಟಿತು. 17ಆಗ ಅವನು, ‘ನನ್ನ ಬೆಳೆಯನ್ನೆಲ್ಲಾ ತುಂಬಿಡಲು ಸ್ಥಳವಿಲ್ಲವಲ್ಲಾ, ಏನು
ಮಾಡಲಿ?’ ಎಂದು ತನ್ನಲ್ಲೇ ಆಲೋಚಿಸುತ್ತಾ, 18‘ಹೌದು, ಹೀಗೆ ಮಾಡುತ್ತೇನೆ: ಇರುವ ಕಣಜಗಳನ್ನು
ಕಿತ್ತುಹಾಕಿಸಿ, ಇನ್ನೂ ದೊಡ್ಡವುಗಳನ್ನು ಕಟ್ಟಿಸುತ್ತೇನೆ. ಅಲ್ಲಿ ನನ್ನ ಎಲ್ಲಾ ದವಸ ಧಾನ್ಯಗಳನ್ನೂ ಸರಕು
ಸಾಮಗ್ರಿಗಳನ್ನೂ ತುಂಬಿಸಿಡುತ್ತೇನೆ. 19ಅಲ್ಲದೆ, “ಎಲೈ ಮನವೇ, ಅನೇಕ ವರ್ಷಗಳಿಗೆ ಬೇಕಾದಷ್ಟು ಸರಕು
ಬಿದ್ದಿದೆ; ಆರಾಮವಾಗಿರು. ತಿನ್ನು, ಕುಡಿ, ಸುಖಪಡು ಎಂದು ಹೇಳಿಕೊಳ್ಳುತ್ತೇನೆ”, ಎಂದುಕೊಂಡ. 20ಆಗ
ದೇವರು, ‘ಎಲವೋ ಮೂರ್ಖ, ಇದೇ ರಾತ್ರಿ ನೀನು ಸಾಯಬೇಕಾಗಿದೆ, ನಿನಗಾಗಿ ಸಿದ್ಧ ಮಾಡಿಟ್ಟಿರುವುದೆಲ್ಲ
ಯಾರ ಪಾಲಾಗುವುದು?’ ಎಂದರು.

21 “ತನಗೋಸ್ಕರ ಸಂಪತ್ತನ್ನು ಶೇಖರಿಸಿಟ್ಟುಕೊಂಡು ದೇವರ ದೃಷ್ಟಿಯಲ್ಲಿ ಧನಿಕನಲ್ಲದವನು
ಇವನಿಗೆ ಸಮಾನನು,” ಎಂದರು ಯೇಸು.

## ಇಂದಿಗೆಂತು ನಾಳೆಗೆಂತೆಂದು ಚಿಂತೆಯೇಕೆ?

(ಮತ್ತಾ. 6.25–34)

22 ಅನಂತರ ಯೇಸುಸ್ವಾಮಿ ತಮ್ಮ ಶಿಷ್ಯರಿಗೆ, “ಈ ಕಾರಣದಿಂದ ನೀವು ನಿಮ್ಮ ‘ಪ್ರಾಣಧಾರಣೆಗೆ
ಏನು ಉಣ್ಣುವುದು, ದೇಹರಕ್ಷಣೆಗೆ ಏನು ಹೊದೆಯುವುದು’ ಎಂದು ಚಿಂತೆಮಾಡಬೇಡಿ. 23ಏತಕ್ಕೆಂದರೆ
ಊಟಕ್ಕಿಂತ ಪ್ರಾಣ, ಉಡುಪಿಗಿಂತ ದೇಹ ಮೇಲಾದುದು. 24ಕಾಗೆಗಳನ್ನು ಗಮನಿಸಿರಿ. ಅವು ಬಿತ್ತುವುದಿಲ್ಲ,
ಕೊಯ್ಯುವುದಿಲ್ಲ, ಅವುಗಳಿಗೆ ಉಗ್ರಾಣವೂ ಇಲ್ಲ, ಕಣಜವೂ ಇಲ್ಲ. ಆದರೂ ದೇವರು ಅವುಗಳನ್ನು
ಪೋಷಿಸುತ್ತಾರೆ. ಪಕ್ಷಿಗಳಿಗಿಂತ ನೀವು ಎಷ್ಟೋ ಮೇಲಾದವರು! 25ಚಿಂತಿಸಿ, ಚಿಂತಿಸಿ, ನಿಮ್ಮ
ಜೀವನಾವಧಿಯನ್ನು ಕೊಂಚಕಾಲವಾದರೂ ದೀರ್ಘಮಾಡಲು ನಿಮ್ಮಲ್ಲಿ ಯಾರಿಂದಾದೀತು? 26ಇಂಥ ಅಲ್ಪ
ಕಾರ್ಯಗಳನ್ನು ಮಾಡಲು ನೀವು ಅಶಕ್ತರಾಗಿ ಇರುವಾಗ, ಮಿಕ್ಕವುಗಳನ್ನು ಕುರಿತು ಚಿಂತಿಸುವುದೇಕೆ?
27ವನಕುಸುಮಗಳು ಬೆಳೆಯುವ ರೀತಿಯನ್ನು ಗಮನಿಸಿ ನೋಡಿ: ಅವು ದುಡಿಯುವುದಿಲ್ಲ; ನೂಲುವುದಿಲ್ಲ;
ಆದರೂ ಅರಸ ಸೊಲೊಮೋನನು ತನ್ನ ಸರ್ವ ವೈಭವದಲ್ಲಿ ಇದ್ದಾಗಲೂ, ಈ ಕುಸುಮಗಳಲ್ಲಿ ಒಂದರಷ್ಟೂ
ಸುಂದರವಾದ ಉಡುಪನ್ನು ಧರಿಸಿರಲಿಲ್ಲ. 28ಎಲೈ ಅಲ್ಪವಿಶ್ವಾಸಿಗಳೇ, ಇಂದಿದ್ದು ನಾಳೆ ಒಲೆ ಪಾಲಾಗುವ
ಬಯಲಿನ ಹುಲ್ಲಿಗೇ ದೇವರು ಹೀಗೆ ಉಡಿಸಿದರೆ, ನಿಮಗೆ ಇನ್ನೆಷ್ಟು ಮಾಡಲಾರರು ! 29ಅಲ್ಲದೆ,
ಅನ್ನಪಾನಗಳಿಗೆ ಏನು ಮಾಡೋಣ ಎಂದು ತೊಳಲಾಡಬೇಡಿ, ಪೇಚಾಡಬೇಡಿ. 30ಇವೆಲ್ಲವುಗಳಿಗಾಗಿ ಲೌಕಿಕ
ಜನರು ಅರಸಿ ಅಲೆದಾಡುತ್ತಾರೆ. ಇವು ನಿಮಗೆ ಅಗತ್ಯವೆಂದು ನಿಮ್ಮ ತಂದೆಗೆ ತಿಳಿದಿದೆ. 31ನೀವಾದರೋ
ದೇವರ ಸಾಮ್ರಾಜ್ಯಕ್ಕಾಗಿ ತವಕಪಡಿರಿ. ಇದರ ಸಮೇತ ಅವು ಕೂಡ ನಿಮಗೆ ಕೊಡಲಾಗುವುದು.

## ಸ್ವರ್ಗದಲ್ಲಿರಲಿ ನಿಮ್ಮ ಸಿರಿಸಂಪತ್ತು

(ಮತ್ತಾ. 6.19–21)

32 "ಪುಟ್ಟಮಂದೆಯೇ, ಭಯಪಡಬೇಡ. ನಿನ್ನ ತಂದೆ ತಮ್ಮ ಸಾಮ್ರಾಜ್ಯವನ್ನು ನಿನಗೆ ನೀಡಲು
ಇಷ್ಟಪಟ್ಟಿದ್ದಾರೆ. 33ನಿಮ್ಮ ಆಸ್ತಿಪಾಸ್ತಿಗಳನ್ನು ಮಾರಿ, ದಾನಧರ್ಮ ಮಾಡಿರಿ. ನಶಿಸದ ಹಣಚೀಲಗಳನ್ನು
ಗಳಿಸಿಕೊಳ್ಳಿರಿ; ಲಯವಾಗದ ಸಂಪತ್ತನ್ನು ಸ್ವರ್ಗದಲ್ಲಿ ಶೇಖರಿಸಿಟ್ಟುಕೊಳ್ಳಿರಿ. ಅಲ್ಲಿ ಅದು ಕಳ್ಳನಿಗೆ
ದಕ್ಕುವಂತಿಲ್ಲ; ನುಸಿಹಿಡಿದು ನಾಶವಾಗುವಂತಿಲ್ಲ. 34ನಿಮ್ಮ ನಿಧಿ ಎಲ್ಲಿದೆಯೋ ಅಲ್ಲೇ ಇರುವುದು ನಿಮ್ಮ
ಹೃದಯ.

## ಸದಾ ಸಿದ್ಧರಾಗಿರಿ

35 "ನಿಮ್ಮ ನಡು ಕಟ್ಟಿರಲಿ; ನಿಮ್ಮ ದೀಪ ಉರಿಯುತ್ತಿರಲಿ. 36ತಟ್ಟಿದ ತಕ್ಷಣ ಯಜಮಾನನಿಗೆ
ಬಾಗಿಲು ತೆರೆಯಲು ಸಿದ್ಧರಿರುವ ಸೇವಕರಂತೆ ಇರಿ. ತಮ್ಮ ಯಜಮಾನನು ಮದುವೆ ಔತಣ
ಮುಗಿಸಿಕೊಂಡು ಯಾವಾಗ ಹಿಂದಿರುಗುತ್ತಾನೋ, ಎಂದು ಅವರು ಎದುರು ನೋಡುತ್ತಾ ಇರುತ್ತಾರೆ.
37ಯಜಮಾನನು ಬಂದು ಯಾವ ಯಾವ ಸೇವಕ ಎಚ್ಚರವಾಗಿದ್ದಾನೆಂದು ಕಂಡುಕೊಳ್ಳುತ್ತಾನೋ,
ಅಂಥವರು ಭಾಗ್ಯವಂತರು. ಏಕೆಂದರೆ, ಯಜಮಾನನೇ ನಡುಕಟ್ಟಿನಿಂತು, ಅವರನ್ನು ಊಟಕ್ಕೆ ಕೂರಿಸಿ,
ಒಬ್ಬೊಬ್ಬನಿಗೂ ತಾನೇ ಉಪಚಾರ ಮಾಡುವನೆಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ.
38 "ಯಜಮಾನನು ಬರುವಾಗ ನಡು ರಾತ್ರಿ ಆಗಿರಲಿ, ಮುಂಜಾವವಾಗಿರಲಿ, ಎಚ್ಚರದಿಂದ ಇರುವ
ಸೇವಕರನ್ನು ಆತನು ಕಂಡರೆ ಅವರು ಭಾಗ್ಯವಂತರು. 39ಕಳ್ಳನು ಬರುವ ಗಳಿಗೆಯು ಮನೆಯ
ಯಜಮಾನನಿಗೆ ತಿಳಿದರೆ, ಅವನು ತನ್ನ ಮನೆಗೆ ಕನ್ನಹಾಕಲು ಬಿಡುವನೇ? ಇಲ್ಲ. 40ಇದನ್ನು ಚೆನ್ನಾಗಿ
ತಿಳಿದುಕೊಂಡು ನೀವು ಸಹ ಸಿದ್ಧರಾಗಿರಿ. ಏಕೆಂದರೆ, ನರಪುತ್ರನು ನೀವು ನಿರೀಕ್ಷಿಸದ ಗಳಿಗೆಯಲ್ಲಿ
ಬರುವನು," ಎಂದರು.

## ಪ್ರಾಮಾಣಿಕನಾದ ಮೇಸ್ತ್ರಿ

(ಮತ್ತಾ. 24.45–51)

41 ಆಗ ಪೇತ್ರನು, "ಪ್ರಭೂ, ನೀವು ಹೇಳಿದ ಈ ಸಾಮತಿ ನಮಗೆ ಮಾತ್ರ ಅನ್ವಯಿಸುತ್ತದೋ
ಅಥವಾ ಎಲ್ಲರಿಗೋ?" ಎಂದು ಕೇಳಿದನು. 42ಅದಕ್ಕೆ ಪ್ರಭು ಹೀಗೆಂದರು: "ಪ್ರಾಮಾಣಿಕನೂ ವಿವೇಕಿಯೂ
ಆದ ಮೇಸ್ತ್ರಿ ಯಾರು? ಕಾಲಕಾಲಕ್ಕೆ ಸರಿಯಾಗಿ ಕೂಲಿಯಾಳುಗಳಿಗೆ ದವಸಧಾನ್ಯವನ್ನು ಅಳೆದುಕೊಟ್ಟು,
ಮನೆಯ ಮೇಲ್ವಿಚಾರಣೆಯನ್ನು ನೋಡಿಕೊಳ್ಳಲು ಯಜಮಾನನು ನೇಮಿಸಿದ್ದ ಮೇಸ್ತ್ರಿಯೇ.
43ಯಜಮಾನನು ಮನೆಗೆ ಹಿಂದಿರುಗಿ ಬಂದಾಗ ಆ ಸೇವಕನು ತನ್ನ ಕರ್ತವ್ಯವನ್ನು ನಿಷ್ಠೆಯಿಂದ
ನೆರವೇರಿಸುತ್ತಿದ್ದರೆ ಅವನು ಧನ್ಯನು. 44ಅಂಥವನನ್ನು ಯಜಮಾನನು ತನ್ನ ಎಲ್ಲ ಆಸ್ತಿಪಾಸ್ತಿಗೆ
ಆಡಳಿತಗಾರನನ್ನಾಗಿ ನೇಮಿಸುವನೆಂದು ನಿಮಗೆ ನಿಜವಾಗಿ ಹೇಳುತ್ತೇನೆ.
45 "ಆದರೆ ಆ ಸೇವಕನು ತನ್ನಲ್ಲೇ, 'ನನ್ನ ಯಜಮಾನ ಬಹಳ ತಡಮಾಡಿ ಬರುತ್ತಾನೆ',
ಎಂದುಕೊಂಡು ಗಂಡಾಳು ಹೆಣ್ಣಾಳು ಎನ್ನದೆ ಹೊಡೆಯುವುದಕ್ಕೂ ಅಮಲೇರುವಷ್ಟು ತಿಂದು
ಕುಡಿಯುವುದಕ್ಕೂ ತೊಡಗಿದರೆ 46ಅವನು ನಿರೀಕ್ಷಿಸದ ದಿನದಲ್ಲಿ, ತಿಳಿಯದ ಗಳಿಗೆಯಲ್ಲಿ ಯಜಮಾನನು
ಬಂದು ಅವನನ್ನು ಚಿತ್ರಹಿಂಸೆಗೂ ವಿಶ್ವಾಸವಿಹೀನರ ದುರ್ಗತಿಗೂ ಗುರಿಮಾಡುವನು.
47 "ಸೇವಕನು ಯಜಮಾನನ ಇಷ್ಟಾರ್ಥವನ್ನು ಅರಿತುಕೊಂಡಿದ್ದರೂ ಅಜಾಗರೂಕನಾಗಿ ಇದ್ದರೆ
ಕಠಿಣ ಶಿಕ್ಷೆಗೆ ಗುರಿಯಾಗುತ್ತಾನೆ. 48ಅರಿಯದೆ ಅಜಾಗರೂಕನಾಗಿದ್ದರೆ ಕಡಿಮೆ ಶಿಕ್ಷೆಗೆ ಗುರಿಯಾಗುತ್ತಾನೆ.
ಹೆಚ್ಚು ಪಡೆದವನಿಂದ ಹೆಚ್ಚು ನಿರೀಕ್ಷಿಸಲಾಗುವುದು. ಇನ್ನೂ ಹೆಚ್ಚು ವಹಿಸಿಕೊಂಡವನಿಂದ ಇನ್ನೂ ಹೆಚ್ಚಾಗಿ
ಕೇಳಲಾಗುವುದು.

### ಯೇಸು ನಿಮಿತ್ತ ಭಿನ್ನಭೇದಗಳು

(ಮತ್ತಾ. 10.34–36)

49 “ನಾನು ಬಂದಿರುವುದು ಜಗತ್ತಿನಲ್ಲಿ ಬೆಂಕಿಯನ್ನು ಹೊತ್ತಿಸಲು. ಅದು ಈಗಾಗಲೇ
ಉರಿಯುತ್ತಿರಬೇಕೆಂಬುದೇ ನನ್ನ ಬಯಕೆ. 50ಆದರೆ ನಾನು ಪಡೆಯಬೇಕಾದ ಶ್ರಮಾಸ್ನಾನ ಒಂದುಂಟು.
ಅದು ಈಡೇರುವ ತನಕ ನನಗೆ ನೆಮ್ಮದಿಯಿಲ್ಲ. 51ನಾನು ಲೋಕಕ್ಕೆ ಸಮಾಧಾನವನ್ನು ತರಲು ಬಂದೆ ಎಂದು
ಭಾವಿಸುತ್ತೀರೋ? ಇಲ್ಲ. ಭಿನ್ನಭೇದಗಳನ್ನು ಉಂಟುಮಾಡಲು ಬಂದೆನೆಂದು ನಿಮಗೆ ಒತ್ತಿ ಹೇಳುತ್ತೇನೆ.
52ಹೇಗೆಂದರೆ, ಒಂದೇ ಮನೆಯಲ್ಲಿರುವ ಐವರಲ್ಲಿ, ಇಂದಿನಿಂದ ಇಬ್ಬರಿಗೆ ವಿರುದ್ಧ ಮೂವರು, ಮೂವರಿಗೆ
ವಿರುದ್ಧ ಇಬ್ಬರು ವಿಭಾಗವಾಗುವರು. 53ಮಗನಿಗೆ ವಿರುದ್ದವಾಗಿ ತಂದೆ, ಮಗಳಿಗೆ ವಿರುದ್ಧವಾಗಿ ತಾಯಿ,
ಸೊಸೆಗೆ ವಿರುದ್ಧವಾಗಿ ಅತ್ತೆ, ಪರಸ್ಪರ ವಿರೋಧವಾಗಿ ವಿಂಗಡಿಸಿ ಹೋಗುವರು,” ಎಂದರು.

### ಕಾಲ ಪ್ರಜ್ಞೆ

(ಮತ್ತಾ. 16.2–3)

54 ಇದೂ ಅಲ್ಲದೆ ಯೇಸುಸ್ವಾಮಿ ಜನ ಸಮೂಹವನ್ನು ನೋಡಿ, “ಪಶ್ಚಿಮ ದಿಕ್ಕಿನಲ್ಲಿ ಮೋಡ
ಏಳುವುದನ್ನು ನೀವು ನೋಡಿದ ಕೂಡಲೇ, ‘ಭಾರಿ ಮಳೆ ಬರುತ್ತದೆ’ ಎನ್ನುತ್ತೀರಿ; ಹಾಗೆಯೇ ಆಗುತ್ತದೆ.
55ದಕ್ಷಿಣ ದಿಕ್ಕಿನ ಗಾಳಿ ಬೀಸಿದಾಗ ಉರಿಬಿಸಿಲು ಎನ್ನುತ್ತೀರಿ; ಅಂತೆಯೇ ಇರುತ್ತದೆ. 56ಆಷಾಡಭೂತಿಗಳೇ,
ಭೂಮ್ಯಾಕಾಶಗಳ ಲಕ್ಷಣಗಳನ್ನು ನೀವು ಸರಿಯಾಗಿ ಅರಿತುಕೊಳ್ಳಬಲ್ಲಿರಿ; ಆದರೆ ಪ್ರಸ್ತುತ ಕಾಲವನ್ನು
ಅರ್ಥಮಾಡಿಕೊಳ್ಳಲಾರಿರಾ?

### ವ್ಯಾಜ್ಯಗಾರನೊಡನೆ ನೇರಸಂಧಾನ

(ಮತ್ತಾ. 5.25–26)

57 “ನ್ಯಾಯನಿರ್ಣಯವನ್ನು ನಿಮ್ಮಲ್ಲಿಯೇ ನೀವು ಏಕೆ ಮಾಡಿಕೊಳ್ಳಬಾರದು? 58ನೀನು
ನ್ಯಾಯಾಧಿಪತಿಯ ಬಳಿಗೆ ಹೋಗಬೇಕಾಗಿ ಬಂದಲ್ಲಿ, ದಾರಿಯಲ್ಲೇ ನಿನ್ನ ವಿರೋಧಿಯೊಡನೆ ವ್ಯಾಜ್ಯ
ತೀರಿಸಿಕೊಳ್ಳಲು ಪ್ರಯತ್ನಿಸು. ಇಲ್ಲದಿದ್ದರೆ ಅವನು ನಿನ್ನನ್ನು ನ್ಯಾಯಾಧಿಪತಿಯ ಮುಂದೆ
ಎಳೆದೊಯ್ಯಬಹುದು; ನ್ಯಾಯಾಧಿಪತಿ ನಿನ್ನನ್ನು ಸೆರೆಯ ಅಧಿಕಾರಿಯ ಕೈಗೊಪ್ಪಿಸಬಹುದು. ಸೆರೆ ಅಧಿಕಾರಿ
ನಿನ್ನನ್ನು ಸೆರೆಮನೆಯಲ್ಲಿ ಹಾಕಬಹುದು. 59ಅಲ್ಲಿಂದ ನೀನು ಹೊರಗೆ ಬರಬೇಕಾದರೆ ಕಡೇ ಕಾಸನ್ನೂ ಬಿಡದೆ
ಎಲ್ಲವನ್ನೂ ಸಲ್ಲಿಸಬೇಕಾಗುವುದೆಂಬುದು ನಿಶ್ಚಯ,” ಎಂದರು.

### ಪಾಪಕ್ಕೆ ವಿಮುಖರಾಗಿರಿ

**13** ಅದೇ ಸಮಯಕ್ಕೆ ಅಲ್ಲಿದ್ದವರಲ್ಲಿ ಕೆಲವರು ಯೇಸುಸ್ವಾಮಿಯ ಬಳಿಗೆ ಬಂದು, ಬಲಿಯರ್ಪಿಸುತ್ತಾ
ಇದ್ದ ಗಲಿಲೇಯದವರನ್ನು ಪಿಲಾತನು ಕೊಲ್ಲಿಸಿದನೆಂಬ ವಿಷಯವನ್ನು ತಿಳಿಸಿದರು. 2ಅದಕ್ಕೆ ಯೇಸು,
“ಇಂಥಾ ಕೊಲೆಗೆ ಈಡಾದವರು ಇತರ ಎಲ್ಲ ಗಲಿಲೇಯದವರಿಗಿಂತ ಹೆಚ್ಚು ಪಾಪಿಗಳೆಂದು
ಭಾವಿಸುತ್ತೀರೋ? 3ಹಾಗೆ ಭಾವಿಸಕೂಡದು. ನೀವು ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖರಾಗಿ ದೇವರಿಗೆ
ಅಭಿಮುಖರಾಗದೆ ಹೋದರೆ, ಅವರ ಹಾಗೆಯೇ ನೀವೂ ನಾಶವಾಗುವಿರಿ. 4ಶಿಲೊವಾ ಎಂಬಲ್ಲಿ ಗೋಪುರ
ಕುಸಿದು ಬಿದ್ದಾಗ ಹದಿನೆಂಟು ಜನ ಸತ್ತರಲ್ಲವೆ? ಅವರು ಜೆರುಸಲೇಮಿನಲ್ಲಿ ವಾಸವಾಗಿರುವ ಇತರ ಎಲ್ಲಾ
ಜನರಿಗಿಂತ ಹೆಚ್ಚು ದೋಷಿಗಳಾಗಿದ್ದರೆಂದು ಭಾವಿಸುತ್ತೀರೋ? 5ಹಾಗಲ್ಲ, ನೀವು ಪಶ್ಚಾತ್ತಾಪಪಟ್ಟು ಪಾಪಕ್ಕೆ
ವಿಮುಖರಾಗಿ ದೇವರಿಗೆ ಅಭಿಮುಖರಾಗದಿದ್ದರೆ, ಅವರ ಹಾಗೆಯೇ ನೀವೂ ನಾಶವಾಗುವಿರಿ,” ಎಂದರು.

**ಹಣ್ಣು ಬಿಡದ ಅಂಜೂರ**

6 ಅನಂತರ ಯೇಸುಸ್ವಾಮಿ ಈ ಸಾಮತಿಯನ್ನು ಹೇಳಿದರು: "ಒಬ್ಬನು ತನ್ನ ದ್ರಾಕ್ಷಿ ತೋಟದಲ್ಲಿ ಒಂದು ಅಂಜೂರದ ಮರವನ್ನು ನೆಡಿಸಿದ್ದ. ಒಮ್ಮೆ ಅವನು ಬಂದು ಅದರಲ್ಲಿ ಹಣ್ಣನ್ನು ಹುಡುಕಲು ಒಂದೂ ಕಾಣಿಸಲಿಲ್ಲ. [7]ತೋಟಗಾರನನ್ನು ಕರೆದು, 'ನೋಡು, ಮೂರು ವರ್ಷಗಳಿಂದ ಈ ಮರದಲ್ಲಿ ಹಣ್ಣನ್ನು ಹುಡುಕುತ್ತಾ ಇದ್ದೇನೆ. ಒಂದಾದರೂ ಕಂಡುಬರಲಿಲ್ಲ. ಇನ್ನು ಇದನ್ನು ಕಡಿದು ಹಾಕು. ಭೂಮಿಗೆ ಭಾರವಾಗಿ ಅದರ ಸಾರವನ್ನು ಇದೇಕೆ ವ್ಯರ್ಥ ಮಾಡಬೇಕು?' ಎಂದು ಹೇಳಿದ. [8]ಅದಕ್ಕೆ ತೋಟಗಾರನು, 'ಸ್ವಾಮಿ, ಈ ಒಂದು ವರ್ಷ ಇದು ಹಾಗೆಯೇ ಇರಲಿ ಬಿಡಿ. ಅಷ್ಟರಲ್ಲಿ ಸುತ್ತಲೂ ಪಾತಿತೆಗೆದು ಗೊಬ್ಬರ ಹಾಕುತ್ತೇನೆ. [9]ಮುಂದಿನ ವರ್ಷ ಹಣ್ಣು ಬಿಟ್ಟರೆ ಸರಿ; ಇಲ್ಲದಿದ್ದರೆ ಕಡಿದುಹಾಕೋಣ,' ಎಂದನು."

**ಗುಣಹೊಂದಿದ ಗೂನಿ**

10 ಒಂದು ಸಬ್ಬತ್‌ದಿನ ಯೇಸುಸ್ವಾಮಿ ಪ್ರಾರ್ಥನಾಮಂದಿರದಲ್ಲಿ ಬೋಧಿಸುತ್ತಿದ್ದರು. [11]ಹದಿನೆಂಟು ವರ್ಷಗಳಿಂದ ದೆವ್ವಪೀಡಿತಳಾಗಿ ನರಳುತ್ತಿದ್ದ ಒಬ್ಬ ಮಹಿಳೆ ಅಲ್ಲಿದ್ದಳು. ಆಕೆ ಒಬ್ಬ ಗೂನಿ; ನೆಟ್ಟಗೆ ನಿಲ್ಲಲು ಸ್ವಲ್ಪವೂ ಆಗುತ್ತಿರಲಿಲ್ಲ. [12]ಯೇಸು ಆಕೆಯನ್ನು ನೋಡಿ ಹತ್ತಿರಕ್ಕೆ ಕರೆದು, 'ನೋಡಮ್ಮ, ನೀನು ವ್ಯಾಧಿಯಿಂದ ಬಿಡುಗಡೆಯಾದೆ," ಎಂದು ಹೇಳಿ, [13]ಆಕೆಯ ಮೇಲೆ ತಮ್ಮ ಹಸ್ತಗಳನ್ನಿಟ್ಟರು. ತಕ್ಷಣವೇ ಆಕೆ ನೆಟ್ಟಗಾದಳು ಮತ್ತು ದೇವರಿಗೆ ಸ್ತುತಿಸ್ತೋತ್ರ ಸಲ್ಲಿಸಿದಳು.

14 ಯೇಸು ಸಬ್ಬತ್‌ದಿನದಲ್ಲಿ ಗುಣಮಾಡಿದ್ದನ್ನು ಕಂಡು, ಪ್ರಾರ್ಥನಾಮಂದಿರದ ಅಧಿಕಾರಿ ಕುಪಿತನಾದನು. ಕೂಡಿದ್ದ ಜನರನ್ನು ಉದ್ದೇಶಿಸಿ, "ಕೆಲಸ ಮಾಡಲು ಆರು ದಿನಗಳಿವೆ, ಆ ದಿನಗಳಲ್ಲಿ ಬಂದು ಗುಣಮಾಡಿಸಿಕೊಳ್ಳಿರಿ; ಸಬ್ಬತ್ ದಿನದಲ್ಲಿ ಮಾತ್ರ ಕೂಡದು," ಎಂದನು. [15]ಪ್ರಭು ಅವನಿಗೆ ಪ್ರತ್ಯುತ್ತರವಾಗಿ, "ಕಪಟಿಗಳೇ, ಸಬ್ಬತ್ ದಿನ ನಿಮ್ಮಲ್ಲಿ ಪ್ರತಿಯೊಬ್ಬನೂ ತನ್ನ ಕತ್ತೆಯನ್ನಾಗಲಿ, ಎತ್ತನ್ನಾಗಲಿ ಕೊಟ್ಟಿಗೆಯಿಂದ ಬಿಚ್ಚಿ ನೀರಿಗೆ ಹಿಡಿದುಕೊಂಡು ಹೋಗುವುದಿಲ್ಲವೆ? [16]ಅಬ್ರಹಾಮನ ವಂಶಜಳಾದ ಈಕೆಯನ್ನು ಸೈತಾನನು ಹದಿನೆಂಟು ವರ್ಷಗಳಿಂದ ಕಟ್ಟಿ ಹಾಕಿದ್ದನು; ಈ ಕಟ್ಟಿನಿಂದ ಈಕೆಯನ್ನು ಸಬ್ಬತ್ ದಿನ ಬಿಡಿಸಬಾರದಿತ್ತೆ?" ಎಂದರು.

17 ಈ ಉತ್ತರವನ್ನು ಕೇಳಿ ಯೇಸುವಿನ ವಿರೋಧಿಗಳೆಲ್ಲರೂ ನಾಚಿದರು. ಜನರ ಕೂಟವಾದರೋ ಅವರು ಮಾಡಿದ ಮಹತ್ಕಾರ್ಯಗಳನ್ನೆಲ್ಲಾ ಕಂಡು ಸಂತೋಷಪಟ್ಟಿತು.

**ಸಾಸಿವೆಕಾಳಿನ ಸಾಮತಿ**

(ಮತ್ತಾ. 13.31–32; ಮಾರ್ಕ 4.30–32)

18 ಆಗ ಯೇಸುಸ್ವಾಮಿ, "ದೇವರ ಸಾಮ್ರಾಜ್ಯವು ಏನನ್ನು ಹೋಲುತ್ತದೆ? [19]ಅದನ್ನು ಯಾವುದಕ್ಕೆ ಹೋಲಿಸಲಿ? ಅದು ಒಂದು ಸಾಸಿವೆ ಕಾಳಿನಂತೆ ಇದೆ. ಒಬ್ಬನು ಅದನ್ನು ತೆಗೆದುಕೊಂಡು ಹೋಗಿ ತನ್ನ ತೋಟದಲ್ಲಿ ಬಿತ್ತಿದನು. ಅದು ಬೆಳೆದು ಮರವಾಯಿತು. ಆಕಾಶದಲ್ಲಿ ಹಾರಾಡುವ ಪಕ್ಷಿಗಳು ಅದರ ರೆಂಬೆಗಳಲ್ಲಿ ಗೂಡುಕಟ್ಟಿ ವಾಸಮಾಡತೊಡಗಿದವು," ಎಂದರು.

**ಹುಳಿಹಿಟ್ಟಿನ ಸಾಮತಿ**

(ಮತ್ತಾ. 13.33)

20 ಪುನಃ ಯೇಸುಸ್ವಾಮಿ, "ದೇವರ ಸಾಮ್ರಾಜ್ಯವನ್ನು ಯಾವುದಕ್ಕೆ ಹೋಲಿಸಲಿ, [21]ಅದು ಹುಳಿಹಿಟ್ಟಿನಂತೆ ಇದೆ. ಅದನ್ನು ಒಬ್ಬಾಕೆ ತೆಗೆದುಕೊಂಡು ಮೂರು ಸೇರು ಹಿಟ್ಟಿನಲ್ಲಿ ಕಲಸಿದಳು. ಆ ಹಿಟ್ಟೆಲ್ಲಾ ಹುಳಿಯಾಯಿತು," ಎಂದರು.

## ಇಕ್ಕಟ್ಟಾದ ಬಾಗಿಲು

(ಮತ್ತಾ. 7.13–14, 21–23)

22 ಯೇಸುಸ್ವಾಮಿ ಊರೂರುಗಳಲ್ಲೂ ಹಳ್ಳಿಹಳ್ಳಿಗಳಲ್ಲೂ ಉಪದೇಶಮಾಡಿಕೊಂಡು
ಜೆರುಸಲೇಮಿನತ್ತ ಪ್ರಯಾಣಮಾಡುತ್ತಿದ್ದರು. 23ಆಗ ಒಬ್ಬನು, "ಸ್ವಾಮಿ, ಜೀವೋದ್ಧಾರ ಹೊಂದುವವರು
ಕೆಲವರು ಮಾತ್ರವೊ?" ಎಂದು ವಿಚಾರಿಸಿದನು. 24ಆಗ ಯೇಸು ಜನರಿಗೆ, "ಇಕ್ಕಟ್ಟಾದ ಬಾಗಿಲಿನಿಂದಲೇ
ಒಳಹೋಗಲು ಸರ್ವಪ್ರಯತ್ನಮಾಡಿ. ಏಕೆಂದರೆ, ಅನೇಕರು ಒಳಕ್ಕೆ ಹೋಗಲು ಖಂಡಿತವಾಗಿ
ಪ್ರಯತ್ನಿಸುವರು; ಆದರೆ ಅದು ಅವರಿಂದಾಗದು. 25ಮನೆಯ ಯಜಮಾನನು ಎದ್ದು ಬಾಗಿಲನ್ನು ಮುಚ್ಚಿದ
ಮೇಲೆ ನೀವು ಹೊರಗಡೆ ನಿಲ್ಲಬೇಕಾಗುವುದು. ಬಾಗಿಲನ್ನು ತಟ್ಟುತ್ತಾ, 'ಸ್ವಾಮಿ, ನಮಗೆ ಬಾಗಿಲು ತೆರೆಯಿರಿ,'
ಎಂದು ನೀವು ಕೇಳುವಿರಿ. ಅದಕ್ಕೆ ಅವನು, 'ನೀವು ಎಲ್ಲಿಯವರೋ ನಾನು ಅರಿಯೆ' ಎನ್ನುವನು. 26ಆಗ
ನೀವು, 'ನಿಮ್ಮೊಂದಿಗೆ ನಾವು ಊಟಮಾಡಿದ್ದೇವೆ, ಪಾನಮಾಡಿದ್ದೇವೆ; ನೀವು ನಮ್ಮ ಬೀದಿಗಳಲ್ಲಿ
ಉಪದೇಶಮಾಡಿದ್ದೀರಿ,' ಎಂದು ಹೇಳಲಾರಂಭಿಸುವಿರಿ. 27ಆದರೆ ಅವನು ಪುನಃ, 'ನೀವು ಎಲ್ಲಿಯವರೋ
ನಾನರಿಯೆ. ಅಕ್ರಮಿಗಳೇ, ಎಲ್ಲರೂ ನನ್ನಿಂದ ತೊಲಗಿರಿ,' ಎಂದು ಸ್ಪಷ್ಟವಾಗಿ ನುಡಿಯುವನು. 28ಅಬ್ರಹಾಮ,
ಇಸಾಕ, ಯಕೋಬ ಮತ್ತು ಎಲ್ಲಾ ಪ್ರವಾದಿಗಳು ದೇವರ ಸಾಮ್ರಾಜ್ಯದಲ್ಲಿ ಇರುವುದನ್ನೂ ನಿಮ್ಮನ್ನು ಮಾತ್ರ
ಹೊರಗೆ ಹಾಕಿರುವುದನ್ನೂ ನೋಡುವಾಗ ನಿಮಗಾಗುವ ಗೋಳಾಟವೇನು! ಹಲ್ಲುಕಡಿತವೇನು!!
29ಚತುರ್ದಿಕ್ಕುಗಳಿಂದಲೂ ಜನರು ಬಂದು, ದೇವರ ಸಾಮ್ರಾಜ್ಯದ ಹಬ್ಬದೂಟದಲ್ಲಿ ಭಾಗಿಗಳಾಗುವರು.
30 "ಇಗೋ, ಕಡೆಯವರಲ್ಲಿ ಕೆಲವರು ಮೊದಲಿಗರಾಗುವರು. ಮೊದಲಿಗರಲ್ಲಿ ಕೆಲವರು
ಕಡೆಯವರಾಗುವರು," ಎಂದರು.

## ಜೆರುಸಲೇಮನ್ನು ಕುರಿತು ಪ್ರಲಾಪ

(ಮತ್ತಾ. 23.37–39)

31 ಅದೇ ಸಮಯಕ್ಕೆ ಸರಿಯಾಗಿ ಕೆಲವು ಮಂದಿ ಫರಿಸಾಯರು ಯೇಸುಸ್ವಾಮಿಯ ಬಳಿಗೆ ಬಂದು,
"ಇಲ್ಲಿಂದ ಹೊರಟು ಹೋಗಿಬಿಡಿ, ಹೆರೋದನು ನಿಮ್ಮನ್ನು ಕೊಲ್ಲಬೇಕೆಂದಿದ್ದಾನೆ," ಎಂದರು. 32ಅದಕ್ಕೆ
ಯೇಸು, "ನೀವು ಹೋಗಿ ಆ ನರಿಗೆ ಹೀಗೆಂದು ತಿಳಿಸಿರಿ: ಇಂದು ಮತ್ತು ನಾಳೆ ದೆವ್ವಗಳನ್ನು ಬಿಡಿಸುತ್ತೇನೆ,
ರೋಗಿಗಳನ್ನು ಗುಣಪಡಿಸುತ್ತೇನೆ, ಮೂರನೆಯ ದಿನ ನನ್ನ ಕಾರ್ಯ ಸಿದ್ಧಿಗೆ ಬರುವುದು. 33ಹೇಗೂ ಇಂದು,
ನಾಳೆ ಮತ್ತು ನಾಡಿದ್ದು ನಾನು ನನ್ನ ಮಾರ್ಗವನ್ನು ಮುಂದುವರಿಸಬೇಕು. ಪ್ರವಾದಿಯಾದವನು
ಜೆರುಸಲೇಮಿನ ಹೊರಗೆ ಕೊಲೆಗೀಡಾಗುವುದು ಸಲ್ಲದು.
34 "ಓ ಜೆರುಸಲೇಮೇ, ಜೆರುಸಲೇಮೇ, ಪ್ರವಾದಿಗಳ ಕೊಲೆಪಾತಕಿಯೇ, ದೇವರು ನಿನ್ನ ಬಳಿಗೆ
ಕಳುಹಿಸಿದವರನ್ನು ಕಲ್ಲುಗಳಿಂದ ಹೊಡೆಯುವವಳೇ, ಕೋಳಿ ತನ್ನ ಮರಿಗಳನ್ನು ರೆಕ್ಕೆಗಳಡಿ
ಸೇರಿಸಿಕೊಳ್ಳುವಂತೆ, ನಾನು ನಿನ್ನ ಮಕ್ಕಳನ್ನು ಒಂದಾಗಿ ಸೇರಿಸಿ ಅಪ್ಪಿಕೊಳ್ಳಲು ಎಷ್ಟೋ ಬಾರಿ ಅಪೇಕ್ಷಿಸಿದೆ.
35ಆದರೆ ನೀನು ಒಪ್ಪಲಿಲ್ಲ. ಇಗೋ, ನಿಮ್ಮ ದೇವಾಲಯ ಪಾಳುಬೀಳುವುದು. 'ಸರ್ವೇಶ್ವರನ ನಾಮದಲ್ಲಿ
ಬರುವವರು ಧನ್ಯರು,' ಎಂದು ನೀವಾಗಿ ಹೇಳುವ ದಿನದವರೆಗೂ ನೀವು ನನ್ನನ್ನು ಕಾಣಲಾರಿರಿ, ಎಂಬುದು
ನಿಶ್ಚಯ," ಎಂದರು.

## ಜಲೋದರ ರೋಗಿಗೆ ಆರೋಗ್ಯದಾನ

**14** ಅಂದು ಸಬ್ಬತ್‍ದಿನ. ಯೇಸುಸ್ವಾಮಿ ಒಬ್ಬ ಪ್ರಮುಖ ಫರಿಸಾಯನ ಮನೆಗೆ ಊಟಕ್ಕೆ ಹೋದರು.
ಎಲ್ಲರ ಕಣ್ಣು ಅವರ ಮೇಲಿತ್ತು. 2ಅಲ್ಲೇ ಅವರ ಮುಂದೆ ಜಲೋದರ ರೋಗಿಯೊಬ್ಬನು ಇದ್ದನು.
3"ಸಬ್ಬತ್‍ದಿನ ಗುಣಪಡಿಸುವುದು ಸರಿಯೋ ತಪ್ಪೋ?" ಎಂದು ಯೇಸು ಫರಿಸಾಯರನ್ನೂ ಶಾಸ್ತ್ರಜ್ಞರನ್ನೂ

ಕೇಳಿದರು. [4]ಅದಕ್ಕವರು ಮೌನವಾಗಿದ್ದರು. ಯೇಸು ರೋಗಿಯ ಕೈ ಹಿಡಿದು ಗುಣಪಡಿಸಿ ಕಳಿಸಿಬಿಟ್ಟರು.
[5]ಅನಂತರ, "ನಿಮ್ಮಲ್ಲಿ ಒಬ್ಬನ ಮಗನಾಗಲಿ, ಎತ್ತಾಗಲಿ ಬಾವಿಯಲ್ಲಿ ಬಿದ್ದರೆ, ಸಬ್ಬತ್‍ದಿನವಾಗಿದ್ದರೂ ನೀವು
ತಡಮಾಡದೆ ಮೇಲಕ್ಕೆ ಎತ್ತುವುದಿಲ್ಲವೆ?" ಎಂದು ಕೇಳಿದರು. 6ಅದಕ್ಕೂ ಅವರು ನಿರುತ್ತರರಾದರು.

**ದೀನ ಸ್ಥಾನಮಾನ**

7 ಅಲ್ಲದೆ, ಅಲ್ಲಿಗೆ ಬಂದಿದ್ದ ಅತಿಥಿಗಳು ಪಂಕ್ತಿಯಲ್ಲಿ ಉತ್ತಮ ಸ್ಥಾನಗಳನ್ನು ಆರಿಸಿಕೊಳ್ಳುತ್ತಿದ್ದರು.
ಇದನ್ನು ಗಮನಿಸಿದ ಯೇಸು ಸಾಮತಿರೂಪದಲ್ಲಿ ಹೀಗೆಂದರು: [8]"ಮದುವೆಯ ಔತಣಕ್ಕೆ ನಿನ್ನನ್ನು
ಯಾರಾದರೂ ಆಹ್ವಾನಿಸಿದಾಗ ಪ್ರಧಾನ ಆಸನದಲ್ಲಿ ಹೋಗಿ ಕುಳಿತುಕೊಳ್ಳಬೇಡ. ಏಕೆಂದರೆ, ನಿನಗಿಂತ
ಗೌರವಸ್ಥನನ್ನು ಆಹ್ವಾನಿಸಿರಬಹುದು. [9]ನಿಮ್ಮಿಬ್ಬರನ್ನು ಕರೆದಾತ ನಿನ್ನ ಹತ್ತಿರ ಬಂದು, 'ಇವನಿಗೆ ನಿನ್ನ
ಸ್ಥಳವನ್ನು ಬಿಟ್ಟುಕೊಡು,' ಎನ್ನಬಹುದು. ಆಗ ನೀನು ನಾಚಿಕೆಪಟ್ಟುಕೊಂಡು ಕಡೆಯ ಸ್ಥಾನದಲ್ಲಿ ಹೋಗಿ
ಕುಳಿತುಕೊಳ್ಳಬೇಕಾಗಬಹುದು. [10]ಅದಕ್ಕೆ ಬದಲಾಗಿ ನಿನ್ನನ್ನು ಆಹ್ವಾನಿಸಿದಾಗ ಕಡೆಯ ಸ್ಥಳದಲ್ಲಿ ಹೋಗಿ
ಕುಳಿತುಕೋ. ಕರೆದವನು ಬಂದು, 'ಗೆಳೆಯಾ, ಮೇಲೆ ಬಾ' ಎಂದು ಹೇಳುವನು. ಆಗ ಜೊತೆಗೆ ಕುಳಿತಿರುವ
ಅತಿಥಿಗಳೆಲ್ಲರ ಮುಂದೆ ನಿನಗೆ ಗೌರವ ಸಿಗುವುದು. [11]ಅಂತೆಯೇ, ತನ್ನನ್ನು ತಾನೇ ಮೇಲಕ್ಕೆ
ಏರಿಸಿಕೊಳ್ಳುವವನನ್ನು ದೇವರು ಕೆಳಗಿಳಿಸುವರು; ತನ್ನನ್ನು ತಾನೇ ತಗ್ಗಿಸಿಕೊಳ್ಳುವವನನ್ನು ದೇವರು
ಮೇಲಕ್ಕೇರಿಸುವರು," ಎಂದರು.

**ಧನ್ಯವಾದ ದಾನ**

12 ಅನಂತರ ತಮ್ಮನ್ನು ಊಟಕ್ಕೆ ಆಮಂತ್ರಿಸಿದವನನ್ನು ನೋಡಿ ಯೇಸುಸ್ವಾಮಿ, "ನೀನು ಊಟ
ಅಥವಾ ಔತಣವನ್ನು ಏರ್ಪಡಿಸುವಾಗ ನಿನ್ನ ಸ್ನೇಹಿತರನ್ನಾಗಲಿ, ಸೋದರರನ್ನಾಗಲಿ, ಬಂಧು
ಬಳಗದವರನ್ನಾಗಲಿ, ಧನಿಕರಾದ ನೆರೆಯವರನ್ನಾಗಲಿ ಕರೆಯಬೇಡ. ಏಕೆಂದರೆ, ಅವರು ನಿನ್ನನ್ನು
ಪ್ರತಿಯಾಗಿ ಕರೆದು ಮುಯ್ಯಿ ತೀರಿಸಿಬಿಡಬಹುದು. [13]ಆದ್ದರಿಂದ ಔತಣವನ್ನು ಏರ್ಪಡಿಸುವಾಗ ದರಿದ್ರರು,
ಅಂಗವಿಕಲರು, ಕುಂಟರು, ಕುರುಡರು ಇಂಥವರನ್ನು ಕರೆ; [14]ಆಗ ನೀನು ಧನ್ಯನಾಗುವೆ. ಏಕೆಂದರೆ, ಅವರು
ನಿನಗೆ ಪ್ರತಿಯಾಗಿ ಏನು ಮಾಡಲೂ ಇಲ್ಲದವರು. ಸತ್ಪುರುಷರು ಪುನರುತ್ಥಾನ ಹೊಂದುವಾಗ ದೇವರೇ
ನಿನಗೆ ಸಲ್ಲಬೇಕಾದುದನ್ನು ಸಲ್ಲಿಸುವರು," ಎಂದರು.

**ಅಪೂರ್ವ ಆಹ್ವಾನಿತರು**

(ಮತ್ತಾ. 22.1–10)

15 ಊಟಕ್ಕೆ ಕುಳಿತಿದ್ದವರಲ್ಲಿ ಒಬ್ಬನು ಯೇಸುಸ್ವಾಮಿ ಹೇಳಿದ್ದನ್ನು ಕೇಳಿ, "ದೇವರ ಸಾಮ್ರಾಜ್ಯದ
ಔತಣದಲ್ಲಿ ಭಾಗಿಯಾಗುವವನು ಎಷ್ಟೋ ಧನ್ಯನು!" ಎಂದನು. [16]ಯೇಸು ಅವನಿಗೆ ಈ ಸಾಮತಿ
ಹೇಳಿದರು: "ಒಬ್ಬಾತ ಒಂದು ದೊಡ್ಡ ಔತಣವನ್ನೇರ್ಪಡಿಸಿ ಅನೇಕ ಜನರಿಗೆ ಆಹ್ವಾನವಿತ್ತ. [17]ಊಟಕ್ಕೆ
ವೇಳೆಯಾದಾಗ, 'ಈಗ ಎಲ್ಲಾ ಸಿದ್ಧವಾಗಿದೆ ಬನ್ನಿ,' ಎಂದು ಹೇಳಿ ಆಹ್ವಾನಿತರನ್ನು ಕರೆದುತರಲು
ಸೇವಕರನ್ನು ಕಳಿಸಿದ. [18]ಆದರೆ ಆಹ್ವಾನಿತರೆಲ್ಲರೂ ಒಬ್ಬರಾದ ಮೇಲೊಬ್ಬರು 'ಕ್ಷಮಿಸಬೇಕು,' ಎಂದು
ಹೇಳಲಾರಂಭಿಸಿದರು. [19]ಒಬ್ಬ, 'ಕ್ಷಮಿಸಬೇಕು, ಒಂದು ಹೊಲ ಕೊಂಡು ಕೊಂಡಿದ್ದೇನೆ, ಅಲ್ಲಿಗೆ ಹೋಗಿ
ನೋಡಬೇಕಾಗಿದೆ,' ಎಂದ. [20]ಇನ್ನೊಬ್ಬ, 'ಐದು ಜೊತೆ ಎತ್ತುಗಳನ್ನು ಕೊಂಡುಕೊಂಡಿದ್ದೇನೆ, ಅವುಗಳನ್ನು
ಪರೀಕ್ಷಿಸಲು ಹೋಗುತ್ತಿದ್ದೇನೆ. ನನ್ನನ್ನು ಕ್ಷಮಿಸಬೇಕು,' ಎಂದ. ಮತ್ತೊಬ್ಬ, 'ನನಗೆ ಈಗ ತಾನೆ ಮದುವೆ
ಆಗಿದೆ, ಬರುವುದಕ್ಕಾಗುವುದಿಲ್ಲ,' ಎಂದನು.

21 "ಆ ಸೇವಕನು ಬಂದು ಯಜಮಾನನಿಗೆ ಹಾಗೆಯೇ ವರದಿ ಮಾಡಿದ. [22]ಇದನ್ನು ಕೇಳಿ
ಯಜಮಾನನಿಗೆ ರೋಷಬಂದಿತು. ಅವನು ಸೇವಕನಿಗೆ, 'ಪಟ್ಟಣದ ಹಾದಿಬೀದಿಗಳಿಗೂ
ಸಂದುಗೊಂದುಗಳಿಗೂ ಹೋಗಿ ದರಿದ್ರರು, ಅಂಗವಿಕಲರು, ಕುಂಟರು, ಕುರುಡರು ಇಂಥವರನ್ನು
ಕರೆದುಕೊಂಡು ಬಾ,' ಎಂದು ಆಜ್ಞೆಮಾಡಿದ. [23]ಸೇವಕನು ಬಂದು, 'ಸ್ವಾಮಿ, ನಿಮ್ಮ ಆಜ್ಞೆಯಂತೆ

ಮಾಡಿದ್ದಾಯಿತು; ಆದರೆ ಇನ್ನೂ ಸ್ಥಳವಿದೆ,' ಎಂದು ಹೇಳಿದ. ಅದಕ್ಕೆ ಯಜಮಾನ 'ಹಾಗಾದರೆ
ಹಳ್ಳಿಹಾದಿಗಳಿಗೂ ಎಲ್ಲೆ ಬೇಲಿಗಳವರೆಗೂ ಹೋಗಿ ಕಂಡಕಂಡವರನ್ನು ಒತ್ತಾಯ ಮಾಡಿ ಕರೆದುಕೊಂಡು
ಬಾ. ನನ್ನ ಮನೆ ತುಂಬಿಹೋಗಲಿ. 24ಆದರೆ ಮೊದಲು ಆಹ್ವಾನಿತರಾದವರಲ್ಲಿ ಒಬ್ಬನೂ ನಾನು ಮಾಡಿಸಿದ
ಅಡುಗೆಯ ರುಚಿ ನೋಡಬಾರದು!' ಎಂದು ಸ್ಪಷ್ಟಪಡಿಸಿದ."

### ಶಿಷ್ಯನಿಗೆ ಸವಾಲು

(ಮತ್ತಾ. 10.7–38)

25 ಜನರು ಗುಂಪುಗುಂಪಾಗಿ ಯೇಸುಸ್ವಾಮಿಯ ಸಂಗಡ ಹೋಗುತ್ತಿದ್ದರು. ಆಗ ಯೇಸು ಅವರ
ಕಡೆಗೆ ತಿರುಗಿ ಹೀಗೆಂದರು: 26"ನನ್ನಲ್ಲಿಗೆ ಬರುವ ಯಾರೊಬ್ಬನೂ ತನ್ನ ತಂದೆ–ತಾಯಿ, ಹೆಂಡತಿ–ಮಕ್ಕಳು,
ಸೋದರ–ಸೋದರಿಯರನ್ನು ಮಾತ್ರವಲ್ಲ, ತನ್ನ ಪ್ರಾಣವನ್ನು ಕೂಡ ತ್ಯಜಿಸದ ಹೊರತು, ನನ್ನ
ಶಿಷ್ಯನಾಗಲಾರನು. 27ತನ್ನ ಶಿಲುಬೆಯನ್ನು ಹೊತ್ತು ನನ್ನ ಹಿಂದೆ ಬರದವನು ನನ್ನ ಶಿಷ್ಯನಾಗಲಾರನು.
28ನಿಮ್ಮಲ್ಲಿ ಒಬ್ಬನು ಒಂದು ಗೋಪುರವನ್ನು ಕಟ್ಟಲು ಇಚ್ಛಿಸಿದರೆ, ಕೆಲಸವನ್ನು ಮುಗಿಸಲು ತನ್ನಿಂದ ಸಾಧ್ಯವೇ
ಎಂದು ನೋಡಲು, ಮೊದಲು ಕುಳಿತು, ಬೇಕಾಗುವ ಖರ್ಚು ವೆಚ್ಚವನ್ನು ಲೆಕ್ಕ ಹಾಕುವುದಿಲ್ಲವೇ? 29ಇಲ್ಲದೆ
ಹೋದರೆ, ಇವನು ಅಸ್ತಿವಾರ ಹಾಕಿದ ಮೇಲೆ ಕೆಲಸ ಪೂರೈಸದೆ ಇರುವುದನ್ನು ಕಂಡು,
30'ಕಟ್ಟಲಾರಂಭಿಸಿದ; ಮುಗಿಸಲು ಇವನಿಂದಾಗಲಿಲ್ಲ!' ಎಂದು ನೋಡುವವರೆಲ್ಲರೂ ಅವನನ್ನು
ಪರಿಹಾಸ್ಯಮಾಡುವರು. 31ಹಾಗೆಯೇ, ಅರಸನೊಬ್ಬನು ಇನ್ನೊಬ್ಬ ಅರಸನ ವಿರುದ್ಧ ಯುದ್ಧಕ್ಕೆ ಹೋಗುವುದಕ್ಕೆ
ಮುಂಚೆ ಇಪ್ಪತ್ತು ಸಾವಿರ ಸೈನ್ಯದೊಡನೆ ಬರುವ ಶತ್ರುವನ್ನು ತನ್ನ ಹತ್ತು ಸಾವಿರ ಸೈನ್ಯದಿಂದ ಎದುರಿಸಲು
ಸಾಧ್ಯವೇ ಎಂದು ಮೊದಲು ಕುಳಿತು ಆಲೋಚನೆ ಮಾಡುವುದಿಲ್ಲವೇ? 32ಸಾಧ್ಯವಿಲ್ಲದಿದ್ದರೆ, ಶತ್ರುರಾಜನು
ದೂರದಲ್ಲಿರುವಾಗಲೇ ದೂತರನ್ನು ಕಳುಹಿಸಿ, ಸಂಧಾನಕ್ಕೆ ಷರತ್ತುಗಳೇನೆಂದು ವಿಚಾರಿಸುತ್ತಾನೆ. 33ಅದೇ
ಮೇರೆಗೆ, ನಿಮ್ಮಲ್ಲಿ ಯಾವನು ತನಗಿರುವುದನ್ನೆಲ್ಲಾ ಪರಿತ್ಯಾಗ ಮಾಡುವುದಿಲ್ಲವೋ ಅವನು ನನ್ನ
ಶಿಷ್ಯನಾಗಲಾರ.

### ಸಪ್ಪೆಯಾದ ಉಪ್ಪು

(ಮತ್ತಾ. 5.13; ಮಾರ್ಕ 9.50)

34 "ಉಪ್ಪೇನೋ ಪ್ರಯೋಜನಕರ. ಆದರೆ ಉಪ್ಪೇ ಸಪ್ಪಗಾದರೆ ಅದಕ್ಕೆ ಇನ್ನಾವುದರಿಂದ ಪುನಃ
ರುಚಿ ಬಂದೀತು? ಇನ್ನು ಅದು ಭೂಮಿಗೇ ಆಗಲಿ, ತಿಪ್ಪೆಗುಂಡಿಗೇ ಆಗಲಿ ಉಪಯೋಗವಾಗದು. ಜನರು
ಅದನ್ನು ಹೊರಗೆ ಬಿಸಾಡುತ್ತಾರಷ್ಟೆ. ಕೇಳುವುದಕ್ಕೆ ಕಿವಿಯುಳ್ಳವನು ಕೇಳಿಸಿಕೊಳ್ಳಲಿ!" ಎಂದರು.

### ಕಾಣದೆ ಹೋದ ಕುರಿ

(ಮತ್ತಾ. 18.12–14)

**15** ಯೇಸುಸ್ವಾಮಿಯ ಉಪದೇಶವನ್ನು ಕೇಳಲು ಎಲ್ಲಾ ಸುಂಕದವರೂ ಪಾಪಿಗಳೂ ಬರುತ್ತಿದ್ದರು.
2ಇದನ್ನು ಕಂಡ ಫರಿಸಾಯರು ಮತ್ತು ಧರ್ಮಶಾಸ್ತ್ರಿಗಳು, "ಈ ಮನುಷ್ಯ ಪಾಪಿಗಳನ್ನು
ಬರಮಾಡಿಕೊಳ್ಳುತ್ತಾನೆ; ಅವರೊಡನೆ ಊಟಮಾಡುತ್ತಾನೆ," ಎಂದು ಗೊಣಗಿದರು. 3ಆ ಸಂದರ್ಭದಲ್ಲಿ
ಯೇಸು ಈ ಸಾಮತಿಯನ್ನು ಹೇಳಿದರು: 4"ನಿಮ್ಮಲ್ಲಿ ಯಾರ ಬಳಿಯಾದರೂ ನೂರು ಕುರಿಗಳು ಇವೆ
ಎನ್ನೋಣ. ಅವುಗಳಲ್ಲಿ ಒಂದು ಕುರಿ ಕಾಣದೆ ಹೋದಾಗ ಅವನೇನು ಮಾಡುತ್ತಾನೆ? ಇರುವ
ತೊಂಭತ್ತೊಂಭತ್ತು ಕುರಿಗಳನ್ನು ಹುಲ್ಲುಗಾವಲಿನಲ್ಲೇ ಬಿಟ್ಟು ಕಾಣದೆ ಹೋದ ಆ ಒಂದು ಕುರಿ ಸಿಕ್ಕುವ
ತನಕ ಹುಡುಕಿಕೊಂಡು ಹೋಗುತ್ತಾನಲ್ಲವೆ? 5ಅದು ಸಿಕ್ಕಿದಾಗ ಸಿಕ್ಕಿತೆಂಬ ಸಂತೋಷದಿಂದ ಅದನ್ನು ಹೆಗಲ
ಮೇಲೆ ಎತ್ತಿಕೊಂಡು ಮನೆಗೆ ಬರುತ್ತಾನೆ; 6ಸ್ನೇಹಿತರನ್ನೂ ನೆರೆಯವರನ್ನೂ ಒಟ್ಟಿಗೆ ಕರೆಯುತ್ತಾನೆ. 'ಕಳೆದು
ಹೋಗಿದ್ದ ಕುರಿ ಸಿಕ್ಕಿತು; ನನ್ನೊಡನೆ ಸೇರಿ ಸಂತೋಷಪಡಿ,' ಎನ್ನುತ್ತಾನೆ, ಅಲ್ಲವೆ?

7 "ಅದೇ ರೀತಿಯಲ್ಲಿ, ಪಶ್ಚಾತ್ತಾಪದ ಅವಶ್ಯಕತೆಯಿಲ್ಲದ ತೊಂಭತ್ತೊಂಭತ್ತು ಸತ್ಪುರುಷರ ವಿಷಯವಾಗಿ ಸ್ವರ್ಗದಲ್ಲಿ ಉಂಟಾಗುವ ಸಂತೋಷಕ್ಕಿಂತ, ಪಶ್ಚಾತ್ತಾಪಪಟ್ಟು ಪಾಪಕ್ಕೆ ವಿಮುಖನಾಗಿ ದೇವರಿಗೆ ಅಭಿಮುಖನಾಗುವ ಒಬ್ಬ ಪಾಪಿಯ ವಿಷಯವಾಗಿ ಹೆಚ್ಚು ಸಂತೋಷ ಉಂಟಾಗುತ್ತದೆ ಎಂಬುದರಲ್ಲಿ ಸಂದೇಹವಿಲ್ಲ.

**ಕಳೆದು ಹೋದ ನಾಣ್ಯ**

8 "ಅಂತೆಯೇ, ಮನೆಯಾಕೆಯೊಬ್ಬಳು ತನ್ನ ಬಳಿಯಿದ್ದ ಹತ್ತು ನಾಣ್ಯಗಳಲ್ಲಿ ಒಂದನ್ನು
ಕಳೆದುಕೊಂಡಳು ಎನ್ನೋಣ. ಆಗ ಅವಳೇನು ಮಾಡುತ್ತಾಳೆ? ದೀಪ ಹಚ್ಚಿ ಮನೆಯನ್ನು ಗುಡಿಸಿ, ಕಳೆದು
ಹೋದ ನಾಣ್ಯ ಸಿಕ್ಕುವವರೆಗೂ ಚೆನ್ನಾಗಿ ಹುಡುಕಾಡುತ್ತಾಳೆ, ಅಲ್ಲವೇ? [9]ಅದು ಸಿಕ್ಕಿದಾಗ ತನ್ನ
ಗೆಳತಿಯರನ್ನೂ ನೆರೆಯವರನ್ನೂ ಒಟ್ಟಿಗೆ ಕರೆದು, 'ಕಳೆದುಹೋದ ನಾಣ್ಯ ಸಿಕ್ಕಿಬಿಟ್ಟಿತು. ನನ್ನೊಡನೆ ಸೇರಿ
ಸಂತೋಷಪಡಿ,' ಎನ್ನುತ್ತಾಳಲ್ಲವೆ?

10 "ಅದೇ ಮೇರೆಗೆ ಪಶ್ಚಾತ್ತಾಪಪಟ್ಟು ದೇವರಿಗೆ ಅಭಿಮುಖನಾಗುವ ಒಬ್ಬ ಪಾಪಿಯ ವಿಷಯವಾಗಿ ದೇವದೂತರಿಗೆ ಸಂತೋಷ ಉಂಟಾಗುತ್ತದೆಂಬುದು ನಿಶ್ಚಯ," ಎಂದರು.

**ದುಂದುಗಾರನ ಮಗ**

11 ಯೇಸುಸ್ವಾಮಿ ಮುಂದುವರಿಸುತ್ತಾ ಈ ಸಾಮತಿಯನ್ನು ಹೇಳಿದರು: "ಒಬ್ಬಾತನಿಗೆ ಇಬ್ಬರು
ಮಕ್ಕಳಿದ್ದರು. [12]ಅವರಲ್ಲಿ ಕಿರಿಯವನು 'ಅಪ್ಪಾ, ಆಸ್ತಿಯಲ್ಲಿ ನನಗೆ ಬರಬೇಕಾದ ಪಾಲನ್ನು ಕೊಟ್ಟುಬಿಡು,'
ಎಂದು ಕೇಳಿದ. ತಂದೆ ಅವರಿಬ್ಬರಿಗೂ ಆಸ್ತಿಯನ್ನು ಹಂಚಿಕೊಟ್ಟ. [13]ಕೆಲವು ದಿವಸಗಳಾದ ಮೇಲೆ ಕಿರಿಯ
ಮಗ ತನ್ನ ಆಸ್ತಿಯನ್ನೆಲ್ಲಾ ಮಾರಿ, ಬಂದ ಹಣವನ್ನು ತೆಗೆದುಕೊಂಡು ಮನೆಬಿಟ್ಟು ಹೋದ. ದೂರದೇಶಕ್ಕೆ
ಹೋಗಿ, ದುಂದು ಜೀವನ ನಡೆಸಿ ಹಣವನ್ನೆಲ್ಲಾ ಪೋಲು ಮಾಡಿಬಿಟ್ಟ. [14]ಹೀಗೆ ಅವನು ಎಲ್ಲವನ್ನು
ಹಾಳುಮಾಡಿಕೊಂಡಮೇಲೆ ಆ ದೇಶದಾದ್ಯಂತ ಘೋರವಾದ ಕ್ಷಾಮ ತಲೆದೋರಿತು. [15]ನಿರ್ಗತಿಕನಾದ
ಅವನು ಹೋಗಿ, ಆ ದೇಶದ ನಿವಾಸಿಯೊಬ್ಬನನ್ನು ಆಶ್ರಯಿಸಿದ. ಆತ ಇವನನ್ನು ಹಂದಿ ಮೇಯಿಸಲು ತನ್ನ
ರೊಪ್ಪಗಳಿಗೆ ಕಳುಹಿಸಿದ. [16]ಅಲ್ಲಿ ಹಂದಿ ತಿನ್ನುತ್ತಿದ್ದ ಕಾಳುಗಳನ್ನಾದರೂ ತಿಂದು ಹಸಿವನ್ನು ನೀಗಿಸಿಕೊಳ್ಳಲು
ಹಂಬಲಿಸಿದ. ಆದರೆ ಅದನ್ನೂ ಅವನಿಗೆ ಯಾರೂ ಕೊಡಲಿಲ್ಲ. [17]ಆಗ ಅವನಿಗೆ ಬುದ್ಧಿ ಬಂದಿತು. 'ನನ್ನ
ತಂದೆಯ ಮನೆಯಲ್ಲಿ ಎಷ್ಟೋ ಮಂದಿ ಕೂಲಿಯಾಳುಗಳಿಗೆ ತಿಂದು ತೇಗುವಷ್ಟು ಆಹಾರವಿದೆ.
ನಾನಾದರೋ ಇಲ್ಲಿ ಹಸಿವಿನಿಂದ ಸಾಯುತ್ತಾ ಇದ್ದೇನೆ. [18]ನಾನು ಇದೀಗಲೇ ಹೊರಟು, ತಂದೆಯ ಬಳಿಗೆ
ಹೋಗಿ, 'ಅಪ್ಪಾ, ದೇವರಿಗೂ ನಿಮಗೂ ವಿರುದ್ಧವಾಗಿ ಪಾಪಮಾಡಿದ್ದೇನೆ; ನಿಮ್ಮ ಮಗನು ಎನಿಸಿಕೊಳ್ಳುವ
ಯೋಗ್ಯತೆಯೂ ನನಗಿಲ್ಲ; [19]ನನ್ನನ್ನು ನಿಮ್ಮ ಮನೆಯ ಕೂಲಿಯಾಳುಗಳಲ್ಲಿ ಒಬ್ಬನನ್ನಾಗಿ ಇಟ್ಟುಕೊಳ್ಳಿ ಎಂದು
ಬೇಡಿಕೊಳ್ಳುತ್ತೇನೆ,' ಎಂದುಕೊಂಡ. [20]ಅಂತೆಯೇ ಎದ್ದು ತಂದೆಯ ಬಳಿಗೆ ಹೊರಟ.

"ಮಗನು ಇನ್ನೂ ಅಷ್ಟುದೂರದಲ್ಲಿ ಇರುವಾಗಲೇ ತಂದೆ ನೋಡಿದ. ಆತನ ಹೃದಯ ಕನಿಕರದಿಂದ
ಕರಗಿಹೋಯಿತು. ಓಡಿಹೋಗಿ, ಮಗನನ್ನು ಬಿಗಿಯಾಗಿ ತಬ್ಬಿಕೊಂಡು ಮುತ್ತಿಟ್ಟ. [21]ಆದರೂ ಮಗನು,
'ಅಪ್ಪಾ, ದೇವರಿಗೂ ನಿಮಗೂ ವಿರುದ್ಧವಾಗಿ ಪಾಪಮಾಡಿದ್ದೇನೆ; ನಿಮ್ಮ ಮಗನೆನಿನಿಸಿಕೊಳ್ಳುವ
ಯೋಗ್ಯತೆಯೂ ನನಗಿಲ್ಲ' ಎಂದ. [22]ತಂದೆಯಾದರೋ ಆಳುಗಳನ್ನು ಕರೆದು, 'ಅತ್ಯುತ್ತಮವಾದ
ಅಂಗಿಯನ್ನು ತಕ್ಷಣವೇ ತಂದು ಇವನಿಗೆ ಉಡಿಸಿರಿ. ಬೆರಳಿಗೆ ಉಂಗುರವನ್ನು ತೊಡಿಸಿರಿ, ಕಾಲಿಗೆ
ಪಾದರಕ್ಷೆಯನ್ನು ಮೆಟ್ಟಿಸಿರಿ; [23]ಕೊಬ್ಬಿಸಿದ ಪ್ರಾಣಿಯನ್ನು ತಂದು ಕೊಯ್ಯಿರಿ; ಹಬ್ಬ ಮಾಡೋಣ,
ಆನಂದಿಸೋಣ. [24]ಏಕೆಂದರೆ, ಈ ನನ್ನ ಮಗ ಸತ್ತುಹೋಗಿದ್ದ, ಈಗ ಬದುಕಿ ಬಂದಿದ್ದಾನೆ. ತಪ್ಪಿ ಹೋಗಿದ್ದ,
ಈಗ ಸಿಕ್ಕಿದ್ದಾನೆ,' ಎಂದು ಹೇಳಿದ. ಒಡನೆಯೇ ಹಬ್ಬದ ಸಡಗರ ತೊಡಗಿತು.

25 "ಇತ್ತ ಹೊಲಕ್ಕೆ ಹೋಗಿದ್ದ ಹಿರಿಯ ಮಗ ಹಿಂದಿರುಗಿ ಮನೆಯನ್ನು ಸಮೀಪಿಸುವಾಗ ಗಾನ,
ನರ್ತನಗಳ ಶಬ್ದವು ಅವನ ಕಿವಿಗೆ ಬಿತ್ತು. [26]'ಮನೆಯಲ್ಲೇನು ವಿಶೇಷ?' ಎಂದು ಒಬ್ಬ ಆಳನ್ನು ಕರೆದು

ವಿಚಾರಿಸಿದ. 27‘ನಿಮ್ಮ ತಮ್ಮ ಬಂದಿದ್ದಾರೆ; ಅವರು ಮರಳಿ ಸುರಕ್ಷಿತವಾಗಿ ಬಂದುದಕ್ಕಾಗಿ ಕೊಬ್ಬಿಸಿದ
ಪ್ರಾಣಿಯನ್ನು ನಿಮ್ಮ ತಂದೆ ಕೊಯ್ಯಿಸಿದ್ದಾರೆ,’ ಎಂದು ಆಳು ತಿಳಿಸಿದ.
28 “ಇದನ್ನು ಕೇಳಿದ ಹಿರಿಯ ಮಗನಿಗೆ ಸಿಟ್ಟು ಬಂದಿತು. ಮನೆಯೊಳಕ್ಕೆ ಕಾಲಿಡಲೂ ಒಪ್ಪಲಿಲ್ಲ.
ತಂದೆಯೇ ಹೊರಗೆ ಬಂದು ಬೇಡಿಕೊಂಡಾಗ 29ಅವನು, ‘ನೋಡಿ, ನಾನು ಇಷ್ಟು ವರ್ಷಗಳಿಂದ ನಿಮಗೆ
ಗುಲಾಮನಂತೆ ಸೇವೆ ಮಾಡುತ್ತಿದ್ದೇನೆ. ನಿಮ್ಮ ಮಾತನ್ನು ಎಂದೂ ಮೀರಿಲ್ಲ; ಆದರೂ ನಾನು ನನ್ನ
ಸ್ನೇಹಿತರೊಡನೆ ಹಬ್ಬಮಾಡಲು ಒಂದು ಆಡುಮರಿಯನ್ನು ಕೂಡ ನೀವು ಕೊಟ್ಟಿಲ್ಲ. 30ಆದರೆ ನಿಮ್ಮ
ಆಸ್ತಿಪಾಸ್ತಿಯನ್ನೆಲ್ಲಾ ವೇಶ್ಯೆಯರಿಗೆ ಸುರಿದ ಈ ನಿಮ್ಮ ಮಗ ಬಂದದ್ದೇ ಕೊಬ್ಬಿಸಿದ ಪ್ರಾಣಿಯನ್ನು
ಕೊಯ್ಯಿಸಿದ್ದೀರಿ!’ ಎಂದು ವಾದಿಸಿದ. 31ಆಗ ತಂದೆ ಅವನಿಗೆ, ‘ಮಗನೇ, ನೀನು ಯಾವಾಗಲೂ ನನ್ನ
ಸಂಗಡ ಇದ್ದೀ; ನನ್ನ ಸರ್ವಸ್ವವೂ ನಿನ್ನದೇ ಆಗಿದೆ. 32ಈ ನಿನ್ನ ತಮ್ಮ ನಮ್ಮ ಪಾಲಿಗೆ ಸತ್ತುಹೋಗಿದ್ದ, ಈಗ
ಬದುಕಿಬಂದಿದ್ದಾನೆ. ತಪ್ಪಿ ಹೋಗಿದ್ದ, ಈಗ ಸಿಕ್ಕಿದ್ದಾನೆ. ಆದುದರಿಂದ ನಾವು ಹಬ್ಬಮಾಡಿ ಆನಂದಿಸುವುದು
ಸಹಜವಲ್ಲವೇ?’ ಎಂದನು.”

## ಮೇಸ್ತ್ರಿಯ ಕುಯುಕ್ತಿ

**16** ಯೇಸುಸ್ವಾಮಿ ತಮ್ಮ ಶಿಷ್ಯರನ್ನು ಉದ್ದೇಶಿಸಿ ಇಂತೆಂದರು: “ಒಬ್ಬ ಧನಿಕನಿದ್ದ. ಅವನ ವ್ಯವಹಾರವನ್ನು
ನೋಡಿಕೊಳ್ಳಲು ಒಬ್ಬ ಮೇಸ್ತ್ರಿಯಿದ್ದ. ಇವನು ಧನಿಕನ ಆಸ್ತಿಯನ್ನು ಹಾಳುಮಾಡುತ್ತಿದ್ದಾನೆಂದು ದೂರು
ಬಂದಿತು. 2ಧನಿಕನು ಅವನನ್ನು ಕರೆದು, ‘ಏನಿದು, ನಿನ್ನ ವಿಷಯವಾಗಿ ನಾನು ಹೀಗೆಲ್ಲ ಕೇಳುತ್ತಾ ಇದ್ದೇನೆ?
ನಿನ್ನ ಕೆಲಸದ ಲೆಕ್ಕಾಚಾರವನ್ನು ಒಪ್ಪಿಸಿಬಿಡು. ಇನ್ನು ನೀನು ಮೇಸ್ತ್ರಿ ಆಗಿರಲು ಆಗದು,’ ಎಂದ. 3ಆಗ
ಮೇಸ್ತ್ರಿ, ‘ಈಗ ಏನು ಮಾಡಲಿ? ಯಜಮಾನನು ನನ್ನನ್ನು ಕೆಲಸದಿಂದ ತೆಗೆದು ಬಿಡುತ್ತಾನಲ್ಲಾ; ಅಗೆಯಲು
ಶಕ್ತಿ ಸಾಲದು; ಭಿಕ್ಷೆ ಬೇಡಲು ನನಗೆ ನಾಚಿಕೆ,’ ಎಂದು ಚಿಂತಾಕ್ರಾಂತನಾದ. 4ಮರುಕ್ಷಣ, ‘ಸರಿ, ಕೆಲಸದಿಂದ
ನನ್ನನ್ನು ತೆಗೆದುಹಾಕಿದ ಮೇಲೆ ಜನರು ನನ್ನನ್ನು ತಮ್ಮ ಮನೆಗೆ ಸೇರಿಸಿಕೊಳ್ಳುವಂತೆ ನಾನು ಏನು
ಮಾಡಬೇಕೆಂದು ಈಗ ಗೊತ್ತಾಯಿತು,’ ಎಂದುಕೊಂಡ. 5ಯಜಮಾನನ ಸಾಲಗಾರರನ್ನು ಒಬ್ಬೊಬ್ಬರನ್ನಾಗಿ
ಬರಮಾಡಿಕೊಂಡು, ‘ನೀನು ನನ್ನ ಯಜಮಾನನಿಗೆ ತೀರಿಸಬೇಕಾದ ಸಾಲ ಎಷ್ಟು?’ ಎಂದು
ಮೊದಲನೆಯವನನ್ನು ಕೇಳಿದ. 6ಅವನು, ‘ನೂರು ಬುದ್ದಲಿ ಎಣ್ಣೆ,’ ಎಂದ. ಅದಕ್ಕೆ ಮೇಸ್ತ್ರಿ, ‘ಇಗೋ, ನಿನ್ನ
ಪತ್ರ, ಕುಳಿತುಕೊಂಡು “ಐವತ್ತು” ಎಂದು ಬೇಗನೆ ಬರೆ,’ ಎಂದ. 7ಬಳಿಕ ಇನ್ನೊಬ್ಬನನ್ನು ಕರೆದು, ‘ನೀನೆಷ್ಟು
ಸಾಲ ತೀರಿಸಬೇಕು?’ ಎಂದು ಕೇಳಿದ. ಅವನು ‘ನೂರು ಖಂಡುಗ ಗೋದಿ’ ಎಂದಾಗ ‘ಇಗೋ ನಿನ್ನ
ಪತ್ರ, “ಎಂಬತ್ತು” ಎಂದು ಬರೆ’, ಎಂದ.
8 “ಈ ಅಪ್ರಾಮಾಣಿಕ ಮೇಸ್ತ್ರಿ ಮಾಡಿದ ಮುಂದಾಲೋಚನೆಯನ್ನು ಅವನ ಯಜಮಾನ
ಪ್ರಶಂಸಿಸಿದ. ಏಕೆಂದರೆ, ತಮ್ಮ ತಮ್ಮ ವ್ಯವಹಾರಗಳಲ್ಲಿ ಲೌಕಿಕ ಜನರು ಬೆಳಕಿನ ರಾಜ್ಯದ ಜನರಿಗಿಂತ
ಜಾಣರು. 9ನಾನು ಹೇಳುವುದನ್ನು ಗಮನಿಸಿರಿ; ಲೌಕಿಕ ಆಸ್ತಿಪಾಸ್ತಿಯಿಂದ ಗೆಳೆಯರನ್ನು ಗಳಿಸಿಕೊಳ್ಳಿರಿ. ಅದು
ವ್ಯಯವಾಗಿ ಹೋದಾಗ ನಿಮ್ಮನ್ನು ಅಮರ ನಿವಾಸಕ್ಕೆ ಸ್ವಾಗತಿಸಲಾಗುವುದು. 10ಸಣ್ಣ ವಿಷಯಗಳಲ್ಲಿ
ಪ್ರಾಮಾಣಿಕನಾಗಿ ನಡೆದುಕೊಳ್ಳುವವನು ದೊಡ್ಡ ವಿಷಯಗಳಲ್ಲೂ ಪ್ರಾಮಾಣಿಕನಾಗಿ ನಡೆದುಕೊಳ್ಳುತ್ತಾನೆ.
ಸಣ್ಣ ವಿಷಯಗಳಲ್ಲಿ ದ್ರೋಹ ಮಾಡುವವನು ದೊಡ್ಡ ವಿಷಯಗಳಲ್ಲೂ ದ್ರೋಹ ಮಾಡುತ್ತಾನೆ. 11ಲೌಕಿಕ
ಆಸ್ತಿಪಾಸ್ತಿಗಳ ವಿಷಯದಲ್ಲಿ ನೀವು ಪ್ರಾಮಾಣಿಕರಾಗಿ ನಡೆದುಕೊಳ್ಳದೆ ಹೋದರೆ, ನಿಮ್ಮನ್ನು ನಂಬಿ ನೈಜ
ಸಂಪತ್ತನ್ನು ನಿಮ್ಮ ವಶಕ್ಕೆ ಕೊಡುವವರಾರು? 12ಇನ್ನೊಬ್ಬರಿಗೆ ಸೇರಿದ ವಸ್ತುಗಳ ವಿಷಯದಲ್ಲಿ ನೀವು
ಪ್ರಾಮಾಣಿಕರಾಗಿ ನಡೆದುಕೊಳ್ಳದೆ ಹೋದರೆ, ನಿಮ್ಮ ಸ್ವಂತಕ್ಕೆ ಏನನ್ನಾದರೂ ಕೊಡುವವರಾರು?

13 “ಯಾವನೂ ಇಬ್ಬರು ಯಜಮಾನರಿಗೆ ಸೇವೆ ಮಾಡಲಾಗದು; ಅವನು ಒಬ್ಬನನ್ನು ದ್ವೇಷಿಸಿ,
ಇನ್ನೊಬ್ಬನನ್ನು ಪ್ರೀತಿಸುತ್ತಾನೆ; ಅಥವಾ ಒಬ್ಬನೊಡನೆ ಹೊಂದಿಕೊಂಡು ಇನ್ನೊಬ್ಬನನ್ನು ತಾತ್ಸಾರ
ಮಾಡುತ್ತಾನೆ. ದೇವರಿಗೂ ದ್ರವ್ಯಕ್ಕೂ ಒಟ್ಟಿಗೆ ಸೇವೆಮಾಡಲು ನಿಮ್ಮಿಂದಾಗದು,” ಎಂದರು.

14 ಹಣದಾಶೆಯಿಂದ ಕೂಡಿದ್ದ ಫರಿಸಾಯರು ಈ ಮಾತುಗಳನ್ನೆಲ್ಲಾ ಕೇಳಿ, ಯೇಸುವನ್ನು
ಪರಿಹಾಸ್ಯಮಾಡಿದರು. [15]ಅದಕ್ಕೆ ಯೇಸು, “ನೀವು ಮಾನವರ ಮುಂದೆ ಸತ್ಪುರುಷರೆಂದು
ತೋರಿಸಿಕೊಳ್ಳುತ್ತೀರಿ; ದೇವರಾದರೋ ನಿಮ್ಮ ಅಂತರಂಗವನ್ನು ಅರಿತಿದ್ದಾರೆ. ಮಾನವರಿಗೆ
ಅಮೂಲ್ಯವಾದುದು ದೇವರಿಗೆ ಅಸಹ್ಯವಾದುದು,” ಎಂದರು.

## ಯೇಸುವಿನ ಕೆಲವು ಗಮನಾರ್ಹ ವಚನಗಳು

(ಮತ್ತಾ. 11.12–13, 5.31–32; ಮಾರ್ಕ 10.11–12)

16 “ಧರ್ಮಶಾಸ್ತ್ರ ಹಾಗೂ ಪ್ರವಾದನೆಗಳ ಪರಿಣಾಮ ಯೊವಾನ್ನನ ಕಾಲದವರೆಗೆ ಮಾತ್ರ.
ಅನಂತರ ದೇವರ ಸಾಮ್ರಾಜ್ಯದ ಶುಭಸಂದೇಶವನ್ನು ಸಾರಲಾಗುತ್ತಿದೆ. ಸರ್ವರೂ ಈ ರಾಜ್ಯದೊಳಕ್ಕೆ
ಒತ್ತರಿಸಿಕೊಂಡು ನುಗ್ಗುತ್ತಿದ್ದಾರೆ.

17 “ಭೂಮ್ಯಾಕಾಶಗಳು ಅಳಿದು ಹೋಗಬಹುದು. ಆದರೆ ಧರ್ಮಶಾಸ್ತ್ರದಲ್ಲಿನ ಒಂದು ಚುಕ್ಕೆಯೂ
ನಿರರ್ಥಕವಾಗದು.

18 “ಹೆಂಡತಿಯನ್ನು ಬಿಟ್ಟುಬಿಟ್ಟು ಬೇರೊಬ್ಬಳನ್ನು ಮದುವೆಯಾಗುವ ಪ್ರತಿಯೊಬ್ಬನೂ
ವ್ಯಭಿಚಾರಿಯಾಗುತ್ತಾನೆ. ಅಂತೆಯೇ, ಗಂಡಬಿಟ್ಟವಳನ್ನು ಮದುವೆಯಾಗುವವನು ವ್ಯಭಿಚಾರಿಯಾಗುತ್ತಾನೆ.

## ಭೋಗಿ ಮತ್ತು ಭಿಕಾರಿ

19 “ಒಬ್ಬ ಧನಿಕನಿದ್ದ. ಬೆಲೆಬಾಳುವ ಉಡುಗೆ–ತೊಡುಗೆಗಳನ್ನೂ ನಯವಾದ ನಾರುಮಡಿಗಳನ್ನೂ
ಧರಿಸಿಕೊಂಡು ದಿನನಿತ್ಯವೂ ಸುಖಭೋಗಗಳಲ್ಲಿ ಮೈಮರೆಯುತ್ತಿದ್ದ. [20]ಅವನ ಮನೆಯ ಬಾಗಿಲಲ್ಲೇ
ಲಾಜರನೆಂಬ ಒಬ್ಬ ಭಿಕಾರಿ ಬಿದ್ದಿರುತ್ತಿದ್ದ. ಅವನ ಮೈಯೆಲ್ಲಾ ಹುಣ್ಣು. [21]ಧನಿಕನು ತಿಂದು ಬಿಸಾಡಿದ
ಎಂಜಲಿನಿಂದ ಹಸಿವು ನೀಗಿಸಿಕೊಳ್ಳಲು ಅವನು ಹಂಬಲಿಸುತ್ತಿದ್ದ. ಅಷ್ಟುಮಾತ್ರವಲ್ಲ, ನಾಯಿಗಳು ಬಂದು
ಅವನ ಹುಣ್ಣುಗಳನ್ನು ನೆಕ್ಕುತ್ತಿದ್ದವು.

22 “ಒಂದು ದಿನ ಆ ಭಿಕಾರಿ ಸತ್ತುಹೋದ. ದೇವದೂತರು ಅವನನ್ನು ತೆಗೆದುಕೊಂಡು ಹೋಗಿ
ಸ್ವರ್ಗಸೌಭಾಗ್ಯದಲ್ಲಿದ್ದ ಅಬ್ರಹಾಮನ ಪಕ್ಕದಲ್ಲೇ ಕೂರಿಸಿದರು. ಧನಿಕನು ಕೂಡ ಸತ್ತುಹೋದ. ಅವನ
ಶವಸಂಸ್ಕಾರವೂ ಮುಗಿಯಿತು. [23]ಪಾತಾಳದಲ್ಲಿ ಯಾತನೆಪಡುತ್ತಾ ಅವನು ಕಣ್ಣೆತ್ತಿ ನೋಡಿದಾಗ, ದೂರದಲ್ಲಿ
ಅಬ್ರಹಾಮನನ್ನೂ ಅವನ ಪಕ್ಕದಲ್ಲೇ ಕುಳಿತಿದ್ದ ಲಾಜರನನ್ನೂ ಕಂಡ. [24]‘ಓ ಪಿತಾಮಹ ಅಬ್ರಹಾಮ, ನನ್ನ
ಮೇಲೆ ಕನಿಕರವಿಡು. ಈ ಅಗ್ನಿಜ್ವಾಲೆಯಲ್ಲಿ ಬಾಧೆಪಡುತ್ತಿದ್ದೇನೆ; ಲಾಜರನು ತನ್ನ ತುದಿ ಬೆರಳನ್ನು ತಣ್ಣೀರಿನಲ್ಲಿ
ಅದ್ದಿ, ನನ್ನ ನಾಲಗೆಗೆ ತಂಪನ್ನುಂಟುಮಾಡುವಂತೆ ಅವನನ್ನು ಇಲ್ಲಿಗೆ ಕಳುಹಿಸಿಕೊಡು’ ಎಂದು ದನಿಯೆತ್ತಿ
ಮೊರೆಯಿಟ್ಟ. [25]ಅದಕ್ಕೆ ಅಬ್ರಹಾಮನು, ‘ಮಗನೇ, ಜೀವಮಾನದಲ್ಲಿ ಬೇಕಾದಷ್ಟು ಸುಖಸಂಪತ್ತನ್ನು ನೀನು
ಅನುಭವಿಸಿದೆ; ಲಾಜರನಾದರೋ ದುಃಖ ದಾರಿದ್ರ್ಯವನ್ನು ಅನುಭವಿಸಿದ ಎಂಬುದನ್ನು ನೆನಪಿಗೆ ತಂದುಕೊ.
ಆದರೆ ಈಗ ಅವನು ಇಲ್ಲಿ ಸುಖಪಡುತ್ತಿದ್ದಾನೆ; ನೀನು ಅಲ್ಲಿ ಸಂಕಟಪಡುತ್ತಿರುವೆ. [26]ಅಷ್ಟೇ ಮಾತ್ರವಲ್ಲ,
ನಮಗೂ ನಿಮಗೂ ನಡುವೆ ಅಗಾಧ ಪ್ರಪಾತವು ಚಾಚಿದೆ. ಆದಕಾರಣ ಈ ಕಡೆಯಿಂದ ನಿಮ್ಮ ಬಳಿಗೆ
ಬರಬೇಕೆಂದಿದ್ದರೂ ಬರಲಾಗದು; ಆ ಕಡೆಯಿಂದ ನಮ್ಮ ಬಳಿಗೆ ದಾಟಿಬರಲೂ ಸಾಧ್ಯವಿಲ್ಲ,’ ಎಂದ. [27]ಆಗ
ಆ ಧನಿಕ, ‘ಪಿತಾಮಹ ಅಬ್ರಹಾಮ, ಲಾಜರನನ್ನು ನನ್ನ ತಂದೆಯ ಮನೆಗಾದರೂ ಕಳುಹಿಸು. [28]ನನಗೆ
ಐವರು ಸೋದರರಿದ್ದಾರೆ; ಅವರೂ ಈ ಯಾತನಾಸ್ಥಳಕ್ಕೆ ಬಾರದಂತೆ ಇವನು ಹೋಗಿ ಎಚ್ಚರಿಕೆಕೊಡಲಿ,’
ಎಂದು ಬೇಡಿಕೊಂಡ. [29]ಅದಕ್ಕೆ ಅಬ್ರಹಾಮನು, ‘ಅವರಿಗೆ ಎಚ್ಚರಿಕೆ ಕೊಡಲು ಮೋಶೆ ಮತ್ತು ಪ್ರವಾದಿಗಳ
ಗ್ರಂಥಗಳಿವೆ. ಅವುಗಳಿಗೆ ಕಿವಿಗೊಡಲಿ,’ ಎಂದು ಉತ್ತರಕೊಟ್ಟ. [30]‘ಇಲ್ಲ, ಪಿತಾಮಹ ಅಬ್ರಹಾಮ, ಸತ್ತವರ
ಕಡೆಯಿಂದ ಒಬ್ಬನು ಅವರ ಬಳಿಗೆ ಹೋದರೆ ಅವರು ಪಾಪಕ್ಕೆ ವಿಮುಖರಾಗುವರು,’ ಎಂದು ಧನಿಕನು

ಮತ್ತೆ ಕೇಳಿಕೊಂಡ. [31]ಅದಕ್ಕೆ ಅಬ್ರಹಾಮನು, 'ಮೋಶೆಗೂ ಪ್ರವಾದಿಗಳಿಗೂ ಅವರು ಕಿವಿಗೊಡದಿದ್ದರೆ, ಸತ್ತವನು ಜೀವಂತನಾಗಿ ಎದ್ದುಬಂದರೂ ಅವರು ನಂಬುವುದಿಲ್ಲ,' ಎಂದ."

### ಪಾಪಪ್ರಚೋದಕನಿಗೆ ಧಿಕ್ಕಾರ; ಪಶ್ಚಾತ್ತಾಪಕ್ಕೆ ಕ್ಷಮೆ
(ಮತ್ತಾ. 18.6–7, 21–22; ಮಾರ್ಕ 9.42)

**17** ಯೇಸುಸ್ವಾಮಿ ತಮ್ಮ ಶಿಷ್ಯರನ್ನು ಉದ್ದೇಶಿಸಿ, "ಪಾಪಪ್ರಚೋದನೆಗಳು ಬಂದೇ ಬರುತ್ತವೆ. ಆದರೆ ಅವು ಯಾರಿಂದ ಬರುತ್ತವೋ ಅವನಿಗೆ ಧಿಕ್ಕಾರ! [2]ಅಂಥವನು ಈ ಚಿಕ್ಕವರಲ್ಲಿ ಒಬ್ಬನಿಗೆ ಪಾಪಕ್ಕೆ ಕಾರಣನಾಗುವುದಕ್ಕಿಂತ, ಬೀಸುವ ಕಲ್ಲನ್ನು ಕುತ್ತಿಗೆಗೆ ಬಿಗಿಸಿಕೊಂಡು ಸಮುದ್ರದಲ್ಲಿ ದಬ್ಬಿಸಿಕೊಳ್ಳುವುದೇ ಲೇಸು. [3]ನೀವಾದರೋ ಎಚ್ಚರಿಕೆಯಿಂದಿರಿ!

"ನಿನ್ನ ಸಹೋದರನು ತಪ್ಪುಮಾಡಿದರೆ ಅವನನ್ನು ಖಂಡಿಸು; ಪಶ್ಚಾತ್ತಾಪಪಟ್ಟರೆ ಕ್ಷಮಿಸಿಬಿಡು. [4]ಅವನು ದಿನಕ್ಕೆ ಏಳುಸಾರಿ ನಿನಗೆ ವಿರುದ್ಧ ತಪ್ಪುಮಾಡಿ ಪ್ರತಿಯೊಂದು ಸಾರಿಯೂ ಪಶ್ಚಾತ್ತಾಪಪಟ್ಟು ನಿನ್ನ ಬಳಿಗೆ ಬಂದು, 'ಕ್ಷಮಿಸು,' ಎಂದು ಕೇಳಿಕೊಂಡರೆ ನೀನು ಅವನನ್ನು ಕ್ಷಮಿಸಲೇಬೇಕು," ಎಂದರು.

### ಸಶಕ್ತ ವಿಶ್ವಾಸ
5 "ಸ್ವಾಮಿ, ನಮ್ಮ ವಿಶ್ವಾಸವನ್ನು ಹೆಚ್ಚಿಸಿರಿ," ಎಂದು ಪ್ರೇಷಿತರು ಕೇಳಿಕೊಂಡರು. [6]ಆಗ ಯೇಸುಸ್ವಾಮಿ, "ಸಾಸಿವೆ ಕಾಳಿನಷ್ಟು ವಿಶ್ವಾಸ ನಿಮ್ಮಲ್ಲಿದ್ದು, ನೀವು ಈ ಅತ್ತಿಮರಕ್ಕೆ, 'ನೀನು ಬೇರುಸಹಿತ ಕಿತ್ತುಕೊಂಡು ಹೋಗಿ ಸಮುದ್ರದಲ್ಲಿ ನಾಟಿಕೊ,' ಎಂದು ಆಜ್ಞಾಪಿಸಿದ್ದೇ ಆದರೆ ಅದು ನಿಮಗೆ ವಿಧೇಯವಾಗಿ ನಡೆದುಕೊಳ್ಳುವುದು.

### ಮಾನವರು ದೇವರ ಊಳಿಗದವರು
7 "ನಿಮಗೆ ಒಬ್ಬ ಆಳಿದ್ದಾನೆಂದು ಭಾವಿಸೋಣ. ಅವನು ಹೊಲ ಉತ್ತೋ, ಕುರಿ ಮೇಯಿಸಿಯೋ ಮನೆಗೆ ಬರುತ್ತಾನೆ. ಬಂದಾಕ್ಷಣವೇ, 'ಬಾ, ನನ್ನೊಂದಿಗೆ ಊಟಮಾಡು,' ಎಂದು ನಿಮ್ಮಲ್ಲಿ ಯಾರಾದರೂ ಅವನಿಗೆ ಹೇಳುತ್ತಾರೆಯೇ? ಇಲ್ಲ. [8]ಅದಕ್ಕೆ ಬದಲಾಗಿ 'ಊಟ ಸಿದ್ಧಮಾಡು; ನಾನು ಊಟಮಾಡಿ ಮುಗಿಸುವ ತನಕ ನಡುಕಟ್ಟಿಕೊಂಡು ನನಗೆ ಉಪಚಾರ ಮಾಡು. ಅನಂತರ ನೀನು ಊಟ ಮಾಡುವೆಯಂತೆ,' ಎಂದು ಹೇಳುತ್ತಾರಲ್ಲವೇ? [9]ತಮ್ಮ ಆಜ್ಞೆಯ ಪ್ರಕಾರ ನಡೆದುಕೊಂಡ ಆಳಿಗೆ ಅವರು ಕೃತಜ್ಞತೆ ಸಲ್ಲಿಸುತ್ತಾರೆಯೇ? ಇಲ್ಲ. [10]ಹಾಗೆಯೇ ನೀವು ಸಹ. ನಿಮಗೆ ವಿಧಿಸಿದ್ದನ್ನು ಮಾಡಿ ಮುಗಿಸಿದ ನಂತರ, 'ನಾವು ಕೇವಲ ಆಳುಗಳು; ನಮ್ಮ ಕರ್ತವ್ಯವನ್ನು ನಾವು ಮಾಡಿದ್ದೇವೆ,' ಎಂದುಕೊಳ್ಳಿರಿ," ಎಂದರು.

### ಕೃತಜ್ಞನಾದ ಕುಷ್ಠರೋಗಿ
11ಯೇಸುಸ್ವಾಮಿ ಜೆರುಸಲೇಮಿಗೆ ಪ್ರಯಾಣ ಮಾಡುತ್ತಾ ಸಮಾರಿಯ ಹಾಗೂ ಗಲಿಲೇಯ ಗಡಿಗಳ ನಡುವೆ ಹಾದುಹೋಗುತ್ತಿದ್ದರು. [12]ಒಂದು ಗ್ರಾಮವನ್ನು ಸಮೀಪಿಸಿದಾಗ ಕುಷ್ಠರೋಗದಿಂದ ನರಳುತ್ತಿದ್ದ ಹತ್ತು ಮಂದಿ ಅವರಿಗೆ ಎದುರಾಗಿ ಬಂದರು. ದೂರದಲ್ಲೇ ನಿಂತು, [13]'ಯೇಸುವೇ, ಗುರುವೇ, ನಮ್ಮ ಮೇಲೆ ಕರುಣೆಯಿಡಿ,' ಎಂದು ಕೂಗಿ ಕೇಳಿಕೊಂಡರು.

14 ಯೇಸು ಅವರನ್ನು ನೋಡಿ, "ನೀವು ಯಾಜಕರ ಬಳಿಗೆ ಹೋಗಿರಿ. ಅವರು ನಿಮ್ಮನ್ನು ಪರೀಕ್ಷಿಸಲಿ," ಎಂದರು.

ಅಂತೆಯೇ, ಅವರು ದಾರಿಯಲ್ಲಿ ಹೋಗುತ್ತಿರುವಾಗಲೇ ಗುಣಹೊಂದಿದರು. [15]ಅವರಲ್ಲಿ ಒಬ್ಬನು ತಾನು ಗುಣಹೊಂದಿದ್ದನ್ನು ಕಂಡು, ಹರ್ಷೋದ್ಗಾರದಿಂದ ದೇವರನ್ನು ಸ್ತುತಿಸುತ್ತಾ ಹಿಂದಿರುಗಿ ಬಂದನು.

[16]ಯೇಸುವಿನ ಪಾದಕ್ಕೆ ಸಾಷ್ಟಾಂಗವೆರಗಿ ಕೃತಜ್ಞತೆಯನ್ನು ಸಲ್ಲಿಸಿದನು. ಇವನೋ ಸಮಾರಿಯದವನು! [17]ಆಗ
ಯೇಸು, "ಹತ್ತುಮಂದಿ ಗುಣ ಹೊಂದಿದರಲ್ಲವೆ? ಮಿಕ್ಕ ಒಂಭತ್ತು ಮಂದಿ ಎಲ್ಲಿ? [18]ದೇವರನ್ನು
ಸ್ತುತಿಸುವುದಕ್ಕೆ ಈ ಹೊರನಾಡಿನವನ ಹೊರತು ಬೇರಾರೂ ಬರಲಿಲ್ಲವೇ?" ಎಂದರು. [19]ಅನಂತರ ಆ
ಸಮಾರಿಯದವನಿಗೆ, "ಎದ್ದು ಹೋಗು; ನಿನ್ನ ವಿಶ್ವಾಸವೇ ನಿನ್ನನ್ನು ಸ್ವಸ್ಥಪಡಿಸಿದೆ," ಎಂದು ಹೇಳಿದರು.

## ದೇವರ ಸಾಮ್ರಾಜ್ಯದ ಭವ್ಯ ಆಗಮನ

(ಮತ್ತಾ. 24.22–28, 37–41)

20 ದೇವರ ಸಾಮ್ರಾಜ್ಯವು ಯಾವಾಗ ಬರುವುದೆಂದು ಫರಿಸಾಯರು ಕೇಳಿದಾಗ ಯೇಸುಸ್ವಾಮಿ
ಪ್ರತ್ಯುತ್ತರವಾಗಿ, "ದೇವರ ಸಾಮ್ರಾಜ್ಯವು ಕಣ್ಣುಗಳಿಗೆ ಕಾಣಿಸುವಂತೆ ಬರುವುದಿಲ್ಲ. [21]'ಇಗೋ, ಅದು ಇಲ್ಲಿದೆ
ಅಥವಾ ಅಲ್ಲಿದೆ,' ಎಂದು ಹೇಳುವಂತಿಲ್ಲ. ಏಕೆಂದರೆ, ದೇವರ ಸಾಮ್ರಾಜ್ಯವು ನಿಮ್ಮೊಳಗೇ ಇದೆ," ಎಂದರು.

22 ಅನಂತರ ಶಿಷ್ಯರನ್ನು ಉದ್ದೇಶಿಸಿ, "ಕಾಲ ಒಂದು ಬರುವುದು, ಆಗ ನರಪುತ್ರನೊಂದಿಗೆ ಒಂದು
ದಿನವನ್ನಾದರೂ ಕಳೆಯಲು ಹಂಬಲಿಸುವಿರಿ. ಆದರೆ ನಿಮಗದು ಲಭಿಸದು. [23]'ಇಗೋ, ಇಲ್ಲಿದ್ದಾನೆ; ಅಗೋ
ಅಲ್ಲಿದ್ದಾನೆ,' ಎಂದು ಜನರು ಸುದ್ದಿ ಎಬ್ಬಿಸುವರು. ಅದನ್ನು ನೀವು ನೋಡಲು ಹೋಗಬೇಡಿ; ಅಂಥವರನ್ನು
ಹಿಂಬಾಲಿಸಲೂ ಬೇಡಿ. [24]ಆಕಾಶದ ಒಂದು ದಿಕ್ಕಿನಿಂದ ಇನ್ನೊಂದು ದಿಕ್ಕಿನವರೆಗೆ ಮಿನುಗಿ ಹೊಳೆಯುವ
ಮಿಂಚಿನಂತೆ ನರಪುತ್ರನು ತಾನು ಬರುವ ಕಾಲದಲ್ಲಿ ಕಾಣಿಸಿಕೊಳ್ಳುವನು. [25]ಆದರೆ ಅದಕ್ಕೆ ಮೊದಲು ಆತನು
ತೀವ್ರ ಯಾತನೆಯನ್ನು ಅನುಭವಿಸಿ ಈ ಪೀಳಿಗೆಯಿಂದ ತಿರಸ್ಕೃತನಾಗಬೇಕು. [26]ನೋವನ ಕಾಲದಲ್ಲಿ
ನಡೆದಂತೆಯೇ ನರಪುತ್ರನು ಬರುವ ಕಾಲದಲ್ಲೂ ನಡೆಯುವುದು. [27]ನೋವನು ನಾವೆಯನ್ನು ಹತ್ತುವ
ದಿನದ ತನಕ ಜನರು ತಿನ್ನುತ್ತಾ ಕುಡಿಯುತ್ತಾ ಇದ್ದರು; ಮದುವೆ ಮಾಡಿಕೊಳ್ಳುತ್ತಾ, ಮಾಡಿಕೊಡುತ್ತಾ
ಇದ್ದರು; ಜಲಪ್ರಳಯ ಬಂದು ಎಲ್ಲರನ್ನು ನಾಶಮಾಡಿತು. [28]ಅಂತೆಯೇ, ಲೋತನ ಕಾಲದಲ್ಲೂ ನಡೆಯಿತು.
ಜನರು ಅನ್ನಪಾನೀಯಗಳಲ್ಲಿ ಆಸಕ್ತರಾಗಿದ್ದರು; ಲೇವಾದೇವಿಯಲ್ಲಿ ತೊಡಗಿದ್ದರು. ನೆಡುವುದರಲ್ಲೂ
ನಿರ್ಮಿಸುವುದರಲ್ಲೂ ನಿರತರಾಗಿದ್ದರು. [29]ಲೋತನು ಸೊದೋಮ್ ಊರನ್ನು ಬಿಟ್ಟು ತೆರಳಿದ ದಿನದಂದೇ
ಆಕಾಶದಿಂದ ಅಗ್ನಿ ಮತ್ತು ಗಂಧಕದ ಮಳೆ ಸುರಿದು ಎಲ್ಲರನ್ನು ನಾಶಮಾಡಿತು. [30]ನರಪುತ್ರನು
ಪ್ರತ್ಯಕ್ಷನಾಗುವ ದಿನದಲ್ಲೂ ಹಾಗೆಯೇ ನಡೆಯುವುದು.

31 "ಆ ದಿನದಲ್ಲಿ ಮಾಳಿಗೆಯ ಮೇಲಿರುವವನು ಮನೆಯಲ್ಲಿರುವ ಸರಕುಸಾಮಗ್ರಿಗಳನ್ನು
ತೆಗೆದುಕೊಳ್ಳಲು ಕೆಳಗಿಳಿಯದಿರಲಿ. ಅಂತೆಯೇ, ಹೊಲದಲ್ಲಿರುವವನು ಮನೆಗೆ ಹಿಂದಿರುಗದಿರಲಿ.
[32]ಲೋತನ ಪತ್ನಿಗಾದ ಗತಿಯನ್ನು ನೆನಪಿಗೆ ತಂದುಕೊಳ್ಳಿರಿ!

33 "ಯಾರು ತನ್ನ ಪ್ರಾಣವನ್ನು ಉಳಿಸಿಕೊಳ್ಳಲು ಇಚ್ಛಿಸುತ್ತಾನೋ ಅವನು ಅದನ್ನು
ಕಳೆದುಕೊಳ್ಳುತ್ತಾನೆ; ಯಾರು ತನ್ನ ಪ್ರಾಣವನ್ನು ಕಳೆದುಕೊಳ್ಳುತ್ತಾನೋ ಅವನು ಅದನ್ನು ರಕ್ಷಿಸಿಕೊಳ್ಳುತ್ತಾನೆ.
[34]ಆ ರಾತ್ರಿ ಒಂದೇ ಹಾಸಿಗೆಯಲ್ಲಿ ಇಬ್ಬರು ಮಲಗಿದ್ದರೆ, ಆ ಇಬ್ಬರಲ್ಲಿ ಒಬ್ಬನನ್ನು ತೆಗೆದುಕೊಂಡು
ಹೋಗಲಾಗುವುದು; ಒಬ್ಬನನ್ನು ಬಿಡಲಾಗುವುದು. [35]ಒಂದೇ ಕಲ್ಲಲ್ಲಿ ಬೀಸುತ್ತಿರುವ ಇಬ್ಬರು ಮಹಿಳೆಯರಲ್ಲಿ,
ಒಬ್ಬಳನ್ನು ತೆಗೆದುಕೊಂಡು ಹೋಗಲಾಗುವುದು, ಇನ್ನೊಬ್ಬಳನ್ನು ಬಿಡಲಾಗುವುದು. ([36]ಹೊಲದಲ್ಲಿದ್ದ
ಇಬ್ಬರಲ್ಲಿ, ಒಬ್ಬನನ್ನು ತೆಗೆದುಕೊಂಡು ಹೋಗಲಾಗುವುದು, ಮತ್ತೊಬ್ಬನನ್ನು ಬಿಡಲಾಗುವುದು)" ಎಂದರು.

37 "ಸ್ವಾಮಿ, ಇದು ಎಲ್ಲಿ ನಡೆಯುವುದು?" ಎಂದು ಶಿಷ್ಯರು ಕೇಳಿದಾಗ, ಯೇಸು, "ಹೆಣವಿದ್ದಲ್ಲಿ
ರಣಹದ್ದುಗಳು ಬಂದು ಕೂಡುವುವು," ಎಂದರು.

## ನಿರಂತರ ಪ್ರಾರ್ಥನೆಗೆ ಒಂದು ಉಪಮೆ

**18** ನಿರಾಶರಾಗದೆ ನಿರಂತರವಾಗಿ ಪ್ರಾರ್ಥನೆ ಮಾಡಬೇಕು ಎಂಬುದನ್ನು ಕಲಿಸಲು, ಯೇಸುಸ್ವಾಮಿ ತಮ್ಮ
ಶಿಷ್ಯರಿಗೆ ಈ ಸಾಮತಿಯನ್ನು ಹೇಳಿದರು: [2]"ಒಂದು ನಗರದಲ್ಲಿ ಒಬ್ಬ ನ್ಯಾಯಾಧೀಶನಿದ್ದ. ಅವನು

ದೇವರಿಗೂ ಭಯಪಡುತ್ತಿರಲಿಲ್ಲ; ಮಾನವರಿಗೂ ಲಕ್ಷ್ಯಕೊಡುತ್ತಿರಲಿಲ್ಲ. [3]ಅದೇ ಊರಿನಲ್ಲಿ ಒಬ್ಬ
ವಿಧವೆಯಿದ್ದಳು. ಅವಳು ಪದೇಪದೇ ಅವನ ಬಳಿಗೆ ಬಂದು, 'ನನ್ನ ವಿರೋಧಿ ಅನ್ಯಾಯ ಮಾಡಿದ್ದಾನೆ;
ನನಗೆ ನ್ಯಾಯ ದೊರಕಿಸಿಕೊಡಿ,' ಎಂದು ಕೇಳಿಕೊಳ್ಳುತ್ತಿದ್ದಳು. [4]ಬಹುಕಾಲ ನ್ಯಾಯಾಧೀಶನು ಅವಳಿಗೆ
ಕಿವಿಗೊಡಲೇ ಇಲ್ಲ. ಕೊನೆಗೆ ಅವನು, 'ನಾನು ದೇವರಿಗೆ ಹೆದರುವವನಲ್ಲ; ಮಾನವರಿಗೆ ಲಕ್ಷ್ಯಕೊಡುವವನೂ
ಅಲ್ಲ; [5]ಇಷ್ಟಾದರೂ ಈ ವಿಧವೆಯ ಕಾಟವನ್ನು ತಪ್ಪಿಸಿಕೊಳ್ಳಲು, ಈಕೆಯ ನ್ಯಾಯ ತೀರಿಸಿಬಿಡುತ್ತೇನೆ.
ಇಲ್ಲವಾದರೆ, ಈಕೆ ಪದೇಪದೇ ಬಂದು ನನ್ನ ತಲೆಕೆಡಿಸಿಬಿಟ್ಟಾಳು,' ಎಂದುಕೊಂಡ."

6ಅನಂತರ ಪ್ರಭು ಯೇಸು, "ಈ ನೀತಿಕೆಟ್ಟ ನ್ಯಾಯಾಧೀಶ ಹೇಳಿಕೊಂಡ ಮಾತುಗಳನ್ನು
ಕೇಳಿದಿರಲ್ಲವೆ? [7]ಹೀಗಿರುವಲ್ಲಿ ದೇವರು, ತಾವಾಗಿ ಆಯ್ಕೆಮಾಡಿಕೊಂಡ ಜನರು ಹಗಲು ರಾತ್ರಿ ತಮಗೆ
ಮೊರೆಯಿಡುವಾಗ ನ್ಯಾಯ ತೀರಿಸದೆ ಹೋಗುವರೆ? ತಡಮಾಡಿಯಾರೆ? [8]ಶೀಘ್ರವಾಗಿ ಅವರಿಗೆ ನ್ಯಾಯ
ದೊರಕಿಸಿಕೊಡುವರೆಂದು ನಿಮಗೆ ಹೇಳುತ್ತೇನೆ. ಇಷ್ಟಾದರೂ ನರಪುತ್ರನು ಬರುವಾಗ ಜಗತ್ತಿನಲ್ಲಿ ವಿಶ್ವಾಸ
ಇರುವುದನ್ನು ಕಾಣುವನೋ?" ಎಂದರು.

### ಫರಿಸಾಯನು ಮತ್ತು ಸುಂಕದವನು

9 ಕೆಲವರು ತಾವೇ ಸತ್ಪುರುಷರು ಎಂದುಕೊಂಡು ಇತರರನ್ನು ತುಚ್ಛವಾಗಿ ಕಾಣುತ್ತಿದ್ದರು.
ಅಂಥವರನ್ನು ಉದ್ದೇಶಿಸಿ ಯೇಸುಸ್ವಾಮಿ ಈ ಸಾಮತಿಯನ್ನು ಹೇಳಿದರು: [10]"ಒಮ್ಮೆ, ಇಬ್ಬರು
ಪ್ರಾರ್ಥನೆಮಾಡಲು ದೇವಾಲಯಕ್ಕೆ ಹೋದರು. ಇವರಲ್ಲಿ ಒಬ್ಬನು ಫರಿಸಾಯನು, ಇನ್ನೊಬ್ಬನು
ಸುಂಕವಸೂಲಿಯವನು. [11]ಫರಿಸಾಯನು ಮುಂದೆ ನಿಂತು ತನ್ನಷ್ಟಕ್ಕೆ ಹೀಗೆ ಪ್ರಾರ್ಥನೆಮಾಡಿದ: 'ಓ ದೇವರೇ,
ನಾನು ಇತರರ ಹಾಗೆ ಅಲ್ಲ. ಅವರೋ ಕೊಳ್ಳೆಗಾರರು, ಅನ್ಯಾಯಗಾರರು, ವ್ಯಭಿಚಾರಿಗಳು. ನಾನು ಈ
ಸುಂಕದವನಂತೆಯೂ ಅಲ್ಲ. ಇದಕ್ಕಾಗಿ ನಿಮಗೆ ಧನ್ಯವಾದವನ್ನು ಸಲ್ಲಿಸುತ್ತೇನೆ. [12]ನಾನಾದರೋ ವಾರಕ್ಕೆ
ಎರಡು ದಿನ ಉಪವಾಸವ್ರತವನ್ನು ಕೈಗೊಳ್ಳುತ್ತೇನೆ; ನನ್ನ ಆದಾಯದಲ್ಲಿ ಹತ್ತನೆಯ ಒಂದು ಪಾಲನ್ನು ನಿಮಗೆ
ಸಲ್ಲಿಸುತ್ತೇನೆ.

13 "ಸುಂಕವಸೂಲಿಯವನಾದರೋ ದೂರದಲ್ಲೇ ನಿಂತು, ತಲೆಯನ್ನೂ ಮೇಲಕ್ಕೆ ಎತ್ತದೆ, 'ಓ
ದೇವರೇ, ನಾನು ಪಾಪಿ; ನನಗೆ ದಯೆತೋರಿ,' ಎನ್ನುತ್ತಾ ಎದೆಬಡಿದುಕೊಂಡ.

14 "ದೇವರ ದೃಷ್ಟಿಯಲ್ಲಿ ಪಾಪಮುಕ್ತನಾಗಿ ಮನೆಗೆ ತೆರಳಿದವನು ಈ ಸುಂಕ ವಸೂಲಿಯವನು,
ಆ ಫರಿಸಾಯನಲ್ಲ, ಎಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ. ಏಕೆಂದರೆ, ತನ್ನನ್ನು ತಾನೇ
ಮೇಲಕ್ಕೇರಿಸಿಕೊಳ್ಳುವವನನ್ನು ದೇವರು ಕೆಳಗಿಳಿಸುವರು. ತನ್ನನ್ನು ತಾನೇ ಕೆಳಗಿಳಿಸಿಕೊಳ್ಳುವವನನ್ನು ದೇವರು
ಮೇಲಕ್ಕೇರಿಸುವರು," ಎಂದರು ಯೇಸು.

### ಮಕ್ಕಳ ಮಿತ್ರ ಯೇಸು

(ಮತ್ತಾ. 19.13–15; ಮಾರ್ಕ 10.13–16)

15 ಕೆಲವರು ತಮ್ಮ ಹಸುಳೆಗಳನ್ನು ಯೇಸುಸ್ವಾಮಿ ಮುಟ್ಟಿ ಹರಸಬೇಕೆಂದು ಅಲ್ಲಿಗೆ ಕರೆತಂದರು.
ಇದನ್ನು ಕಂಡ ಶಿಷ್ಯರು ಅವರನ್ನು ಗದರಿಸಿದರು. [16]ಆಗ ಯೇಸು ಆ ಹಸುಳೆಗಳನ್ನು ತಮ್ಮ ಬಳಿಗೆ ಕರೆತರಿಸಿ,
"ಚಿಕ್ಕಮಕ್ಕಳನ್ನು ನನ್ನ ಬಳಿಗೆ ಬರಲು ಬಿಡಿ; ಅವುಗಳನ್ನು ತಡೆಯಬೇಡಿ; ದೇವರ ಸಾಮ್ರಾಜ್ಯ ಇಂಥವರದೇ!
[17]ದೇವರ ಸಾಮ್ರಾಜ್ಯವನ್ನು ಶಿಶುಭಾವದಿಂದ ಅಂಗೀಕರಿಸದೆ ಇರುವವನು ಅದನ್ನು ಎಂದಿಗೂ ಸೇರಲಾರನು,
ಇದು ನಿಶ್ಚಯ," ಎಂದರು.

### ಶ್ರೀಮಂತರಿಗೆ ಸವಾಲು

(ಮತ್ತಾ. 19.16–30; ಮಾರ್ಕ 10.17–31)

18 ಅಧಿಕಾರಿಯೊಬ್ಬನು ಯೇಸುಸ್ವಾಮಿಯ ಬಳಿಗೆ ಬಂದು, "ಒಳ್ಳೆಯ ಗುರುವೇ, ಅಮರ ಜೀವ
ನನಗೆ ಪ್ರಾಪ್ತಿಯಾಗಬೇಕಾದರೆ ನಾನೇನು ಮಾಡಬೇಕು?" ಎಂದು ಕೇಳಿದನು. [19]"ನೀನು ನನ್ನನ್ನು

ಒಳ್ಳೆಯವನೆಂದು ಕರೆದುದೇಕೆ? ದೇವರೊಬ್ಬರನ್ನು ಬಿಟ್ಟರೆ ಬೇರೆ ಯಾರೂ ಒಳ್ಳೆಯವರಲ್ಲ; [20]ದೈವಾಜ್ಞೆಗಳು
ನಿನಗೆ ತಿಳಿದೇ ಇವೆ; 'ವ್ಯಭಿಚಾರ ಮಾಡಬೇಡ, ನರಹತ್ಯೆ ಮಾಡಬೇಡ, ಕದಿಯಬೇಡ, ಸುಳ್ಳುಸಾಕ್ಷಿ
ಹೇಳಬೇಡ, ನಿನ್ನ ತಂದೆತಾಯಿಗಳನ್ನು ಗೌರವಿಸು'," ಎಂದು ಯೇಸು ಅವನಿಗೆ ಉತ್ತರವಿತ್ತರು. [21]ಅದಕ್ಕೆ
ಅವನು, "ನಾನು ಬಾಲ್ಯದಿಂದಲೇ ಇವೆಲ್ಲವನ್ನೂ ಅನುಸರಿಸಿಕೊಂಡು ಬಂದಿದ್ದೇನೆ," ಎಂದನು. [22]ಇದನ್ನು
ಕೇಳಿದ ಯೇಸು, "ನೀನು ಮಾಡಬೇಕಾದ ಕಾರ್ಯ ಇನ್ನೂ ಒಂದು ಉಳಿದಿದೆ; ನಿನ್ನ ಆಸ್ತಿಪಾಸ್ತಿಯನ್ನೆಲ್ಲಾ
ಮಾರಿ ಬಡಬಗ್ಗರಿಗೆ ದಾನಮಾಡು; ಸ್ವರ್ಗದಲ್ಲಿ ನಿನಗೆ ಸಂಪತ್ತು ಇರುತ್ತದೆ. ನೀನು ಬಂದು ನನ್ನನ್ನು
ಹಿಂಬಾಲಿಸು," ಎಂದರು. [23]ಈ ಮಾತುಗಳನ್ನು ಕೇಳಿದ್ದೇ ಅವನಿಗೆ ತುಂಬ ವ್ಯಥೆಯಾಯಿತು. ಏಕೆಂದರೆ
ಅವನು ಬಹಳ ಸಿರಿವಂತನಾಗಿದ್ದನು.

24 ಅವನು ವ್ಯಥೆಗೀಡಾದುದನ್ನು ಕಂಡ ಯೇಸು, "ಸಿರಿವಂತರಿಗೆ ದೇವರ ಸಾಮ್ರಾಜ್ಯವನ್ನು
ಸೇರುವುದು ಎಷ್ಟೊಂದು ಕಷ್ಟ! [25]ಐಶ್ವರ್ಯವಂತನು ದೇವರ ಸಾಮ್ರಾಜ್ಯವನ್ನು ಪ್ರವೇಶಿಸುವುದಕ್ಕಿಂತಲೂ
ಒಂಟೆ ಸೂಜಿಗಣ್ಣಿನಲ್ಲಿ ನುಸುಳುವುದು ಸುಲಭ!" ಎಂದರು. [26]ಇದನ್ನು ಕೇಳಿದವರು, "ಹಾಗಾದರೆ ಯಾರು
ತಾನೇ ಜೀವೋದ್ಧಾರ ಹೊಂದಲು ಸಾಧ್ಯ?" ಎನ್ನಲು [27]ಯೇಸು, "ಮಾನವರಿಗೆ ಅಸಾಧ್ಯವಾದುದು
ದೇವರಿಗೆ ಸಾಧ್ಯ," ಎಂದು ಹೇಳಿದರು.

28 ಆಗ ಪೇತ್ರನು, "ನೋಡಿ, ನಾವು ನಮ್ಮ ಮನೆಮಾರುಗಳನ್ನು ಬಿಟ್ಟುಬಿಟ್ಟು ನಿಮ್ಮನ್ನು
ಹಿಂಬಾಲಿಸಿದ್ದೇವಲ್ಲಾ," ಎಂದನು. [29]ಅದಕ್ಕೆ ಯೇಸು, "ನಿಮಗೆ ಖಂಡಿತವಾಗಿ ಹೇಳುತ್ತೇನೆ: ಯಾವನು
ದೇವರ ಸಾಮ್ರಾಜ್ಯದ ನಿಮಿತ್ತ ಮನೆಯನ್ನಾಗಲಿ, ಮಡದಿಯನ್ನಾಗಲಿ, ಅಣ್ಣತಮ್ಮಂದಿರನ್ನಾಗಲಿ,
ತಂದೆತಾಯಿಗಳನ್ನಾಗಲಿ, ಮಕ್ಕಳು ಮರಿಯನ್ನಾಗಲಿ ತ್ಯಜಿಸುತ್ತಾನೋ [30]ಅವನು ಈ ಕಾಲದಲ್ಲಿ ಅದಕ್ಕಿಂತಲೂ
ಮಿಗಿಲಾದುದನ್ನೂ ಮುಂದಿನ ಲೋಕದಲ್ಲಿ ಅಮರ ಜೀವವನ್ನೂ ಪಡೆಯುವನು," ಎಂದರು.

### ಮರಣ – ಪುನರುತ್ಥಾನದ ಮೂರನೆಯ ಪ್ರಕಟಣೆ

(ಮತ್ತಾ. 20.17–19; ಮಾರ್ಕ 10.32–34)

31 ಯೇಸುಸ್ವಾಮಿ ಹನ್ನೆರಡು ಮಂದಿ ಶಿಷ್ಯರನ್ನು ಪ್ರತ್ಯೇಕವಾಗಿ ಕರೆದು, "ನೋಡಿ, ನಾವು
ಜೆರುಸಲೇಮಿಗೆ ಹೋಗುತ್ತಿದ್ದೇವೆ. ನರಪುತ್ರನ ವಿಷಯವಾಗಿ ಪ್ರವಾದಿಗಳು ಬರೆದಿರುವುದೆಲ್ಲವೂ
ನೆರವೇರುವುದು. [32]ಆತನನ್ನು ಪರಕೀಯರ ಕೈಗೊಪ್ಪಿಸಲಾಗುವುದು; ಅವರು ಅವನನ್ನು ಪರಿಹಾಸ್ಯ
ಮಾಡುವರು, ಅಪಮಾನಪಡಿಸುವರು, ಉಗಿಯುವರು. [33]ಕೊರಡೆಗಳಿಂದ ಹೊಡೆಯುವರು ಮತ್ತು
ಕೊಂದುಹಾಕುವರು. ಆತನಾದರೋ ಮೂರನೆಯ ದಿನ ಪುನರುತ್ಥಾನ ಹೊಂದುವನು," ಎಂದರು.

34 ಶಿಷ್ಯರು ಇವುಗಳಲ್ಲಿ ಒಂದನ್ನೂ ಗ್ರಹಿಸಿಕೊಳ್ಳಲಿಲ್ಲ. ಈ ಹೇಳಿಕೆ ಅವರಿಗೆ ಒಗಟಾಗಿತ್ತು. ಎಂದೇ
ಯೇಸುವಿನ ಮಾತುಗಳು ಅವರಿಗೆ ಅರ್ಥವಾಗಲಿಲ್ಲ.

### ಅಂಧ ಭಿಕ್ಷುಕನಿಗೆ ದೃಷ್ಟಿದಾನ

(ಮತ್ತಾ. 20.29–34; ಮಾರ್ಕ 10.46–52)

35 ಯೇಸುಸ್ವಾಮಿ ಜೆರಿಕೊ ಪಟ್ಟಣವನ್ನು ಸಮೀಪಿಸುತ್ತಿದ್ದಾಗ ಕುರುಡನೊಬ್ಬನು ದಾರಿಯ ಪಕ್ಕದಲ್ಲಿ
ಕುಳಿತು ಭಿಕ್ಷೆ ಬೇಡುತ್ತಿದ್ದನು. [36]ಜನಸಂದಣಿಯ ಶಬ್ದವನ್ನು ಆಲಿಸಿ, ಅದೇನೆಂದು ವಿಚಾರಿಸಿದನು.
[37]"ನಜರೇತಿನ ಯೇಸು ಈ ಮಾರ್ಗವಾಗಿ ಹೋಗುತ್ತಿದ್ದಾರೆ," ಎಂದು ಅವನಿಗೆ ತಿಳಿಸಲಾಯಿತು. [38]ಕೂಡಲೇ
ಅವನು, "ಯೇಸುವೇ, ದಾವೀದ ಕುಲಪುತ್ರರೇ, ನನಗೆ ದಯೆತೋರಿ," ಎಂದು ಗಟ್ಟಿಯಾಗಿ
ಕೂಗಿಕೊಂಡನು. [39]ಮುಂದೆ ಹೋಗುತ್ತಿದ್ದವರು, "ಸುಮ್ಮನಿರು" ಎಂದು ಅವನನ್ನು ಗದರಿಸಿದರು.
ಅವನಾದರೋ, "ದಾವೀದ ಕುಲಪುತ್ರರೇ, ನನಗೆ ದಯೆತೋರಿ" ಎಂದು ಮತ್ತಷ್ಟು ಗಟ್ಟಿಯಾಗಿ
ಕೂಗಿಕೊಂಡನು. [40]ಇದನ್ನು ಕೇಳಿ ಯೇಸು, ಅಲ್ಲೇ ನಿಂತು, ಅವನನ್ನು ತಮ್ಮ ಬಳಿಗೆ ಕರೆದುತರುವಂತೆ
ಅಪ್ಪಣೆಮಾಡಿದರು. [41]ಅವನು ಹತ್ತಿರಕ್ಕೆ ಬಂದಾಗ, "ನನ್ನಿಂದ ನಿನಗೇನಾಗಬೇಕು?" ಎಂದು ಕೇಳಲು
ಅವನು, "ಸ್ವಾಮಿ, ನನಗೆ ಕಣ್ಣು ಕಾಣುವಂತೆ ಮಾಡಿ," ಎಂದು ಪ್ರಾರ್ಥಿಸಿದನು. [42]ಯೇಸು ಅವನಿಗೆ,

“ದೃಷ್ಟಿಯನ್ನು ಪಡೆ; ನಿನ್ನ ವಿಶ್ವಾಸವೇ ನಿನ್ನನ್ನು ಸ್ವಸ್ಥಮಾಡಿದೆ,” ಎಂದರು. 43ಆ ಕ್ಷಣವೇ ಅವನಿಗೆ
ದೃಷ್ಟಿಬಂದಿತು. ದೇವರನ್ನು ಸ್ತುತಿಸುತ್ತಾ ಅವನೂ ಯೇಸುವನ್ನು ಹಿಂಬಾಲಿಸಿದನು. ಇದನ್ನು ನೋಡಿದ
ಜನರೆಲ್ಲರೂ ದೇವರನ್ನು ಕೊಂಡಾಡಿದರು.

### ಜೆರಿಕೊವಿನ ಜಕ್ಕಾಯ

**19** ಯೇಸುಸ್ವಾಮಿ ಜೆರಿಕೊ ಪಟ್ಟಣವನ್ನು ಪ್ರವೇಶೀಸಿ ಅದರ ಬೀದಿಗಳಲ್ಲಿ ಹಾದು ಹೋಗುತ್ತಿದ್ದರು. 2ಅಲ್ಲಿ
ಜಕ್ಕಾಯ ಎಂಬವನಿದ್ದನು. ಅವನು ಸುಂಕವಸೂಲಿಯವರ ಮುಖಂಡ ಹಾಗೂ ಧನಾಢ್ಯ. 3ಯೇಸು
ಯಾರೆಂದು ನೋಡಬೇಕೆಂಬ ಅಪೇಕ್ಷೆ ಅವನದು. ಆದರೆ ಅವನು ಗಿಡ್ಡ ವ್ಯಕ್ತಿ. ಜನಜಂಗುಳಿಯ ಮಧ್ಯೆ
ಯೇಸುವನ್ನು ನೋಡಲು ಪ್ರಯತ್ನಿಸಿದರೂ ಅವನಿಂದಾಗಲಿಲ್ಲ. 4ಆದಕಾರಣ ಮುಂದಕ್ಕೆ ಓಡಿಹೋಗಿ
ಯೇಸು ಬರುತ್ತಿದ್ದ ಆ ಮಾರ್ಗದಲ್ಲಿ ಒಂದು ಆಲದ ಮರವನ್ನು ಕಂಡು ಅದನ್ನು ಹತ್ತಿದನು. 5ಯೇಸು ಆ
ಸ್ಥಳಕ್ಕೆ ಬಂದು, ತಲೆಯೆತ್ತಿ ನೋಡಿ, “ಜಕ್ಕಾಯಾ, ಒಡನೆ ಇಳಿದು ಬಾ; ಈ ದಿನ ನಿನ್ನ ಮನೆಯಲ್ಲಿ ನಾನು
ತಂಗಬೇಕು,” ಎಂದರು. 6ಜಕ್ಕಾಯನು ತಕ್ಷಣವೇ ಇಳಿದು ಬಂದು ಯೇಸುವನ್ನು ಸಂತೋಷದಿಂದ
ಸ್ವಾಗತಿಸಿದನು. 7ಇದನ್ನು ನೋಡಿದವರೆಲ್ಲರು, “ಯೇಸು ಪಾಪಿಷ್ಠನ ಮನೆಗೆ ಅತಿಥಿಯಾಗಿ
ಹೋಗುತ್ತಾನಲ್ಲಾ?” ಎಂದು ಗೊಣಗುಟ್ಟಿದರು.
8 ಜಕ್ಕಾಯನು ನೆರೆದಿದ್ದ ಜನರ ಮುಂದೆ ಎದ್ದುನಿಂತು ಯೇಸುವಿಗೆ, “ಪ್ರಭುವೇ, ನನ್ನ
ಆಸ್ತಿಪಾಸ್ತಿಯಲ್ಲಿ ಅರ್ಧಭಾಗವನ್ನು ಬಡಬಗ್ಗರಿಗೆ ಕೊಟ್ಟುಬಿಡುತ್ತೇನೆ. ಯಾರಿಗಾದರೂ ಮೋಸಮಾಡಿ
ಅವರಿಂದೇನಾದರೂ ನಾನು ಕಸಿದುಕೊಂಡಿದ್ದರೆ ಅದಕ್ಕೆ ನಾಲ್ಕರಷ್ಟು ಹಿಂದಕ್ಕೆ ಕೊಡುತ್ತೇನೆ,” ಎಂದನು.
9ಆಗ ಯೇಸು, “ಇಂದು ಈ ಮನೆ ಉದ್ಧಾರವಾಯಿತು. ಇವನು ಕೂಡ ಅಬ್ರಹಾಮನ ವಂಶಕ್ಕೆ
ಸೇರಿದವನಲ್ಲವೆ? 10ನರಪುತ್ರನು ಬಂದಿರುವುದು ಪತಿತರನ್ನು ಅರಸಿ ಉದ್ಧರಿಸುವುದಕ್ಕೆ,” ಎಂದು ಹೇಳಿದರು.

### ವೃದ್ಧಿಯಾಗದ ವ್ಯವಹಾರ ರದ್ದು

(ಮತ್ತಾ. 25.14–30)

11 ಯೇಸುಸ್ವಾಮಿ ಈಗ ಜೆರುಸಲೇಮಿಗೆ ಸಮೀಪದಲ್ಲೇ ಇದ್ದರು. ಅವರ ಮಾತುಗಳನ್ನು ಕೇಳುತ್ತಿದ್ದ
ಜನರು ದೇವರ ಸಾಮ್ರಾಜ್ಯ ಇದೀಗಲೇ ಪ್ರತ್ಯಕ್ಷವಾಗುವುದೆಂದು ಭಾವಿಸಿದ್ದರು. 12ಈ ಕಾರಣ ಯೇಸು
ಅವರಿಗೆ ಒಂದು ಸಾಮತಿಯನ್ನು ಹೇಳಿದರು: “ಕುಲೀನನೊಬ್ಬ ರಾಜಪದವಿಯನ್ನು ಗಳಿಸಿಬರಲು ದೂರದ
ರಾಜಧಾನಿಗೆ ಹೊರಟ. 13ಹೊರಡುವಾಗ ತನ್ನ ಹತ್ತು ಮಂದಿ ಸೇವಕರನ್ನು ಕರೆದು, ಒಬ್ಬೊಬ್ಬನಿಗೂ
ಒಂದರಂತೆ ಹತ್ತು ಚಿನ್ನದ ನಾಣ್ಯಗಳನ್ನು ಕೊಟ್ಟು, “ನಾನು ಬರುವತನಕ ವ್ಯಾಪಾರ ಮಾಡಿಕೊಂಡಿರಿ,”
ಎಂದು ಹೇಳಿ ಹೋದ. 14ಅವನ ನಾಡಿಗರಾದರೋ ಅವನನ್ನು ದ್ವೇಷಿಸುತ್ತಿದ್ದರು. ‘ಇವನು ನಮಗೆ
ರಾಜನಾಗುವುದು ಬೇಡ,’ ಎಂದು ತಿಳಿಸಲು ಅವನ ಹಿಂದೆಯೇ ತಮ್ಮ ಪ್ರತಿನಿಧಿಗಳನ್ನು ಕಳುಹಿಸಿದರು.
15 “ಆದರೂ ಅವನು ರಾಜಪದವಿಯನ್ನು ಪಡೆದು ಹಿಂದಿರುಗಿ ಬಂದ. ತನ್ನಿಂದ ಹಣಪಡೆದ
ಸೇವಕರು ವ್ಯಾಪಾರಮಾಡಿ ಎಷ್ಟೆಷ್ಟು ಲಾಭಗಳಿಸಿದ್ದಾರೆಂದು ತಿಳಿದುಕೊಳ್ಳುವುದಕ್ಕಾಗಿ ಅವರನ್ನು ಕೂಡಲೇ
ತನ್ನ ಬಳಿಗೆ ಕರೆತರಲು ಆಜ್ಞಾಪಿಸಿದ. 16ಮೊದಲನೆಯವನು ಮುಂದೆ ಬಂದು, ‘ಪ್ರಭುವೇ, ನಿಮ್ಮ ಒಂದು
ನಾಣ್ಯದಿಂದ ನಾನು ಹತ್ತು ನಾಣ್ಯಗಳನ್ನು ಸಂಪಾದಿಸಿದ್ದೇನೆ,’ ಎಂದ. 17ಅದಕ್ಕೆ ಅವನು, “ಭಲಾ, ನೀನು
ಒಳ್ಳೆಯ ಸೇವಕ, ಸ್ವಲ್ಪದರಲ್ಲಿ ನೀನು ಪ್ರಾಮಾಣಿಕನಾಗಿದ್ದೆ. ಆದ್ದರಿಂದ ಹತ್ತು ಪಟ್ಟಣಗಳಿಗೆ ಅಧಿಪತಿಯಾಗಿರು’
ಎಂದ. 18ಎರಡನೆಯ ಸೇವಕನು ಬಂದು, ‘ಪ್ರಭುವೇ, ನೀವು ಕೊಟ್ಟ ಒಂದು ನಾಣ್ಯದಿಂದ ಐದು
ನಾಣ್ಯಗಳನ್ನು ಸಂಪಾದಿಸಿದ್ದೇನೆ,’ ಎಂದ. 19ಅದಕ್ಕೆ ರಾಜ, ‘ನೀನು ಐದು ಪಟ್ಟಣಗಳಿಗೆ ಅಧಿಪತಿಯಾಗಿರು,’
ಎಂದ.

20 “ಬಳಿಕ ಮತ್ತೊಬ್ಬ ಸೇವಕನು ಬಂದು, ‘ಇಗೋ, ಪ್ರಭುವೇ, ನಿಮ್ಮ ಚಿನ್ನದ ನಾಣ್ಯ; ನಿಮಗೆ
ಭಯಪಟ್ಟು ಇದನ್ನು ಬಟ್ಟೆಯಲ್ಲಿ ಭದ್ರವಾಗಿ ಕಟ್ಟಿ ಇಟ್ಟಿದ್ದೆ. 21ಏಕೆಂದರೆ, ನೀವು ಕಠಿಣ ಮನುಷ್ಯರು; ನೀವು
ಕೂಡಿಡದ್ದನ್ನು ಕೊಂಡು ಹೋಗುತ್ತೀರಿ, ಬಿತ್ತದಿದ್ದನ್ನು ಕೊಯಿಲು ಮಾಡುತ್ತೀರಿ,’ ಎಂದ. 22ರಾಜ ಅವನನ್ನು
ನೋಡಿ, ‘ಎಲಾ ದುಷ್ಟ ಸೇವಕನೇ, ನೀನು ಆಡಿದ ಮಾತಿನಿಂದಲೇ ನಿನಗೆ ತೀರ್ಪುಕೊಡುತ್ತೇನೆ. ನಾನು
ಕೂಡಿಡದ್ದನ್ನು ಕೊಂಡುಹೋಗುವ, ಬಿತ್ತದಿದ್ದನ್ನು ಕೊಯಿಲುಮಾಡುವ ಕಠಿಣ ಮನುಷ್ಯನೆಂದು ನಿನಗೆ
ತಿಳಿದಿತ್ತು ಅಲ್ಲವೆ? 23ಹಾಗಾದರೆ ನನ್ನ ಹಣವನ್ನೇಕೆ ಬಡ್ಡಿ ಅಂಗಡಿಯಲ್ಲಿ ಹಾಕಿಡಲಿಲ್ಲ? ನಾನು ಬಂದು
ಬಡ್ಡಿಸಮೇತ ನನ್ನ ಅಸಲನ್ನು ತೆಗೆದುಕೊಳ್ಳುತ್ತಿದ್ದೆನಲ್ಲಾ,’ ಎಂದು ಹೇಳಿ 24ಪರಿಚಾರಕರಿಗೆ, ‘ಇವನಿಂದ ಆ
ಚಿನ್ನದ ನಾಣ್ಯವನ್ನು ಕಿತ್ತು ಹತ್ತು ನಾಣ್ಯಗಳುಳ್ಳವನಿಗೆ ಕೊಡಿ,’ ಎಂದ. 25ಅದಕ್ಕವರು, ‘ಪ್ರಭುವೇ, ಅವನಲ್ಲಿ
ಈಗಾಗಲೇ ಹತ್ತು ನಾಣ್ಯಗಳಿವೆಯಲ್ಲಾ?’ ಎಂದರು. 26ಆಗ ರಾಜ, ‘ಉಳ್ಳ ಪ್ರತಿಯೊಬ್ಬನಿಗೆ ಇನ್ನೂ ಹೆಚ್ಚಾಗಿ
ಕೊಡಲಾಗುತ್ತದೆ; ಇಲ್ಲದವನಿಂದ ಇರುವ ಕಿಂಚಿತ್ತನ್ನೂ ಕಸಿದುಕೊಳ್ಳಲಾಗುತ್ತದೆ, ಇದು ನಿಶ್ಚಯ,’ ಎಂದ.

27 “ಅಲ್ಲದೆ, ‘ನಾನು ತಮಗೆ ರಾಜನಾಗುವುದು ಬೇಡವೆಂದ ನನ್ನ ಶತ್ರುಗಳನ್ನು ಇಲ್ಲಿಗೆ ಎಳೆದು
ತಂದು ನನ್ನ ಮುಂದೆಯೇ ಸಂಹರಿಸಿರಿ,’ ಎಂದ.”

### ಜಯಘೋಷದೊಂದಿಗೆ ಜೆರುಸಲೇಮಿಗೆ ಪ್ರವೇಶ

(ಮತ್ತಾ. 21.1–11; ಮಾರ್ಕ 11.1–11; ಯೊವಾ. 12.12–19)

28 ಇದನ್ನೆಲ್ಲಾ ಹೇಳಿ ಆದ ಮೇಲೆ ಯೇಸುಸ್ವಾಮಿ ಅವರೆಲ್ಲರಿಗಿಂತ ಮುಂದಾಗಿ ನಡೆದು
ಜೆರುಸಲೇಮಿನತ್ತ ತೆರಳಿದರು. 29ಓಲಿವ್ ತೋಪಿನ ಗುಡ್ಡದ ಬಳಿಯಿರುವ ಬೆತ್ಫಗೆ ಮತ್ತು ಬೆಥಾನಿಯ ಎಂಬ
ಊರುಗಳನ್ನು ಸಮೀಪಿಸಿದಾಗ ತಮ್ಮ ಇಬ್ಬರು ಶಿಷ್ಯರನ್ನು ಕರೆದು, 30“ಎದುರಿಗೆ ಇರುವ ಆ ಹಳ್ಳಿಗೆ ಹೋಗಿರಿ.
ನೀವು ಅದನ್ನು ಪ್ರವೇಶಿಸುವಾಗ ಅಲ್ಲೇ ಕಟ್ಟಿಹಾಕಿರುವ ಹೇಸರಗತ್ತೆಯ ಮರಿಯೊಂದನ್ನು ಕಾಣುವಿರಿ.
ಈವರೆಗೆ ಅದರ ಮೇಲೆ ಯಾರೂ ಸವಾರಿಮಾಡಿಲ್ಲ. ಅದನ್ನು ಬಿಚ್ಚಿ ಇಲ್ಲಿಗೆ ತನ್ನಿ. 31ಯಾರಾದರೂ ನಿಮ್ಮನ್ನು,
‘ಅದನ್ನೇಕೆ ಬಿಚ್ಚುತ್ತೀರಿ?’ ಎಂದು ಕೇಳಿದರೆ, ‘ಪ್ರಭುವಿಗೆ ಇದು ಬೇಕಾಗಿದೆ’ ಎನ್ನಿರಿ,” ಎಂದು ಹೇಳಿ
ಕಳುಹಿಸಿದರು.

32 ಆ ಶಿಷ್ಯರಿಬ್ಬರೂ ಹೊರಟು ಯೇಸು ತಮಗೆ ಹೇಳಿದ್ದಂತೆಯೇ ಎಲ್ಲವನ್ನೂ ಕಂಡರು. 33ಆ
ಮರಿ ಹೇಸರಗತ್ತೆಯನ್ನು ಬಿಚ್ಚುತ್ತಿದ್ದಾಗ ಅದರ ಯಜಮಾನ, ‘ಅದನ್ನೇಕೆ ಬಿಚ್ಚುತ್ತೀರಿ?’ ಎಂದು ಕೇಳಿದನು.
34‘ಇದು ಪ್ರಭುವಿಗೆ ಬೇಕಾಗಿದೆ’, ಎಂದು ಶಿಷ್ಯರು ಉತ್ತರಕೊಟ್ಟು, ಅದನ್ನು ಯೇಸುವಿನ ಬಳಿಗೆ ತಂದರು.
35ಅನಂತರ ತಮ್ಮ ಮೇಲಂಗಿಗಳನ್ನು ಅದರ ಮೇಲೆ ಹಾಸಿ ಯೇಸುವನ್ನು ಕೂರಿಸಿದರು. 36ಅವರು ಮುಂದಕ್ಕೆ
ಸಾಗುತ್ತಿದ್ದಂತೆ ಜನರು ತಮ್ಮ ಹೊದಿಕೆಗಳನ್ನು ದಾರಿಯಲ್ಲಿ ಹಾಸಿದರು. 37ಯೇಸು ಜೆರುಸಲೇಮನ್ನು
ಸಮೀಪಿಸುತ್ತಾ ಓಲಿವ್ ಗುಡ್ಡದ ಇಳಿಜಾರನ್ನು ಮುಟ್ಟಿದಾಗ ಶಿಷ್ಯಸಮೂಹವೆಲ್ಲವೂ ತಾವು ಕಂಡ ಎಲ್ಲ
ಮಹತ್ಕಾರ್ಯಗಳನ್ನು ಕುರಿತು ಹರ್ಷಾವೇಶವಾಗಿ ದೇವರ ಸ್ತುತಿ ಮಾಡುತ್ತಾ –

38 “ಸರ್ವೇಶ್ವರನ ನಾಮದಲ್ಲಿ ಬರುವ
ಅರಸನಿಗೆ ಜಯಜಯವಾಗಲಿ !
ಶಾಂತಿ ಸ್ವರ್ಗದಲಿ,
ಮಹಿಮೆ ಮಹೋನ್ನತದಲಿ !”

ಎಂದು ಜಯಘೋಷ ಮಾಡುತ್ತಿದ್ದರು.

39 ಆಗ ಜನಸಮೂಹದಲ್ಲಿದ್ದ ಫರಿಸಾಯರಲ್ಲಿ ಕೆಲವರು, “ಬೋಧಕರೇ, ಸುಮ್ಮನಿರುವಂತೆ ನಿಮ್ಮ
ಶಿಷ್ಯರನ್ನು ಗದರಿಸಿರಿ,” ಎಂದರು. 40ಅದಕ್ಕೆ ಯೇಸು, “ಇವರು ಸುಮ್ಮನಾದರೆ ಈ ಕಲ್ಲುಗಳೇ
ಕೂಗತೊಡಗುವುವು ಎಂಬುದು ನಿಮಗೆ ತಿಳಿದಿರಲಿ,” ಎಂದರು.

### ಜೆರುಸಲೇಮಿಗಾಗಿ ಕಂಬನಿ

41 ಯೇಸುಸ್ವಾಮಿ ಜೆರುಸಲೇಮ್ ಪಟ್ಟಣಕ್ಕೆ ಇನ್ನೂ ಹತ್ತಿರವಾಗಿ ಬಂದು ಅದನ್ನು ನೋಡಿ,
42"ಇಂದಾದರೂ ನೀನು ಶಾಂತಿಮಾರ್ಗವನ್ನು ಅರಿತುಕೊಂಡಿದ್ದರೆ ಎಷ್ಟೋ ಚೆನ್ನಾಗಿರುತ್ತಿತ್ತು. ಆದರೆ ಅದು
ಈಗ ನಿನ್ನ ಕಣ್ಣಿಗೆ ಮರೆಯಾಗಿದೆ. 43ಕಾಲವು ಬರುವುದು. ಆಗ ಶತ್ರುಗಳು ನಿನ್ನ ಸುತ್ತಲೂ ಆಳ್ವೇಲಿಯೆಬ್ಬಿಸಿ,
ಮುತ್ತಿಗೆ ಹಾಕಿ, ಎಲ್ಲೆಡೆಯೂ ನುಗ್ಗಿ, 44ನಿನ್ನನ್ನೂ ನಿನ್ನೊಳಗಿನ ಜನರನ್ನೂ ಧ್ವಂಸಮಾಡುವರು; ನಿನ್ನಲ್ಲಿ
ಕಲ್ಲಿನ ಮೇಲೆ ಕಲ್ಲು ನಿಲ್ಲದಂತೆ ಮಾಡುವರು. ಏಕೆಂದರೆ, ದೇವರು ನಿನ್ನನ್ನು ಅರಸಿ ಬಂದ ಕಾಲವನ್ನು
ನೀನು ಅರಿತುಕೊಳ್ಳದೆ ಹೋದೆ," ಎಂದು ಅದರ ಸಲುವಾಗಿ ಕಣ್ಣೀರಿಟ್ಟರು.

### ಕರ್ತರ ಆಲಯ ಕಳ್ಳಕಾಕರ ಗುಹೆಯಲ್ಲ !

(ಮತ್ತಾ. 21.12–17; ಮಾರ್ಕ 11.15–19; ಯೊವಾ. 2.13–22)

45 ಅನಂತರ ಯೇಸುಸ್ವಾಮಿ ಮಹಾದೇವಾಲಯವನ್ನು ಪ್ರವೇಶಿಸಿದರು. ಅಲ್ಲಿ ಮಾರಾಟ
ಮಾಡುತ್ತಿದ್ದವರನ್ನು ಹೊರಗಟ್ಟುತ್ತಾ, 46" 'ಪ್ರಾರ್ಥನಾಲಯವೀ ನನ್ನ ಆಲಯ!' ಎಂದು ಪವಿತ್ರ ಗ್ರಂಥದಲ್ಲಿ
ಬರೆದಿದೆ; ನೀವಾದರೋ ಇದನ್ನು ಕಳ್ಳಕಾಕರ ಗುಹೆಯನ್ನಾಗಿ ಮಾರ್ಪಡಿಸಿದ್ದೀರಿ," ಎಂದರು.

47 ಪ್ರತಿನಿತ್ಯ ಯೇಸು ದೇವಾಲಯದಲ್ಲಿ ಬೋಧಿಸುತ್ತಿದ್ದರು. ಇತ್ತ ಮುಖ್ಯ ಯಾಜಕರೂ
ಧರ್ಮಶಾಸ್ತ್ರಿಗಳೂ ಪ್ರಜಾಪ್ರಮುಖರೂ ಅವರನ್ನು ಕೊಲೆಮಾಡಲು ಹವಣಿಸುತ್ತಿದ್ದರು.

48 ಆದರೆ ಅವರಿಂದ ಏನೂ ಮಾಡಲಾಗಲಿಲ್ಲ. ಏಕೆಂದರೆ, ಜನರೆಲ್ಲರೂ ಯೇಸುವಿನ ಬೋಧನೆಗೆ
ಮಾರುಹೋಗಿದ್ದರು. ಅವರ ಬಾಯಿಂದ ಬಂದ ಒಂದೊಂದು ಮಾತನ್ನೂ ಕೇಳಲು ಆತುರರಾಗಿದ್ದರು.

### ಯೇಸುವಿನ ಅಧಿಕಾರ ದೈವದತ್ತವೆ?

(ಮತ್ತಾ. 21.23–27; ಮಾರ್ಕ 11.27–33)

**20** ಒಂದು ದಿನ ಯೇಸುಸ್ವಾಮಿ ಮಹಾದೇವಾಲಯದಲ್ಲಿ ಜನರಿಗೆ ಬೋಧನೆ ಮಾಡುತ್ತಾ
ಶುಭಸಂದೇಶವನ್ನು ಪ್ರಕಟಿಸುತ್ತಾ ಇದ್ದರು. ಆಗ ಮುಖ್ಯಯಾಜಕರು, ಧರ್ಮಶಾಸ್ತ್ರಿಗಳು ಮತ್ತು ಸಭಾ
ಪ್ರಮುಖರು ಅಲ್ಲಿಗೆ ಬಂದು, 2"ನೀನು ಯಾವ ಅಧಿಕಾರದಿಂದ ಇದನ್ನೆಲ್ಲಾ ಮಾಡುತ್ತಿರುವೆ? ನಿನಗೆ ಈ
ಅಧಿಕಾರವನ್ನು ಕೊಟ್ಟವರು ಯಾರು? ನಮಗೆ ತಿಳಿಸು," ಎಂದು ಕೇಳಿದರು. 3ಅದಕ್ಕೆ ಯೇಸು ಪ್ರತ್ಯುತ್ತರವಾಗಿ,
"ನಾನೂ ನಿಮಗೆ ಒಂದು ಪ್ರಶ್ನೆ ಹಾಕುತ್ತೇನೆ; 4ಸ್ನಾನದೀಕ್ಷೆ ಕೊಡುವ ಅಧಿಕಾರ ಯೊವಾನ್ನನಿಗೆ ಎಲ್ಲಿಂದ
ಬಂದಿತು? ದೇವರಿಂದಲೋ, ಮನುಷ್ಯರಿಂದಲೋ? ನನಗೆ ತಿಳಿಸಿರಿ," ಎಂದರು. 5ಇದನ್ನು ಕೇಳಿದ
ಅವರೆಲ್ಲರೂ ತಮ್ಮತಮ್ಮೊಳಗೆ ಸಮಾಲೋಚಿಸುತ್ತಾ, ಸಂವಾದಿಸುತ್ತಾ, "ದೇವರಿಂದ ಬಂದಿತು, ಎಂದು ನಾವು
ಹೇಳಿದರೆ, 'ನೀವೇಕೆ ಆತನನ್ನು ನಂಬಲಿಲ್ಲ?' ಎಂದು ಕೇಳುವನು; 6ಮನುಷ್ಯರಿಂದ ಬಂದಿತೆಂದು
ಹೇಳಿದೆವಾದರೆ ಯೊವಾನ್ನನು ಪ್ರವಾದಿಯೆಂದು ಜನರೆಲ್ಲರಿಗೆ ಮನದಟ್ಟಾಗಿರುವುದರಿಂದ ಅವರು ನಮ್ಮನ್ನು
ಕಲ್ಲೆಸೆದು ಕೊಲ್ಲುವರು," ಎಂದುಕೊಂಡರು. 7ಅನಂತರ ಬಂದು, "ಅದು ಎಲ್ಲಿಂದ ಬಂದಿತೋ ನಮಗೆ
ತಿಳಿಯದು," ಎಂದು ಉತ್ತರಕೊಟ್ಟರು. 8ಅದಕ್ಕೆ ಯೇಸು, "ಹಾಗಾದರೆ ನಾನು ಕೂಡ ಯಾವ
ಅಧಿಕಾರದಿಂದ ಇದೆಲ್ಲವನ್ನು ಮಾಡುತ್ತೇನೆಂದು ನಿಮಗೆ ಹೇಳುವುದಿಲ್ಲ," ಎಂದರು.

### ಮುದ್ದುಮಗನನ್ನು ಮುಗಿಸಿದ ಗೇಣಿದಾರರು

(ಮತ್ತಾ. 21.33–46; ಮಾರ್ಕ 12.1–12)

9 ಬಳಿಕ ಯೇಸುಸ್ವಾಮಿ ಜನರಿಗೆ ಈ ಸಾಮತಿಯನ್ನು ಹೇಳತೊಡಗಿದರು: "ಒಬ್ಬಾತ ಒಂದು
ದ್ರಾಕ್ಷಿತೋಟ ಮಾಡಿಸಿದ. ಕಾರಣಾಂತರ ಅದನ್ನು ಗೇಣಿದಾರರಿಗೆ ವಹಿಸಿ, ದೀರ್ಘಕಾಲ ಹೊರನಾಡಿಗೆ
ಪ್ರವಾಸ ಹೋದ. 10ಫಲಕಾಲ ಬಂದಾಗ ತನಗೆ ಬರಬೇಕಾದ ಪಾಲನ್ನು ತರುವುದಕ್ಕಾಗಿ ಒಬ್ಬ ಸೇವಕನನ್ನು

ಕಳುಹಿಸಿದ. ಗೇಣಿದಾರರು ಅವನನ್ನು ಹೊಡೆದು ಬರಿಗೈಯಲ್ಲಿ ಹಿಂದಕ್ಕೆ ಅಟ್ಟಿದರು. [11]ತೋಟದ ಯಜಮಾನ ಇನ್ನೊಬ್ಬ ಸೇವಕನನ್ನು ಕಳುಹಿಸಿದ. ಅವನನ್ನೂ ಹೊಡೆದು, ಬಡಿದು, ಅವಮಾನ ಮಾಡಿ ಬರಿಗೈಯಲ್ಲೇ ಕಳುಹಿಸಿಬಿಟ್ಟರು. [12]ಯಜಮಾನ ಮೂರನೆಯವನನ್ನು ಕಳುಹಿಸಿದ. ಇವನನ್ನೂ ಚೆನ್ನಾಗಿ ಥಳಿಸಿ, ಗಾಯಗೊಳಿಸಿ, ಹೊರಕ್ಕೆ ದಬ್ಬಿದರು. [13]ಕಡೆಗೆ ತೋಟದ ಯಜಮಾನನು, 'ಏನು ಮಾಡಲಿ? ನನ್ನ ಮುದ್ದುಮಗನನ್ನೇ ಕಳುಹಿಸುತ್ತೇನೆ; ಬಹುಶಃ ಅವನಿಗಾದರೂ ಮರ್ಯಾದೆಕೊಟ್ಟಾರು,' ಎಂದುಕೊಂಡ. [14]ಆದರೆ ಗೇಣಿದಾರರು ಯಜಮಾನನ ಮಗನನ್ನು ಕಂಡದ್ದೇ ತಡ, 'ತೋಟಕ್ಕೆ ಇವನೇ ಉತ್ತರಾಧಿಕಾರಿ. ಇವನನ್ನು ಮುಗಿಸಿಬಿಡೋಣ; ಆಸ್ತಿ ನಮ್ಮದಾಗುವುದು,' ಎಂದು ಒಳಸಂಚು ಮಾಡಿಕೊಂಡರು. [15]ಅಂತೆಯೇ ಅವನನ್ನು ತೋಟದಿಂದ ಹೊರಕ್ಕೆ ದಬ್ಬಿಕೊಂಡು ಹೋಗಿ ಕೊಂದು ಹಾಕಿದರು.

16 "ಹೀಗಿರುವಲ್ಲಿ, ತೋಟದ ಯಜಮಾನ ಇವರಿಗೆ ಏನು ಮಾಡುತ್ತಾನೆ?" ಎಂದು ಕೇಳಿದ ಯೇಸು, ತಾವೇ ಉತ್ತರಿಸುತ್ತಾ, "ಅವನು ಬಂದು, ಆ ಗೇಣಿದಾರರನ್ನು ಸಂಹರಿಸಿ ತೋಟವನ್ನು ಬೇರೆ ಗೇಣಿದಾರರಿಗೆ ಒಪ್ಪಿಸುತ್ತಾನೆ," ಎಂದು ಹೇಳಿದರು. [17]ಇದನ್ನು ಜನರು ಕೇಳಿದ್ದೇ, "ಅಯ್ಯೋ, ಹಾಗೆ ಎಂದಿಗೂ ಸಂಭವಿಸದಿರಲಿ!" ಎಂದರು. ಯೇಸು ಅವರನ್ನು ದಿಟ್ಟಿಸಿ ನೋಡಿ ಹಾಗಾದರೆ;

'ಮನೆಕಟ್ಟುವವರು ಬೇಡವೆಂದು
ಬಿಸಾಡಿದ ಕಲ್ಲೇ
ಪ್ರಮುಖ ಮೂಲೆಗಲ್ಲಾಯಿತು,'

ಎಂದು ಪವಿತ್ರಗ್ರಂಥದಲ್ಲಿ ಹೇಳಿರುವುದರ ಅರ್ಥ ಆದರೂ ಏನು? [18]ಈ ಕಲ್ಲಿನ ಮೇಲೆ ಬೀಳುವ ಪ್ರತಿಯೊಬ್ಬನೂ ಛಿದ್ರಛಿದ್ರವಾಗುವನು. ಯಾವನ ಮೇಲೆ ಆ ಕಲ್ಲು ಬೀಳುವುದೋ ಅವನು ಜಜ್ಜಿ ಹೋಗುವನು," ಎಂದರು.

### ದೇಶಭಕ್ತಿ ಧರ್ಮಸಮ್ಮತವೆ?

(ಮತ್ತಾ. 22.15–22; ಮಾರ್ಕ 12.13–17)

19 ತಮ್ಮನ್ನೇ ಕುರಿತು ಈ ಸಾಮತಿಯನ್ನು ಹೇಳಿದ್ದಾರೆಂದು ಅರಿತುಕೊಂಡ ಧರ್ಮಶಾಸ್ತ್ರಿಗಳು ಮತ್ತು ಮುಖ್ಯಯಾಜಕರು ಅಲ್ಲೇ ಯೇಸುವನ್ನು ಬಂಧಿಸಲು ಯತ್ನಿಸಿದರು. ಆದರೆ ಜನಸಮೂಹಕ್ಕೆ ಭಯಪಟ್ಟರು. [20]ಆದುದರಿಂದ ಸೂಕ್ತ ಸಂದರ್ಭ ಹುಡುಕತೊಡಗಿದರು. ಯೇಸುವನ್ನು ರಾಜ್ಯಪಾಲನ ವಶಕ್ಕೂ ನ್ಯಾಯಾಧಿಕಾರಕ್ಕೂ ಒಪ್ಪಿಸುವ ಉದ್ದೇಶದಿಂದ ಗೂಢಾಚಾರರನ್ನು ಕಳುಹಿಸಿದರು. ಇವರು ನಿಷ್ಕಪಟಿಗಳಂತೆ ನಟಿಸುತ್ತಾ ಯೇಸುವಿನ ಮಾತಿನಲ್ಲಿ ತಪ್ಪು ಕಂಡುಹಿಡಿಯಲು ಪ್ರಯತ್ನಿಸಿದರು. [21]"ಬೋಧಕರೇ, ನೀವು ಹೇಳುವುದು ಹಾಗೂ ಬೋಧಿಸುವುದು ನ್ಯಾಯಬದ್ಧವಾಗಿಯೇ ಇದೆ. ಮುಖದಾಕ್ಷಿಣ್ಯವಿಲ್ಲದೆ ಸತ್ಯಕ್ಕನುಸಾರವಾಗಿ ದೈವಮಾರ್ಗವನ್ನು ಬೋಧಿಸುತ್ತೀರಿ. ಇದನ್ನು ನಾವು ಚೆನ್ನಾಗಿ ಬಲ್ಲೆವು. [22]ಹೀಗಿರುವಲ್ಲಿ, ನಾವು ರೋಮ್ ಚಕ್ರಾಧಿಪತಿಗೆ ತೆರಿಗೆ ಕೊಡುವುದು ಧರ್ಮಸಮ್ಮತವೋ ಅಲ್ಲವೋ ತಿಳಿಸಿ," ಎಂದು ಕೇಳಿದರು. [23]ಅವರ ಕುಯುಕ್ತಿಯನ್ನು ಅರಿತುಕೊಂಡ ಯೇಸು, [24]"ಒಂದು ನಾಣ್ಯವನ್ನು ತೋರಿಸಿರಿ. ಇದರಲ್ಲಿರುವುದು ಯಾರ ಮುದ್ರೆ? ಯಾರ ಲಿಪಿ?" ಎಂದು ಕೇಳಿದರು. ಅದಕ್ಕೆ ಅವರು, "ರೋಮ್ ಚಕ್ರವರ್ತಿಯವು," ಎಂದರು. [25]ಆಗ ಯೇಸು, "ಹಾಗಾದರೆ ಚಕ್ರವರ್ತಿಗೆ ಸಲ್ಲತಕ್ಕದ್ದನ್ನು ಚಕ್ರವರ್ತಿಗೂ, ದೇವರಿಗೆ ಸಲ್ಲತಕ್ಕದ್ದನ್ನು ದೇವರಿಗೂ ಸಲ್ಲಿಸಿರಿ," ಎಂದರು. [26]ಯೇಸು ಕೊಟ್ಟ ಈ ಉತ್ತರಕ್ಕೆ ಬೆರಗಾಗಿ ಆ ಗೂಢಾಚಾರರು ಬಾಯಿ ಮುಚ್ಚಿಕೊಂಡರು. ಜನರ ಮುಂದೆ, ಯೇಸುವಿನ ಮಾತುಗಳಲ್ಲಿ ತಪ್ಪು ಕಂಡುಹಿಡಿಯಲು ಅವರಿಂದ ಸಾಧ್ಯವಾಗಲಿಲ್ಲ.

### ಸತ್ತ ಬಳಿಕ ಪುನರುತ್ಥಾನ ಉಂಟೆ?

(ಮತ್ತಾ. 22.23–33; ಮಾರ್ಕ 12.18–27)

27 ಅನಂತರ ಸತ್ತಮೇಲೆ ಪುನರುತ್ಥಾನ ಇಲ್ಲ ಎಂದು ವಾದಿಸುತ್ತಿದ್ದ ಸದ್ದುಕಾಯರಲ್ಲಿ ಕೆಲವರು ಯೇಸುಸ್ವಾಮಿಯ ಬಳಿಗೆ ಬಂದು ಈ ಪ್ರಶ್ನೆಹಾಕಿದರು: [28]"ಬೋಧಕರೇ, 'ಒಬ್ಬನು ಮಕ್ಕಳಿಲ್ಲದೆ ಸತ್ತರೆ,

ಅವನ ಹೆಂಡತಿಯನ್ನು ಅವನ ತಮ್ಮನು ಮದುವೆ ಮಾಡಿಕೊಂಡು ಅಣ್ಣನಿಗೆ ಸಂತಾನ ಪಡೆಯಬೇಕು,'
ಎಂದು ಮೋಶೆ ನಮಗಾಗಿ ಬರೆದಿಟ್ಟಿದ್ದಾನಲ್ಲವೆ? [29]ಒಮ್ಮೆ ಏಳುಮಂದಿ ಅಣ್ಣತಮ್ಮಂದಿರಿದ್ದರು. ಅವರಲ್ಲಿ
ಮೊದಲನೆಯವನಿಗೆ ಮದುವೆಯಾಯಿತು; ಆದರೆ ಅವನು ಮಕ್ಕಳಿಲ್ಲದೆ ಮೃತನಾದ. [30]ಅವನ
ಹೆಂಡತಿಯನ್ನು ಎರಡನೆಯವನು, [31]ಅನಂತರ ಮೂರನೆಯವನು, ತದನಂತರ ಮಿಕ್ಕವರು, ಹೀಗೆ ಏಳು
ಮಂದಿಯೂ ಒಬ್ಬರಾದ ಮೇಲೆ ಒಬ್ಬರು ಮದುವೆಯಾಗಿ ಸಂತಾನ ಇಲ್ಲದೆಯೇ ನಿಧನರಾದರು. [32]ಕಟ್ಟಕಡೆಗೆ
ಆ ಮಹಿಳೆಯೂ ಮರಣ ಹೊಂದಿದಳು. [33]ಹೀಗಿರುವಲ್ಲಿ ಪುನರುತ್ಥಾನದ ದಿನ ಸತ್ತವರೆಲ್ಲರೂ ಜೀವದಿಂದ
ಎದ್ದುಬರುವಾಗ, ಆಕೆ ಯಾರ ಪತ್ನಿಯಾಗುವಳು? ಏಳು ಮಂದಿ ಸಹೋದರರೂ ಆಕೆಯನ್ನು ವಿವಾಹ
ಆಗಿದ್ದರಲ್ಲವೆ?" ಎಂದರು.

34 ಅದಕ್ಕೆ ಯೇಸು, "ಈ ಲೋಕದ ಜೀವನದಲ್ಲಿ ಜನರು ಮದುವೆ ಮಾಡಿಕೊಳ್ಳುತ್ತಾರೆ, ಮದುವೆ
ಮಾಡಿಕೊಡುತ್ತಾರೆ. [35]ಆದರೆ ಸತ್ತವರು ಪುನರುತ್ಥಾನ ಹೊಂದಿ ಮರುಲೋಕ ಜೀವನಕ್ಕೆ ಯೋಗ್ಯರಾದಾಗ
ಮದುವೆ ಮಾಡಿಕೊಳ್ಳುವುದೂ ಇಲ್ಲ, ಮದುವೆ ಮಾಡಿಕೊಡುವುದೂ ಇಲ್ಲ. [36]ಅವರು ಅಲ್ಲಿ ದೇವದೂತರಿಗೆ
ಸಮಾನರಾಗಿರುವರು; ಅವರು ಎಂದಿಗೂ ಸಾಯುವಂತಿಲ್ಲ; ಪುನರುತ್ಥಾನದ ಫಲ ಆಗಿರುವ ಅವರು
ದೇವರ ಮಕ್ಕಳಾಗಿರುವರು. [37]ಸತ್ತವರು ಪುನರುತ್ಥಾನ ಹೊಂದುವುದನ್ನು ಮೋಶೆಯ ಗ್ರಂಥದಲ್ಲಿ, ಅಂದರೆ
'ಉರಿಯುವ ಪೊದೆ'ಯ ಪ್ರಸ್ತಾಪವಿರುವ ಭಾಗದಲ್ಲಿ ಸ್ಪಷ್ಟಪಡಿಸಲಾಗಿದೆ. ಅಲ್ಲಿ ಸರ್ವೇಶ್ವರನನ್ನು,
'ಅಬ್ರಹಾಮನ ದೇವರು, ಇಸಾಕನ ದೇವರು, ಯಕೋಬನ ದೇವರು ಆಗಿದ್ದಾರೆ' ಎಂದು ಹೇಳಲಾಗಿದೆ.

38 "ಹೀಗಿರುವಲ್ಲಿ ದೇವರು ಜೀವಂತರ ದೇವರೇ ಹೊರತು ಮೃತರ ದೇವರಲ್ಲ; ಅವರ ದೃಷ್ಟಿಯಲ್ಲಿ
ಸರ್ವರೂ ಜೀವಂತರು," ಎಂದರು.

39 ಇದನ್ನು ಕೇಳಿದ ಕೆಲವು ಧರ್ಮಶಾಸ್ತ್ರಿಗಳು, "ಬೋಧಕರೇ, ಚೆನ್ನಾಗಿ ಹೇಳಿದಿರಿ," ಎಂದರು.
[40]ಮುಂದೆ ಯಾವ ಪ್ರಶ್ನೆ ಕೇಳುವುದಕ್ಕೂ ಅವರಾರು ಧೈರ್ಯಗೊಳ್ಳಲಿಲ್ಲ.

### ಕ್ರಿಸ್ತ ದಾವೀದನಿಗೆ ಪುತ್ರನೋ? ಪ್ರಭುವೋ?

(ಮತ್ತಾ. 22.41–46; ಮಾರ್ಕ 12.35–37)

41 ಬಳಿಕ ಯೇಸುಸ್ವಾಮಿ, "ಅಭಿಷಿಕ್ತನಾದ ಲೋಕೋದ್ಧಾರಕನನ್ನು 'ದಾವೀದನ ಪುತ್ರ," ಎಂದು
ಕರೆಯುತ್ತಾರಲ್ಲಾ, ಅದು ಹೇಗಾದೀತು? ಕೀರ್ತನಾಗ್ರಂಥದಲ್ಲಿ ಸ್ವತಃ ದಾವೀದನೇ ಹೀಗೆ ಹೇಳಿದ್ದಾನೆ:
[42–43] "ನಿನ್ನ ಶತ್ರುಗಳನ್ನು ನಾನು
ನಿನ್ನ ಪಾದಪೀಠವಾಗಿ ಮಾಡುವ ತನಕ
ನನ್ನ ಬಲಗಡೆಯಲ್ಲಿ ಆಸೀನನಾಗಿರು
ಎಂದು "ನನ್ನ ಪ್ರಭುವಿಗೆ'
ಸರ್ವೇಶ್ವರ ಹೇಳಿದ್ದಾರೆ."
[44]ಹೀಗೆ ದಾವೀದನೇ ಆತನನ್ನು, 'ನನ್ನ ಪ್ರಭು,' ಎಂದು ಕರೆದಿರುವಲ್ಲಿ ಆತನು ದಾವೀದನ ಪುತ್ರನು
ಆಗಿರುವುದು ಹೇಗೆ?" ಎಂದು ಪ್ರಶ್ನಿಸಿದರು.

### ಕಪಟ ಭಕ್ತಾದಿಗಳ ಬಗ್ಗೆ ಎಚ್ಚರಿಕೆ

(ಮತ್ತಾ. 23.1–36; ಮಾರ್ಕ 12.38–40)

45–[46]ಜನರೆಲ್ಲರು ಕಿವಿಗೊಟ್ಟು ಕೇಳುತ್ತಿದ್ದಂತೆ ಯೇಸುಸ್ವಾಮಿ ತಮ್ಮ ಶಿಷ್ಯರನ್ನು ನೋಡಿ,
"ಧರ್ಮಶಾಸ್ತ್ರಿಗಳ ಬಗ್ಗೆ ಎಚ್ಚರಿಕೆಯಿಂದಿರಿ! ಅವರು ನಿಲುವಂಗಿಗಳನ್ನು ಧರಿಸಿಕೊಂಡು ತಿರುಗಾಡುತ್ತಾರೆ;
ಪೇಟೆಬೀದಿಗಳಲ್ಲಿ ತಮಗೆ ವಂದನೋಪಚಾರ ಸಲ್ಲಬೇಕೆಂದು ಆಶಿಸುತ್ತಾರೆ; ಪ್ರಾರ್ಥನಾ ಮಂದಿರಗಳಲ್ಲಿ
ಉನ್ನತ ಆಸನಗಳನ್ನೂ ಔತಣಕೂಟಗಳಲ್ಲಿ ಶ್ರೇಷ್ಠ ಸ್ಥಾನಮಾನಗಳನ್ನೂ ಅಪೇಕ್ಷಿಸುತ್ತಾರೆ. [47]ವಿಧವೆಯರ
ಮನೆಮಾರುಗಳನ್ನು ದೋಚಿಕೊಳ್ಳುವ ಈ ಜನ ನಟನೆಗಾಗಿ ಜಪತಪಗಳನ್ನು ದೀರ್ಘವಾಗಿ ಮಾಡುತ್ತಾರೆ.
ಇವರನ್ನು ದೇವರು ಬಹಳ ಕಠಿಣವಾದ ದಂಡನೆಗೆ ಗುರಿಪಡಿಸುವರು," ಎಂದರು.

### ಬಡ ವಿಧವೆಯ ಬಿಡಿಕಾಸು

(ಮಾರ್ಕ 12.41–44)

**21** ದೇವಾಲಯದ ಕಾಣಿಕೆಯ ಪೆಟ್ಟಿಗೆಯಲ್ಲಿ ಧನವಂತರು ತಮ್ಮ ಕಾಣಿಕೆಯನ್ನು ಹಾಕುತ್ತಿದ್ದುದನ್ನು
ಯೇಸುಸ್ವಾಮಿ ಗಮನಿಸಿದರು. 2ಅಷ್ಟರಲ್ಲಿ ಒಬ್ಬ ಬಡವಿಧವೆ ಅಲ್ಲಿಗೆ ಬಂದು, ತಾಮ್ರದ ಚಿಕ್ಕ ನಾಣ್ಯಗಳೆರಡನ್ನು
ಕಾಣಿಕೆಯಾಗಿ ಹಾಕಿದಳು. 3ಅದನ್ನು ಕಂಡ ಯೇಸು, "ಈ ಬಡವಿಧವೆ ಅವರೆಲ್ಲರಿಗಿಂತಲೂ ಹೆಚ್ಚಾಗಿ
ಅರ್ಪಿಸಿದಳೆಂದು ನಿಮಗೆ ನಿಶ್ಚಯವಾಗಿ ಹೇಳುತ್ತೇನೆ. 4ಅವರೆಲ್ಲರು ತಮ್ಮ ಅಪರಿಮಿತ ಐಶ್ವರ್ಯದಿಂದ
ಕಾಣಿಕೆಯಿತ್ತರು; ಈಕೆಯಾದರೋ, ತನ್ನ ಕಡುಬಡತನದಲ್ಲೂ ತನಗಿದ್ದ ಜೀವನಾಧಾರವನ್ನೆಲ್ಲಾ
ಕೊಟ್ಟುಬಿಟ್ಟಳು," ಎಂದರು.

### ಕಲ್ಲಿನ ಮೇಲೆ ಕಲ್ಲು ಉಳಿಯದು

(ಮತ್ತಾ. 24.1–2; ಮಾರ್ಕ 13.5–12)

5 "ಈ ಮಹಾದೇವಾಲಯವು ಅಂದವಾದ ಕಲ್ಲುಗಳಿಂದಲೂ ಅಮೂಲ್ಯವಾದ
ಕೊಡುಗೆಗಳಿಂದಲೂ ಎಷ್ಟು ಅಲಂಕೃತವಾಗಿದೆ!" ಎಂದು ಕೆಲವರು ಮಾತನಾಡುತ್ತಿದ್ದರು. 6ಆಗ ಯೇಸು,
"ಇವುಗಳನ್ನು ನೀವು ನೋಡುತ್ತಿದ್ದೀರಲ್ಲವೆ? ಇಲ್ಲಿ ಕಲ್ಲಿನ ಮೇಲೆ ಕಲ್ಲು ಉಳಿಯದು; ಎಲ್ಲವನ್ನೂ
ಕೆಡವಿಹಾಕುವ ಕಾಲವೊಂದು ಬರುವುದು," ಎಂದರು.

### ಸಂರಕ್ಷಣೆಗೆ ಮುಂಚೆ ಸಂಕಷ್ಟಗಳು

(ಮತ್ತಾ. 24.3–14; ಮಾರ್ಕ 13.3–13)

7 "ಗುರುವೇ, ಇದು ಸಂಭವಿಸುವುದು ಯಾವಾಗ? ಇದೀಗಲೆ ಸಂಭವಿಸಲಿದೆ ಎಂದು ತಿಳಿಸುವ
ಪೂರ್ವಸೂಚನೆ ಯಾವುದು?" ಎಂದು ಕೆಲವರು ಕೇಳಿದರು. 8ಅದಕ್ಕೆ ಯೇಸುಸ್ವಾಮಿ, "ನೀವು
ಮೋಸಹೋಗದಂತೆ ಜಾಗರೂಕರಾಗಿರಿ. ಅನೇಕರು 'ನಾನೇ ಆತ, ನಾನೇ ಆತ,' ಎನ್ನುತ್ತಾ ನನ್ನ ಹೆಸರನ್ನೇ
ಇಟ್ಟುಕೊಂಡು ಬಂದು, 'ಕಾಲವು ಸಮೀಪಿಸಿಬಿಟ್ಟಿತು,' ಎಂದು ಹೇಳುತ್ತಾರೆ. ಅವರನ್ನು ಹಿಂಬಾಲಿಸಬೇಡಿ.
9ಸಮರ ಸಂಕಲಹಗಳ ಸುದ್ದಿ ಬಂದಾಗ ದಿಗಿಲುಗೊಳ್ಳಬೇಡಿ; ಇವೆಲ್ಲವೂ ಮೊದಲು ಸಂಭವಿಸಲೇಬೇಕು.
ಆದರೂ ಅಂತ್ಯವು ಕೂಡಲೇ ಬರುವುದಿಲ್ಲ," ಎಂದರು.

10 ಅದೂ ಅಲ್ಲದೆ ಯೇಸು ಇಂತೆಂದರು: "ಜನಾಂಗಕ್ಕೆ ವಿರುದ್ಧವಾಗಿ ಜನಾಂಗ, ರಾಷ್ಟ್ರಕ್ಕೆ
ವಿರುದ್ಧವಾಗಿ ರಾಷ್ಟ್ರ ಯುದ್ಧಕ್ಕೆಳಿಯುವುವು; 11ಭೀಕರ ಭೂಕಂಪಗಳಾಗುವುವು; ಕ್ಷಾಮಡಾಮರಗಳು
ತಲೆದೋರುವುವು; ಭಯಂಕರ ಘಟನೆಗಳೂ ಬಾಹ್ಯಾಕಾಶದಲ್ಲಿ ಅಪೂರ್ವ ಸೂಚನೆಗಳೂ
ಕಾಣಿಸಿಕೊಳ್ಳುವುವು. 12ಇದೆಲ್ಲಾ ಸಂಭವಿಸುವುದಕ್ಕೆ ಮುಂಚೆ ನಿಮ್ಮನ್ನು ಬಂಧಿಸಿ ಹಿಂಸೆಗೊಳಪಡಿಸುವರು.
ಪ್ರಾರ್ಥನಾ ಮಂದಿರಗಳಿಗೂ ಕಾರಾಗೃಹಗಳಿಗೂ ಎಳೆದೊಪ್ಪಿಸುವರು; ನನ್ನ ನಾಮದ ನಿಮಿತ್ತ ನಿಮ್ಮನ್ನು
ಅರಸರ ಹಾಗೂ ಅಧಿಪತಿಗಳ ಮುಂದಕ್ಕೆ ಎಳೆಯುವರು. 13ಶುಭಸಂದೇಶಕ್ಕೆ ಸಾಕ್ಷಿಕೊಡಲು ಇದು ನಿಮಗೆ
ಸದವಕಾಶವಾಗಿರುತ್ತದೆ. 14ಆಗ ವಾದಿಸುವುದು ಹೇಗೆಂದು ನೀವು ಮುಂಚಿತವಾಗಿ ಚಿಂತಿಸಬೇಕಾಗಿಲ್ಲ; ಇದು
ನಿಮಗೆ ಮನದಟ್ಟಾಗಿರಲಿ. 15ಏಕೆಂದರೆ ನಿಮ್ಮ ವಿರೋಧಿಗಳಾರೂ ಪ್ರತಿಭಟಿಸಲು ಅಥವಾ ವಿರೋಧಿಸಲು
ಆಗದಂಥ ವಾಕ್ಚಾತುರ್ಯವನ್ನೂ ಜ್ಞಾನಶಕ್ತಿಯನ್ನೂ ನಿಮಗೆ ಕೊಡುವೆನು. 16ನಿಮ್ಮ ತಂದೆತಾಯಿಗಳೇ,
ಒಡಹುಟ್ಟಿದವರೇ, ಬಂಧು ಮಿತ್ರರೇ, ನಿಮ್ಮನ್ನು ಪರಾಧೀನ ಮಾಡುವರು; ಮಾತ್ರವಲ್ಲ, ನಿಮ್ಮಲ್ಲಿ ಕೆಲವರನ್ನು
ಕೊಂದು ಹಾಕಿಸುವರು. 17ನೀವು ನನ್ನವರು ಆದುದರಿಂದಲೇ ಎಲ್ಲರೂ ನಿಮ್ಮನ್ನು ದ್ವೇಷಿಸುವರು. 18ಆದರೂ
ನಿಮ್ಮ ತಲೆ ಕೂದಲೊಂದೂ ನಾಶವಾಗುವುದಿಲ್ಲ. 19ಸ್ಥೈರಣೆಯಿಂದಿರಿ, ಸಂರಕ್ಷಣೆಯನ್ನು ಪಡೆಯುವಿರಿ.

## ಜೆರುಸಲೇಮಿನ ವಿನಾಶ

(ಮತ್ತಾ. 24.15–21; ಮಾರ್ಕ 13.14–19)

20 "ಜೆರುಸಲೇಮ್ ಪಟ್ಟಣವನ್ನು ಸೈನ್ಯಗಳು ಸುತ್ತುಗಟ್ಟುತ್ತಿರುವುದನ್ನು ನೀವು ಕಾಣುವಾಗ ಅದರ
ವಿನಾಶ ಸಮೀಪಿಸಿತೆಂದು ತಿಳಿದುಕೊಳ್ಳಿ. [21]ಆಗ ಜುದೇಯದಲ್ಲಿರುವವರು ಬೆಟ್ಟಗುಡ್ಡಗಳಿಗೆ ಓಡಿಹೋಗಲಿ;
ಪಟ್ಟಣದೊಳಗಿರುವವರು ಅಲ್ಲಿಂದ ಹೊರಟುಹೋಗಲಿ; ಹಳ್ಳಿಗಾಡಿನಲ್ಲಿರುವವರು ಪಟ್ಟಣಕ್ಕೆ ಬಾರದಿರಲಿ.
[22]ಏಕೆಂದರೆ, ದಂಡನೆಯ ಕಾಲ ಅದು. ಅದನ್ನು ಕುರಿತು ಪವಿತ್ರ ಗ್ರಂಥದಲ್ಲಿ ಬರೆದಿರುವುದೆಲ್ಲಾ ಆಗ
ನೆರವೇರಬೇಕು. [23]ಅಯ್ಯೋ, ಆ ದಿನಗಳಲ್ಲಿ ಗರ್ಭಿಣಿಯರ ಮತ್ತು ಹಾಲೂಡಿಸುವ ತಾಯಂದಿರ ಗೋಳೇನು!
ಈ ನಾಡು ಮಹಾವಿಪತ್ತಿಗೆ ಈಡಾಗುವುದು. ಈ ಜನತೆ ದೈವಕೋಪಕ್ಕೆ ಗುರಿಯಾಗುವುದು. [24]ಕೆಲವರು
ಕತ್ತಿಯ ಬಾಯಿಗೆ ತುತ್ತಾಗುವರು. ಮತ್ತೆ ಕೆಲವರು ಬಂಧಿತರಾಗಿ ದೇಶದೇಶಗಳಿಗೆ ಕೊಂಡೊಯ್ಯಲ್ಪಡುವರು;
ಅನ್ಯದೇಶೀಯರು ತಮ್ಮ ಕಾಲಾವಧಿಯ ತನಕ ಜೆರುಸಲೇಮನ್ನು ತುಳಿದುಹಾಕುವರು.

## ನರಪುತ್ರನ ಪುನರಾಗಮನ

(ಮತ್ತಾ. 24.29–31; ಮಾರ್ಕ 13.24–27)

25 "ಸೂರ್ಯ, ಚಂದ್ರ, ನಕ್ಷತ್ರಗಳಲ್ಲಿ ವಿಚಿತ್ರ ಸೂಚನೆಗಳು ಕಾಣಿಸಿಕೊಳ್ಳುವುವು; ಮೊರೆಯುವ
ತೆರೆಗಳ ಹಾಗೂ ಭೋರ್ಗರೆಯುವ ಸಮುದ್ರದ ನಿಮಿತ್ತ ಭೂಮಿಯಲ್ಲಿ ಜನಾಂಗಗಳು ದಿಕ್ಕುತೋಚದೆ
ತತ್ತರಿಸಿಹೋಗುವುವು. [26]ಗ್ರಹಶಕ್ತಿಗಳು ಕದಲುವುದರಿಂದ ಧರೆಯಲ್ಲಿ ಏನೇನು ಸಂಭವಿಸುವುದೋ ಎಂಬ
ಭಯಭೀತಿಯಿಂದ ಮಾನವರು ದಿಗ್ಭ್ರಮೆಗೊಳ್ಳುವರು. [27]ಆಗ ನರಪುತ್ರನು ಮಹಾಶಕ್ತಿಯಿಂದಲೂ ಮಹಿಮಾ
ಪ್ರಭಾವದಿಂದಲೂ ಮೇಘಾರೂಢನಾಗಿ ಬರುವುದನ್ನು ಜನರು ಕಾಣುವರು. [28]ಇವೆಲ್ಲವೂ ಸಂಭವಿಸಲು
ತೊಡಗುವಾಗ ನೀವು ನಿರೀಕ್ಷಿಸುತ್ತಾ ತಲೆಯೆತ್ತಿ ನಿಲ್ಲಿರಿ; ಏಕೆಂದರೆ, ನಿಮ್ಮ ಉದ್ಧಾರವು ಸಮೀಪಿಸಿತು."

29 ಬಳಿಕ ಯೇಸುಸ್ವಾಮಿ ಶಿಷ್ಯರಿಗೆ ಈ ಸಾಮತಿಯನ್ನು ಹೇಳಿದರು; "ಅಂಜೂರದ ಹಾಗೂ ಇತರ
ಮರಗಳನ್ನು ಗಮನಿಸಿರಿ. [30]ಅವುಗಳ ಎಲೆಗಳು ಚಿಗುರುತ್ತಲೇ ವಸಂತಕಾಲ ಆರಂಭಿಸಿತೆಂದು ನೀವೇ
ಅರಿತುಕೊಳ್ಳುತ್ತೀರಿ. [31]ಅಂತೆಯೇ ಇವೆಲ್ಲವೂ ಸಂಭವಿಸುವುದನ್ನು ನೋಡುವಾಗ ದೇವರ ಸಾಮ್ರಾಜ್ಯವು
ಸಮೀಪಿಸಿತೆಂದು ತಿಳಿದುಕೊಳ್ಳಿರಿ. [32]ಇವೆಲ್ಲ ಸಂಭವಿಸುವವರೆಗೆ ಈ ಪೀಳಿಗೆ ಗತಿಸಿ ಹೋಗದೆಂದು
ಒತ್ತಿಹೇಳುತ್ತೇನೆ. [33]ಭೂಮ್ಯಾಕಾಶಗಳು ಗತಿಸಿಹೋಗುತ್ತವೆ; ಆದರೆ ನನ್ನ ಮಾತುಗಳು ಶಾಶ್ವತವಾಗಿ
ಉಳಿಯುತ್ತವೆ.

## ಮುಂಜಾಗರೂಕತೆ

34 "ಮಿತಿಮೀರಿದ ಭೋಜನದಿಂದಾಗಲಿ, ಕುಡಿತದಿಂದಾಗಲಿ, ಲೌಕಿಕ ಚಿಂತೆಗಳಿಂದಾಗಲಿ
ಮಂದಮತಿಗಳಾಗಬೇಡಿ. ಆ ದಿನವು ಅನಿರೀಕ್ಷಿತ ಉರುಲಿನಂತೆ ನಿಮ್ಮನ್ನು ಸಿಕ್ಕಿಸೀತು, ಜಾಗರೂಕರಾಗಿರಿ!
[35]ಜಗತ್ತಿನ ಎಲ್ಲಾ ನಿವಾಸಿಗಳೂ ಅದಕ್ಕೆ ಸಿದ್ಧರಾಗಿರಬೇಕು. [36]ಬಂದೊದಗಲಿರುವ ಇವೆಲ್ಲವುಗಳಿಂದ ಪಾರಾಗಿ
ನರಪುತ್ರನ ಮುಂದೆ ನಿಲ್ಲಲು ನೀವು ಶಕ್ತರಾಗುವಂತೆ ನಿರಂತರವಾಗಿ ಪ್ರಾರ್ಥನೆ ಮಾಡುತ್ತಾ
ಎಚ್ಚರಿಕೆಯಿಂದಿರಿ," ಎಂದರು.

37 ಯೇಸುಸ್ವಾಮಿ ಹಗಲೆಲ್ಲಾ ಮಹಾ ದೇವಾಲಯದಲ್ಲಿ ಬೋಧಿಸುತ್ತಿದ್ದರು. ರಾತ್ರಿಯಲ್ಲಿ
ಪಟ್ಟಣದಿಂದ ಹೊರಟು, ಓಲಿವ್ ತೋಪಿನ ಗುಡ್ಡದಲ್ಲಿ ತಂಗುತ್ತಿದ್ದರು. ಅವರ ಬೋಧನೆಯನ್ನು ಕೇಳಲು
ಜನರೆಲ್ಲರೂ ಸೂರ್ಯೋದಯಕ್ಕೆ ಮುಂಚೆಯೇ ಎದ್ದು ದೇವಾಲಯಕ್ಕೆ ಬರುತ್ತಿದ್ದರು.

### ಯೇಸುವಿನ ಕೊಲೆಗೆ ಒಳಸಂಚು

(ಮತ್ತಾ. 26.1–5; ಮಾರ್ಕ 14.1–2; ಯೊವಾ. 11.45–53)

**22** ಪಾಸ್ಕಮಹೋತ್ಸವವು ಸಮೀಪಿಸುತ್ತಿತ್ತು. ಅದು ಹುಳಿರಹಿತ ರೊಟ್ಟಿಯನ್ನು ಭುಜಿಸುವ ಹಬ್ಬ.
[2]ಮುಖ್ಯಯಾಜಕರೂ ಧರ್ಮಶಾಸ್ತ್ರಿಗಳೂ ಯೇಸುಸ್ವಾಮಿಯನ್ನು ಕೊಲ್ಲಿಸಲು ಆಲೋಚನೆ ಮಾಡುತ್ತಿದ್ದರು;
ಜನರ ಭಯ ಅವರಿಗೆ ಇದ್ದುದರಿಂದ ಅದಕ್ಕೆ ಗುಟ್ಟಾದ ಮಾರ್ಗವನ್ನು ಹುಡುಕುತ್ತಿದ್ದರು.
3 ಅಷ್ಟರಲ್ಲಿ, ಯೇಸುವಿನ ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ ಇಸ್ಕರಿಯೋತಿನ ಯೂದನು
ಸೈತಾನನಿಗೆ ವಶನಾದನು. [4]ಆ ಯೂದನು ಮುಖ್ಯ ಯಾಜಕರ ಬಳಿಗೆ ಹಾಗೂ ಮಹಾದೇವಾಲಯದ
ಪಹರೆಯ ದಳಪತಿಗಳ ಬಳಿಗೆ ಹೋಗಿ, ಯೇಸುವನ್ನು ಅವರಿಗೆ ಹಿಡಿದು ಕೊಡುವ ವಿಧಾನವನ್ನು ಕುರಿತು
ಸಮಾಲೋಚಿಸಿದನು. [5]ಇದರಿಂದ ಅವರಿಗೆ ಅತ್ಯಾನಂದವಾಯಿತು. ಅವರು ಹಣ ಕೊಡುವುದಾಗಿ ವಾಗ್ದಾನ
ಮಾಡಿದರು. [6]ಅವನೂ ಸಮ್ಮತಿಸಿ, ಜನಜಂಗುಳಿ ಇಲ್ಲದ ಸಂದರ್ಭದಲ್ಲಿ ಯೇಸುವನ್ನು ಹಿಡಿದು ಒಪ್ಪಿಸಲು
ಸಮಯ ಕಾಯುತ್ತಾ ಇದ್ದನು.

### ಹಬ್ಬದೂಟಕ್ಕೆ ಸಿದ್ಧತೆ

(ಮತ್ತಾ. 26.17–25; ಮಾರ್ಕ 14.12–21; ಯೊವಾ. 13.21–30)

7 ಹುಳಿರಹಿತ ರೊಟ್ಟಿಯ ಹಬ್ಬ ಆರಂಭವಾಯಿತು. ಪಾಸ್ಕ ಕುರಿಮರಿಯನ್ನು ಕೊಯ್ಯಬೇಕಾದ
ದಿನವು ಬಂದಿತು. [8]ಆದುದರಿಂದ ಯೇಸುಸ್ವಾಮಿ ತಮ್ಮ ಶಿಷ್ಯರಾದ ಪೇತ್ರ ಹಾಗೂ ಯೊವಾನ್ನನನ್ನು ಕರೆದು,
"ಹೋಗಿ, ಪಾಸ್ಕಭೋಜನ ಸಿದ್ಧಮಾಡಿರಿ," ಎಂದರು. [9]"ಎಲ್ಲಿ ಸಿದ್ಧಪಡಿಸಬೇಕು?" ಎಂದು ಅವರು
ಕೇಳಿದಾಗ, [10]"ನೀವು ಪಟ್ಟಣವನ್ನು ಪ್ರವೇಶಿಸುವಾಗ ನೀರಿನ ಕೊಡವನ್ನು ಹೊತ್ತುಕೊಂಡು ಹೋಗುವ
ಒಬ್ಬನನ್ನು ಎದುರುಗೊಳ್ಳುವಿರಿ. ಅವನನ್ನು ಹಿಂಬಾಲಿಸಿ, ಅವನು ಹೋಗುವ ಮನೆಗೆ ಹೋಗಿರಿ. [11]ಆ
ಮನೆಯ ಯಜಮಾನನಿಗೆ, 'ನನ್ನ ಶಿಷ್ಯರ ಜೊತೆಯಲ್ಲಿ ಪಾಸ್ಕಭೋಜನ ಮಾಡಲು ಕೊಠಡಿ ಎಲ್ಲಿ, ಎಂದು
ನಿಮ್ಮನ್ನು ವಿಚಾರಿಸಲು ನಮ್ಮ ಗುರು ಹೇಳಿದ್ದಾರೆ,' ಎನ್ನಿ. [12]ಅವನು ಮೇಲ್ಮಾಳಿಗೆಯಲ್ಲಿ ವಿಶಾಲವಾದ ಹಾಗೂ
ಸುಸಜ್ಜಿತವಾದ ಕೊಠಡಿಯೊಂದನ್ನು ತೋರಿಸುವನು. ಅಲ್ಲಿ ಸಿದ್ಧಮಾಡಿ," ಎಂದರು. [13]ಅಂತೆಯೇ
ಶಿಷ್ಯರಿಬ್ಬರು ಹೋಗಿ ಯೇಸು ತಮಗೆ ಹೇಳಿದ ಪ್ರಕಾರ ಎಲ್ಲವೂ ವ್ಯವಸ್ಥಿತವಾಗಿರುವುದನ್ನು ಕಂಡು ಪಾಸ್ಕ
ಭೋಜನವನ್ನು ತಯಾರಿಸಿದರು.

### ಪ್ರಭುವಿನ ಭೋಜನ

(ಮತ್ತಾ. 26.26–30; ಮಾರ್ಕ 14.22–26; 1 ಕೊರಿಂಥ 11.23–25)

14 ನಿಶ್ಚಿತ ಸಮಯ ಬಂದಾಗ ಯೇಸುಸ್ವಾಮಿ ಶಿಷ್ಯರ ಸಮೇತ ಊಟಕ್ಕೆ ಕುಳಿತರು. [15]ಆಗ ಅವರು
ಶಿಷ್ಯರಿಗೆ, "ನಾನು ಯಾತನೆಯನ್ನು ಅನುಭವಿಸುವುದಕ್ಕೆ ಮುಂಚೆ ನಿಮ್ಮೊಡನೆ ಈ ಪಾಸ್ಕಭೋಜನವನ್ನು
ಮಾಡಲು ಬಹಳ ಅಪೇಕ್ಷೆಯಿಂದ ಎದುರುನೋಡುತ್ತಿದ್ದೆನು. [16]ದೇವರ ಸಾಮ್ರಾಜ್ಯದಲ್ಲಿ ಇದು ಪೂರ್ಣ
ಅರ್ಥವನ್ನು ಪಡೆಯುವ ತನಕ ನಾನಿದನ್ನು ಇನ್ನು ಭುಜಿಸುವುದೇ ಇಲ್ಲವೆಂದು ನಿಮಗೆ ಸತ್ಯವಾಗಿ
ಹೇಳುತ್ತೇನೆ," ಎಂದರು. [17]ಅನಂತರ ಯೇಸು ಪಾನಪಾತ್ರೆಯನ್ನು ತೆಗೆದುಕೊಂಡು ದೇವರಿಗೆ
ಕೃತಜ್ಞತಾಸ್ತೋತ್ರವನ್ನು ಸಲ್ಲಿಸಿ, "ಇದನ್ನು ತೆಗೆದುಕೊಂಡು ನಿಮ್ಮಲ್ಲಿ ಹಂಚಿಕೊಳ್ಳಿರಿ; [18]ದೇವರ ಸಾಮ್ರಾಜ್ಯವು
ಬರುವ ತನಕ ಇನ್ನು ನಾನು ದ್ರಾಕ್ಷಾರಸವನ್ನು ಕುಡಿಯುವುದಿಲ್ಲ ಎಂದು ನಿಮಗೆ ಹೇಳುತ್ತೇನೆ," ಎಂದರು.
[19]ಬಳಿಕ ರೊಟ್ಟಿಯನ್ನು ತೆಗೆದುಕೊಂಡು, ದೇವರಿಗೆ ಕೃತಜ್ಞತಾಸ್ತೋತ್ರವನ್ನು ಸಲ್ಲಿಸಿ, ಅದನ್ನು ಮುರಿದು,
ಶಿಷ್ಯರಿಗೆ ಕೊಡುತ್ತಾ, "ಇದು ನಿಮಗಾಗಿ ಒಪ್ಪಿಸಲಾಗುವ ನನ್ನ ಶರೀರ, ನನ್ನ ಸ್ಮರಣೆಗಾಗಿ ಇದನ್ನು ಮಾಡಿರಿ,"
ಎಂದರು. [20]ಅಂತೆಯೇ, ಊಟವಾದ ಮೇಲೆ ಪಾನಪಾತ್ರೆಯನ್ನು ತೆಗೆದುಕೊಂಡು, "ಈ ಪಾತ್ರೆಯು
ನಿಮಗಾಗಿ ಸುರಿಸಲಾಗುವ ನನ್ನ ರಕ್ತದಿಂದ ಮುದ್ರಿತವಾದ ಹೊಸ ಒಡಂಬಡಿಕೆ".

21 “ಆದರೆ ಇಗೋ, ನನಗೆ ದ್ರೋಹ ಬಗೆಯುವವನು ನನ್ನೊಂದಿಗೆ ಇದೇ ಪಂಕ್ತಿಯಲ್ಲಿ ಊಟಕ್ಕೆ
ಕುಳಿತಿದ್ದಾನೆ. 22ನರಪುತ್ರನೇನೋ ದೈವೇಚ್ಛೆಯ ಪ್ರಕಾರ ಹೊರಟು ಹೋಗುತ್ತಾನೆ; ಆದರೆ ಆತನಿಗೆ ದ್ರೋಹ
ಬಗೆಯುವವನ ದುರ್ಗತಿಯನ್ನು ಏನೆಂದು ಹೇಳಲಿ!” ಎಂದರು. 23ಇದನ್ನು ಕೇಳಿದ ಶಿಷ್ಯರು ಇಂಥ ದುಷ್ಕೃತ್ಯ
ಮಾಡುವವನು ತಮ್ಮಲ್ಲಿ ಯಾರಿರಬಹುದೆಂದು ಒಬ್ಬರನ್ನೊಬ್ಬರು ವಿಚಾರಿಸತೊಡಗಿದರು.

### ನಾಯಕನು ಸೇವಕನಾಗಲಿ

24 ತಮ್ಮಲ್ಲಿ ಅತಿ ಶ್ರೇಷ್ಠನು ಯಾರು ಎಂಬ ವಾದವಿವಾದವು ಶಿಷ್ಯರಲ್ಲಿ ಎದ್ದಿತು. 25ಆಗ
ಯೇಸುಸ್ವಾಮಿ, “ಲೌಕಿಕ ರಾಜರು ತಮ್ಮ ಪ್ರಜೆಗಳ ಮೇಲೆ ದೊರೆತನ ಮಾಡುತ್ತಾರೆ; ಅಧಿಕಾರ ನಡೆಸುವವರು
ಧರ್ಮಿಷ್ಠರೆನಿಸಿಕೊಳ್ಳುತ್ತಾರೆ. 26ಆದರೆ ನೀವು ಹಾಗಾಗಬಾರದು; ನಿಮ್ಮಲ್ಲಿ ಅತಿ ದೊಡ್ಡವನು ಅತಿ
ಚಿಕ್ಕವನಂತಾಗಬೇಕು. 27ಈ ಇಬ್ಬರಲ್ಲಿ ದೊಡ್ಡವನು ಯಾರು – ಊಟ ಮಾಡುವವನೋ? ಊಟ
ಬಡಿಸುವವನೋ? ಖಂಡಿತವಾಗಿ ಊಟ ಮಾಡುವವನು. ಆದರೂ ಊಟ ಬಡಿಸುವ ಊಳಿಗದವನಂತೆ
ನಾನು ನಿಮ್ಮ ನಡುವೆ ಇದ್ದೇನೆ.

### ಆಪ್ತ ಶಿಷ್ಯರಿಗೆ ಸೂಕ್ತ ಸಂಭಾವನೆ

28 “ನನ್ನ ಶೋಧನೆ–ವೇದನೆಗಳಲ್ಲಿ ನನ್ನನ್ನು ಬಿಟ್ಟಗಲದೆ ಇದ್ದವರು ನೀವು. 29ನನ್ನ ಪಿತನು ನನಗೆ
ರಾಜ್ಯಾಧಿಕಾರವನ್ನು ವಹಿಸಿರುವಂತೆ ನಾನೂ ನಿಮಗೆ ವಹಿಸುತ್ತೇನೆ. 30ನನ್ನ ಸಾಮ್ರಾಜ್ಯದಲ್ಲಿ ನನ್ನ ಸಂಗಡ
ಊಟ ಮಾಡುವಿರಿ, ಪಾನ ಮಾಡುವಿರಿ, ಮಾತ್ರವಲ್ಲ ಇಸ್ರಯೇಲಿನ ಹನ್ನೆರಡು ಗೋತ್ರಗಳಿಗೆ
ನ್ಯಾಯಾಧಿಪತಿಗಳಾಗಿ ಸಿಂಹಾಸನಗಳ ಮೇಲೆ ಆಸೀನರಾಗುವಿರಿ.

### ಪೇತ್ರನಿಗಾಗಿ ಪ್ರಾರ್ಥನೆ

(ಮತ್ತಾ. 26.31–35; ಮಾರ್ಕ 14.27–31; ಯೊವಾ. 13.36–38)

31 “ಸಿಮೋನನೇ, ಸಿಮೋನನೇ, ಕೇಳು: ಗೋದಿಯನ್ನು ತೂರುವಂತೆ ಸೈತಾನನು ನಿಮ್ಮೆಲ್ಲರನ್ನೂ
ಶೋಧಿಸಲು ಅಪ್ಪಣೆ ಕೇಳಿಕೊಂಡಿದ್ದಾನೆ. 32ಆದರೆ, ನಾನು ನಿನ್ನ ವಿಶ್ವಾಸವು ಕುಂದದಂತೆ ನಿನಗಾಗಿ ಪ್ರಾರ್ಥನೆ
ಮಾಡಿದ್ದೇನೆ. ನೀನು ಪರಿವರ್ತನೆ ಹೊಂದಿದ ನಂತರ ನಿನ್ನ ಸಹೋದರರನ್ನು ದೃಢಪಡಿಸು,” ಎಂದರು.
33 ಅದಕ್ಕೆ ಪೇತ್ರನು, “ಗುರುದೇವಾ, ನಿಮ್ಮ ಸಂಗಡ ಸೆರೆಗೆ ಹೋಗುವುದಕ್ಕೂ ಸಾಯುವುದಕ್ಕೂ
ಸಿದ್ಧನಿದ್ದೇನೆ,” ಎಂದನು. 34ಆಗ ಯೇಸು, “ಪೇತ್ರನೇ, ಇಂದು ಕೋಳಿಕೂಗುವ ಮೊದಲೇ ನನ್ನನ್ನು
ಅರಿಯೆನೆಂದು ನೀನು ಮೂರು ಬಾರಿ ಬೊಂಕುವೆ, ಇದು ಖಂಡಿತ,” ಎಂದರು.

### ಪಾತಕರಲ್ಲಿ ಒಬ್ಬನಂತೆ ಪರಿಗಣಿತರಾದ ಯೇಸು

35 ಬಳಿಕ ಯೇಸುಸ್ವಾಮಿ, “ನಾನು ನಿಮ್ಮನ್ನು ಬುತ್ತಿ, ಜೋಳಿಗೆ, ಜೋಡು ಒಂದೂ ಇಲ್ಲದೆ
ಕಳಿಸಿದಾಗ ನಿಮಗೇನಾದರೂ ಕೊರತೆ ಆಯಿತೇ?” ಎಂದು ಶಿಷ್ಯರನ್ನು ಕೇಳಿದರು. ಅದಕ್ಕೆ ಅವರು “ಇಲ್ಲ,”
ಎಂದು ಉತ್ತರ ಕೊಟ್ಟರು. 36“ಆದರೆ ಈಗ ಬುತ್ತಿಯಿರುವವನು ಅದನ್ನು ತೆಗೆದುಕೊಳ್ಳಲಿ;
ಜೋಳಿಗೆಯಿರುವವನು ಹಾಗೆಯೇ ಮಾಡಲಿ; ಮತ್ತು ಕತ್ತಿಯಿಲ್ಲದವನು ತನ್ನ ಹೊದಿಕೆಯನ್ನು ಮಾರಿ
ಒಂದನ್ನು ಕೊಂಡುಕೊಳ್ಳಲಿ. 37ಏಕೆಂದರೆ, ‘ಪಾತಕರಲ್ಲಿ ಒಬ್ಬನಂತೆ ಪರಿಗಣಿತನಾದನು,’ ಎಂದು
ಪವಿತ್ರಗ್ರಂಥದಲ್ಲಿ ಬರೆದಿರುವ ವಾಕ್ಯ ನನ್ನಲ್ಲಿ ನೆರವೇರಬೇಕಾದುದು ಅಗತ್ಯ; ನನಗೆ ಸಂಬಂಧಪಟ್ಟಿದ್ದೆಲ್ಲಾ
ಸಮಾಪ್ತಿಗೊಳ್ಳಲಿದೆ,” ಎಂದರು. 38“ಗುರುವೇ, ಇಗೋ ಇಲ್ಲಿ ಎರಡು ಕತ್ತಿಗಳಿಗೆ,” ಎಂದು ಶಿಷ್ಯರು ಹೇಳಲು
ಯೇಸು, “ಅಷ್ಟು ಸಾಕು,” ಎಂದರು.

## ಓಲಿವ್ ತೋಪಿನಲ್ಲಿ ಒಳಯಾತನೆ

(ಮತ್ತಾ. 26.36–46; ಮಾರ್ಕ 14.32–42)

39 ಯೇಸುಸ್ವಾಮಿ ಅಲ್ಲಿಂದ ಹೊರಟು ವಾಡಿಕೆಯ ಪ್ರಕಾರ ಓಲಿವ್ ತೋಪಿನ ಗುಡ್ಡಕ್ಕೆ ಹೋದರು.
ಶಿಷ್ಯರು ಅವರ ಹಿಂದೆ ಹೋದರು. 40ಕ್ಲುಪ್ತಸ್ಥಳಕ್ಕೆ ಬಂದಾಗ ಯೇಸು ಅವರಿಗೆ "ಪ್ರಲೋಭನೆಗೆ
ಒಳಗಾಗದಂತೆ ಪ್ರಾರ್ಥನೆ ಮಾಡಿರಿ," ಎಂದು ಹೇಳಿ, 41ಒಂದು ಕಲ್ಲೆಸೆತದಷ್ಟು ದೂರ ಹೋಗಿ,
ಮೊಣಕಾಲೂರಿ ಪ್ರಾರ್ಥನೆ ಮಾಡುತ್ತಾ, 42"ಓ ಪಿತನೇ, ನಿಮಗೆ ಇಷ್ಟವಾದರೆ ಈ ಕಷ್ಟದ ಕೊಡವನ್ನು
ನನ್ನಿಂದ ತೊಲಗಿಸಿರಿ. ಆದರೂ ನನ್ನ ಚಿತ್ತವಲ್ಲ, ನಿಮ್ಮ ಚಿತ್ತವೇ ನೆರವೇರಲಿ," ಎಂದರು. 43ಆಗ ಸ್ವರ್ಗದಿಂದ
ದೂತನೊಬ್ಬನು ಯೇಸುವಿಗೆ ಪ್ರತ್ಯಕ್ಷನಾಗಿ ಅವರನ್ನು ಸಶಕ್ತರನ್ನಾಗಿ ಮಾಡಿದನು. 44ಕಡುಯಾತನೆಯಲ್ಲಿದ್ದ
ಅವರು ಇನ್ನೂ ಶ್ರದ್ಧೆಯಿಂದ ಪ್ರಾರ್ಥಿಸಿದರು. ಅವರ ಬೆವರು ರಕ್ತದ ಹನಿಯಂತೆ ತೊಟ್ಟುತೊಟ್ಟಾಗಿ ನೆಲದ
ಮೇಲೆ ಬೀಳುತ್ತಿತ್ತು.

45 ಯೇಸು ಪ್ರಾರ್ಥನೆಯಿಂದ ಎದ್ದು ಶಿಷ್ಯರ ಬಳಿಗೆ ಬಂದರು. ಶಿಷ್ಯರಾದರೋ ದುಃಖದಿಂದ
ಬಳಲಿ ನಿದ್ರಿಸುತ್ತಿದ್ದರು. 46ಇದನ್ನು ಕಂಡು, "ನೀವು ನಿದ್ರಿಸುತ್ತೀರೇನು? ಎದ್ದು, ನೀವು ಪ್ರಲೋಭನೆಗೆ
ಒಳಗಾಗದಂತೆ ಪ್ರಾರ್ಥನೆಮಾಡಿ," ಎಂದರು.

## ಯೇಸುವಿನ ಬಂಧನ

(ಮತ್ತಾ. 26.47–56; ಮಾರ್ಕ 14.43–50; ಯೊವಾ. 18.3–11)

47 ಯೇಸುಸ್ವಾಮಿ ಇನ್ನೂ ಮಾತನಾಡುತ್ತಿದ್ದ ಹಾಗೆ ಜನರ ಗುಂಪೊಂದು ಕಾಣಿಸಿಕೊಂಡಿತು.
ಹನ್ನೆರಡು ಮಂದಿಯಲ್ಲಿ ಒಬ್ಬನಾದ ಯೂದನು ಅವರಿಗೆ ಮುಂದಾಳಾಗಿ ಬಂದಿದ್ದನು. ಅವನು ಯೇಸುವಿಗೆ
ಮುದ್ದಿಡಲು ಹತ್ತಿರ ಬಂದಾಗ, 48ಯೇಸು, "ಯೂದಾ, ಮುದ್ದಿಟ್ಟು ನರಪುತ್ರನನ್ನು ತೋರಿಸಿಕೊಡುವೆಯಾ?"
ಎಂದರು. 49ಸುತ್ತಲಿದ್ದ ಶಿಷ್ಯರು ಮುಂದೇನಾಗುವುದೆಂದು ಅರಿತುಕೊಂಡು, "ಗುರುವೇ, ಕತ್ತಿಯಿಂದ
ಕಡಿಯೋಣವೇ," ಎಂದರು. 50ತಕ್ಷಣವೇ ಅವರಲ್ಲಿ ಒಬ್ಬನು ಪ್ರಧಾನಯಾಜಕನ ಆಳನ್ನು ಹೊಡೆದು ಅವನ
ಬಲಕಿವಿಯನ್ನು ಕತ್ತರಿಸಿಬಿಟ್ಟನು. 51ಆಗ ಯೇಸು, "ಸಾಕು ನಿಲ್ಲಿಸು," ಎಂದು ಹೇಳಿ ಅವನ ಕಿವಿಯನ್ನು
ಮುಟ್ಟಿ ಗುಣಪಡಿಸಿದರು.

52 ಅನಂತರ ಯೇಸು ತಮ್ಮನ್ನು ಹಿಡಿಯುವುದಕ್ಕೆ ಬಂದಿದ್ದ ಮುಖ್ಯಯಾಜಕರನ್ನೂ ದೇವಾಲಯದ
ಪಹರೆಯ ದಳಪತಿಗಳನ್ನೂ ಪ್ರಮುಖರನ್ನೂ ನೋಡಿ, "ದರೋಡೆಗಾರನನ್ನು ಹಿಡಿಯುವುದಕ್ಕೆ ಬಂದಂತೆ
ಖಡ್ಗಗಳನ್ನು ಮತ್ತು ಲಾಠಿಗಳನ್ನು ತೆಗೆದುಕೊಂಡು ಬಂದಿರುವಿರೋ? 53ನಾನು ಪ್ರತಿದಿನವೂ
ಮಹಾದೇವಾಲಯದಲ್ಲಿ ನಿಮ್ಮ ನಡುವೆಯೇ ಇದ್ದೆ. ಆಗ ನೀವು ನನ್ನ ಮೇಲೆ ಕೈಮಾಡಲಿಲ್ಲ; ಆದರೆ ಇದು
ನಿಮ್ಮ ಕಾಲ; ಅಂಧಕಾರ ದೊರೆತನ ಮಾಡುವ ಕರಾಳ ಕಾಲ," ಎಂದರು.

## ಅವನಾರೋ ನಾನರಿಯೆ

(ಮತ್ತಾ. 26.57–58, 69–75; ಮಾರ್ಕ 14.53–54, 66–72; ಯೊವಾ. 18.12–18, 25–27)

54 ಅನಂತರ ಅವರು ಯೇಸುಸ್ವಾಮಿಯನ್ನು ಬಂಧಿಸಿ ಪ್ರಧಾನಯಾಜಕನ ಭವನಕ್ಕೆ ಕರೆದುಕೊಂಡು
ಹೋದರು. ದೂರದಿಂದ ಪೇತ್ರನು ಹಿಂದೆಹಿಂದೆಯೇ ಹೋದನು. 55ಭವನದ ಹೊರಾಂಗಣದ ನಡುವೆ
ಬೆಂಕಿಮಾಡಿ ಅದರ ಸುತ್ತಲೂ ಅವರೆಲ್ಲರು ಕುಳಿತುಕೊಂಡಾಗ, ಪೇತ್ರನು ಅವರ ಸಂಗಡ ಸೇರಿ
ಕುಳಿತುಕೊಂಡನು. 56ಬೆಂಕಿಯ ಬೆಳಕಿನಲ್ಲಿ ಕುಳಿತಿದ್ದ ಆತನನ್ನು ದಾಸಿಯೊಬ್ಬಳು ದೃಷ್ಟಿಸಿ ನೋಡಿ, "ಇವನು
ಕೂಡ ಯೇಸುವಿನ ಸಂಗಡ ಇದ್ದವನು," ಎಂದಳು. 57ಅದಕ್ಕೆ ಆತ, "ಅವನಾರೋ ನಾನರಿಯೆನಮ್ಮಾ,"
ಎಂದು ನಿರಾಕರಿಸಿದನು. 58ಸ್ವಲ್ಪ ಹೊತ್ತಾದ ಮೇಲೆ ಇನ್ನೊಬ್ಬನು ಆತನನ್ನು ಕಂಡು, "ನೀನು ಕೂಡ ಅವರಲ್ಲಿ
ಒಬ್ಬನು," ಎನ್ನಲು ಪೇತ್ರನು, "ಇಲ್ಲಪ್ಪಾ, ನಾನಲ್ಲ," ಎಂದುಬಿಟ್ಟನು. 59ಸುಮಾರು ಒಂದು ಗಂಟೆ ಕಾಲ
ಕಳೆದ ಮೇಲೆ ಮತ್ತೊಬ್ಬನು, "ಖಂಡಿತವಾಗಿ ಇವನು ಕೂಡ ಯೇಸುವಿನ ಸಂಗಡ ಇದ್ದವನು. ಏಕೆಂದರೆ,
ಇವನೂ ಗಲಿಲೇಯದವನೇ," ಎಂದು ಒತ್ತಿ ಹೇಳಿದನು. 60ಅದಕ್ಕೆ ಪೇತ್ರನು, "ನೀನು ಏನು ಹೇಳುತ್ತೀಯೋ

ನನಗೆ ಅರ್ಥವಾಗುವುದಿಲ್ಲ," ಎಂದನು. ಆಕ್ಷಣವೇ, ಅವನು ಇನ್ನೂ ಮಾತನಾಡುತ್ತಿರುವಾಗಲೇ, ಕೋಳಿ
ಕೂಗಿತು. [61]ಆಗ ಪ್ರಭು ಯೇಸು ಹಿಂದಿರುಗಿ ಪೇತ್ರನನ್ನು ದಿಟ್ಟಿಸಿ ನೋಡಿದರು. "ಈ ದಿನ ಕೋಳಿ ಕೂಗುವ
ಮೊದಲೇ, 'ನಾನು ಆತನನ್ನು ಅರಿಯೆನು," ಎಂದು ನನ್ನನ್ನು ಮೂರು ಬಾರಿ ನಿರಾಕರಿಸುವೆ," ಎಂದು
ಯೇಸು ನುಡಿದಿದ್ದ ಮಾತುಗಳು ಪೇತ್ರನ ನೆನಪಿಗೆ ಬಂದುವು. [62]ಅವನು ಹೊರಗೆ ಹೋಗಿ ಬಹಳವಾಗಿ
ವ್ಯಥೆಪಟ್ಟು ಅತ್ತನು.

### ಪೆಟ್ಟು ಹಾಗೂ ಪರಿಹಾಸ್ಯ

(ಮತ್ತಾ. 28.67–68; ಮಾರ್ಕ 14.65)

63 ಯೇಸುಸ್ವಾಮಿಯನ್ನು ಬಂಧಿಸಿ ಹಿಡಿದುಕೊಂಡಿದ್ದವರು ಅವರನ್ನು ಅಣಕಿಸಿದರು, ಹೊಡೆದರು.
[64]ಕಣ್ಣಿಗೆ ಬಟ್ಟೆಕಟ್ಟಿ, "ನಿನ್ನನ್ನು ಹೊಡೆದವರಾರು? ಪ್ರವಾದಿಸು," ಎಂದು ಕೇಳುತ್ತಿದ್ದರು. [65]ಹಲವಾರು
ವಿಧದಲ್ಲಿ ಅವರನ್ನು ದೂಷಿಸಿ ನಿಂದಿಸುತ್ತಿದ್ದರು.

### ಧಾರ್ಮಿಕ ನ್ಯಾಯಪೀಠದಿಂದ ವಿಚಾರಣೆ

(ಮತ್ತಾ. 26.59–66; ಮಾರ್ಕ 14.55–64; ಯೊವಾ. 18.19–24)

66 ಅಷ್ಟರಲ್ಲಿ ಬೆಳಗಾಯಿತು. ಪ್ರಜಾ ಪ್ರಮುಖರೂ ಮುಖ್ಯಯಾಜಕರೂ ಧರ್ಮಶಾಸ್ತ್ರಿಗಳೂ
ಸಭೆಸೇರಿದರು. ಯೇಸುವನ್ನು ತಂದು ನ್ಯಾಯಸಭೆಯ ಮುಂದೆ ನಿಲ್ಲಿಸಿದರು. [67]"ನೀನು ಅಭಿಷಿಕ್ತನಾದ
ಲೋಕೋದ್ಧಾರಕನಾಗಿದ್ದರೆ ನಮಗೆ ಹೇಳು," ಎಂದು ವಿಚಾರಿಸಿದರು. ಆಗ ಯೇಸು, "ನಾನು ಹೇಳಿದರೆ
ನೀವು ನನ್ನನ್ನು ನಂಬುವುದಿಲ್ಲ. [68]ನಾನೇ ಪ್ರಶ್ನೆಹಾಕಿದರೆ ನೀವು ನನಗೆ ಉತ್ತರ ಕೊಡುವುದೂ ಇಲ್ಲ. [69]ಇನ್ನು
ಮುಂದೆ ನರಪುತ್ರನು ಸರ್ವಶಕ್ತ ದೇವರ ಬಲಗಡೆ ಆಸೀನನಾಗಿರುವನು," ಎಂದರು. [70]ಅದಕ್ಕೆ ಅವರೆಲ್ಲರೂ,
"ಹಾಗಾದರೆ, ನೀನು ದೇವರ ಪುತ್ರನೋ?" ಎಂದು ಕೇಳಿದರು. "ನಾನು ಆತನೇ ಎಂದು ನೀವೇ
ಹೇಳುತ್ತಿದ್ದೀರಿ," ಎಂದು ಯೇಸು ಉತ್ತರ ಕೊಡಲು ಅವರು, [71]"ಇನ್ನೇನು ಸಾಕ್ಷಿಬೇಕು? ನಾವೇ ಇವನ
ಬಾಯಿಂದ ಕೇಳಿದೆವಲ್ಲಾ," ಎಂದರು.

### ರಾಜ್ಯಪಾಲ ಪಿಲಾತನ ಮುಂದೆ ಯೇಸು

(ಮತ್ತಾ. 27.1–2; ಮಾರ್ಕ 15.1–5; ಯೊವಾ. 18.28–38)

**23** ಬಳಿಕ ಸಭೆಸೇರಿದ್ದವರೆಲ್ಲರೂ ಎದ್ದು ಯೇಸುಸ್ವಾಮಿಯನ್ನು ಪಿಲಾತನ ಬಳಿಗೆ ಕರೆದುತಂದರು. [2]ಅಲ್ಲಿ
ಆತನ ಮುಂದೆ, "ಇವನು ರೋಮ್ ಚಕ್ರವರ್ತಿಗೆ ತೆರಿಗೆ ಕೊಡುವುದನ್ನು ನಿಷೇಧಿಸುತ್ತಾನೆ. ತಾನೇ 'ಕ್ರಿಸ್ತ,
ಒಬ್ಬ ಅರಸ,' ಎಂದು ಹೇಳಿಕೊಳ್ಳುತ್ತಾನೆ. ಹೀಗೆ ನಮ್ಮ ಜನತೆ ದಂಗೆಯೇಳುವಂತೆ ಪ್ರಚೋದಿಸುತ್ತಾನೆ.
ಇದನ್ನೆಲ್ಲಾ ನಾವು ಕಂಡುಹಿಡಿದಿದ್ದೇವೆ," ಎಂದು ದೂರತೊಡಗಿದರು. [3]ಆಗ ಪಿಲಾತನು, "ನೀನು
ಯೆಹೂದ್ಯರ ಅರಸನೋ?" ಎಂದು ಯೇಸುವನ್ನು ಪ್ರಶ್ನಿಸಿದನು. "ಅದು ನಿಮ್ಮ ಬಾಯಿಂದಲೇ ಬಂದಿದೆ,"
ಎಂದು ಯೇಸು ಮರುನುಡಿದರು. [4]ಪಿಲಾತನು ಮುಖ್ಯ ಯಾಜಕರನ್ನೂ ಜನರ ಗುಂಪನ್ನೂ ನೋಡಿ, "ಈ
ಮನುಷ್ಯನಲ್ಲಿ ಶಿಕ್ಷಾರ್ಹ ದೋಷ ಯಾವುದೂ ನನಗೆ ಕಾಣಿಸುವುದಿಲ್ಲ," ಎಂದನು. [5]ಆದರೆ ಅವರು, "ಇವನು
ಜುದೇಯ ನಾಡಿನಲ್ಲೆಲ್ಲಾ ಬೋಧನೆ ಮಾಡುತ್ತಾ ಕ್ರಾಂತಿಗೆ ಕರೆಗೊಡುತ್ತಾನೆ; ಗಲಿಲೇಯದಲ್ಲಿ ಪ್ರಾರಂಭಿಸಿ
ಇಲ್ಲಿಯವರೆಗೂ ಬಂದಿದ್ದಾನೆ," ಎಂದು ಒತ್ತಾಯ ಪೂರ್ವಕವಾಗಿ ಆರೋಪಿಸಿದರು.

## ಹೆರೋದರಸನ ಮುಂದೆ ಯೇಸು

6 ಇದನ್ನು ಕೇಳಿದಾಕ್ಷಣವೇ ಪಿಲಾತನು, "ಇವನು ಗಲಿಲೇಯದವನೋ?" ಎಂದು ವಿಚಾರಿಸಿದನು.
[7]ಯೇಸುಸ್ವಾಮಿ ಹೆರೋದನ ಆಧಿಪತ್ಯಕ್ಕೆ ಒಳಪಟ್ಟವರೆಂದು ತಿಳಿದುಕೊಂಡು ಅವರನ್ನು ಆತನ ಬಳಿಗೆ
ಕಳುಹಿಸಿದನು. ಹೆರೋದನು ಅದೇ ಸಮಯಕ್ಕೆ ಜೆರುಸಲೇಮಿಗೆ ಬಂದಿದ್ದನು.

8 ಯೇಸುಸ್ವಾಮಿಯನ್ನು ಕಂಡೊಡನೆ ಹೆರೋದನಿಗೆ ತುಂಬ ಸಂತೋಷವಾಯಿತು. ಆತನು
ಅವರನ್ನು ಕಾಣಲು ಬಹಳ ದಿನಗಳಿಂದ ಕಾತರನಾಗಿದ್ದನು. ಏಕೆಂದರೆ ಅವರ ವಿಷಯವಾಗಿ ಈಗಾಗಲೇ
ಎಷ್ಟೋ ಕೇಳಿದ್ದನು. ಅವರು ಯಾವುದಾದರೊಂದು ಪವಾಡಕಾರ್ಯ ಮಾಡುವುದನ್ನು ನೋಡಬೇಕೆಂಬ
ಅಪೇಕ್ಷೆ ಆತನಿಗಿತ್ತು. [9]ಆದುದರಿಂದ ಆತನು ಯೇಸುವನ್ನು ಅನೇಕ ವಿಧವಾಗಿ ಪ್ರಶ್ನಿಸಿದನು. ಆದರೆ ಅವರು
ಒಂದಕ್ಕೂ ಉತ್ತರ ಕೊಡಲಿಲ್ಲ. [10]ಇತ್ತ ಮುಖ್ಯ ಯಾಜಕರೂ ಧರ್ಮಶಾಸ್ತ್ರಿಗಳೂ ಮುಂದೆಬಂದು ಅವರ
ಮೇಲೆ ಪ್ರಬಲವಾಗಿ ದೋಷಾರೋಪಣೆ ಮಾಡತೊಡಗಿದರು. [11]ಕಡೆಗೆ ಹೆರೋದನು ತನ್ನ ಸೈನಿಕರೊಡನೆ
ಸೇರಿ ಯೇಸುವನ್ನು ಅಣಕಿಸಿ ಅವಮಾನ ಪಡಿಸಿದನು. ರಾಜವಸ್ತ್ರವನ್ನು ವೇಷಭೂಷಣವಾಗಿ ಅವರಿಗೆ
ತೊಡಿಸಿ ಪಿಲಾತನ ಬಳಿಗೆ ಮರಳಿ ಕಳುಹಿಸಿಕೊಟ್ಟನು. [12]ಅದುವರೆಗೂ ಪರಸ್ಪರ ವೈರಿಗಳಾಗಿದ್ದ ಹೆರೋದನು
ಮತ್ತು ಪಿಲಾತನು ಅಂದೇ ಮಿತ್ರರಾದರು.

## ಪಿಲಾತನಿಂದ ಮರು ವಿಚಾರಣೆ

(ಮತ್ತಾ. 27.15–26; ಮಾರ್ಕ 15.6–15; ಯೊವಾ. 18.39–19.16)

13 ಪಿಲಾತನು ಮುಖ್ಯಯಾಜಕರನ್ನೂ ಮುಖಂಡರನ್ನೂ ಜನರನ್ನೂ ಒಟ್ಟಾಗಿ ಕರೆಯಿಸಿ, [14]"ಜನರು
ದಂಗೆಯೇಳುವಂತೆ ಈ ಮನುಷ್ಯ ಪ್ರೇರೇಪಿಸುತ್ತಾನೆಂದು ಇವನನ್ನು ನನ್ನ ಬಳಿಗೆ ಕರೆತಂದಿರಲ್ಲವೇ? ಇಗೋ,
ನಿಮ್ಮ ಎದುರಿಗೇ ವಿಚಾರಣೆ ಮಾಡಿದ್ದೇನೆ; ಇವನಲ್ಲಿ ನೀವು ಆರೋಪಿಸುವಂಥ ದೋಷಗಳೊಂದೂ ನಮಗೆ
ಕಾಣಲಿಲ್ಲ; [15]ಹೆರೋದ ಅರಸನಿಗೂ ಕಾಣಲಿಲ್ಲ; ಎಂದೇ ಇವನನ್ನು ಮರಳಿ ನನ್ನ ಬಳಿಗೆ ಕಳುಹಿಸಿ
ಬಿಟ್ಟಿದ್ದಾರೆ. ಮರಣದಂಡನೆಗೆ ಗುರಿಯಾಗಿಸುವ ಯಾವುದನ್ನೂ ಇವನು ಮಾಡಿಲ್ಲ ಎಂಬುದು ಸ್ಪಷ್ಟವಾಗಿದೆ.
[16]ಆದ್ದರಿಂದ ಇವನನ್ನು ದಂಡಿಸಿ ಬಿಟ್ಟುಬಿಡುತ್ತೇನೆ" ಎಂದನು.

17 (ಪಾಸ್ಕಹಬ್ಬದ ಸಂದರ್ಭದಲ್ಲಿ ಜನರು ಕೇಳಿಕೊಂಡ ಒಬ್ಬ ಸೆರೆಯಾಳನ್ನು ಪಿಲಾತನು ಬಿಡುಗಡೆ
ಮಾಡಬೇಕಾಗಿತ್ತು). [18]ಆದರೆ ಅವರೆಲ್ಲರೂ, "ಇವನನ್ನು ಮುಗಿಸಿಬಿಡಿ, ಬರಬ್ಬನನ್ನು ನಮಗೆ
ಬಿಡುಗಡೆಮಾಡಿ," ಎಂದು ಒಕ್ಕೊರಲಿನಿಂದ ಬೊಬ್ಬೆಹಾಕಿದರು. [19]ನಗರದಲ್ಲಿ ದಂಗೆ ಎಬ್ಬಿಸಿದ ಹಾಗೂ
ಕೊಲೆಮಾಡಿದ ಕಾರಣ ಸೆರೆಯಲ್ಲಿ ಹಾಕಲಾಗಿದ್ದ ಬರಬ್ಬನೇ ಅವನು.

20 ಪಿಲಾತನು ಯೇಸುಸ್ವಾಮಿಯನ್ನು ಬಿಡುಗಡೆ ಮಾಡಬಯಸಿ ಮತ್ತೊಮ್ಮೆ ಜನರೊಡನೆ
ಮಾತನಾಡಿ ನೋಡಿದನು. [21]ಅವರಾದರೋ, "ಇವನನ್ನು ಶಿಲುಬೆಗೇರಿಸಿ, ಇವನನ್ನು ಶಿಲುಬೆಗೇರಿಸಿ,"
ಎಂದು ಆರ್ಭಟಿಸತೊಡಗಿದರು.

22 ಮೂರನೆಯ ಸಾರಿ ಪಿಲಾತನು, "ಏಕೆ? ಇವನೇನು ಕೇಡುಮಾಡಿದ್ದಾನೆ? ಇವನನ್ನು ಮರಣ
ದಂಡನೆಗೆ ಗುರಿಪಡಿಸುವಂಥ ಅಪರಾಧ ಯಾವುದೂ ನನಗೆ ಕಂಡುಬರುವುದಿಲ್ಲ. ಆದ್ದರಿಂದ ಇವನನ್ನು
ದಂಡಿಸಿ ಬಿಟ್ಟುಬಿಡುತ್ತೇನೆ," ಎಂದನು.

23 ಆದರೂ ಅವರು ಅಧಿಕಾಧಿಕವಾಗಿ ಆರ್ಭಟಿಸುತ್ತಾ ಯೇಸುವನ್ನು ಶಿಲುಬೆಗೆ ಏರಿಸಲೇಬೇಕೆಂದು
ಕೂಗಾಡಿದರು. ಕಟ್ಟಕಡೆಗೆ ಕೂಗಾಟಕ್ಕೇ ಗೆಲುವಾಯಿತು! [24]ಆ ಜನರ ಕೋರಿಕೆಯಂತೆಯೇ ಆಗಲೆಂದು
ಪಿಲಾತನು ತೀರ್ಮಾನಿಸಿದನು. [25]ಅವರು ಕೇಳಿಕೊಂಡ ಪ್ರಕಾರ ಕೊಲೆಕಲಹಗಳ ನಿಮಿತ್ತ ಸೆರೆಯಲ್ಲಿದ್ದ
ಬರಬ್ಬನನ್ನು ಬಿಡುಗಡೆ ಮಾಡಿದನು. ಯೇಸುವನ್ನಾದರೋ ಅವರ ಇಚ್ಛಾನುಸಾರಕ್ಕೆ ಬಿಟ್ಟುಬಿಟ್ಟನು.

## ಶಿಲುಬೆಯ ಹಾದಿ

(ಮತ್ತಾ. 27.32–44; ಮಾರ್ಕ 15.21–32; ಯೊವಾ. 19.17–27)

26 ಸೈನಿಕರು ಯೇಸುಸ್ವಾಮಿಯನ್ನು ಕರೆದೊಯ್ಯುವಾಗ ಸಿರೇನ್ ಪಟ್ಟಣದ ಸಿಮೋನ ಎಂಬಾತ
ಹಳ್ಳಿಯ ಕಡೆಯಿಂದ ಆ ಮಾರ್ಗವಾಗಿ ಬರುತ್ತಿದ್ದನು. ಅವನನ್ನು ಹಿಡಿದು ಶಿಲುಬೆಯನ್ನು ಹೊತ್ತು
ಯೇಸುವಿನ ಹಿಂದೆ ಬರುವಂತೆ ಮಾಡಿದರು.

27 ಜನರ ದೊಡ್ಡ ಗುಂಪು ಯೇಸುವಿನ ಹಿಂದೆ ಹೊರಟಿತು. ಕೆಲವು ಮಹಿಳೆಯರು ಯೇಸುವಿಗಾಗಿ
ದುಃಖಪಟ್ಟು, ಎದೆಬಡಿದುಕೊಂಡು ಗೋಳಾಡುತ್ತಾ, ಹಿಂಬಾಲಿಸುತ್ತಿದ್ದರು. 28ಯೇಸು ಅವರಕಡೆ ತಿರುಗಿ,
"ಜೆರುಸಲೇಮಿನ ಕುವರಿಯರೇ, ನನಗಾಗಿ ಅಳಬೇಡಿ; ನಿಮಗಾಗಿ, ನಿಮ್ಮ ಮಕ್ಕಳಿಗಾಗಿ ದುಃಖಿಸಿರಿ.
29ಕಾಲವೊಂದು ಬರುವುದು; ಆಗ ಜನರು, 'ಬಂಜೆಯರೇ ಭಾಗ್ಯವಂತರು! ಹೆರದವಳೇ, ಹಾಲೂಡಿಸದವಳೇ
ಧನ್ಯಳು!' ಎನ್ನುವರು. 30ಅದೇ ಸಮಯದಲ್ಲಿ 'ಪರ್ವತಗಳೇ, ನಮ್ಮನ್ನು ತುಳಿದುಬಿಡಿ; ಗುಡ್ಡಗಳೇ, ನಮ್ಮನ್ನು
ನುಂಗಿಬಿಡಿ,' ಎಂದು ಕೂಗಿಕೊಳ್ಳುವರು. 31ಹಸಿಮರಕ್ಕೇ ಇಷ್ಟೆಲ್ಲಾ ಮಾಡಿದರೆ ಒಣಮರಕ್ಕಾಗುವ
ಗತಿಯಾದರೂ ಏನು!" ಎಂದರು.

32 ಯೇಸುವಿನ ಸಂಗಡ ಕೊಲ್ಲುವುದಕ್ಕಾಗಿ ಇಬ್ಬರು ಅಪರಾಧಿಗಳನ್ನೂ ಕೊಂಡೊಯ್ಯುತ್ತಿದ್ದರು.

## 'ಕ್ಷಮಿಸಿವರನೆಲೆ ತಂದೆ !'

33 'ಕಪಾಲ' ಎಂಬ ಸ್ಥಳಕ್ಕೆ ಬಂದು ಸೇರಿದ ಮೇಲೆ ಯೇಸುಸ್ವಾಮಿಯನ್ನು ಶಿಲುಬೆಗೆ ಏರಿಸಿದರು.
ಆ ಇಬ್ಬರು ಅಪರಾಧಿಗಳಲ್ಲಿ ಒಬ್ಬನನ್ನು ಅವರ ಬಲಗಡೆಯಲ್ಲೂ ಮತ್ತೊಬ್ಬನನ್ನು ಎಡಗಡೆಯಲ್ಲೂ
ಶಿಲುಬೆಗೇರಿಸಿದರು. 34ಆಗ ಯೇಸು, "ಪಿತನೇ, ಇವರನ್ನು ಕ್ಷಮಿಸಿ; ತಾವೇನು ಮಾಡುತ್ತಿರುವರೆಂದು ಇವರು
ಅರಿಯರು," ಎಂದರು. ಸೈನಿಕರಾದರೋ ಯೇಸುವಿನ ಬಟ್ಟೆಗಳನ್ನು ಚೀಟುಹಾಕಿ ಹಂಚಿಕೊಂಡರು. 35ಜನರು
ನೋಡುತ್ತಾ ನಿಂತಿದ್ದರು. ಅಲ್ಲಿದ್ದ ಮುಖಂಡರು ಯೇಸುವನ್ನು ಮೂದಲಿಸುತ್ತಾ, "ಇವನು ಇತರರನ್ನು
ರಕ್ಷಿಸಿದ; ಇವನು ದೇವರಿಂದಲೇ ಅಭಿಷಿಕ್ತನಾದ ಲೋಕೋದ್ಧಾರಕನು ಮತ್ತು ಅವರಿಂದಲೇ
ಆಯ್ಕೆಯಾದವನು ಆಗಿದ್ದರೆ ತನ್ನನ್ನು ತಾನೇ ರಕ್ಷಿಸಿಕೊಳ್ಳಲಿ," ಎಂದರು. 36ಸೈನಿಕರು ಮುಂದೆ ಬಂದು
ಹುಳಿರಸವನ್ನು ಅವರತ್ತ ಒಡ್ಡಿ, 37"ನೀನು ಯೆಹೂದ್ಯರ ಅರಸನಾಗಿದ್ದರೆ ನಿನ್ನನ್ನು ನೀನೇ ರಕ್ಷಿಸಿಕೊ," ಎಂದು
ಅಣಕಿಸುತ್ತಿದ್ದರು. 38ಯೇಸುವಿನ ಶಿಲುಬೆಯ ಮೇಲ್ಗಡೆ, "ಇವನು ಯೆಹೂದ್ಯರ ಅರಸ" ಎಂಬ ಲಿಖಿತವಿತ್ತು.
39ತೂಗುಹಾಕಿದ್ದ ಅಪರಾಧಿಗಳಲ್ಲಿ ಒಬ್ಬನು, "ನೀನು ಕ್ರಿಸ್ತ, ಅಲ್ಲವೆ? ಹಾಗಾದರೆ ನಿನ್ನನ್ನು ನೀನೇ ರಕ್ಷಿಸಿಕೋ,
ನಮ್ಮನ್ನೂ ರಕ್ಷಿಸು," ಎಂದು ಹಂಗಿಸಿದನು. 40ಆದರೆ ಮತ್ತೊಬ್ಬ ಅಪರಾಧಿ ಅವನನ್ನು ಖಂಡಿಸುತ್ತಾ, "ನಿನಗೆ
ದೇವರ ಭಯಬೇಡವೇ? ನೀನು ಸಹ ಇದೇ ಶಿಕ್ಷೆಗೆ ಗುರಿಯಾಗಿರುವೆ; 41ನಮಗೇನೋ ಶಿಕ್ಷೆ ನ್ಯಾಯವಾಗಿದೆ,
ನಮ್ಮ ಕೃತ್ಯಕ್ಕೆ ತಕ್ಕ ಫಲ ಸಿಕ್ಕಿದೆ; ಇವರಾದರೋ, ನಿರಪರಾಧಿ!" ಎಂದನು. 42ಬಳಿಕ ಅವನು, "ಸ್ವಾಮಿ
ಯೇಸುವೇ, ನೀವು ರಾಜ್ಯಾಧಿಕಾರದೊಡನೆ ಬರುವಾಗ ನನ್ನನ್ನು ಜ್ಞಾಪಿಸಿಕೊಳ್ಳಿ," ಎಂದು ಬೇಡಿಕೊಂಡನು.
43ಅವನಿಗೆ ಯೇಸು, "ಇಂದೇ ನೀನು ನನ್ನೊಡನೆ ಪರಂಧಾಮದಲ್ಲಿರುವೆ ಎಂದು ನಿಶ್ಚಯವಾಗಿ ಹೇಳುತ್ತೇನೆ,"
ಎಂದರು.

## ಪ್ರಾಣಾರ್ಪಣೆ

(ಮತ್ತಾ. 27.45–56; ಮಾರ್ಕ 15.33–41; ಯೊವ. 19.28–30)

44 ಆಗ ಸುಮಾರು ನಡುಮಧ್ಯಾಹ್ನ. ಆಗಿನಿಂದ ಮೂರು ಗಂಟೆಯವರೆಗೂ ಸೂರ್ಯನು
ಕಾಂತಿಹೀನನಾದನು; ನಾಡಿನಲ್ಲೆಲ್ಲಾ ಕತ್ತಲೆ ಕವಿಯಿತು. 45ಮಹಾದೇವಾಲಯದ ತೆರೆಯು ಇಬ್ಭಾಗವಾಗಿ
ಸೀಳಿಹೋಯಿತು. 46ಯೇಸುಸ್ವಾಮಿ, "ಪಿತನೇ, ನನ್ನಾತ್ಮವನ್ನು ನಿಮ್ಮ ಕೈಗೊಪ್ಪಿಸುತ್ತೇನೆ," ಎಂದು ಗಟ್ಟಿಯಾಗಿ
ಕೂಗಿ ಪ್ರಾಣಬಿಟ್ಟರು.

47 ನಡೆದುದನ್ನು ಕಂಡ ಶತಾಧಿಪತಿ ದೇವರನ್ನು ಹೊಗಳುತ್ತಾ, "ಈ ಮನುಷ್ಯ ಖಂಡಿತವಾಗಿ
ಸತ್ಪುರುಷನೇ ಸರಿ," ಎಂದನು.

48 ಈ ದೃಶ್ಯವನ್ನು ನೋಡಲು ಕೂಡಿದ್ದ ಜನರೆಲ್ಲರು ಅಲ್ಲಿ ನಡೆದುದನ್ನು ನೋಡಿ ದುಃಖದಿಂದ ಎದೆಬಡಿದುಕೊಳ್ಳುತ್ತಾ ಹಿಂದಿರುಗಿದರು.

49 ಯೇಸುವಿನ ಪರಿಚಿತರೆಲ್ಲರು ಹಾಗೂ ಗಲಿಲೇಯದಿಂದ ಹಿಂಬಾಲಿಸಿ ಬಂದಿದ್ದ ಮಹಿಳೆಯರು ದೂರದಲ್ಲಿ ನಿಂತುಕೊಂಡು ಇದೆಲ್ಲವನ್ನು ನೋಡುತ್ತಿದ್ದರು.

### ಶವ ಸಂಸ್ಕಾರ

(ಮತ್ತಾ. 27.57–61; ಮಾರ್ಕ 15.42–47; ಯೊವಾ. 19.38–42)

50–51 ಅರಿಮತಾಯ ಎಂಬುದು ಜುದೇಯದ ಒಂದು ಪಟ್ಟಣ. ಜೋಸೆಫನು ಇದರ ನಿವಾಸಿ.
ಇವನು ಸದ್ಗುಣಶೀಲನು, ಸತ್ಪುರುಷನು ಹಾಗೂ ದೇವರ ಸಾಮ್ರಾಜ್ಯದ ಆಗಮನವನ್ನು ನಿರೀಕ್ಷಿಸುತ್ತಿದ್ದವನು.
ಯೆಹೂದ್ಯರ ನ್ಯಾಯಸಭೆಯ ಸದಸ್ಯರಲ್ಲಿ ಇವನೂ ಒಬ್ಬನು. ಆದರೂ ಅವರ ತೀರ್ಪಿಗೂ ಕೃತ್ಯಕ್ಕೂ ಇವನು
ಅನುಮತಿಸಿರಲಿಲ್ಲ. 52ಇವನು ಪಿಲಾತನ ಬಳಿಗೆ ಹೋಗಿ ಯೇಸುವಿನ ಪಾರ್ಥಿವ ಶರೀರವನ್ನು ತನಗೆ
ಕೊಡಿಸಬೇಕೆಂದು ಕೇಳಿಕೊಂಡನು. 53ತರುವಾಯ ಶರೀರವನ್ನು ಶಿಲುಬೆಯಿಂದ ಇಳಿಸಿ, ನಾರುಮಡಿವಸ್ತ್ರದಲ್ಲಿ
ಸುತ್ತಿ ಸಮಾಧಿಯಲ್ಲಿ ಇಟ್ಟನು. ಬಂಡೆಯೊಂದರಲ್ಲಿ ಕೊರೆಯಲಾಗಿದ್ದ ಈ ಸಮಾಧಿಯಲ್ಲಿ ಅದುವರೆಗೆ
ಯಾರನ್ನೂ ಭೂಸ್ಥಾಪನೆ ಮಾಡಿರಲಿಲ್ಲ.

54 ಅಂದು ಶುಕ್ರವಾರ – ಸಿದ್ಧತೆಯ ದಿನ. ಇನ್ನೇನು ಸಬ್ಬತ್ ಪ್ರಾರಂಭವಾಗುವುದರಲ್ಲಿತ್ತು.

55 ಗಲಿಲೇಯದಿಂದ ಯೇಸುವಿನ ಸಂಗಡ ಬಂದಿದ್ದ ಮಹಿಳೆಯರು ಜೋಸೆಫನ ಜೊತೆ ಹೋಗಿ
ಸಮಾಧಿಯನ್ನೂ ಯೇಸುವಿನ ಪಾರ್ಥಿವ ಶರೀರವನ್ನು ಅದರಲ್ಲಿಟ್ಟ ರೀತಿಯನ್ನೂ ನೋಡಿಕೊಂಡರು.
56ಅನಂತರ ಅಲ್ಲಿಂದ ಹಿಂದಿರುಗಿ ಶವಲೇಪನಕ್ಕಾಗಿ ಸುಗಂಧ ದ್ರವ್ಯಗಳನ್ನು ಮತ್ತು ಪರಿಮಳ ತೈಲವನ್ನು
ಸಿದ್ದಮಾಡಿಕೊಂಡರು. ಸಬ್ಬತ್‌ದಿನ, ಧರ್ಮನಿಯಮಾನುಸಾರ ವಿಶ್ರಮಿಸಿಕೊಂಡರು.

### ಮೃತ್ಯುಂಜಯ

(ಮತ್ತಾ. 28.1–10; ಮಾರ್ಕ 16.1–8; ಯೊವಾ. 20.1–10)

**24** ಭಾನುವಾರ ಮುಂಜಾನೆ ಆ ಮಹಿಳೆಯರು ತಾವು ಸಿದ್ಧಮಾಡಿದ್ದ ಸುಗಂಧ ದ್ರವ್ಯಗಳನ್ನು
ತೆಗೆದುಕೊಂಡು ಸಮಾಧಿಯ ಬಳಿಗೆ ಬಂದರು. 2ಸಮಾಧಿಯ ದ್ವಾರಕ್ಕೆ ಮುಚ್ಚಿದ್ದ ಕಲ್ಲು ಅಲ್ಲಿಂದ ಉರುಳಿ
ಬಿದ್ದಿತ್ತು. 3ಒಳಕ್ಕೆ ಪ್ರವೇಶಿಸಿ ನೋಡಿದಾಗ ಪ್ರಭು ಯೇಸುವಿನ ಪಾರ್ಥಿವ ಶರೀರ ಕಾಣಲಿಲ್ಲ. 4ಅವರು
ತಬ್ಬಿಬ್ಬಾಗಿ ಅಲ್ಲೇ ನಿಂತರು. ಆಗ ತೇಜೋಮಯವಾದ ಉಡುಪನ್ನು ಧರಿಸಿದ್ದ ಇಬ್ಬರು ವ್ಯಕ್ತಿಗಳು ಫಕ್ಕನೆ
ಅಲ್ಲೇ ಕಾಣಿಸಿಕೊಂಡರು. 5ಮಹಿಳೆಯರು ಭಯಭ್ರಾಂತರಾದರು. ಅವರ ದೃಷ್ಟಿ ನೆಲನಾಟಿತು. ಆಗ ಆ
ವ್ಯಕ್ತಿಗಳು, **"**ಸಜೀವವಾಗಿರುವವರನ್ನು ಸತ್ತವರ ಮಧ್ಯೆ ಹುಡುಕುವುದೇನು**?** ಅವರು ಇಲ್ಲಿಲ್ಲ; ಪುನರುತ್ಥಾನ
ಹೊಂದಿದ್ದಾರೆ. 6ಗಲಿಲೇಯದಲ್ಲಿದ್ದಾಗಲೇ ಅವರು ನಿಮಗೆ, 7**'**ನರಪುತ್ರನು ಪಾಪಿ ಮಾನವರ ಕೈವಶವಾಗಿ,
ಶಿಲುಬೆಯ ಮರಣಕ್ಕೀಡಾಗಿ, ಮೂರನೆಯ ದಿನ ಪುನರುತ್ಥಾನ ಹೊಂದಬೇಕಾಗಿದೆ,**'** ಎಂದು ತಿಳಿಸಿದ್ದನ್ನು
ಮರೆತು ಬಿಟ್ಟಿರೋ**?"** ಎಂದರು.

8 ಆಗ ಆ ಮಹಿಳೆಯರಿಗೆ ಯೇಸುಸ್ವಾಮಿಯ ಆ ಮಾತುಗಳು ಜ್ಞಾಪಕಕ್ಕೆ ಬಂದವು. 9ಅವರು
ಸಮಾಧಿಯಿಂದ ಹಿಂದಿರುಗಿ ಹೋಗಿ ನಡೆದುದೆಲ್ಲವನ್ನು ಹನ್ನೊಂದು ಮಂದಿ ಶಿಷ್ಯರಿಗೂ ಮತ್ತಿತರರಿಗೂ
ತಿಳಿಸಿದರು. 10ಆ ಮಹಿಳೆಯರ ಹೆಸರುಗಳು: ಮಗ್ದಲದ ಮರಿಯಳು, ಯೊವಾನ್ನಳು ಮತ್ತು ಯಕೋಬನ
ತಾಯಿಯಾದ ಮರಿಯಳು. ಇವರಲ್ಲದೆ, ಇವರ ಸಂಗಡ ಇದ್ದ ಇತರ ಮಹಿಳೆಯರೂ ಪ್ರೇಷಿತರಿಗೆ ಈ
ಸುದ್ದಿಯನ್ನು ತಿಳಿಸಿದರು. 11ಪ್ರೇಷಿತರಾದರೋ ಇದೆಲ್ಲ ಕಟ್ಟುಕತೆಯೆಂದು ಭಾವಿಸಿ ನಂಬದೆ ಹೋದರು.

12 ಆದರೆ ಪೇತ್ರನು ಎದ್ದು ಸಮಾಧಿಯ ಬಳಿಗೆ ಧಾವಿಸಿದನು. ಸಮಾಧಿಯೊಳಕ್ಕೆ ಬಗ್ಗಿ ನೋಡಿದಾಗ, ಶವಕ್ಕೆ ಸುತ್ತಿದ್ದ ನಾರುಮಡಿ ವಸ್ತ್ರಗಳು ಮಾತ್ರ ಅಲ್ಲಿ ಬಿದ್ದಿರುವುದನ್ನು ಕಂಡನು. ಇವೆಲ್ಲಾ ಎಷ್ಟೋ ಆಶ್ಚರ್ಯಕರವಾಗಿದೆ ಎಂದುಕೊಂಡು ಹಿಂದಿರುಗಿದನು.

## ಎಮ್ಮಾವು ಗ್ರಾಮದ ಹಾದಿಯಲ್ಲಿ

(ಮಾರ್ಕ 16.12–13)

13 ಅದೇ ದಿನ ಶಿಷ್ಯರಲ್ಲಿ ಇಬ್ಬರು ಜೆರುಸಲೇಮಿಗೆ ಹನ್ನೊಂದು ಕಿಲೋಮೀಟರಿನಷ್ಟು ದೂರದಲ್ಲಿದ್ದ
ಎಮ್ಮಾವು ಎಂಬ ಗ್ರಾಮಕ್ಕೆ ಹೋಗುತ್ತಿದ್ದರು. 14ಇತ್ತೀಚೆಗೆ ನಡೆದ ವಿಷಯಗಳನ್ನೆಲ್ಲಾ ಕುರಿತು ಅವರು
ಸಂಭಾಷಣೆ ಮಾಡುತ್ತಾ ನಡೆಯುತ್ತಿದ್ದರು. 15ಹೀಗೆ ಮಾತನಾಡಿಕೊಂಡು ಚರ್ಚೆಮಾಡುತ್ತಾ
ಹೋಗುತ್ತಿರುವಾಗ, ಯೇಸುಸ್ವಾಮಿಯೇ ಖುದ್ದಾಗಿ ಸಮೀಪಿಸಿ ಅವರ ಜೊತೆ ಸೇರಿಕೊಂಡರು. 16ಆದರೆ
ಇವರಾರೆಂದು ಅವರು ಗುರುತು ಹಚ್ಚಲಿಲ್ಲ. ಕಾರಣ – ಶಿಷ್ಯರಿಗೆ ಕಣ್ಣುಕಟ್ಟಿದಂತಾಗಿತ್ತು. 17"ನೀವು ತರ್ಕ
ಮಾಡಿಕೊಂಡು ಹೋಗುತ್ತಿರುವಿರಲ್ಲಾ, ಏನು ವಿಷಯ?" ಎಂದು ಯೇಸು ಕೇಳಿದರು. ಶಿಷ್ಯರು ಸಪ್ಪೆ
ಮುಖಮಾಡಿ ನಿಂತರು. 18ಆಗ ಅವರಲ್ಲಿ ಒಬ್ಬನಾದ ಕ್ಲೆಯೋಫ, "ಇತ್ತೀಚೆಗೆ ಜೆರುಸಲೇಮಿನಲ್ಲಿ ಜರುಗಿದ
ಘಟನೆಗಳನ್ನು ಪಟ್ಟಣಕ್ಕೆ ಪಟ್ಟಣವೇ ತಿಳಿದಿದೆ; ನಿನಗೊಬ್ಬನಿಗೇ ಅವು ತಿಳಿಯದೆ?" ಎಂದನು. 19"ಏನು
ನಡೆಯಿತು?" ಎಂದು ಯೇಸು ಪುನಃ ಕೇಳಿದಾಗ ಆ ಶಿಷ್ಯರಿಬ್ಬರು, "ಇವು ನಜರೇತಿನ ಯೇಸುವಿಗೆ
ಸಂಭವಿಸಿದ ಘಟನೆಗಳು. ಅವರು ನಡೆಯಲ್ಲೂ ನುಡಿಯಲ್ಲೂ ದೇವರ ಹಾಗೂ ಸಕಲ ಮಾನವರ
ದೃಷ್ಟಿಯಲ್ಲಿ ಪ್ರವಾದಿಯಾಗಿದ್ದರು. 20ನಮ್ಮ ಮುಖ್ಯ ಯಾಜಕರು ಮತ್ತು ಮುಖಂಡರು ಅವರನ್ನು
ಮರಣದಂಡನೆಗೆ ಗುರಿಮಾಡಿಸಿ ಶಿಲುಬೆಗೆ ಜಡಿಸಿದರು. 21ಇಸ್ರಯೇಲನ್ನು ಬಿಡುಗಡೆ ಮಾಡುವ ಉದ್ಧಾರಕ
ಅವರೇ ಎಂದು ನಾವು ನಂಬಿಕೊಂಡಿದ್ದೆವು. ಇಷ್ಟು ಮಾತ್ರವಲ್ಲ, ಇದೆಲ್ಲಾ ಸಂಭವಿಸಿ ಇಂದಿಗೆ
ಮೂರುದಿನಗಳು ಆಗಿವೆ. 22ಆದರೂ ನಮ್ಮಲ್ಲಿ ಕೆಲವು ಮಂದಿ ಮಹಿಳೆಯರು ಮುಂಜಾನೆ ಸಮಾಧಿಯ
ಬಳಿಗೆ ಹೋಗಿದ್ದರು. 23ಅಲ್ಲಿ ಯೇಸುವಿನ ಪಾರ್ಥಿವ ಶರೀರವನ್ನು ಕಾಣಲಿಲ್ಲ. ಹಿಂದಿರುಗಿ ಬಂದು, 'ನಮಗೆ
ದೇವದೂತರು ಪ್ರತ್ಯಕ್ಷರಾದರು; ಇವರು ಯೇಸುಸ್ವಾಮಿ ಸಜೀವದಿಂದ ಇದ್ದಾರೆಂದು ನಮಗೆ ತಿಳಿಸಿದರು,'
ಎಂದು ಹೇಳಿ ನಮ್ಮನ್ನು ದಿಗ್ಭ್ರಾಂತರನ್ನಾಗಿ ಮಾಡಿದರು. 24ನಮ್ಮ ಸಂಗಡಿಗರಲ್ಲಿ ಕೆಲವರು ಸಮಾಧಿಯ
ಬಳಿಗೆ ಹೋಗಿ ನೋಡಿದರು; ಮಹಿಳೆಯರು ಹೇಳಿದ್ದೆಲ್ಲಾ ಸರಿಯಾಗಿತ್ತು. ಆದರೆ ಯೇಸುಸ್ವಾಮಿಯನ್ನು
ಮಾತ್ರ ಕಾಣಲಿಲ್ಲ," ಎಂದರು.

25 ಆಗ ಯೇಸು, "ಎಂಥ ಮತಿಹೀನರು ನೀವು! ಪ್ರವಾದಿಗಳು ಹೇಳಿರುವುದೆಲ್ಲವನ್ನು
ನಂಬುವುದರಲ್ಲಿ ಎಷ್ಟು ಮಂದಮತಿಗಳು ನೀವು! 26ಕ್ರಿಸ್ತನು ಇಂತಹ ಸಂಕಷ್ಟಗಳನ್ನು ಅನುಭವಿಸಿ ತನ್ನ
ಮಹಿಮಾಸಿದ್ಧಿಯನ್ನು ಪಡೆಯಬೇಕಾಗಿತ್ತು ಅಲ್ಲವೇ?" ಎಂದರು. 27ಅನಂತರ, ಮೋಶೆ ಹಾಗೂ
ಪ್ರವಾದಿಗಳೆಲ್ಲರಿಂದ ಆರಂಭಿಸಿ ಎಲ್ಲಾ ಪವಿತ್ರ ಗ್ರಂಥಗಳಲ್ಲಿ ತಮ್ಮ ವಿಷಯವಾಗಿ ಬರೆದಿರುವುದನ್ನು ಅವರಿಗೆ
ವಿವರಿಸಿದರು.

28 ಅಷ್ಟರಲ್ಲಿ ಶಿಷ್ಯರು ತಲುಪಬೇಕಾಗಿದ್ದ ಗ್ರಾಮವು ಸಮೀಪಿಸಿತು. ಯೇಸುಸ್ವಾಮಿ ಇನ್ನೂ ಮುಂದಕ್ಕೆ
ಸಾಗುವವರಂತೆ ಕಂಡಿತು. 29ಆಗ ಶಿಷ್ಯರು, "ಸಂಜೆಯಾಯಿತು, ಕತ್ತಲಾಗುತ್ತ ಬಂದಿತು; ಬಂದು ನಮ್ಮೊಡನೆ
ತಂಗಿರಿ," ಎಂದು ಒತ್ತಾಯಪಡಿಸಿದರು. ಯೇಸು ಅವರೊಡನೆ ತಂಗಲು ಹೋದರು. 30ಅವರ ಸಂಗಡ
ಊಟಕ್ಕೆ ಕುಳಿತಾಗ, ಯೇಸು ರೊಟ್ಟಿಯನ್ನು ತೆಗೆದುಕೊಂಡು, ದೇವರಿಗೆ ಕೃತಜ್ಞತಾ ಸ್ತೋತ್ರ ಸಲ್ಲಿಸಿ, ಅದನ್ನು
ಮುರಿದು ಅವರಿಗೆ ಕೊಟ್ಟರು. 31ಆಗಲೇ ಶಿಷ್ಯರ ಕಣ್ಣುಗಳು ತೆರೆದವು; ಯೇಸುವನ್ನು ಗುರುತುಹಚ್ಚಿದರು.
ಆಗ ಯೇಸು ಅವರಿಂದ ಅದೃಶ್ಯರಾದರು. 32ಶಿಷ್ಯರು ಒಬ್ಬರಿಗೊಬ್ಬರು ಮಾತನಾಡಿಕೊಳ್ಳುತ್ತಾ, "ದಾರಿಯಲ್ಲಿ
ಇವರು ನಮ್ಮ ಸಂಗಡ ಮಾತನಾಡುತ್ತಾ ಪವಿತ್ರ ಗ್ರಂಥದ ಅರ್ಥವನ್ನು ನಮಗೆ ವಿವರಿಸುತ್ತಾ ಇದ್ದಾಗ ನಮ್ಮ
ಹೃದಯ ಕುತೂಹಲದಿಂದ ಕುದಿಯುತ್ತಾ ಇತ್ತಲ್ಲವೇ?" ಎಂದುಕೊಂಡರು.

33 ಒಡನೇ ಅವರು ಅಲ್ಲಿಂದ ಎದ್ದು ಜೆರುಸಲೇಮಿಗೆ ಹಿಂದಿರುಗಿ ಹೋದರು. ಅಲ್ಲಿ ಹನ್ನೊಂದು
ಮಂದಿ ಶಿಷ್ಯರೂ ಅವರ ಸಂಗಡಿಗರೂ ಒಟ್ಟುಗೂಡಿದ್ದರು. 34"ಪ್ರಭು ಜೀವಂತರಾಗಿ ಎದ್ದಿರುವುದು ನಿಜ !

ಅವರು ಸಿಮೋನನಿಗೆ ಕಾಣಿಸಿಕೊಂಡರು," ಎಂದು ಅಲ್ಲಿದ್ದವರು ಹೇಳುವುದನ್ನು ಕೇಳಿದರು. 35ಆಗ ಅವರು
ತಾವು ದಾರಿಯಲ್ಲಿ ಕಂಡ ವಿಷಯವನ್ನೂ ರೊಟ್ಟಿ ಮುರಿದು ಕೊಡುವಾಗ ಸ್ವಾಮಿಯನ್ನು ತಾವು
ಗುರುತುಹಚ್ಚಿದ ವಿಷಯವನ್ನೂ ಅಲ್ಲಿದ್ದವರಿಗೆ ವರದಿಮಾಡಿದರು.

**ಶಿಷ್ಯರಿಗೆ ದಿವ್ಯದರ್ಶನ**

(ಮತ್ತಾ. 28.16–20; ಮಾರ್ಕ 16.14–18; ಯೊವಾ. 20.19–23; ಪ್ರೇ.ಕಾ. 1.6–8)

36 ಅವರು ವರದಿಮಾಡುತ್ತಿದ್ದಂತೆ ಯೇಸುಸ್ವಾಮಿಯೇ ಅವರ ಮಧ್ಯೆ ಪ್ರತ್ಯಕ್ಷವಾಗಿ ನಿಂತು, 'ನಿಮಗೆ
ಶಾಂತಿ,' ಎಂದರು. 37ಅವರೆಲ್ಲರೂ ಚಕಿತರಾಗಿ, ದಿಗಿಲುಗೊಂಡು, ತಾವು ಕಾಣುತ್ತಿರುವುದು ಭೂತವೆಂದು
ಭಾವಿಸಿದರು. 38ಆಗ ಯೇಸು, "ಏಕೆ ಕಳವಳಪಡುತ್ತೀರಿ? ನಿಮ್ಮ ಮನಸ್ಸಿನಲ್ಲಿ ಸಂಶಯವೇಕೆ? 39ನನ್ನ
ಕೈಗಳನ್ನೂ ನನ್ನ ಕಾಲುಗಳನ್ನೂ ನೋಡಿ, ನಾನೇ ಅಲ್ಲವೇ? ನನ್ನನ್ನು ಮುಟ್ಟಿ ನೋಡಿರಿ, ನೀವು ನನ್ನಲ್ಲಿ
ಕಾಣುವಂತೆ, ಮಾಂಸ ಮತ್ತು ಎಲುಬು ಭೂತಕ್ಕೆ ಇರುವುದಿಲ್ಲ," ಎಂದರು. (40ಇಂತೆಂದ ಮೇಲೆ ತಮ್ಮ
ಕೈಗಳನ್ನೂ ಕಾಲುಗಳನ್ನೂ ಅವರಿಗೆ ತೋರಿಸಿದರು.) 41ಶಿಷ್ಯರು ಇನ್ನೂ ನಂಬದೆ,
ಆನಂದಾಶ್ಚರ್ಯಭರಿತರಾಗಿದ್ದರು. ಆಗ ಯೇಸು, "ನಿಮ್ಮಲ್ಲಿ ತಿನ್ನಲು ಏನಾದರೂ ಇದೆಯೇ?" ಎಂದು
ಕೇಳಿದರು. 42ಹುರಿದ ಮೀನಿನ ತುಂಡು ಒಂದನ್ನು ಶಿಷ್ಯರು ಕೊಟ್ಟರು. 43ಯೇಸು ಅದನ್ನು ತೆಗೆದುಕೊಂಡು
ಅವರ ಎದುರಿಗೇ ತಿಂದರು.

**ಅಂತಿಮ ಸಂದೇಶ**

44 ತರುವಾಯ ಯೇಸುಸ್ವಾಮಿ, "ನಾನು ನಿಮ್ಮೊಡನೆ ಇದ್ದಾಗಲೇ ನಿಮಗೆ ತಿಳಿಸಿದ ವಿಷಯ ಇದು:
ಮೋಶೆಯ ನಿಯಮದಲ್ಲೂ ಪ್ರವಾದಿಗಳ ಗ್ರಂಥದಲ್ಲೂ ಕೀರ್ತನೆಗಳಲ್ಲೂ ನನ್ನ ವಿಷಯವಾಗಿ
ಬರೆದಿರುವುದೆಲ್ಲಾ ನೆರವೇರಲೇಬೇಕಾಗಿತ್ತು," ಎಂದರು. 45ಆಮೇಲೆ, ಪವಿತ್ರ ಗ್ರಂಥವನ್ನು ಅವರು
ಅರ್ಥಮಾಡಿಕೊಳ್ಳುವಂತೆ ಅವರ ಬುದ್ಧಿಯನ್ನು ವಿಕಾಸಗೊಳಿಸಿದರು. 46ಅನಂತರ, "ಮೊದಲೇ ಬರೆದಿರುವ
ಪ್ರಕಾರ ಕ್ರಿಸ್ತನು ಯಾತನೆಯನ್ನು ಅನುಭವಿಸಿ ಸತ್ತು ಮೂರನೆಯ ದಿನ ಪುನರುತ್ಥಾನ ಹೊಂದಬೇಕಾಗಿತ್ತು;
47ಅಲ್ಲದೆ ಜನರು ಪಾಪಪರಿಹಾರ ಪಡೆಯಬೇಕಾದರೆ, ಪಶ್ಚಾತ್ತಾಪಪಟ್ಟು, ಪಾಪಕ್ಕೆ ವಿಮುಖರಾಗಿ,
ದೈವಾಭಿಮುಖಿಗಳಾಗಬೇಕೆಂತಲೂ ಈ ಸಂದೇಶವನ್ನು ಜೆರುಸಲೇಮಿನಿಂದ ಮೊದಲ್ಗೊಂಡು ಎಲ್ಲಾ
ಜನಾಂಗಗಳಿಗೂ ಆತನ ಹೆಸರಿನಲ್ಲೇ ಪ್ರಕಟಿಸಬೇಕೆಂತಲೂ ಮೊದಲೇ ಲಿಖಿತವಾಗಿತ್ತು. 48ಇದಕ್ಕೆಲ್ಲಾ ನೀವೇ
ಸಾಕ್ಷಿಗಳು. 49ನನ್ನ ಪಿತ ವಾಗ್ದಾನ ಮಾಡಿದ ವ್ಯಕ್ತಿಯನ್ನು ನಾನೇ ನಿಮಗೆ ಕಳುಹಿಸಿಕೊಡುವೆನು. ಸ್ವರ್ಗದಿಂದ
ಬರುವ ಶಕ್ತಿಯಿಂದ ನೀವು ಭೂಷಿತರಾಗುವ ತನಕ ಈ ಪಟ್ಟಣದಲ್ಲೇ ಕಾದಿರಿ," ಎಂದು ಹೇಳಿದರು.

ಸ್ವರ್ಗಾರೋಹಣ

(ಮಾರ್ಕ 16.19–20; ಪ್ರೇ.ಕಾ. 1.9–11)

50 ಕಟ್ಟಕಡೆಗೆ ಯೇಸುಸ್ವಾಮಿ ಶಿಷ್ಯರನ್ನು ಬೆಥಾನಿಯ ಎಂಬ ಊರಿನವರೆಗೆ ಕರೆದುಕೊಂಡು
ಹೋದರು. ಅಲ್ಲಿ ತಮ್ಮ ಕರಗಳನ್ನೆತ್ತಿ ಆಶೀರ್ವದಿಸಿದರು. 51ಆಶೀರ್ವದಿಸುತ್ತಿದ್ದ ಹಾಗೆಯೇ ಅವರನ್ನು
ಬೀಳ್ಕೊಟ್ಟರು. (ಮತ್ತು ಸ್ವರ್ಗಕ್ಕೆ ಒಯ್ಯಲ್ಪಟ್ಟರು). 52ಶಿಷ್ಯರು (ಅವರನ್ನು ಆರಾಧಿಸಿ) ಅತ್ಯಾನಂದದಿಂದ
ಜೆರುಸಲೇಮಿಗೆ ಹಿಂದಿರುಗಿದರು. 53ಮಹಾದೇವಾಲಯದಲ್ಲಿ ದೇವರನ್ನು ಸತತವಾಗಿ ಸ್ತುತಿ
ಮಾಡಿಕೊಂಡಿದ್ದರು.